
ಸಂಪುಟ: 05 ಸಂಚಿಕೆ: 56 ಪುಟಗಳು: 08 ಶನಿವಾರ 10 ಮೇ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ವಿಶಿಷ್ಟವಾಗಲು, ನಿಮ್ಮ ಗಮ್ಯಸ್ಥಾನವನ್ನು ತಲುಪುವವರೆಗೆ ಯಾರಾದರೂ ಊಹಿಸಬಹುದಾದ ಕಠಿಣ ಯುದ್ಧವನ್ನು ಮಾಡುವುದು ಸವಾಲಾಗಿದೆ.

ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಷರೀಫ್ ರಣಹೇಡಿ
# ಪಾಕ್ ಪುಡಿಪುಡಿ



ಯಥಾ ರಾಜ, ತಥಾ ಪ್ರಜಾ

ಪ್ರಧಾನಿ ವಿರುದ್ಧ ಸಂಸದ ಆಕ್ರೋಶ!

ನಮ್ಮ ನಾಯಕ ಹೇಡಿ...



## ಪಾಕ್‌ಗೆ ತ್ರಿವಳಿ ಆಘಾತ

ಆಪರೇಷನ್ ಸಿಂಧೂರ್ ಮೂಲಕ ಭಾರತೀಯ ಸೇನೆ ಪಾಕಿಸ್ತಾನಕ್ಕೆ ಮುಟ್ಟಿ ನೋಡಿಕೊಳ್ಳುವಂತೆ ಪೆಟ್ಟು ನೀಡುತ್ತಿದೆ. ಭಾರತೀಯ ಸೇನೆ ಮುಂದೆ ನಿಲ್ಲಲು ಸಾಧ್ಯವಾಗದೆ ಪಾಕಿಸ್ತಾನ ಸೇನೆ ಪತರುಗುಟ್ಟಿದೆ. ಇದೇ ಸಮಯದಲ್ಲಿ ಅತ್ತ ಬಲೂಚಿಸ್ತಾನದ ಆರ್ಮಿ ಪಡೆ ಸಹ ಪಾಕಿಸ್ತಾನದ ಸೇನೆ ಮೇಲೆ ಮುಗಿಬಿದ್ದಿದೆ. 12 ಪಾಕಿಸ್ತಾನ ಸೈನಿಕರು ತೆರಳುತ್ತಿದ್ದ ವಾಹನವನ್ನು ಸ್ಫೋಟಿಸಿದ್ದು ಸೈನಿಕರ ದೇಹಗಳು ಚೂರು ಚೂರಾಗಿದ್ದವು. ಈ ವಿಡಿಯೋ ವೈರಲ್ ಆಗಿತ್ತು. ಇದರ ಬೆನ್ನಲ್ಲೇ ಇದೀಗ ತಾಲಿಬಾನ್ ಸಹ ಪಾಕಿಸ್ತಾನ ಸೇನೆ ಮೇಲೆ ಮುಗಿಬಿದ್ದಿದೆ.ತೆಹ್ರೀಕ್-ಇ-ತಾಲಿಬಾನ್ ನಡೆಸಿದ ದಾಳಿಯಲ್ಲಿ 20 ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿದ್ದಾರೆ. ಪಾಕಿಸ್ತಾನಿ ಸೈನಿಕರನ್ನು ಲೇಸರ್ ರೈಫಲ್‌ಗಳನ್ನು ಬಳಸಿ ಕೊಲ್ಲಲಾಗಿದೆ ಎಂದು ಹೇಳಲಾಗಿದೆ. ಭಾರತದೊಂದಿಗಿನ ಉದ್ವಿಗ್ನತೆಯ ಮಧ್ಯೆ, ಪಾಕಿಸ್ತಾನಕ್ಕೆ ಇದು ದೊಡ್ಡ ಹಿನ್ನಡೆ ಎಂದು ಪರಿಗಣಿಸಲಾಗುತ್ತಿದೆ. ಈ ದಾಳಿಯನ್ನು ತೆಹ್ರೀಕ್-ಇ ತಾಲಿಬಾನ್ ನಡೆಸಿದ್ದು, ದಕ್ಷಿಣ ವಜೀರಿಸ್ತಾನದ ಶಕ್ಕೈನಲ್ಲಿ ಈ ದಾಳಿ ನಡೆದಿದೆ ಎಂದು ಹೇಳಲಾಗಿದೆ. ಪಾಕಿಸ್ತಾನದ ಸೇನಾ ವಾಹನಗಳು ಸಹ ನಾಶವಾಗಿದೆ. ಅಲ್ಲದೆ, ಈ ದಾಳಿಯಲ್ಲಿ, ಟಿಟಿಪಿ ಪಾಕಿಸ್ತಾನಿ ಸೇನೆಯ ಶಸ್ತ್ರಾಸ್ತ್ರಗಳನ್ನು ಸಹ ವಶಪಡಿಸಿಕೊಂಡಿದೆ.

## ಭಾರತದ ರಕ್ಷಣಾ ಮೂಲಗಳಿಂದ ವಿಡಿಯೋ ರಿಲೀಸ್

ಪಾಕಿಸ್ತಾನದ 500 ಡ್ರೋಣ್‌ಗಳನ್ನು ಭಾರತೀಯ ವಾಯು ರಕ್ಷಣಾ ವ್ಯವಸ್ಥೆಗಳು ಹೇಗೆ ತಡೆದವು ಎನ್ನುವುದರ ವಿಡಿಯೋವನ್ನು ಭಾರತದ ರಕ್ಷಣಾ ಮೂಲಗಳು ಬಿಡುಗಡೆ ಮಾಡಿವೆ. ಭಾರತದ 24 ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ 500 ಡ್ರೋಣ್‌ಗಳನ್ನು ಉಡಾವಣೆ ಮಾಡಿತ್ತು. ಆದರೆ ಇದನ್ನು ವಿಫಲ ಮಾಡಿರುವ ಭಾರತೀಯ ವಾಯು ರಕ್ಷಣಾ ವ್ಯವಸ್ಥೆಗಳು ಆಕಾಶದಲ್ಲೇ ಹೊಡೆದುರುಳಿಸಿವೆ. ಭಾರತದ ಲಡಾಖ್‌ನ ಸಿಯಾಚಿನ್ ಬೇಸ್ ಕ್ಯಾಂಪ್‌ನಿಂದ ಗುಜರಾತ್‌ನ ಕಚ್ ಪ್ರದೇಶದವರೆಗೆ ಒಟ್ಟು 24 ಸ್ಥಳಗಳ ಮೇಲೆ ದಾಳಿಗೆ ಯತ್ನಿಸಿತ್ತು. ಆದರೆ ಭಾರತೀಯ ಸೇನೆ ಎಲ್ಲಾ ಡ್ರೋನ್‌ಗಳನ್ನು ನಾಶ ಮಾಡಿದೆ. ಈ ಬಗ್ಗೆ ಇದೀಗ ವಿಡಿಯೋ ಕೂಡ ಬಿಡುಗಡೆ ಮಾಡಲಾಗಿದೆ. ವಾಯು ರಕ್ಷಣಾ ಬಂದೂಕುಗಳಿಂದ 50 ಡ್ರೋಣ್‌ಗಳನ್ನು ನಾಶ ಮಾಡಿದ್ರೆ, 20 ಡ್ರೋಣ್‌ಗಳನ್ನು ಗುಂಡಿನ ದಾಳಿಯ ಮೂಲಕ ಹೊಡೆದುರುಳಿಸಲಾಗಿದೆ. ಹೆಚ್ಚಿನ ಡ್ರೋಣ್‌ಗಳು ನಿರಾಯುಧ ಆಗಿದ್ದವು ಎಂದು ರಕ್ಷಣಾ ಮೂಲಗಳು ತಿಳಿಸಿವೆ. ಈ ಡ್ರೋಣ್‌ಗಳಲ್ಲಿ ಕ್ಯಾಮೆರಾಗಳು ಕಂಡು ಬಂದಿದ್ದು ಬಹುಶಃ ಇವು ಇಲ್ಲಿನ ನೈಜ ದೃಶ್ಯಗಳನ್ನು ಸೆರೆ ಹಿಡಿದು ವಿರೋಧಿ ರಾಷ್ಟ್ರಕ್ಕೆ ಪ್ರಸಾರ ಮಾಡುವ ತಂತ್ರಜ್ಞಾನ ಹೊಂದಿದ್ದವು ಎಂದು ಹೇಳಲಾಗಿದೆ.

## 20 ಪಾಕ್ ಸೈನಿಕರ ಜೀವ ತೆಗೆದ ತಾಲಿಬಾನ್!

## ಮೋದಿ ಹೆಸರು ಹೇಳುವುದಕ್ಕೂ ಹೆದರುತ್ತಿದ್ದಾರೆ

## ಪಾಕ್ ಸಂಸತ್‌ನಲ್ಲಿ 'ಟಿಪ್ಪು ಸುಲ್ತಾನ' ಸ್ಮರಣೆ

### ಅಧಿಕೃತ ವಿಡಿಯೋ ಹಂಚಿಕೊಂಡ ಭಾರತೀಯ ಸೇನೆ

ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧ ಬಿಕ್ಕಟ್ಟು ನೆಕ್ಸ್ಟ್ ಲೆವೆಲ್‌ಗೆ ತಲುಪಿದೆ. ಆಪರೇಷನ್ ಸಿಂಧೂರ ನಂತರ ನಡೆದ ಬೆಳವಣಿಗೆಗಳಿಂದಾಗಿ ಭಾರತವು ತನ್ನ ರಕ್ಷಣೆಗಾಗಿ ಪಾಕ್ ಮೇಲೆ ದಾಳಿ ಮಾಡಬೇಕಾದ ಪ್ರಸಂಗ ಎದುರಾಯಿತು. ಅಂತೆಯೇ ನಿನ್ನೆ ಎರಡೂ ದೇಶಗಳ ಮಧ್ಯೆ ಘರ್ಷಣೆ ಆಗಿದೆ. ಭಾರತದ ಉಡಾಯಿಸಿದ್ದ ಡ್ರೋಣ್‌ಗಳು, ಮಿಸೈಲ್‌ಗಳು ಮತ್ತು ಶೆಲ್‌ಗಳು ಪಾಕಿಸ್ತಾನದ ಕೆಲವು ಭಾಗಗಳನ್ನು ಪುಡಿಪುಡಿ ಮಾಡಿವೆ ಎಂದು ವರದಿಗಳು ಹೇಳಿವೆ. ಪರಿಣಾಮ ಪಾಕಿಸ್ತಾನದ ಪ್ರಮುಖ ಸೇನಾ ನೆಲೆಗಳು ಧ್ವಂಸಗೊಂಡಿವೆ. ಇದಕ್ಕೆ ಸಂಬಂಧಿಸಿದ ವಿಡಿಯೋವನ್ನು ಭಾರತೀಯ ಸೇನೆ ಮೊದಲ ಬಾರಿಗೆ ವಿಡಿಯೋ ಹಂಚಿಕೊಂಡಿದೆ. ಈ ಬಗ್ಗೆ ಮಾಹಿತಿ ನೀಡಿರುವ ಸೇನೆಯು, ಪಾಕಿಸ್ತಾನ ಸೇನೆಯು ಭಾರತದ ಪಶ್ಚಿಮ ಗಡಿಗಳನ್ನು ಗುರಿಯಾಗಿಸಿಕೊಂಡು ನಿರಂತರ ದಾಳಿ ಮಾಡಿತು. ವಿವಿಧ ಡ್ರೋಣ್ ಸೇರಿಂದಂತೆ ಭಾರತದ ಮೇಲೆ ಶಸ್ತ್ರಾಸ್ತ್ರಗಳನ್ನು ಪ್ರಯೋಗಿಸಿ ಮೇ 8 ಮತ್ತು 9 ರಂದು ದಾಳಿ ಮಾಡಿತು. ಮಾತ್ರವಲ್ಲ ಜಮ್ಮು-ಕಾಶ್ಮೀರದಲ್ಲಿ ನಿರಂತರವಾಗಿ ಕದನ ವಿರಾಮ ಉಲ್ಲಂಘನೆ ಮಾಡ್ತಿದೆ.



### ಪಾಕಿಸ್ತಾನದಿಂದ ಜಮ್ಮುವಿನ ಮೇಲೆ ಡ್ರೋನ್ ದಾಳಿ

ಭಾರತದ 15 ನಗರಗಳನ್ನು ಗುರಿಯಾಗಿಸಿ ದಾಳಿಗೆ ವಿಫಲ ಯತ್ನವನ್ನು ನಡೆಸಿದ ಬೆನ್ನಲ್ಲೇ ಪಾಕಿಸ್ತಾನ ಜಮ್ಮುವಿನ ಮೇಲೆ ಕ್ಷಿಪಣಿಗಳು ಮತ್ತು ಡೋನ್ ಗಳ ಮೂಲಕ ದಾಳಿ ನಡೆಸುತ್ತಿದೆ. ಪಾಕಿಸ್ತಾನದ ಇಂತಹ ಕ್ಷಿಪಣಿ ದಾಳಿಗಳನ್ನು ಭಾರತ ತಡೆದಿದೆ. ಸ್ಥಳೀಯರು ಸೆರೆ ಹಿಡಿದ ವೀಡಿಯೊಗಳಲ್ಲಿ ಅಲ್ಲಿನ ಆಕಾಶದಾದ್ಯಂತ ಬೆಳಕಿನ ಜ್ವಾಲೆಗಳು ಕಂಡು ಬಂದಿವೆ. ಜಮ್ಮುವಿನಲ್ಲಿ ಸಂಪೂರ್ಣ ಬ್ಲಾಕ್ ಔಟ್ ಜಾರಿ ಮಾಡಲಾಗಿದ್ದು, ಬಾಂಬಿಂಗ್, ಶೆಲ್ಲಿಂಗ್ ಹಾಗು ಕ್ಷಿಪಣಿ ದಾಳಿಯಂತಹ ಬಹಳ ದೊಡ್ಡ ಶಬ್ದಗಳು ಕೇಳಿ ಬಂದಿವೆ. ಮಾತಾ ವೈಶೋದೇವಿ ನಮ್ಮೊಂದಿಗಿದ್ದಾಳೆ ಜೊತೆಗೆ ದೇಶದ ಧೀರ ಯೋಧರೂ ಇದ್ದಾರೆ ಎಂದು ಜಮ್ಮು ಕಾಶ್ಮೀರದ ಮಾಜಿ ಡಿಜಿಪಿ ಶೇಷ್ ಪಾಲ್ ವೈದ್ ಟ್ವಿಟ್ ಮಾಡಿದ್ದಾರೆ.

**ಇಸ್ಲಾಮಾಬಾದ್:** ಪಹಲ್ಗಾಮ್ ಉಗ್ರ ದಾಳಿ ಬಳಿಕ ಭಾರತ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನತೆ ಭುಗಿಲೆದ್ದಿದ್ದು, 48 ಗಂಟೆಗಳಿಂದ ಭಾರತ ಮತ್ತು ಪಾಕಿಸ್ತಾನ ನಡುವೆ ನಿರಂತರವಾಗಿ ಸಂಘರ್ಷ ನಡೆಯುತ್ತಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಮೂಲಗ ಉಗ್ರರ ನೆಲೆಗಳ ಮೇಲೆ ದಾಳಿ ಮಾಡಿದ್ದ ಭಾರತ ಇದೀಗ ಪಾಕಿಸ್ತಾನ ಸೇನಾ ನೆಲೆಗಳನ್ನೇ ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದು, ಪಾಕಿಸ್ತಾನದ ಹಲವು ನಗರಗಳ ಮೇಲೆ ಭಾರತ ವಾಯುದಾಳಿ ಮಾಡಿದೆ.

ಅಲ್ಲದೆ ಪಾಕಿಸ್ತಾನದ ಉಗ್ರಗಾಮಿಗಳ ನೆಲೆಗಳ ಮೇಲೆ ದಾಳಿ ಮಾಡಿದೆ. ಪಾಕಿಸ್ತಾನದ ನಾಲ್ಕು ಮಹಾನಗರಗಳಲ್ಲಿದ್ದ ಏರ್ ಡಿಫೆನ್ಸ್ ಸಿಸ್ಟಂ ಅನ್ನು ಕೂಡ ಭಾರತ ನಾಶಪಡಿಸಿದ್ದು, ಇದು ಪಾಕಿಸ್ತಾನಕ್ಕೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ. ಹಾಲಿ ಯುದ್ಧ ರೀತಿಯ ಸಂಘರ್ಷದಿಂದಾಗಿ ಪಾಕಿಸ್ತಾನ ಸಾಕಷ್ಟು ನಷ್ಟ ಅನುಭವಿಸಿದ್ದು, ಈ ನಡುವೆ ಪಾಕಿಸ್ತಾನ ಪ್ರಧಾನಿ ಶಹಭಾಶ್ ಷರೀಫ್ ವಿರುದ್ಧ ಅವರದ್ದೇ ದೇಶದ ಸಂಸದ ತಿರುಗಿಬಿದ್ದಿದ್ದಾರೆ.





**ತಮ್ಮ ಪ್ರಧಾನಿ ವಿರುದ್ಧವೇ ಗುಡುಗಿದ ಪಾಕ್ ಸಂಸದ':** ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆ ಕುರಿತು ಪಾಕಿಸ್ತಾನ ಸಂಸತ್ ಅಧಿವೇಶನದಲ್ಲಿ ಭಾರಿ ಚರ್ಚೆ ನಡೆದಿದ್ದು, ನಿನ್ನೆ ಪಾಕಿಸ್ತಾನ ತೆಹ್ರೀಕ್ ಇ ಇನ್ಸಾಫ್ ಸಂಸದ ಇಕ್ಬಾಲ್ ತಾಹಿರ್ ಹಾಲಿ ಪಾಕಿಸ್ತಾನ ಸರ್ಕಾರದ ವಿರುದ್ದ ಕಿಡಿಕಾರಿದ್ದರು. ಇದೀಗ ಇಂದು ಮತ್ತೋರ್ವ ಸಂಸದ ಪ್ರಧಾನಿ ಶಹಭಾಷ್ ಷರೀಫ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಾಕಿಸ್ತಾನ ಸಂಸತ್ತಿನಲ್ಲಿ ಶುಕ್ರವಾರ ಚರ್ಚೆಯ ಸಮಯದಲ್ಲಿ ಮಾತನಾಡುತ್ತಿದ್ದ ಅಲ್ಲಿನ ಸಂಸದ ಶಾಹಿದ್ ಅಹ್ಮದ್ (ಎಂಎನ್ಎ) ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನು ಬುಜ್ದಿಲ್ (ಹೇಡಿ) ಎಂದು ಜರಿದಿದ್ದಾರೆ. ಶಹಭಾಷ್ ಷರೀಫ್ ಅವರು ಇಷ್ಟೆಲ್ಲಾ ಆದರೂ ಭಾರತದ ಪ್ರಧಾನಿ ನರೇಂದ್ರ ಮೋದಿಯ ಹೆಸರನ್ನು ಸಹ ಹೇಳಲು ಆಗುತ್ತಿಲ್ಲ. ಅವರನ್ನು ಅದೆಂತಹ ವಿಷಯ ತಡೆಯುತ್ತಿದೆ ಎಂದು ತಿಳಿಯುತ್ತಿಲ್ಲ ಎಂದು ಕಿಡಿಕಾರಿದ್ದಾರೆ.


**ಪಾಕ್ ಸಂಸತ್ ನಲ್ಲಿ ಟಿಪ್ಪು ಸುಲ್ತಾನ ಸ್ಮರಣೆ :** ಅಂತೆಯೇ ಇದೇ ವೇಳೆ ಸಂಸದ ಶಾಹಿದ್ ಅಹ್ಮದ್ ಟಿಪ್ಪು ಸುಲ್ತಾನ್ ಹೇಳಿಕೆಯನ್ನು ಸ್ಮರಿಸಿದ್ದು, ಓರ್ವ ರಾಜ ಶೂರನಾಗಿದ್ದು ಆತನ ಸೈನಿಕ ದುರ್ಬಲನಾಗಿದ್ದರೂ ಆತ ಸಿಂಹದಂತೆ ಹೋರಾಡುತ್ತಾನೆ. ಆದರೆ ಸೈನಿಕ ಶೂರನಾಗಿದ್ದರೂ ರಾಜ ದುರ್ಬಲನಾಗಿದ್ದರೆ ಆಗ ಆತ ಹೋರಾಡಲು ಹಿಂಜರಿದು ಯುದ್ಧವನ್ನು ಸೋಲುತ್ತಾನೆ. ಇಂತಹುದೇ ಪರಿಸ್ಥಿತಿ ಇದೀಗ ಪಾಕಿಸ್ತಾನಕ್ಕೆ ಬಂದಿದ್ದು ಭಾರತದ ದಾಳಿಯ ನಂತರ ಪಾಕಿಸ್ತಾನ ಸೇನೆ ತುಂಬಾ ನಿರುತ್ಸಾಹಗೊಂಡಿದೆ.

ಗಡಿಯಲ್ಲಿ ನಿಂತು ನಮ್ಮ ಪರವಾಗಿ ಯುದ್ಧ ಮಾಡುತ್ತಿರುವ ನಮ್ಮ ಸೈನಿಕರಿಗೆ ನೈತಿಕ ಧೈರ್ಯ ತುಂಬಬೇಕಿದೆ. ಆದರೆ ಈ ಕೆಲಸವನ್ನು ಪ್ರಧಾನಿ ಶೆಹಬಾಜ್ ಷರೀಫ್ ಮತ್ತು ಸೇನಾ ಮುಖ್ಯಸ್ಥ ಆಸಿಮ್ ಮುನೀರ್ ಮಾಡುತ್ತಿಲ್ಲಾ... ಅವರೇ ತಲೆಮರೆಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ನಮ್ಮ ಓರ್ವ ಪ್ರಧಾನಿಯೇ ನರೇಂದ್ರ ಮೋದಿಯ ಹೆಸರೂ ಕೂಡ ಹೇಳಲಾಗದೇ ಪರದಾಡುತ್ತಿರುವಾಗ ನಮ್ಮ ಸೈನಿಕರು ಹೇಗೆ ಧೈರ್ಯದಿಂದ ಯುದ್ಧ ಮಾಡಲು ಸಾಧ್ಯ ಎಂದು ಸಂಸದ ಶಾಹಿದ್ ಅಹ್ಮದ್ ಪ್ರಶ್ನಿಸಿದ್ದಾರೆ. ಈ ಚರ್ಚೆಯ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕ ವೈರಲ್ ಆಗುತ್ತಿದೆ.

### ಅತ್ತ.. ಇತ್ತ.. ಸುತ್ತ.. ಮುತ್ತ.. ಪಾಕ್‌ಗೆ ಹೊಡ್ತ

ದಾಳಿಯಲ್ಲಿ ನಿಷೇಧಿತ ತೆಹ್ರಿಕ್-ಇ-ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ)ಯ ಉಗ್ರಗಾಮಿಗಳು ದಕ್ಷಿಣ ವಜಿರಿಸ್ತಾನದ ಶಕೈನಲ್ಲಿರುವ ಪಾಕಿಸ್ತಾನಿ ಮಿಲಿಟರಿ ಬೇಸ್ ಮೇಲೆ ದಾಳಿ ನಡೆಸಿದ್ದಾರೆ. ವರದಿಗಳ ಪ್ರಕಾರ, ಕಾರ್ಯಾಚರಣೆಯ ಮೊದಲ ಹಂತದಲ್ಲಿ ಟಿಟಿಪಿ ಉಗ್ರರು, ರೈಫಲ್‌ಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದಾಗ ಆರು ಸೈನಿಕರು ಸಾವನ್ನಪ್ಪಿದ್ದಾರೆ. ನಂತರ ಪೋಸ್ಟ್ ಮೇಲೆ ಭಾರೀ ಮತ್ತು ಹಗುರವಾದ ಶಸ್ತ್ರಾಸ್ತ್ರಗಳ ದಾಳಿ ನಡೆಸಿದ್ದಾರೆ. ಇದರ ಪರಿಣಾಮವಾಗಿ ಮತ್ತಷ್ಟು ಸಾವುನೋವುಗಳು ಸಂಭವಿಸಿವೆ. ಒಟ್ಟಾರೆಯಾಗಿ, ಕಾರ್ಯಾಚರಣೆಯಲ್ಲಿ 20 ಭದ್ರತಾ ಸಿಬ್ಬಂದಿ ಪ್ರಾಣಬಿಟ್ಟಿದ್ದಾರೆ. ಐದು ಮಂದಿ ಗಾಯಗೊಂಡಿದ್ದಾರೆ ಎಂದು ಟಿಟಿಪಿ ಹೇಳಿಕೊಂಡಿದೆ. ಐದು ರೈಫಲ್‌ಗಳು, ರಾಕೆಟ್ ಲಾಂಚರ್, ರಾತ್ರಿ ದೃಷ್ಟಿ ಉಪಕರಣಗಳು ಮತ್ತು ಇತರ ಮಿಲಿಟರಿ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದ್ದೇವೆ ಎಂದು ಗುಂಪು ಹೇಳಿಕೊಂಡಿದೆ.

### ಕರಾಚಿ ಬಿಟ್ಟು ಭೂಗತ ಪಾತಕಿ ದಾವೂದ್ ಪರಾರಿ



ಭಾರತೀಯ ಸೇನೆಯ ಆಪರೇಷನ್ ಸಿಂಧೂರ್ ಮತ್ತು ಡ್ರೋನ್ ದಾಳಿಯ ನಂತರ ಪಾಕಿಸ್ತಾನಿ ನಾಗರಿಕರಲ್ಲಿ ಅಪಾರ ಭೀತಿ ಉಂಟಾಗಿದೆ. ಪಾಕಿಸ್ತಾನದಲ್ಲಿ ಅಡಗಿಕೊಂಡಿರುವ ಭೂಗತ ಪಾತಕಿ ದಾವೂದ್ ಇಬ್ರಾಹಿಂ ಕೂಡ ಭಾರತದ ದಾಳಿಯಿಂದ ಕಂಗೆಟ್ಟಿದ್ದಾನೆ. ಭಾರತೀಯ ಸೇನೆಯು ಲಾಹೋರ್, ಕರಾಚಿ ಮತ್ತು ಇಸ್ಲಾಮಾಬಾದ್‌ನಲ್ಲಿ ಡ್ರೋನ್ ದಾಳಿ ನಡೆಸಿತು. ಆದ್ದರಿಂದ, ಪಾಕಿಸ್ತಾನವು ಭೂಗತ ಪಾತಕಿಗಳಾದ ದಾವೂದ್ ಇಬ್ರಾಹಿಂ, ಛೋಟಾ ಶಕೀಲ್ ಮತ್ತು ಮುನ್ನಾ ಜಿಂಗಾ ಅವರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದೆ. ಭಾರತದ ಭಯದಿಂದ ಈ ಮೂವರು ಭೂಗತ ಪಾತಕಿಗಳು ಪಾಕಿಸ್ತಾನದಿಂದ ಬೇರೆ ದೇಶಕ್ಕೆ ಪರಾರಿಯಾಗಿರಬಹುದು ಎನ್ನಲಾಗಿದೆ. ಭೂಗತ ಪಾತಕಿ ದಾವೂದ್ ಇಬ್ರಾಹಿಂ ಪಾಕಿಸ್ತಾನದಲ್ಲಿ ಇದ್ದಾನೆ ಎಂಬ ಮಾತು ಕೇಳಿಬರುತ್ತಿದೆ. ಪಾಕಿಸ್ತಾನ ಅವನನ್ನು ರಕ್ಷಿಸಿ ಕರಾಚಿಯಲ್ಲಿ ಸುರಕ್ಷಿತವಾಗಿರಿಸಿದೆ ಎಂದು ಹೇಳಲಾಗುತ್ತದೆ. ಕಳೆದ ಕೆಲವು ದಿನಗಳಿಂದ ಭಾರತೀಯ ಸೇನೆಯು ಪಾಕಿಸ್ತಾನದ ಒಳಭಾಗದೊಳಗೆ ಡ್ರೋನ್ ದಾಳಿಗಳನ್ನು ನಡೆಸಿದೆ. ಭಾರತೀಯ ಸೇನೆಯು ಲಾಹೋರ್‌ನಲ್ಲಿ ವಾಯು ರಕ್ಷಣಾ ವ್ಯವಸ್ಥೆಯನ್ನು ಸಹ ನಾಶಪಡಿಸಿತು. ಇಸ್ಲಮಾಬಾದ್ ಮತ್ತು ಕರಾಚಿಯಲ್ಲೂ ಭಾರತ ದಾಳಿ ನಡೆಸಿದೆ.



# ದೇಶದಲ್ಲಿ ಬೇಕಾದಷ್ಟು ಆಹಾರ ದಾಸ್ತಾನಿದೆ
## ಪ್ರಲ್ಹಾದ್ ಜೋಶಿ ಅಭಯ; ಎಷ್ಟಿದೆ ಅಕ್ಕಿ, ಗೋಧಿ ಸಂಗ್ರಹ?

• ಉದಯವಾಹಿನಿ, ನವದೆಹಲಿ

ದೇಶದಲ್ಲಿ ಆಹಾರ ಮತ್ತು ಅಗತ್ಯ ವಸ್ತುಗಳ ಕೊರತೆ ಉಂಟಾಗಿದೆ ಎಂಬುದು ಶುದ್ಧ ಸುಳ್ಳು. ಯಾರೊಬ್ಬರೂ ಈ ಹುಸಿ ವದಂತಿಗೆ ಕಿವಿಗೊಡಬಾರದು ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಮನವಿ ಮಾಡಿದ್ದಾರೆ.

ದೇಶದ ವಿವಿಧೆಡೆ ಆಹಾರ ಪದಾರ್ಥ ಮತ್ತು ಅಗತ್ಯ ವಸ್ತುಗಳ ಕೊರತೆಯಿದೆ ಎಂದು ಕೆಲವರು ಸುಳ್ಳು ವದಂತಿ ಹರಡುತ್ತಿರುವುದು ಗಮನಕ್ಕೆ ಬಂದಿದೆ. ಪ್ರಸ್ತುತ ಸನ್ನಿವೇಶದಲ್ಲಿ ಜನರನ್ನು ದಿಕ್ಕು ತಪ್ಪಿಸುವ ಕಿಡಿಗೇಡಿಗಳ ಪ್ರಯತ್ನವಿದು ಎಂದು ಸ್ಪಷ್ಟಪಡಿಸಿದರು. ಪಂಜಾಬ್‌ನಲ್ಲಿ ಇಂಥ ಸುಳ್ಳು ವದಂತಿ ಹಬ್ಬಿಸಲಾಗಿದೆ. ಆದರೆ, ದೇಶದ ಯಾವುದೇ ಸ್ಥಳದಲ್ಲೂ ಆಹಾರ ಪದಾರ್ಥ ಮತ್ತು ಅಗತ್ಯ ವಸ್ತುಗಳ ಕೊರತೆಯಿಲ್ಲ. ಅಗತ್ಯಕ್ಕಿಂತ ಹೆಚ್ಚೇ ದಾಸ್ತಾನಿದೆ. ಜನರು ಅಗತ್ಯ ಆಹಾರ ಧಾನ್ಯ ಮತ್ತು ದೈನಂದಿನ ಅಗತ್ಯ ವಸ್ತುಗಳಿಗೆ ಎಲ್ಲೂ ಮುಗಿಬೀಳಬೇಕಿಲ್ಲ ಎಂದು ಹೇಳಿದರು. ದೇಶಾದ್ಯಂತ ಆಹಾರ ಪದಾರ್ಥ ಮತ್ತು ಅಗತ್ಯ ವಸ್ತುಗಳ ಸಂಗ್ರಹಣೆ ಬಗ್ಗೆ ಕೇಂದ್ರ ಸರ್ಕಾರ ಪರಿಶೀಲನೆ ನಡೆಸಿದೆ. ಎಲ್ಲೆಡೆಯೂ ಅಗತ್ಯಕ್ಕಿಂತ ದೊಡ್ಡ ಮಟ್ಟದಲ್ಲೇ ಆಹಾರ ಧಾನ್ಯ ಮತ್ತು ಅಗತ್ಯ ಸಾಮಗ್ರಿ ಸರಂಜಾಮು ಇರುವುದು ದೃಢಪಟ್ಟಿದೆ. ದೇಶದಲ್ಲಿ ಸಾಕಷ್ಟು ಸಂಗ್ರಹವಿದೆ. ಯಾರೊಬ್ಬರೂ ಆತಂಕಪಡುವ ಅಗತ್ಯವಿಲ್ಲ ಎಂದು ಸಚಿವ ಜೋಶಿ ತಿಳಿಸಿದರು. ದೇಶದಲ್ಲಿಅಕ್ಕಿ, ಗೋಧಿ, ಕಡಲೆ, ತೊಗರಿ, ಮಸೂರ್, ಹೆಸರುಕಾಳು ಹೀಗೆ ಎಲ್ಲಾ ಆಹಾರ ಧಾನ್ಯಗಳು, ಬೇಳೆ-ಕಾಳುಗಳು ಅಗತ್ಯಕ್ಕಿಂತ ದುಪ್ಪಟ್ಟು, ದೊಡ್ಡ ಪ್ರಮಾಣದಲ್ಲೇ ಸಂಗ್ರಹವಿದೆ. ಆಹಾರ ಪದಾರ್ಥ ಮತ್ತು ಇತರ ಅಗತ್ಯ ವಸ್ತುಗಳ ಕೊರತೆಯಿದೆ ಎಂಬ ವದಂತಿ ನಿರಾಧಾರ. ಯಾರೂ ಇದನ್ನು ನಂಬಬಾರದು. ಜನತೆ ಯಾವುದೇ ರೀತಿಯಲ್ಲೂ ಭಯಪಡುವ ಅಗತ್ಯವಿಲ್ಲ ಎಂದು ಹೇಳಿದರು.

### ತರಾತುರಿ ಖರೀದಿ ಬೇಡ

**ಸುಳ್ಳು ವದಂತಿಗೆ ಕಿವಿಗೊಟ್ಟು ಯಾರೊಬ್ಬರೂ ಆಹಾರ ಪದಾರ್ಥ ಮತ್ತು ಅಗತ್ಯ ವಸ್ತುಗಳ ಖರೀದಿಗೆ ತರಾತುರಿ ತೋರಬಾರದು. ಬೇರೆ ಬೇರೆ ಮಾರುಕಟ್ಟೆಗಳಿಗೆ ತೆರಳಿ ದುಪ್ಪಟ್ಟು ಹಣ ತೆತ್ತು ಖರೀದಿಯಲ್ಲಿ ತೊಡಗಿಕೊಳ್ಳುವ ಅವಶ್ಯಕತೆಯಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.**

**ಎಷ್ಟಿದೆ ದಾಸ್ತಾನು?:** ದೇಶದಲ್ಲಿ ಪ್ರಸ್ತುತ ಅಕ್ಕಿ ದಾಸ್ತಾನು 356.42 ಲಕ್ಷ ಮೆಟ್ರಿಕ್ ಟನ್‌ಗಳಷ್ಟಿದೆ. 135 ಲಕ್ಷ ಮೆಟ್ರಿಕ್ ಟನ್ ಬಫರ್ ಮಾನದಂಡಕ್ಕೆ ವಿರುದ್ಧವಾಗಿ ದುಪ್ಪಟ್ಟು ದಾಸ್ತಾನಿದೆ. ಅದೇ ರೀತಿ, ಗೋಧಿ ದಾಸ್ತಾನು ಸಹ ಹೆಚ್ಚಿದೆ. 276 ಲಕ್ಷ ಮೆಟ್ರಿಕ್ ಟನ್ ಬಫರ್ ಮಾನದಂಡಕ್ಕೆ ವಿರುದ್ಧವಾಗಿ 383.32 ಲಕ್ಷ ಮೆಟ್ರಿಕ್ ಟನ್ ಸಂಗ್ರಹವಿದೆ. ಇದಲ್ಲದೇ, ಭಾರತ ಸುಮಾರು 17 ಲಕ್ಷ ಮೆಟ್ರಿಕ್ ಟನ್ ಖಾದ್ಯ ತೈಲ ದಾಸ್ತಾನು ಹೊಂದಿದೆ. ದೇಶೀಯವಾಗಿ ಗರಿಷ್ಠ ಉತ್ಪಾದನಾ ಋತುವಿನಲ್ಲಿ ಸಾಸಿವೆ ಎಣ್ಣೆಯ ಲಭ್ಯತೆ ಹೇರಳವಾಗಿದ್ದು, ಖಾದ್ಯ ತೈಲ ಪೂರೈಕೆಗೆ ಪೂರಕವಾಗಿದೆ. ಸಕ್ಕರೆ ಋತುವು 79 ಲಕ್ಷ ಮೆಟ್ರಿಕ್ ಟನ್ ಕ್ಯಾರಿ-ಓವರ್ ಸ್ಟಾಕ್‌ನೊಂದಿಗೆ ಪ್ರಾರಂಭವಾಗಿದ್ದು, 34 ಲಕ್ಷ ಮೆಟ್ರಿಕ್ ಟನ್ ಎಥೆನಾಲ್ ಉತ್ಪಾದನೆಗೆ ಬಳಸಿದ ನಂತರವೂ 262 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆ ಅಂದಾಜಿಸಲಾಗಿದೆ ಎಂದು ಹೇಳಿದರು.



# ಮೇ 15ರಿಂದ ಸರ್ಕಾರಿ ನೌಕರರ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಪ್ರಸಕ್ತ 2025-26ನೇ ಸಾಲಿಗೆ ರಾಜ್ಯ ಸರಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆಗೆ ಮೇ 15ರಿಂದ ಜೂನ್ 14ರವರೆಗೆ ಅವಕಾಶ ಕಲ್ಪಿಸಲು ಸರಕಾರ ತೀರ್ಮಾನಿಸಿದೆ. ಶುಕ್ರವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಸರಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿ ಹೊರಡಿಸಲು, ಪರಿಷ್ಕರಿಸಲು ಹಾಗೂ ವರ್ಗಾವಣಾ ಅವಧಿ ವಿಸ್ತರಿಸಲು ಮುಖ್ಯಮಂತ್ರಿ ಅವರಿಗೆ ಅಧಿಕಾರ ನೀಡುವ ನಿರ್ಣಯ ಕೈಗೊಂಡಿತು. ಕಾನೂನು ಸಚಿವ ಎಚ್.ಕೆ.ಪಾಟೀಲ್, ''2025-26ನೇ ಸಾಲಿನ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿ ಹೊರಡಿಸಲು, ಪರಿಷ್ಕರಿಸಲು ಹಾಗೂ ವರ್ಗಾವಣಾ ಅವಧಿ ವಿಸ್ತರಿಸಲು ಮುಖ್ಯಮಂತ್ರಿಗಳಿಗೆ ಅಧಿಕಾರ ನೀಡಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ,'' ಎಂದು ಹೇಳಿದರು. ''ಆಯಾ ವೃಂದಗಳ ಕಾರ್ಯನಿರತ ವೃಂದ ಬಲದ ಶೇ.6ರಷ್ಟು ಮೀರದಂತೆ ಮೇ 15ರಿಂದ ಜೂನ್ 14ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು 'ಗ್ರೂಪ್- ಎ' ಹಾಗೂ 'ಗ್ರೂಪ್- ಬಿ' ವೃಂದದ ಅಧಿಕಾರಿಗಳಿಗೆ ಆಯಾ ಇಲಾಖಾ ಸಚಿವರಿಗೆ ಅಧಿಕಾರ ನೀಡುವುದು. ಹಾಗೆಯೇ 'ಗ್ರೂಪ್- ಸಿ' ಹಾಗೂ 'ಗ್ರೂಪ್-ಡಿ' ವೃಂದದ ನೌಕರರ ವರ್ಗಾವಣೆ ಸಂಬಂಧ ನೇಮಕ ಪ್ರಾಧಿಕಾರಗಳಿಗೆ ಅಧಿಕಾರ ಪ್ರತ್ಯಾಯೋಜಿಸಲು ಒಪ್ಪಿಗೆ ನೀಡಿ ಸಂಪುಟ ಸಭೆ ತೀರ್ಮಾನಿಸಿತು.

## ರೈತರ ಪರಿಹಾರ ಮೊತ್ತಕ್ಕೆ ಜಿಎಸ್‌ಟಿ ವಿಧಿಸುವಂತಿಲ್ಲ
# ಅನ್ನದಾತರ ನೆರವಿಗೆ ಧಾವಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು




### ತೆರಿಗೆ ಇಲಾಖೆ ನೀಡಿದ್ದ ಬೇಡಿಕೆ ರದ್ದು

ಅಭಿವೃದ್ಧಿ ಯೋಜನೆಗಳಿಗೆ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರ ರೂಪದಲ್ಲಿ ನೀಡುವ ಮೊತ್ತಕ್ಕೆ ಸರಕು ಮತ್ತು ಸೇವಾ ತೆರಿಗೆ-ಜಿಎಸ್‌ಟಿ ವಿಧಿಸುವಂತಿಲ್ಲ ಎಂದು ಹೈಕೋರ್ಟ್ ಮಹತ್ವದ ಆದೇಶ ನೀಡಿದೆ.

ಬೆಂಗಳೂರಿನ ನಿವಾಸಿಗಳಾದ ಆರ್. ಆಶಾ ಮತ್ತಿತರರು ವಾಣಿಜ್ಯ ತೆರಿಗೆ ಇಲಾಖೆ ನೀಡಿದ್ದ ಶೋಕಾಸ್ ನೋಟಿಸ್‌ಗಳನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಗಳನ್ನು ಆಲಿಸಿದ ನ್ಯಾ.ಎಸ್.ಆರ್. ಕೃಷ್ಣಕುಮಾರ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಇದರಿಂದಾಗಿ ರೈತರು ತಾವು ಪಡೆಯುವ ಪರಿಹಾರಕ್ಕೆ ಜಿಎಸ್‌ಟಿ ತೆರಿಗೆ ಪಾವತಿಸಬೇಕಾಗಿಲ್ಲ.

ವಾದ-ಪ್ರತಿವಾದ ಆಲಿಸಿದ ಬಳಿಕ ನ್ಯಾಯಪೀಠ, ''ಇಷ್ಟವಿಲ್ಲದಿದ್ದರೂ ಭೂಮಿ ಕಳೆದುಕೊಂಡಿರುವ ಮತ್ತು ಅದರ ಜತೆ ಭಾವನಾತ್ಮಕ ಸಂಬಂಧ ಹೊಂದಿರುವ ರೈತರು ಕಳೆದುಕೊಳ್ಳುವ ಭೂಮಿಗೆ ಪರ್ಯಾಯವಾಗಿ ನಷ್ಟ ತುಂಬಿಕೊಡಲು ಪರಿಹಾರ ಪಡೆಯುತ್ತಾರೆ. ಅದಕ್ಕೆ ಜಿಎಸ್‌ಟಿ ಅಡಿ ತೆರಿಗೆ ವಿಧಿಸುವಂತಿಲ್ಲ'' ಎಂದು ಆದೇಶ ನೀಡಿದೆ. ದಾಖಲೆಗಳನ್ನು ಪರಿಶೀಲಿಸಿದ ಬಳಿಕ ನ್ಯಾಯಾಲಯ, ''ಅರ್ಜಿದಾರರು ಮತ್ತು ಕೆಐಎಡಿಬಿಇ ನಡುವೆ ಆಗಿರುವ ಒಪ್ಪಂದದಲ್ಲಿ ಹಲವು ಷರತ್ತುಗಳು ಒಳಗೊಂಡಿರಬಹುದು. ಆದರೆ, ಅದಕ್ಕೂ ಅರ್ಜಿದಾರರಿಗೆ ನೀಡುವ ಪರಿಹಾರ ಮೊತ್ತಕ್ಕೂ ಸಂಬಂಧವಿಲ್ಲ. ಅದನ್ನು ಸಿಜಿಎಸ್‌ಟಿ/ ಕೆಜಿಎಸ್‌ಟಿ ಶೆಡ್ಯೂಲ್-2ರಡಿ ಎಂಟ್ರಿ 5(ಇ) ಅಡಿ ಸೇವೆ ಎಂದು ಪರಿಗಣಿಸಲಾಗದು, ಎಂದು ಆದೇಶಿಸಿದೆ.

ಅಲ್ಲದೆ, ಒಪ್ಪಂದದ ವಿಚಾರದಲ್ಲಿ ಜಿಎಸ್‌ಟಿ ಕಾಯಿದೆ ಒಪ್ಪಿಕೊಳ್ಳಬೇಕೆಂದೇನೂ ಇಲ್ಲ. ಸರಕಾರ ಅರ್ಜಿದಾರರಿಂದ ಭೂಮಿ ಸ್ವಾಧೀನಪಡಿಸಿಕೊಂಡಿದೆ. ಅದಕ್ಕೆ ಪರ್ಯಾಯವಾಗಿ ಪರಿಹಾರ ನೀಡುತ್ತಿದೆ. ಅದರಲ್ಲಿ ತೆರಿಗೆ ವಿಧಿಸುವ ಅಗತ್ಯವಿಲ್ಲ'' ಎಂದು ನ್ಯಾಯಾಲಯ ಅರ್ಜಿದಾರರಿಗೆ ವಾಣಿಜ್ಯ ತೆರಿಗೆ ಇಲಾಖೆ ನೀಡಿದ್ದ ಬೇಡಿಕೆ ನೋಟಿಸ್‌ಗಳನ್ನು ರದ್ದುಗೊಳಿಸಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,835/Gram24ct ₹9,015/Gram22ct ಬೆಳ್ಳಿ: ₹99.00/Gram

# ವೀಣಾ ವಾದನ



• **ಉದಯವಾಹಿನಿ, ಬೆಂಗಳೂರು**

ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನದ ವತಿಯಿಂದ ಮೇ 10, ಶನಿವಾರ ಬೆಳಗ್ಗೆ 8-00ಕ್ಕೆ ಕು|| ಅಹಿಕಾ ನಾಗದೀಪ್ ಮತ್ತು ಸಂಗಡಿಗರಿಂದ ವೀಣಾ ವಾದನ. ಸ್ಥಳ : ಶ್ರೀ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನ, 152/1, 'ವಜ್ರಕ್ಷೇತ್ರ', 7ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆ, ತ್ಯಾಗರಾಜನಗರ 3ನೇ ಬ್ಲಾಕ್, ಬೆಂಗಳೂರು-560028

## ಶಾಸಕ ಸ್ಥಾನದಿಂದ ಜಿ. ಜನಾರ್ದನ ಅನರ್ಹ

• **ಉದಯವಾಹಿನಿ, ಬೆಂಗಳೂರು**

ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಹೈದರಾಬಾದ್‌ನ ಸಿಬಿಐ ವಿಶೇಷ ನ್ಯಾಯಾಲಯದಿಂದ ಏಳು ವರ್ಷ ಶಿಕ್ಷೆಗೆ ಗುರಿಯಾದ ಗಂಗಾವತಿ ಕ್ಷೇತ್ರದ ಶಾಸಕ ಜಿ. ಜನಾರ್ದನ ರೆಡ್ಡಿ ಅವರನ್ನು ಅನರ್ಹಗೊಳಿಸಲಾಗಿದೆ. ನ್ಯಾಯಾಲಯವು ಶಿಕ್ಷೆ ಪ್ರಕಟಿಸಿದ ಮೇ 6ರಿಂದ ಅನರ್ಹ ಆದೇಶವು ಜಾರಿಗೆ ಬರಲಿದ್ದು, ಆರು ವರ್ಷಗಳವರೆಗೆ ಮುಂದುವರಿಯಲಿದೆ. ಹೀಗಾಗಿ ರಾಜ್ಯ ವಿಧಾನಸಭೆಯ ಒಂದು ಸ್ಥಾನ ಖಾಲಿಯಾಗಿದೆ ಎಂದು ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅಧಿಸೂಚನೆ ಹೊರಡಿಸಿದ್ದಾರೆ. ಕರ್ನಾಟಕ ಆಂಧ್ರಪ್ರದೇಶ ಅಂತರರಾಜ್ಯ ಗಡಿ ಭಾಗದಲ್ಲಿ ಅಕ್ರಮ ಗಣಿಗಾರಿಕೆ ನಡೆಸಿದ ಪ್ರಕರಣದಲ್ಲಿ ನ್ಯಾಯಾಲಯವು ರೆಡ್ಡಿ ಮತ್ತು ಇತರ ಮೂವರಿಗೆ ಏಳು ವರ್ಷಗಳ ಜೈಲು ಶಿಕ್ಷೆ ಮತ್ತು ತಲಾ ?10 ಸಾವಿರ ದಂಡ ವಿಧಿಸಿದೆ. ರೆಡ್ಡಿ ಅವರು ಎರಡನೇ ಅಪರಾಧಿಯಾಗಿದ್ದಾರೆ.

## ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ: ಜಮೀರ್ ಅಹ್ಮದ್


• **ಉದಯವಾಹಿನಿ,ಬೆಂಗಳೂರು**

ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ ಎಂದು ಸಚಿವ ಜಮೀರ್ ಅಹ್ಮದ್ ಪುನರುಚ್ಚರಿಸಿದರು. ವಿಧಾನಸೌಧದಲ್ಲಿ ಮಾತನಾಡಿದ ಅವರು, ಎಲ್ಲಾ ಮಸೀದಿಗಳಲ್ಲಿ ಪ್ರಾರ್ಥನೆ ಮಾಡಲು ಹೇಳಿದ್ದೇವೆ. ನಾನು ಕೂಡಾ ಗಾಂಧಿ ನಗರದಲ್ಲಿ ಪ್ರಾರ್ಥನೆ ಮಾಡಿದ್ದೇನೆ. ಸೈನಿಕರಿಗೆ ಹೆಚ್ಚು ಶಕ್ತಿ ಕೊಡಲು ಇಡೀ ದೇಶದಲ್ಲಿ ಮಸೀದಿಯಲ್ಲಿ ಪ್ರಾರ್ಥನೆ ಮಾಡ್ತಿದ್ದೇವೆ. ಸೈನಿಕರು ಯಶಸ್ವಿಯಾಗಬೇಕು ಅಂತ ನಾವು ಈ ಪ್ರಾರ್ಥನೆ ಮಾಡ್ತಿದ್ದೇವೆ ಎಂದು ಹೇಳಿದರು. ಸೂಸೈಡ್ ಬಾಂಬರ್‌ಗೆ ಬಿಜೆಪಿ ಟೀಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಬಿಜೆಪಿ ಅವರಿಗೆ ಟೀಕೆ ಬಿಟ್ಟು ಇನ್ನೇನೂ ಗೊತ್ತಿಲ್ಲ. ನಾನು ದೇಶಕೋಸ್ಕರ ಬಲಿ ಆಗೋಕೆ ಸಿದ್ಧ ಅಂತ ಹೇಳಿದ್ದೇನೆ. ಈಗಲೂ ನನ್ನ ಮಾತಿಗೆ ನಾನು ಬದ್ಧ. ಈಗಲೂ ಹೇಳ್ತೀನಿ ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ. ಮೋದಿ, ಅಮಿತ್ ಶಾ ಅವರು ಅನುಮತಿ ಕೊಟ್ರೆ ಸೂಸೈಡ್ ಬಾಂಬರ್ ಆಗಿ ಹೋಗೋಕೆ ಸಿದ್ಧ. ನಮ್ಮ ದೇಶಕ್ಕಾಗಿ ಈಗಲೂ ನಾನು ಸೂಸೈಡ್ ಬಾಂಬರ್ ಆಗಿ ಹೋಗ್ತೀನಿ. ಸೈನಿಕರಿಗೆ ಹೆಚ್ಚು ಶಕ್ತಿ ಕೊಡಲಿ ಅಂತ ಅಲ್ಲಾ ಬಳಿ ಬೇಡಿ ಕೊಳ್ತೀನಿ ಎಂದು ತಿಳಿಸಿದರು. ತಿರಂಗಾ ಯಾತ್ರೆಗೆ ಬಾರದ ಬಗ್ಗೆ ಮಾತನಾಡಿ, ನಾನು ತಿರಂಗಾ ಯಾತ್ರೆಗೆ ಬರಬೇಕಿತ್ತು. ಸ್ಲಂ ಬೋರ್ಡ್ ಕಾರ್ಯಕ್ರಮ ಹಿನ್ನೆಲೆಯಲ್ಲಿ ಬರಲು ಆಗಲಿಲ್ಲ ಎಂದು ಸ್ಪಷ್ಟಪಡಿಸಿದರು. ಸಚಿವ ಸಂತೋಷ್ ಲಾಡ್ ಮಾತನಾಡಿ, 140 ಕೋಟಿ ಜನರಿಗೆ ಯಾರಿಗೆ ಅವಕಾಶ ಸಿಕ್ಕರೂ ಹೋಗ್ತಾರೆ. ಜಮೀರ್ ಅದೇ ಮನೋಭಾವದಲ್ಲಿ ಹೇಳ್ತಿದ್ದಾರೆ ಅಷ್ಟೆ ಎಂದರು. ಸೋಶಿಯಲ್ ಮೀಡಿಯಾದಲ್ಲಿ ಫೇಕ್ ವಿಡಿಯೋ ಹರಿದಾಡುತ್ತಿರೋ ಬಗ್ಗೆ ಪ್ರತಿಕ್ರಿಯಿಸಿ, ನೆಗೆಟಿವ್ ವಿಡಿಯೋಗಳನ್ನ ಯಾರೂ ಹಾಕಬೇಡಿ. ಸೇನೆ ಉತ್ತಮ ಕೆಲಸ ಮಾಡ್ತಿದೆ. ನಾವು ಸ್ವಲ್ಪ ಸಮಾಧಾನದಿಂದ ಇರಬೇಕು. ಇಂತಹ ಸುಳ್ಳು ವಿಡಿಯೋಗಳನ್ನ ಯಾರೂ ಹಂಚಿಕೊಳ್ಳಬೇಡಿ ಎಂದು ಮನವಿ ಮಾಡಿದರು.

## ಎನ್‌ಪಿಕೆಎಲ್ ಸೈಟ್‌ದಾರರಿಗೆ ಆಸ್ತಿತೆರಿಗೆ ವಿಧಿಸದಿರಿ

• **ಉದಯವಾಹಿನಿ,ಬೆಂಗಳೂರು**

ಬಿಡಿಎ ನಿರ್ಮಿಸುತ್ತಿರುವ ನಾಡಪ್ರಭು ಕೆಂಪೇಗೌಡ ಬಡಾವಣೆ (ಎನ್‌ಪಿಕೆಎಲ್) ಯಲ್ಲಿನ ಸೈಟ್‌ದಾರರಿಗೆ ವಿಧಿಸಿರುವ ಆಸ್ತಿತೆರಿಗೆಯನ್ನು ಮೂಲಸೌಕರ್ಯ ಕಲ್ಪಿಸುವವರೆಗೂ ವಸೂಲು ಮಾಡಬಾರದು ಎಂದು ಕೋರಿ ಶಾಸಕ ಎಸ್. ಸುರೇಶ್‌ಕುಮಾರ್ ಅವರು ಡಿಸಿಎಂಗೆ ಪತ್ರ ಬರೆದು ಒತ್ತಾಯಿಸಿದ್ದಾರೆ. ಇತ್ತೀಚಿಗೆ ಬಿಡಿಎ ಆಸ್ತಿತೆರಿಗೆ ಪರಿಷ್ಕರಿಸುವಾಗ ಶೇ.50ರವರೆಗೂ ಹೆಚ್ಚಳ ಮಾಡಿದೆ. ಅದರಲ್ಲೂ ಕೆಂಪೇಗೌಡ ಲೇಔಟ್‌ನಲ್ಲಿ ರಸ್ತೆ ಸೇರಿದಂತೆ ಯಾವ ಸೌಲಭ್ಯವನ್ನೂ ಪೂರ್ಣವಾಗಿ ಕಲ್ಪಿಸಿಲ್ಲ. ಇದರಿಂದಾಗಿ ಸೈಟ್ ಹಂಚಿಕೆದಾರರು ಮನೆ ನಿರ್ಮಿಸಿಕೊಳ್ಳಲು ಸಾಧ್ಯವಾಗಿಲ್ಲ. ವಸ್ತುಸ್ಥಿತಿ ಹೀಗಿರುವಾಗ ಖಾಲಿ ಸೈಟ್‌ಗಳಿಗೂ ಯದ್ವಾತದ್ವಾ ಶುಲ್ಕ ಏರಿಸಿರುವುದು ಸರಿಯಲ್ಲ. ಹಾಗಾಗಿ ಬಡಾವಣೆಯಲ್ಲಿ ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಸೈಟ್‌ದಾರರಿಗೆ ಅಂತಿಮ ಮಾಲೀಕತ್ವ ಪ್ರಮಾಣಪತ್ರ ವಿತರಿಸುವವರೆಗೂ ತೆರಿಗೆ ಶುಲ್ಕ ವಿಧಿಸಬಾರದು ಎಂದು ಶಾಸಕರು ಒತ್ತಾಯಿಸಿದ್ದಾರೆ. ಕೆಂಪೇಗೌಡ ಲೇಔಟ್ ವಿಚಾರವಾಗಿ ವಿಧಾನಸಭೆಯ ಅರ್ಜಿ ಸಮಿತಿಗೆ ದಾಖಲಾಗಿರುವ ದೂರು ಆಧರಿಸಿ ವಿಚಾರಣೆ ನಡೆಸಿದ್ದರೂ, ಪ್ರಾಧಿಕಾರಿವು ಸರಿಯಾದ ಉತ್ತರ ಒದಗಿಸಿಲ್ಲ. ಅಧಿವೇಶನದಲ್ಲಿ ವಿಷಯ ಪ್ರಸ್ತಾಪಸಿದ್ದರೂ, ಸಮರ್ಪಕ ಮಾಹಿತಿ ದೊಎತಿಲ್ಲ. ತಮಗು (ಡಿಸಿಎಂ) ಕೂಡ ಎರಡು ಬಾರಿ ಪತ್ರ ಬರೆದಿದ್ದರೂ ಈವರೆಗೂ ಮಾರುತ್ತರ ನೀಡಿಲ್ಲ




**ವಿಶ್ವ ಥಲಸ್ಸೆಮಿಯಾ ದಿನದಂದು ಬೆಂಗಳೂರಿನ ನಾರಾಯಣ ಹೆಲ್ತ್ ಸಿಟಿಯಲ್ಲಿರುವ ಮಜುಂದಾರ್ ಶಾ ವೈದ್ಯಕೀಯ ಕೇಂದ್ರವನ್ನು ಸಂಪೂರ್ಣವಾಗಿ ಕೆಂಪಾಗಿ ಕಾಣುವಂತೆ ಬೆಳಕಿನ ವ್ಯವಸ್ಥೆ ಮಾಡಲಾಗಿತ್ತು. ರಕ್ತ ಸಂಬಂಧಿ ಕಾಯಿಲೆಗಳ ವಿರುದ್ಧ ಪ್ರತಿದಿನ ಹೋರಾಡುತ್ತಿರುವವರಿಗೆ ಭರವಸೆ ಒದಗಿಸುವುದರ ಸಂಕೇತವಾಗಿ ಈ ವ್ಯವಸ್ಥೆ ರೂಪಿಸಲಾಗಿತ್ತು.**

# ಮೂರು ಗಂಟೆ ಮೊದಲೇ ವಿಮಾನ ನಿಲ್ದಾಣ ತಲುಪುವಂತೆ ಪ್ರಯಾಣಿಕರಿಗೆ ಸಲಹೆ

• **ಉದಯವಾಹಿನಿ, ಬೆಂಗಳೂರು**



ಭಾರತ, ಪಾಕಿಸ್ತಾನ ನಡುವಿನ ಉದ್ವಿಗ್ನತೆ ಹಿನ್ನೆಲೆಯಲ್ಲಿ, ವಿಮಾನ ಹೊರಡುವ ಸಮಯಕ್ಕಿಂತ ಮೂರು ಗಂಟೆ ಮುಂಚಿತವಾಗಿ ವಿಮಾನ ನಿಲ್ದಾಣವನ್ನು ತಲುಪುವಂತೆ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಶುಕ್ರವಾರ ಪ್ರಯಾಣಿಕರಿಗೆ ಮನವಿ ಮಾಡಿದೆ.

ಭದ್ರತೆಯ ಹಿನ್ನೆಲೆಯಲ್ಲಿ ಪ್ರಯಾಣಿಕರ ಸಲಹೆ ಮಾರ್ಗ ಸೂಚಿಯಲ್ಲಿ ಹೊಸ ಅಂಶವನ್ನು ಸೇರ್ಪಡೆ ಮಾಡಲಾಗಿದ್ದು, ತಪಾಸಣೆ ನಡೆಸುವ ನಿಟ್ಟಿನಲ್ಲಿ ಎಲ್ಲಾ ಪ್ರಯಾಣಿಕರು ವಿಮಾನ ಹೊರಡುವ ಮೂರು ಗಂಟೆಗೂ ಮುನ್ನವೇ ವಿಮಾನ ನಿಲ್ದಾಣಕ್ಕೆ ತಲುಪುವಂತೆ ಸೂಚಿಸಲಾಗಿದೆ.

ದೇಶದಾದ್ಯಂತ ಹೆಚ್ಚಿದ ಭದ್ರತಾ ದೃಷ್ಟಿಯಿಂದಾಗಿ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ವರ್ಧಿತ ಸ್ಕ್ರೀನಿಂಗ್ ಕ್ರಮಗಳು ಜಾರಿಯಲ್ಲಿವೆ. ಸುಗಮ ಚೆಕ್-ಇನ್, ಭದ್ರತೆ ಮತ್ತು ಬೋರ್ಡಿಂಗ್‌ಗಾಗಿ ಪ್ರಯಾಣಿಕರು ವಿಮಾನ ನಿರ್ಗಮಿಸುವ ಕನಿಷ್ಠ ಮೂರು ಗಂಟೆಗೂ ಮುನ್ನವೇ ನಿಲ್ದಾಣಕ್ಕೆ ಆಗಮಿಸಲು ಸೂಚಿಸಲಾಗಿದೆ' ಎಂದು ತಿಳಿಸಿದೆ. ಹೊಸ ಮಾರ್ಗಸೂಚಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ವಿಮಾನಯಾನ ಸಂಸ್ಥೆಗಳನ್ನು ಸಂಪರ್ಕಿಸಲು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ (ಕೆಐಎ) ತಿಳಿಸಿದೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಹಿನ್ನೆಲೆಯಲ್ಲಿ, ಎಲ್ಲಾ ವಿಮಾನಗಳಿಗೆ ದ್ವಿತೀಯ ಹಂತದ ಭದ್ರತಾ (ಸೆಕೆಂಡರಿ ಲ್ಯಾಡರ್ ಪಾಯಿಂಟ್) ತಪಾಸಣೆಯನ್ನು ಕಡ್ಡಾಯಗೊಳಿಸಿದೆ. ವಿಮಾನ ನಿಲ್ದಾಣಗಳ ಟರ್ಮಿನಲ್ ಕಟ್ಟಡಗಳಲ್ಲಿ ಸಂದರ್ಶಕರಿಗೆ ನಿಷೇಧ ಹೇರಲಾಗಿದೆ ಮತ್ತು ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ನಾಗರಿಕ ವಿಮಾನ ಯಾನ ಭದ್ರತಾ ಬ್ಯೂರೋ ತಿಳಿಸಿದೆ.

# ಶ್ರೀ ಸಾಯಿ ಮಿನರಲ್ಸ್‌ಗೆ ಗಣಿಗಾರಿಕೆಗೆ ಅನುಮತಿ ಕೇಸ್

## ಲೋಕಾಯುಕ್ತ ಎಸ್‌ಐಟಿ ಸಲ್ಲಿಸಿದ್ದ ಮನವಿಗೆ ಪ್ರತಿಯಾಗಿ ಅರ್ಜಿಯನ್ನು ಸಲ್ಲಿಸಿದ್ದ ಎಚ್‌ಡಿಕೆ

• **ಉದಯವಾಹಿನಿ,ಬೆಂಗಳೂರು**



ಲೋಕಾಯುಕ್ತ ಎಸ್‌ಐಟಿ ಮುಖ್ಯಸ್ಥರಿಗೆ ಬೆದರಿಕೆ ಹಾಕಿದ ಆರೋಪದ ಮೇರೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧದ ಎಫ್‌ಐಆರ್‌ಗೆ ತಡೆಯಾಜ್ಞೆ ಇರುವಾಗ ಅದೇ ಆರೋಪದಲ್ಲಿ ಈಗಾಗಲೇ ಮಂಜೂರಾಗಿದ್ದ ನಿರೀಕ್ಷಣಾ ಜಾಮೀನು ರದ್ದತಿ ಕೋರಲು ಅವಕಾಶವಿಲ್ಲ ಎಂದು ಹೈಕೋರ್ಟ್ ಗುರುವಾರ ಸ್ಪಷ್ಟಪಡಿಸಿದೆ.

ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್‌ಗೆ ಅಕ್ರಮವಾಗಿ 550 ಎಕರೆ ಜಮೀನನ್ನು ಗಣಿಗಾರಿಕೆಗೆ ನೀಡಿದ ಆರೋಪ ಸಂಬಂಧ ಮಂಜೂರಾಗಿರುವ ನಿರೀಕ್ಷಣಾ ಜಾಮೀನು ರದ್ದು ಕೋರಿ ಲೋಕಾಯುಕ್ತ ಪೊಲೀಸರು ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿರುವ ಮನವಿ ಅಮಾನತಿನಲ್ಲಿಡಬೇಕು ಎಂದು ಕೋರಿ ಕುಮಾರಸ್ವಾಮಿ ಅರ್ಜಿ ಸಲ್ಲಿಸಿದ್ದಾರೆ. ಆ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ. ಶ್ರೀಶಾನಂದ ಅವರಿದ್ದ ರಜಾ ಕಾಲದ ಏಕಸದಸ್ಯ ಪೀಠ, ಈ ಸ್ಪಷ್ಟನೆ ನೀಡಿದೆ. ಅಲ್ಲದೆ, ಈ ಸಂಬಂಧ ವಿಚಾರಣಾ ನ್ಯಾಯಾಲಯವೇ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದೆ. ವಾದ-ಪ್ರತಿವಾದ ಆಲಿಸಿದ ಪೀಠ, ಬೆದರಿಕೆ ಆರೋಪ ಸಂಬಂಧದ ಎಫ್‌ಐಆರ್‌ಗೆ ತಡೆಯಿದೆ. ಆ ಪ್ರಕರಣ ಇತ್ಯರ್ಥವಾಗುವವರೆಗೂ ನಿರೀಕ್ಷಣಾ ಜಾಮೀನು ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಲು ಅವಕಾಶವಿಲ್ಲ, ಎಂದು ಆದೇಶಿಸಿದೆ. ಅಲ್ಲದೆ, ಜಮೀನು ಮಂಜೂರು ಮಾಡಿದ ಪ್ರಕರಣ ದಾಖಲಾಗಿ ಹಲವು ವರ್ಷ ಕಳೆದರೂ ಏಕೆ ಆರೋಪಪಟ್ಟಿ ಸಲ್ಲಿಸಿಲ್ಲ. ಅಲ್ಲದೆ, ರಾಜ್ಯಪಾಲರು ಅನುಮತಿ ನೀಡಿಲ್ಲದ ಕುರಿತ ಸುಬ್ರಹ್ಮಣ್ಯಸ್ವಾಮಿ ವಿರುದ್ಧದ ಮನಮೋಹನ್ ಸಿಂಗ್ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಆದೇಶವಿದ್ದರೂ ಅದನ್ನು ಏಕೆ ಪಾಲಿಸಿಲ್ಲ. ಎಲ್ಲಾ ಪ್ರಕರಣಗಳಲ್ಲಿ ಸುಪ್ರೀಂಕೋರ್ಟ್‌ಗೆ ಹೋಗುತ್ತೀರಿ. ಇಲ್ಲಿಏಕೆ ಹೋಗಿಲ್ಲ? ಎಂದು ನ್ಯಾಯಪೀಠ ಮೌಖಿಕವಾಗಿ ಪ್ರಶ್ನಿಸಿ ಅರ್ಜಿ ಇತ್ಯರ್ಥಪಡಿಸಿತು.

**ಎಚ್‌ಡಿಕೆ ವಿರುದ್ಧದ ಎಫ್‌ಐಆರ್**

ಇದಲ್ಲದೆ, 11 ವರ್ಷಗಳ ಹಿಂದೆ ಅರ್ಜಿದಾರ ಕುಮಾರಸ್ವಾಮಿಗೆ ಮಂಜೂರು ಮಾಡಿದ್ದ ನಿರೀಕ್ಷಣಾ ಜಾಮೀನು ರದ್ದು ಕೋರಿದ್ದು, ಪ್ರಕರಣದ ವಾದ ಮಂಡನೆ ನಿಗದಿಯಾಗಿದೆ. ಅಕ್ರಮ ಗಣಿಗಾರಿಕೆ ಆರೋಪದಲ್ಲಿ ತನಿಖಾ ಸಂಸ್ಥೆ ಮುಖ್ಯಸ್ಥರಿಗೆ ಬೆದರಿಕೆ ಹಾಕಿದ ಆರೋಪ ಸಂಬಂಧ ದಾಖಲಾದ ಎಫ್‌ಐಆರ್‌ಗೆ ತಡೆಯಿದ್ದು, ಅದನ್ನು ಆಧರಿಸಿ ನಿರೀಕ್ಷಣಾ ಜಾಮೀನು ರದ್ದು ಕೋರಿದ್ದಾರೆ. ಅದಕ್ಕೆ ಅವಕಾಶವಿಲ್ಲ, ಎಂದು ತಿಳಿಸಿದರು.

ಅದಕ್ಕೆ ಆಕ್ಷೇಪಿಸಿದ ಲೋಕಾಯುಕ್ತ ಪರ ವಕೀಲರು, ಶ್ರೀ ಸಾಯಿ ಮಿನರಲ್ಸ್‌ಗೆ ಗಣಿಗಾರಿಕೆಗೆ ಅನುಮತಿ ನೀಡಿದ ಆರೋಪದಲ್ಲಿ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದ್ದು, ತನಿಖಾ ಸಂಸ್ಥೆ ಮುಖ್ಯಸ್ಥರಿಗೆ ಬೆದರಿಕೆ ಹಾಕುವ ಮೂಲಕ ಜಾಮೀನು ಷರತ್ತುಗಳನ್ನು ಉಲ್ಲಂಘಿಸಿದ್ದಾರೆ. ಆದ್ದರಿಂದ ನಿರೀಕ್ಷಣಾ ಜಾಮೀನು ರದ್ದತಿಗೆ ಕೋರಲಾಗಿದೆ, ಎಂದು ವಿವರಿಸಿದರು.



**ಅರ್ಜಿದಾರರ ಪರ ವಕೀಲರು, ಶ್ರೀ ಸಾಯಿ ಮಿನರಲ್ಸ್‌ಗೆ ಅಕ್ರಮವಾಗಿ ಗಣಿ ಗುತ್ತಿಗೆ ನೀಡಿದ ಪ್ರಕರಣದಲ್ಲಿ ಷರತ್ತುಗಳನ್ವಯ ನಿರೀಕ್ಷಣಾ ಜಾಮೀನು ಮಂಜೂರು ಮಾಡಲಾಗಿದೆ. ಈ ಷರತ್ತುಗಳನ್ನು ಉಲ್ಲಂಘಿಸಿ ಅರ್ಜಿದಾರ ಆರೋಪಿ ತನಿಖಾಕಾರಿಯ ವಿರುದ್ಧ ಆರೋಪ ಮಾಡಿದ್ದು, ಬೆದರಿಕೆ ಹಾಕಿದ್ದಾರೆಂಬ ಆರೋಪವಿದೆ. ಆದರೆ, ಬೆದರಿಕೆ ಹಾಕಿದ ಆರೋಪ ಸಂಬಂಧ ಅರ್ಜಿದಾರರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಅದಕ್ಕೆ ಹೈಕೋರ್ಟ್‌ನ ಮತ್ತೊಂದು ಪೀಠ ತಡೆ ನೀಡಿದೆ, ಎಂದರು. ಅಲ್ಲದೆ, ತನಿಖಾ ಮುಖ್ಯಸ್ಥರಿಗೆ ಬೆದರಿಕೆ ಹಾಕುವ ಮೂಲಕ ನಿರೀಕ್ಷಣಾ ಜಾಮೀನು ಮಂಜೂರು ಮಾಡುವ ಸಂದರ್ಭದಲ್ಲಿವಿಸಿರುವ ಷರತ್ತುಗಳನ್ನು ಉಲ್ಲಂಘಿಸಿದ ಆರೋಪ ದಲ್ಲಿನಿರೀಕ್ಷಣಾ ಜಾಮೀನು ರದ್ದು ಕೋರಿ ವಿಚಾರಣಾ ನ್ಯಾಯಾಲಯಕ್ಕೆ ಮನವಿ ಮಾಡಲಾಗಿದೆ. ಆದರೆ, ಇದೇ ಆರೋಪದ ಎಫ್‌ಐಆರ್‌ಗೆ ತಡೆಯಿರುವ ಸಂದರ್ಭದಲ್ಲಿನಿರೀಕ್ಷಣಾ ಜಾಮೀನು ರದ್ದು ಕೋರಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ, ಎಂದು ನ್ಯಾಯಪೀಠಕ್ಕೆ ತಿಳಿಸಿದರು.**

## ರಾಷ್ಟ್ರೀಯ ಹೆದ್ದಾರಿ 948ರಲ್ಲಿ ಸೋಮನಹಳ್ಳಿ ಟೋಲ್ ಪ್ಲಾಜಾ ಆರಂಭ



ಉದಯವಾಹಿನಿ ಚಿತ್ರ

• **ಉದಯವಾಹಿನಿ,ಬೆಂಗಳೂರು**

ರಾಷ್ಟ್ರೀಯ ಹೆದ್ದಾರಿ 948ರಲ್ಲಿ ಸೋಮನಹಳ್ಳಿ ಟೋಲ್ ಪ್ಲಾಜಾ ಮೇ 9ರಂದು ಆರಂಭಗೊಳ್ಳಲಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ಅನುಷ್ಠಾನ ಘಟಕ (ಮೈಸೂರು) ಪ್ರಕಟಣೆ ನೀಡಿದೆ.ಬಿಆರ್‌ಟಿ ಹುಲಿ ಮೀಸಲು ಗಡಿಯಿಂದ ಬೆಂಗಳೂರು ವಿಭಾಗದ ರಸ್ತೆ ಬಳಕೆದಾರರ ಶುಲ್ಕ ಕೇಂದ್ರವನ್ನು ಬೆಂಗಳೂರು ದಕ್ಷಿಣ ತಾಲ್ಲೂಕಿನ ಸೋಮನಹಳ್ಳಿ ಗ್ರಾಮದ ಸಮೀಪ ಪ್ರಾರಂಭವಾಗಲಿದೆ ಎಂದು ಮಾಹಿತಿ ನೀಡಿದೆ. ಸುಂಕ ವಸೂಲಾತಿ ಕೇಂದ್ರದಿಂದ 20 ಕಿ.ಮೀ. ವ್ಯಾಪ್ತಿಯೊಳಗೆ ವಾಸಿಸುವ ಎಲ್ಲಾ ವಾಣಿಜ್ಯೇತರ ವಾಹನಗಳಿಗೆ 350ಕ್ಕೆ ತಿಂಗಳ ಪಾಸ್ ನೀಡಲಾಗುವುದು ಎಂದು ತಿಳಿಸಿದೆ.

**ಶುಲ್ಕ ವಿವರ (ಗಳಲ್ಲಿ) ವಾಹನ ಮಾದರಿ:** ಏಕಮುಖ ಸಂಚಾರ; ಅದೇ ದಿನ ಮರಳಿ ಬಂದರೆ; ಜಿಲ್ಲೆಯೊಳಗೆ ನೋಂದಣಿಯಾಗಿರುವ

**ವಾಹನಗಳಿಗೆ:** ವಾಣಿಜ್ಯೇತರ ವಾಹನಗಳಿಗೆ ತಿಂಗಳ ಪಾಸ್:ತಿಂಗಳಲ್ಲಿ 50 ಬಾರಿ ಸಂಚಾರದ ಪಾಸ್

## ಜೈ ಹಿಂದ್ ತಿರಂಗಾ ಯಾತ್ರೆ ನಡೆಸಿದ ಕಾಂಗ್ರೆಸ್



ಉದಯವಾಹಿನಿ ಚಿತ್ರ

• **ಉದಯವಾಹಿನಿ,ಬೆಂಗಳೂರು**


ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ ನಡೆಸಿದ ಭಾರತೀಯ ಸಶಸ್ತ್ರ ಪಡೆಗಳಿಗೆ ಬೆಂಬಲ ಸೂಚಿಸಲು ಕರ್ನಾಟಕದ ಆಡಳಿತಾರೂಢ ಕಾಂಗ್ರೆಸ್ ಶುಕ್ರವಾರ ಜೈ ಹಿಂದ್ ತಿರಂಗಾ ಯಾತ್ರೆಯನ್ನು ಆಯೋಜಿಸಿತ್ತು. ಜೈ ಹಿಂದ್-ಜೈ ಭಾರತ್-ಜೈ ತಿರಂಗಾ, ಭಾರತ ಜಿಂದಾಬಾದ್, ಭಾರತ ಮಾತಾ ಕಿ ಜೈ ಮತ್ತು ನಮ್ಮ ಸೈನಿಕರು ನಮ್ಮ ಹೆಮ್ಮೆ ಎಂಬ ಘೋಷಣೆಗಳ ನಡುವೆ ಭಾರತೀಯ ತ್ರಿವರ್ಣ ಧ್ವಜವನ್ನು ಹಾರಾಡಿಸಲಾಯಿತು. ಕೆಆರ್ ವೃತ್ತದಿಂದ ಪ್ರಾರಂಭವಾಗಿ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡ ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಕೆಶಿ, ಹಲವಾರು ಹಿರಿಯ ಸಚಿವರು ಭಾಗವಹಿಸಿದ್ದರು. ಭಾರತದ ಗಡಿಗಳನ್ನು ಕಾಯುತ್ತಿರುವ ಸೈನಿಕರಿಗೆ ಬೆಂಬಳ ಸೂಚಿಸಲು ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಡಿಕೆಶಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆಶಿ ಕಾಂಗ್ರೆಸ್ ಜೈ ಹಿಂದ್ ತಿರಂಗಾ ಯಾತ್ರೆ'ಯನ್ನು ಆಯೋಜಿಸಿದ್ದು, ವಿದ್ಯಾರ್ಥಿಗಳು, ಸರ್ಕಾರಿ ನೌಕರರು ಮತ್ತು ವಿವಿಧ ಸಂಘಟನೆಗಳು, ಸಂಸ್ಥೆಗಳ ಸದಸ್ಯರು ಸೇರಿದಂತೆ ಎಲ್ಲಾ ವರ್ಗದ ಜನರು ಭಾಗವಹಿಸುವಂತೆ ಕೇಳಲಾಗಿದೆ ಎಂದರು. ಸೈನಿಕರು ನಮ್ಮ ರಾಷ್ಟ್ರೀಯ ಹೆಮ್ಮೆ. ನಾವು ಅವರಿಗೆ ನಮನ ಸಲ್ಲಿಸಲು ಬಯಸುತ್ತೇವೆ. ಇಡೀ ದೇಶವು ಅವರ ಹಿಂದೆ ಇದೆ ಎಂದು ತಿಳಿಸಲು ನಾವು ಅವರೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತೇವೆ' ಎಂದು ಹೇಳಿದರು.

## ಹಣ ವಾಪಸ್ ಕೇಳಿದ್ದಕ್ಕೆ ನಿವೃತ್ತ ಪ್ರಾಧ್ಯಾಪಕನಿಗೆ ಕೊಲೆ ಬೆದರಿಕೆ

• **ಉದಯವಾಹಿನಿ,ಬೆಂಗಳೂರು**

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಕುಲಸಚಿವ ಹುದ್ದೆ ಕೊಡಿಸುವುದಾಗಿ ಪ್ರಾಧ್ಯಾಪಕರೊಬ್ಬರಿಗೆ ಆಮಿಷವೊಡ್ಡಿ ಹಣ ಪಡೆದು ವಂಚಿಸಿ, ಹಣ ವಾಪಸ್ ಕೇಳಿದ್ದಕ್ಕೆ ಜೀವ ಬೆದರಿಕೆ ಹಾಕಿದ್ದ ಆರೋಪದ ಅಡಿ ಆರೋಪಿ ವಿರುದ್ಧ ಗೋವಿಂದರಾಜನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆನಿವೃತ್ತ ಪ್ರಾಧ್ಯಾಪಕ ಆರ್.ಕೆ.ಸೋಮಶೇಖರ್ (67) ವಂಚನೆಗೆ ಒಳಗಾದವರು. ಸೋಮಶೇಖರ್ ಅವರು 2015ರಲ್ಲಿ ಆರೋಪಿಗೆ ಹಣ ನೀಡಿದ್ದರು ಎನ್ನಲಾಗಿದೆ. ಆಗ ಸೋಮಶೇಖರ್ ಅವರು ಕರ್ತವ್ಯದಲ್ಲಿ ಇದ್ದರು. ಆ ಸಂದರ್ಭದಲ್ಲಿ ಆರೋಪಿ ಆಮಿಷವೊಡ್ಡಿ ಹಣ ಪಡೆದುಕೊಂಡು ಮೋಸ ಮಾಡಿದ್ದಾನೆ. ಇತ್ತೀಚೆಗೆ ಸೋಮಶೇಖರ್ ಅವರು ಹಣ ವಾಪಸ್ ನೀಡುವಂತೆ ಹೇಳಿದ್ದಕ್ಕೆ ಆರೋಪಿ ಜೀವ ಬೆದರಿಕೆ ಹಾಕಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಸೋಮಶೇಖರ್ ಅವರು ದೂರು ನೀಡಿದ್ದು, ಹೊರಮಾವು ನಂದನಂ ಲೇಔಟ್ ನಿವಾಸಿ ಬಿ.ಜಿ.ರವಿಕುಮಾರ್ ಎಂಬಾತನ ವಿರುದ್ಧ ವಂಚನೆ, ನಂಬಿಕೆ ದ್ರೋಹ, ಜೀವ ಬೆದರಿಕೆ ಸೇರಿ ವಿವಿಧ ಆರೋಪಗಳ ಅಡಿ ಎಫ್‌ಐಆರ್ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ ಎಂದು ಪೊಲೀಸರು ಹೇಳಿದರು. ದೂರುದಾರ ಸೋಮಶೇಖರ್ 1983ರಿಂದ ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಕ್ಯಾಂಪಸ್‌ನ ಪರಿಸರ ವಿಜ್ಞಾನ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಕೆಲಸ ಮಾಡಿ, 2019ನೇ ಸಾಲಿನಲ್ಲಿ ನಿವೃತ್ತರಾಗಿದ್ದಾರೆ. ಈ ನಡುವೆ 2010ರಲ್ಲಿ ಸ್ನೇಹಿತರೊಬ್ಬರ ಮೂಲಕ ಆರೋಪಿ ಬಿ.ಜಿ.ರವಿಕುಮಾರ್ ಪರಿಚಯವಾಗಿದ್ದ. ಬಳಿಕ ಇಬ್ಬರೂ ಸ್ನೇಹಿತರಾಗಿದ್ದರು ಎಂದು ಮೂಲಗಳು ಹೇಳಿವೆ. ತನಗೆ ಪ್ರಭಾವಿ ರಾಜಕಾರಣಿಗಳ ಪರಿಚಯವಿದೆ. ವಿ.ವಿಯಲ್ಲಿ ಉನ್ನತ ಹುದ್ದೆ ಕೊಡಿಸುತ್ತೇನೆ ಎಂದು 2015ರಲ್ಲಿ ಆರೋಪಿ ರವಿಕುಮಾರ್ ಆಮಿಷವೊಡ್ಡಿದ್ದ. ಆತನ ಮಾತು ನಂಬಿದ್ದ ಸೋಮಶೇಖರ್ ಅವರು ತನಗೆ ಕುಲಸಚಿವ ಹುದ್ದೆ ಕೊಡಿಸುವಂತೆ ಕೇಳಿದ್ದರು. ಅದಕ್ಕೆ 50 ಲಕ್ಷ ಖರ್ಚಾಗಲಿದೆ ಎಂದು ಆರೋಪಿ ಹೇಳಿದ್ದ. ಬಳಿಕ ಇಬ್ಬರೂ ಮಾತುಕತೆ ನಡೆಸಿ ಅಂತಿಮವಾಗಿ ರೂ.35 ಲಕ್ಷ ಒಪ್ಪಂದ ಆಗಿತ್ತು. ಹುದ್ದೆ ಸಿಗದೇ ಇದ್ದರೆ ಹಣ ವಾಪಸ್ ಕೊಡುವುದಾಗಿ ಭರವಸೆ ನೀಡಿದ್ದ' ಎಂದು ಮೂಲಗಳು ತಿಳಿಸಿವೆ.



ಆರೋಪಿಯ ಮಾತು ನಂಬಿದ್ದ ಸೋಮಶೇಖರ್ ಅವರು ಹಂತಹಂತವಾಗಿ ರೂ. 35 ಲಕ್ಷ ನೀಡಿದ್ದರು. ಆರು ತಿಂಗಳೊಳಗೆ ಕೆಲಸ ಆಗಲಿದೆ ಎಂದು ರವಿಕುಮಾರ್ ಹೇಳಿದ್ದ. ಈ ವಿಷಯವನ್ನು ಯಾರೊಬ್ಬರ ಬಳಿಯೂ ಹೇಳದಂತೆ ಸೂಚಿಸಿದ್ದ.

**ಆರೋಪಿ ರವಿಕುಮಾರ್ ಸೂಚನೆ ಮೇರೆಗೆ ಸೋಮಶೇಖರ್ ಕಳೆದ ಮಾರ್ಚ್ 9ರಂದು ವಿಜಯನಗರ ಸರ್ವೀಸ್ ರಸ್ತೆಯ ಇಂದ್ರಪ್ರಸ್ಥ ಹೋಟೆಲ್ ಬಳಿಗೆ ತೆರಳಿದ್ದರು. ಈ ವೇಳೆ ರವಿಕುಮಾರ್, ಸೋಮಶೇಖರ್ ಅವರನ್ನು ಕಾರಿನಲ್ಲಿ ಕೂರಿಸಿಕೊಂಡು ಚಾಕು ತೆಗೆದು ಕುತ್ತಿಗೆ ಹಿಡಿದು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದ' ಎಂದು ಮೂಲಗಳು ತಿಳಿಸಿವೆ.**


ಸೋಮಶೇಖರ್ ಅವರು ಪದೇ ಪದೇ ಹುದ್ದೆಯ ಬಗ್ಗೆ ವಿಚಾರಿಸುತ್ತಿದ್ದರು. ನೆಪ ಹೇಳಿಕೊಂಡು ದಿನ ದೂಡುತ್ತಿದ್ದ. ಅಷ್ಟರಲ್ಲಿ ಸೋಮಶೇಖರ್ ಸೇವೆಯಿಂದ ನಿವೃತ್ತರಾಗಿದ್ದರು.

ಬಳಿಕ ತಾನು ಸೇವೆಯಿಂದ ನಿವೃತ್ತನಾಗಿದ್ದು, ತಮ್ಮ ಹಣ ವಾಪಸ್ ನೀಡುವಂತೆ ಕೇಳಿದ್ದರು. ಒಂದು ವರ್ಷದ ಸಮಯ ಕೊಡಿ ಎಂದು ರವಿಕುಮಾರ್ ಹೇಳಿದ್ದ. 2024ರ ಡಿಸೆಂಬರ್‌ನಲ್ಲಿ ಕರೆ ಮಾಡಿ ಹಣ ವಾಪಸ್ ಕೇಳಿದ್ದಕ್ಕೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ' ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

## ಭಯೋತ್ಪಾದನೆಯ ವಿರುದ್ಧ ಭಾರತೀಯ ಸೇನೆ ಸಮರ

• **ಉದಯವಾಹಿನಿ,ಬೆಂಗಳೂರು**

ಆಪರೇಷನ್ ಸಿಂದೂರ ಹೆಸರಿನಲ್ಲಿ ಪಾಕಿಸ್ತಾನ ವಿರುದ್ಧ ಕಾರ್ಯಾಚರಣೆ ನಡೆಸುತ್ತಿರುವ ಭಾರತೀಯ ಸೈನ್ಯಕ್ಕೆ ಬೆಂಬಲ ಸೂಚಿಸಿ ಬೆಂಗಳೂರಿನ ಕೆ.ಆರ್. ವೃತ್ತದಿಂದ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಯ ಮಿನ್ಸ್ ಸ್ಟೇರ್‌ವರೆಗೆ ಶುಕ್ರವಾರ 'ತಿರಂಗಾ ಯಾತ್ರೆಯನ್ನು ಕಾಂಗ್ರೆಸ್ ಆಯೋಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಯಾತ್ರೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರು, ಸರ್ಕಾರಿ, ಖಾಸಗಿ ಉದ್ದಿಮೆಗಳ ನೌಕರರು, ಸಾಹಿತಿಗಳು, ಚಿಂತಕರು, ಚಿತ್ರರಂಗದವರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ ಎಲ್ಲರಿಗೂ ಭಾಗವಹಿಸಲು ಮುಕ್ತ ಆಹ್ವಾನ ನೀಡಲಾಗಿದೆ' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.



ಆಪರೇಷನ್ ಸಿಂದೂರ್ ಕಾರ್ಯಾಚರಣೆಗೆ ಒಕ್ಕೊರಲಿನ ಬೆಂಬಲ ನೀಡುವ ಸಲುವಾಗಿ ಇಂದು ಆಯೋಜಿಸಿರುವ ತಿರಂಗಾ ರ್‍ಯಾಲಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳೋಣ.

**ನಾವು ಸಮಾಜದ ಎಲ್ಲಾ ವರ್ಗಗಳನ್ನು ಆಪರೇಷನ್ ಸಿಂಧೂರ್ ಯಶಸ್ವಿ ಬೆಂಬಲಿಸಿ ನಡೆಸುತ್ತಿರುವ ತಿರಂಗ ಪಾದಯಾತ್ರೆಗೆ ಆಹ್ವಾನಿಸಿದ್ದೇವೆ. ನಮ್ಮ ಸಶಸ್ತ್ರ ಪಡೆಗಳಿಗೆ ನಮಸ್ಕರಿಸಲು ಮತ್ತು ದೇಶದೊಂದಿಗೆ ಒಗ್ಗಟ್ಟಿನಿಂದ ನಿಲ್ಲಲು ಬಯಸುತ್ತೇವೆ. ಅಲ್ಪಾವಧಿಯಲ್ಲಿಯೇ, ನಿವೃತ್ತ ಸಶಸ್ತ್ರ ಪಡೆಗಳು, ವಿದ್ಯಾರ್ಥಿಗಳು ಮತ್ತು ಎಲ್ಲಾ ರಾಜಕೀಯ ಪಕ್ಷಗಳು ಸೇರಿದಂತೆ ಎಲ್ಲಾ ವರ್ಗದ ಜನರು ಇಲ್ಲಿ ಭಾಗವಹಿಸುತ್ತಿದ್ದಾರೆ ಎಂದು ನನಗೆ ಸಂತೋಷವಾಗಿದೆ. ಭಾರತ ಬಲಿಷ್ಠವಾಗಿದೆ. ಇಂದಿರಾ ಗಾಂಧಿಯವರ ನೇತೃತ್ವದಲ್ಲಿ ನಾವು ಪರಿಸ್ಥಿತಿಯನ್ನು ನಿರ್ವಹಿಸಿದಂತೆಯೇ, ಈಗ ಅದೇ ಸಂಭವಿಸುತ್ತದೆ ಮತ್ತು ಭಾರತ ಗೆಲ್ಲುತ್ತದೆ. ಎಂದು ತಿರಂಗ ಯಾತ್ರೆಯಲ್ಲಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.**

ದೇಶಕ್ಕಾಗಿ ಹೋರಾಡುತ್ತಿರುವ ಭದ್ರತಾ ಪಡೆಗಳಿಗೆ ಗೌರವ ಸಲ್ಲಿಸೋಣ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ತಿರಂಗ ರ್‍ಯಾಲಿಯು ಏಕತೆ ಮತ್ತು ರಾಷ್ಟ್ರೀಯ ಹೆಮ್ಮೆಯ ಪ್ರಬಲ ಅಭಿವ್ಯಕ್ತಿಯಾಗಿದೆ. ನಮ್ಮ ಸಶಸ್ತ್ರ ಪಡೆಗಳಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬ ಭಾರತೀಯನ ಶಕ್ತಿ ಮತ್ತು ದೃಢಸಂಕಲ್ಪದ ಸಾಮೂಹಿಕ ಪ್ರದರ್ಶನವಾಗಿದೆ ಎಂದಿದ್ದಾರೆ.

# ಕರ್ನಾಟಕದಾದ್ಯಂತ ಕಟ್ಟೆಚ್ಚರ ವಹಿಸಲು ಗುಪ್ತಚರ ಇಲಾಖೆ ಸೂಚನೆ

## ಸಾರ್ವಜನಿಕರ ರಕ್ಷಣೆ ಮತ್ತು ಸುರಕ್ಷತೆಗಾಗಿ ವಿವಿಧ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ

• **ಉದಯವಾಹಿನಿ,ಬೆಂಗಳೂರು**

ಪಹಲ್ಗಾಮ್ ಉಗ್ರರ ದಾಳಿಗೆ ಭಾರತೀಯ ಸೇನೆಯಿಂದ ಆಪರೇಷನ್ ಸಿಂದೂರ್ ಮೂಲಕ ಪ್ರತ್ಯುತ್ತರ ನೀಡಿದೆ. ಸದ್ಯ ಭಾರತ ಹಾಗೂ ಪಾಕಿಸ್ತಾನ ಮಧ್ಯೆ ಯುದ್ಧದ ಭೀತಿ ಸೃಷ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಕಟ್ಟೆಚ್ಚರ ವಹಿಸಲು ರಾಜ್ಯ ಗುಪ್ತಚರ ಇಲಾಖೆ ಸುತ್ತೋಲೆ ಹೊರಡಿಸಿದೆ.

ಉಗ್ರ ಕೃತ್ಯಗಳಂತಹ ಪ್ರಕರಣಗಳಲ್ಲಿ ಭಾಗಿಯಾದವರು, ಶಿಕ್ಷೆಗೊಳಗಾದವರು, ಭಯೋತ್ಪಾದನೆ ಮಾಡುವಂತಹ ಕೃತ್ಯಗಳಲ್ಲಿ ಭಾಗಿಯಾದವರು, ಡಿಟೋನೇಟರ್ ನಂತಹ ಉಪಕರಣಗಳ ತಯಾರು ಮಾಡುವ ಸ್ಥಳ, ಮೂಲಭೂತವಾದದ ಮೂಲಕ ಮಾಡುವಂತಹ ಕೃತ್ಯದಲ್ಲಿ ಭಾಗಿಯಾದವರು, ಭಾಷಣ, ಘೋಷಣೆಗಳ ಮೂಲಕ ಶಾಂತಿ ಭಂಗವನ್ನುಂಟು ಮಾಡುವವರು, ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳನ್ನು ಹಂಚಿಕೊಳ್ಳುವವರು, ನಿಮ್ಮ ವ್ಯಾಪ್ತಿಯ ನಗರ ಅಥವಾ ಜಿಲ್ಲೆಗಳಿಗೆ ಭೇಟಿ ನೀಡುವ ಅಪರಿಚಿತರು, ಅನುಮಾನಾಸ್ಪದ ವ್ಯಕ್ತಿಗಳ ಚಲನವಲನ ಮತ್ತು ಅವರು ತಂಗುವ ಸ್ಥಳ ಹಾಗೂ ಹೋಟೆಲ್‌ಗಳ ಮೇಲೆ ದೇಶದ ಭದ್ರತೆಯ ದೃಷ್ಟಿಯಿಂದ ನಿಗಾ ವಹಿಸಲು ಗುಪ್ತಚರ ಇಲಾಖೆ ಸೂಚನೆ ನೀಡಿದೆ.

**ಏನೆಲ್ಲ ಕ್ರಮ ಕೈಗೊಳ್ಳಬೇಕು:** ಸಾರ್ವಜನಿಕ ರಕ್ಷಣೆಯ ಬಗ್ಗೆ, ಅಭ್ಯಾಸ ಮತ್ತು ತಾಲೀಮುಗಳನ್ನು ಏರ್ಪಡಿಸುವುದು.



ಉದಯವಾಹಿನಿ ಚಿತ್ರ

ಗ್ರಾಮ ಮತ್ತು ಪಟ್ಟಣಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರ ರಕ್ಷಣೆಯ ಜವಾಬ್ದಾರಿಯನ್ನು ಹೊತ್ತಿರುವ ಸಿವಿಲ್ ಡಿಫೆನ್ಸ್ ವಾರ್ಡನ್ಸ್ ವಾಲೆಂಟಿಯರ್ಸ್, ಹೋಂಗಾರ್ಡ್, ಎನ್.ಸಿ.ಸಿ, ಎನ್.ಎಸ್. ಎಸ್. ಎನ್.ವೈ.ಕೆ.ಎಸ್, ಮತ್ತಿತರೆ ವಿದ್ಯಾರ್ಥಿ ಸಂಘಟನೆಗಳು ಜನರನ್ನು ಜಾಗೃತಗೊಳಿಸುವುದು ಮತ್ತು ಅವರನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯಗೊಳಿಸುವುದು.

**ಎಲ್ಲೆಲ್ಲಿ ಕಟ್ಟೆಚ್ಚರ**

**ಆಡಳಿತ ಕಟ್ಟಡಗಳು, ರಕ್ಷಣಾ ಸ್ಥಾವರಗಳು, ಏರ್‌ಪೋರ್ಟ್‌ಗಳು, ವಿಜ್ಞಾನ ಸಂಶೋಧನಾ ಕೇಂದ್ರಗಳು, ಅಣೆಕಟ್ಟುಗಳು, ಉಪಗ್ರಹ ಕೇಂದ್ರ, ಜಲವಿದ್ಯುತ್ ಸ್ಥಾವರಗಳು, ಥರ್ಮಲ್ ಸ್ಥಾವರಗಳು, ಸಾಫ್ಟ್‌ವೇರ್ ಕಂಪನಿಗಳು, ಪೈಪ್‌ಲೈನ್ ಕೇಂದ್ರಗಳು, ಕೈಗಾರಿಕೆಗಳು, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಕೇಂದ್ರಗಳು, ಜನಸಂದಣಿ ಸೇರುವ ಶಾಪಿಂಗ್ ಮಾಲ್‌ಗಳು ಮತ್ತು ಹೋಟೆಲ್‌ಗಳು, ವಿದೇಶಿ ರಾಜತಾಂತ್ರಿಕ ಕಚೇರಿಗಳು, ವಸತಿ ಮತ್ತಿತರ ಕಟ್ಟಡಗಳು, ಜನ ಸಂದಣಿ ಸೇರುವ ದೇವಾಲಯಗಳು, ಮಸೀದಿ, ಚರ್ಚ್‌ಗಳು ಮತ್ತು ಜನಸಂದಣಿ ಸೇರುವ ಸ್ಥಳಗಳಲ್ಲಿ ಕಟ್ಟೆಚ್ಚರ ವಹಿಸಲು ಆದೇಶ ಹೊರಡಿಸಿದೆ.**

ಸಾರ್ವಜನಿಕರಲ್ಲಿ ಶಾಂತವಾಗಿರುವಂತೆ, ಜಾಗೃತವಾಗಿರುವಂತೆ , ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವ ಸಲುವಾಗಿ ತಮ್ಮೊಂದಿಗೆ ಹಾಗೂ ಮನೆಗಳಲ್ಲಿ ನಿಗದಿತ ನಗದು, ಇಂಧನ ತುಂಬಿದ ವಾಹನಗಳು, ಸಾಕಷ್ಟು ಔಷಧಿಗಳು, ಕೆಡದೇ ಇರುವಂತಹಹೊದಿಕೆಗಳು ಮತ್ತು ತಮ್ಮ ಮೊಬೈಲ್‌ಗಳನ್ನು ಸದಾ ಜಾರ್ಜ್‌ನಲ್ಲಿ ಇಟ್ಟುಕೊಳ್ಳುವಂತೆ ಹಾಗೂ ಮುಖ್ಯವಾದ ದಾಖಲೆಗಳನ್ನು ಇಟ್ಟುಕೊಳ್ಳುವಂತೆ ಎಚ್ಚರಿಸುವುದು.

ಘಟಕಾಧಿಕಾರಿಗಳು, ನಿಮ್ಮ ಅಧೀನದಲ್ಲಿರುವ ಅಧಿಕಾರಿಗಳಿಗೆ ಹಾಗೂ ಠಾಣಾಧಿಕಾರಿಗಳಿಗೆ ಈ ಮೇಲ್ಕಂಡ ಎಲ್ಲಾ ಅಂಶಗಳ ಪಾಲನೆ ಮಾಡಲು ನಿರ್ದೇಶನ ನೀಡುವುದು ಅರಿವು

ಮೂಡಿ ಸುವುದು. ಘಟಕಾಧಿಕಾರಿಗಳು ತಮ್ಮ ಘಟಕಗಳಲ್ಲಿನ ವೈರ್‌ಲೆಸ್ ಉಪಕರಣಗಳು, ಕಂಪ್ಯೂಟರ್‌ಗಳನ್ನು ವಾಹನಗಳನ್ನು ಸುಸಜ್ಜಿತವಾಗಿ ಇಟ್ಟುಕೊಳ್ಳುವುದು. ಶಸ್ತ್ರಾಗಾರದಲ್ಲಿನ ಶಸ್ತ್ರಗಳನ್ನು ಮತ್ತು ಮದ್ದುಗುಂಡುಗಳನ್ನು ಸುಸಜ್ಜಿತವಾಗಿ ಇಟ್ಟುಕೊಳ್ಳುವುದು.

ಉದಯವಾಹಿನಿ
ಪ್ರಾದೇಶಿಕ
ಶನಿವಾರ 10 ಮೇ 2025


# ತ್ಯಾಜ್ಯ ಘಟಕ ನಿರ್ಮಾಣ ಕೈ ಬಿಡಲು ಆಗ್ರಹ


## ಹರೀಸಂದ್ರದಲ್ಲಿ ವಿವಿಧ ಗ್ರಾಮಸ್ಥರಿಂದ ಧರಣಿ; ಜೆಡಿಎಸ್ ನಾಯಕರ ಸಾಥ್

• **ಉದಯವಾಹಿನಿ, ರಾಮನಗರ**

ತಾಲ್ಲೂಕಿನ ಹರೀಸಂದ್ರದಲ್ಲಿ ನಿರ್ಮಾಣವಾಗುತ್ತಿರುವ ರಾಮನಗರ ನಗರಸಭೆ ಮತ್ತು ಬಿಡದಿ ಪುರಸಭೆಯ ತ್ಯಾಜ್ಯ ನಿರ್ವಹಣಾ ಘಟಕ ವಿರೋಧಿಸಿ ವಿವಿಧ ಗ್ರಾಮಗಳ ಜನರು ಧರಣಿ ನಡೆಸಿದರು. ಜೆಡಿಎಸ್ ಪಕ್ಷವೂ ಧರಣಿಗೆ ಕೈ ಜೋಡಿಸಿತ್ತಲ್ಲದೆ, ಪಕ್ಷದ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಹಲವು ಮುಖಂಡರು ಧರಣಿಯಲ್ಲಿ ಭಾಗವಹಿಸಿದರು.

ಧರಣಿಗೂ ಮುಂಚೆ ಬೆಳಿಗ್ಗೆ ಚಿಕ್ಕೇಗೌಡನದೊಡ್ಡಿಯ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಜಮಾಯಿಸಿದ ಗ್ರಾಮಸ್ಥರು ಹರೀಸಂದ್ರ, ಚಿಕ್ಕೇಗೌಡನ ದೊಡ್ಡಿ, ಕಾಳೇಗೌಡನದೊಡ್ಡಿ, ಪಾದರಹಳ್ಳಿ, ಬೆಜ್ಜರ ಹಳ್ಳಿಕಟ್ಟೆ, ಮಾರೇಗೌಡನದೊಡ್ಡಿ, ಹನುಮಂತೇಗೌಡನ ದೊಡ್ಡಿ, ಕೆಂಪೇಗೌಡನದೊಡ್ಡಿ, ಮದರ್ ಸಾಬರದೊಡ್ಡಿ, ಅಲೆಮರದದೊಡ್ಡಿ ಗ್ರಾಮಸ್ಥರು, ನಂತರ ತ್ಯಾಜ್ಯ ಘಟಕ ನಿರ್ಮಾಣವಾಗುತ್ತಿರುವ ಹರಿಸಂದ್ರದ ಸರ್ವೆ 166ರ ಸ್ಥಳಕ್ಕೆ ಪಾದಯಾತ್ರೆ ಮೂಲಕ ತೆರಳಿದರು. ಮಾರ್ಗದುದ್ದಕ್ಕೂ ಭಿತ್ತಿತ್ರ, ಬ್ಯಾನರ್ ಹಿಡಿದು ಸಾಗಿದ ಗ್ರಾಮಸ್ಥರು ಸ್ಥಳೀಯ ಶಾಸಕರು, ಉಪ ಮುಖ್ಯಮಂತ್ರಿ, ಜಿಲ್ಲಾಡಳಿತ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಘಟಕ ನಿರ್ಮಾಣ ಕೈ ಬಿಡಬೇಕು ಎಂದು ಆಗ್ರಹಿಸಿದರು. ಹರೀಸಂದ್ರ ಪಂಚಾಯಿತಿ ಕಚೇರಿ ಬಳಿ ರಸ್ತೆ ತಡೆದು ಕೆಲ ಹೊತ್ತು ಪ್ರತಿಭಟನೆ ನಡೆಸಿದರು. ಇದರಿಂದಾಗಿ ಕೆಲ ಹೊತ್ತು ವಾಹನಗಳ


ಉದಯವಾಹಿನಿ ಚಿತ್ರ

ಸಂಚಾರಕ್ಕೆ ತೊಂದರೆಯಾಯಿತು.

ಈ ವೇಳೆ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಎ. ಮಂಜುನಾಥ್, ಸರ್ಕಾರಿ ಗೋಮಾಳದಲ್ಲಿ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣಕ್ಕೆ ರಾಮನಗರ ನಗರಸಭೆಗೆ 9.38 ಎಕರೆ, ಬಿಡದಿ ಪುರಸಭೆ 9 ಎಕರೆ ಮಂಜೂರಾಗಿರುವುದನ್ನು ಕೂಡಲೇ ರದ್ದುಪಡಿಸಬೇಕು. ಇಲ್ಲದಿದ್ದರೆ, ನಮ್ಮ ಹೋರಾಟ ದಿನದಿಂದ ದಿನಕ್ಕೆ ತೀವ್ರಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿದರು. ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಯ್ಯ, ಹರಿಸಂದ್ರ, ಸುತ್ತಮುತ್ತಲಿನ ಗ್ರಾಮಸ್ಥರು ಹೈನುಗಾರಿಕೆ, ರೇಷ್ಮೆ, ಮಾವು, ತೆಂಗು ಬೆಳೆಗಳನ್ನು ನಂಬಿಕೊಂಡು ಜೀವನ ಸಾಗಿಸುತ್ತಿದ್ದಾರೆ. ತ್ಯಾಜ್ಯ ಘಟಕ ನಿರ್ಮಾಣವಾಗುವುದರಿಂದ ಕೃಷಿ, ಹೈನುಗಾರಿಕೆ ಮೇಲೆ ಪರಿಣಾಮ ಬೀರಲಿದೆ. ಇನ್ನಾದರೂ ಸ್ಥಳೀಯ ಶಾಸಕರು ಘಟಕ ಕೈ ಬಿಡಬೇಕು ಎಂದು ಆಗ್ರಹಿಸಿದರು. ಪಾದರಹಳ್ಳಿಯ ಚಂದ್ರಶೇಖರ್ ಸೇರಿದಂತೆ ಸ್ಥಳೀಯ ಮುಖಂಡರು ಮಾತನಾಡಿದರು.

ಮುಖಂಡರಾದ ವರದರಾಜು ಗೌಡ, ಬಿ. ಉಮೇಶ್, ಕೆ. ಚಂದ್ರಯ್ಯ, ಶಿವಕುಮಾರ್, ರಾಮು, ಬಸವನಪುರ ಪ್ರಕಾಶ್, ರಾಮಕೃಷ್ಣಯ್ಯ, ಮಳವಳ್ಳಿ ರಾಜು, ರಾಜಣ್ಣ, ಕೃಷ್ಣಯ್ಯ, ಸಂತೋಷ್, ಬಾಬಣ್ಣ, ರಾಮು, ಅಶ್ವಥ್, ಕೃಷ್ಣಮೂರ್ತಿ, ಕೃಷ್ಣಗೌಡ, ಮಹೇಶ್, ಬೋರೇಗೌಡ, ಮೋಹನ್, ಜಯಕುಮಾರ್, ಇತರರು ಇದ್ದರು.

**ಕಾನೂನಾತ್ಮಕವಾಗಿಯೂ ಹೋರಾಟ**

**ತ್ಯಾಜ್ಯ ಘಟಕಕ್ಕೆ ಗುರುತಿಸಿರುವ ಸ್ಥಳದ ಒಂದು ಕಡೆ ರಾಮದೇವರ ಬೆಟ್ಟವಿದ್ದರೆ ಮತ್ತೊಂದು ಕಡೆ ಅರ್ಕಾವತಿ ನದಿ ಹರಿಯುತ್ತದೆ. ಇಂತಹ ಸ್ಥಳದಲ್ಲಿ ಘಟಕ ನಿರ್ಮಾಣ ಸರಿಯಲ್ಲ. ಇದು ಮೊದಲ ಹಂತದ ಹೋರಾಟವಾಗಿದ್ದು ಮುಂದೆ ಮತ್ತಷ್ಟು ತೀವ್ರಗೊಳ್ಳಲಿದೆ. ಪರ್ಯಾಯವಾಗಿ ಕಾನೂನಾತ್ಮಕವಾಗಿಯೂ ಹೋರಾಟ ಮಾಡಲಾಗುವುದು. ಈ ಭಾಗದ ರೈತರು ಕೃಷಿ ತೋಟಗಾರಿಕೆ ಹಾಗೂ ಹೈನುಗಾರಿಕೆ ಮೂಲಕ ಬದುಕು ಕಟ್ಟಿಕೊಂಡಿದ್ದಾರೆ. ಮಾವು ರೇಷ್ಮೆ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆದು ಬದುಕುತ್ತಿದ್ದಾರೆ. ಘಟಕದಿಂದ ಈ ಭಾಗದ ಜನಜೀವನ ಅಸ್ತವ್ಯಸ್ತವಾಗಲಿದೆ. ಪರಿಸರ ಮತ್ತು ಪ್ರಾಣಿ-ಪಕ್ಷಿಗಳಿಗೂ ತೊಂದರೆಯಾಗಲಿದೆ. ಹಾಗಾಗಿ ಪಕ್ಷಾತೀತವಾಗಿ ಈ ಭಾಗದ ಜನ ಘಟಕವನ್ನು ವಿರೋಧಿಸುತ್ತಿದ್ದಾರೆ' ಎಂದು ನಿಖಿಲ್ ಕುಮಾರಸ್ವಾಮಿ ಧರಣಿ ಬಳಿಕ ಸುದ್ದಿಗಾರರಿಗೆ ತಿಳಿಸಿದರು.**

# ಮೋದಿ ಕಾರ್ಯ ಶ್ಲಾಘಿಸಿದ ಮುಸ್ಲಿಮರು

• **ಉದಯವಾಹಿನಿ, ಮದ್ದೂರು**


ಉದಯವಾಹಿನಿ ಚಿತ್ರ

ಪಾಕಿಸ್ತಾನಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಸರಿಯಾದ ಉತ್ತರವನ್ನೇ ನೀಡುತ್ತಿದ್ದಾರೆ ಅವರ ಈ ಕ್ರಮಕ್ಕೆ ನಮ್ಮ ಬೆಂಬಲ ಸದಾ ಇರಲಿದೆ ಎಂದು ತಾಲ್ಲೂಕಿನ ಕೊಪ್ಪದ ಮುಸ್ಲಿಂ ಮುಖಂಡ ಇಮ್ರಾನ್ ತಿಳಿಸಿದರು. ವಿಧಾನ ಪರಿಷತ್ ಸದಸ್ಯ ವಿವೇಕಾನಂದ ಅವರು ಶುಕ್ರವಾರ ಕೊಪ್ಪದ ಮಸೀದಿಯ ಬಳಿ ಶುದ್ಧ ಕುಡಿಯುವ ನೀರಿನ ಕೇಂದ್ರಕ್ಕೆ ಗುದ್ದಲಿ ಪೂಜೆಯನ್ನು ನೆರವೇರಿಸಿ ನಂತರ ಮಸೀದಿಯ ಒಳಗೆ ನಡೆದ ಕಾರ್ಯಕ್ರಮ ಮುಗಿಸಿ ಮಸೀದಿಯಿಂದ ಹೊರಬರುತ್ತಿದ್ದಂತೆಯೇ ಮುಸ ಲ್ಮಾನರು ಪಾಕಿಸ್ತಾನಕ್ಕೆ ಧಿಕ್ಕಾರ, ಪಾಕಿಸ್ತಾನ್ ಮುರ್ದಾಬಾದ್, ಹಿಂದೂಸ್ತಾನ್ ಜಿಂದಾಬಾದ್ ಎಂದು ಘೋಷಣೆಗಳನ್ನು ಕೂಗಿದರು. ವಿಧಾನ ಪರಿಷತ್ ಸದಸ್ಯ ವಿವೇಕಾನಂದ ಮಾತನಾಡಿ, ಪಾಕಿಸ್ತಾನಕ್ಕೆ ಪ್ರಧಾನಿ ಮೋದಿ ಅವರ ನಿರ್ದೇಶನದಂತೆ ನಮ್ಮ ಯೋಧರು ಅಪರೇಷನ್ ಸಿಂಧೂರದ ಮೂಲಕ ದಿಟ್ಟ ಉತ್ತರ ಕೊಡುತ್ತಿದ್ದಾರೆ. ಭಾರತೀಯ ಸೇನೆಯ ಒಬ್ಬ ಮುಸ್ಲಿಂ ಯುವತಿ ಪಾಕಿಸ್ತಾನಕ್ಕೆ ಹೋಗಿ ದಾಳಿ ನಡೆಸಿ ಬಂದಿರುವ ಯೋಧರಲ್ಲಿ ಒಬ್ಬರಾಗಿರುವುದು ಹೆಮ್ಮೆಯ ಸಂಗತಿ. ಈ ಮೂಲಕ ಭಾರತೀಯರೆಲ್ಲ ಒಂದೇ ಎಂಬ ಏಕತೆ ಸಾರಿದ್ದೇವೆ' ಎಂದರು. ಮುಸ್ಲಿಂ ಮುಖಂಡರಾದ ಇಮ್ರಾನ್ ಮಾತನಾಡಿ, ಪಾಕಿಸ್ತಾನ ನಿರ್ನಾಮವಾಗಬೇಕು ಭಾರತದಲ್ಲಿನ ಮುಸ್ಲಿಮರು ಮೂಲ ಭಾರತೀಯರು ನಾವು ನಮ್ಮ ರಾಷ್ಟ್ರದಲ್ಲಿ ಸಹಬಾಳ್ವೆಯಿಂದ ಇದ್ದೇವೆ. ಅಗತ್ಯಬಿದ್ದರೆ ದೇಶಕ್ಕಾಗಿ ಪ್ರಾಣ ನೀಡಲೂ ಸಿದ್ಧ' ಎಂದರು. ಮುಸ್ಲಿಂ ಮುಖಂಡರಾದ ಸಲೀಮ್, ಇಮ್ರಾನ್ ಖಾನ್, ಮೊಹಮ್ಮದ್ ಆಸೀಫ್, ರಿಜ್ವಾನ್, ಫಾರುಖ್ ಹಾಜರಿದ್ದರು.

# ಮೈಸೂರು ಅರಮನೆ ಆವರಣದಲ್ಲಿ ಇಂದು ಮಾಕ್ ಡ್ರಿಲ್

• **ಉದಯವಾಹಿನಿ, ಮೈಸೂರು**

ಕೇಂದ್ರ ಸರಕಾರದ ನಿರ್ದೇಶನದ ಮೇರೆಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮೇ 10 ರಂದು ಸಂಜೆ 4 ಗಂಟೆಗೆ ಸಿವಿಲ್ ಡಿಫೆನ್ಸ್ ಮಾಕ್ ಡ್ರಿಲ್ ನಡೆಯಲಿದೆ. ಅಂಬಾ ವಿಲಾಸ ಅರಮನೆ ಆವರಣದಲ್ಲಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಈ ರೀತಿಯ ವಿಶೇಷ ಅಣಕು ಪ್ರದರ್ಶನ ಮೈಸೂರಿನಲ್ಲಿ ನಡೆಯುತ್ತಿರುವುದು ಇದೇ ಮೊದಲು. ಪಹಲ್ಗಾಮ್ ದಾಳಿಯ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೇಂದ್ರ ಸರಕಾರವು ರಾಜ್ಯ ಸರಕಾರಕ್ಕೆ ಅಗತ್ಯವಿರುವ ಜಿಲ್ಲಾ ಕೇಂದ್ರಗಳಲ್ಲಿ ನಾಗರಿಕ ಸುರಕ್ಷತಾ ತಾಲೀಮು ನಡೆಸುವಂತೆ ನಿರ್ದೇಶಿಸಿದೆ. ಈ ಹಿನ್ನೆಲೆ ರಾಜ್ಯ ಸರಕಾರದ ಸೂಚನೆ ಮೇರೆಗೆ ಜಿಲ್ಲಾಡಳಿತ ಮಾಕ್ ಡ್ರಿಲ್ ಆಯೋಜಿಸಲಾಗಿದೆ. ನಾಗರಿಕ ಸುರಕ್ಷತಾ ತಾಲೀಮು ನಡೆಸುವ ಮೂಲಕ ತುರ್ತು ಪರಿಸ್ಥಿತಿ ಎದುರಾದ ವೇಳೆ ಸಾರ್ವಜನಿಕರು ಹೇಗೆ ತಮ್ಮನ್ನು ರಕ್ಷಣೆ ಮಾಡಿಕೊಳ್ಳಬೇಕು ಎಂಬುದರ ಬಗ್ಗೆ ಅರಿವು ಮೂಡಿಸಲಾಗುತ್ತದೆ. ನಗರದ ನಾಗರಿಕರು, ಪ್ರವಾಸಿಗರಲ್ಲಿ ಅರಿವು ಮೂಡಿಸಲಾಗುವುದು.

**12 ತಂಡ ಭಾಗಿ:** ಅರಮನೆ ಆವರಣದಲ್ಲಿ ನಡೆಯಲಿರುವ ತಾಲೀಮುಗೆ ಜಿಲ್ಲಾಡಳಿತ ರಚನೆ ಮಾಡಿರುವ ನಾನಾ ಇಲಾಖೆಯ 12 ತಂಡಗಳು ಪಾಲ್ಗೊಳ್ಳಲಿವೆ. ನಾಗರಿಕ ರಕ್ಷಣೆ, ಸಾರಿಗೆ ಪೂರೈಕೆ, ತುರ್ತು ಚಿಕಿತ್ಸೆ, ಮೃತದೇಹ ವಿಲೇವಾರಿ ವಾಹನ ಸೇರಿದಂತೆ 12 ತಂಡಗಳ ರಚನೆ ಮಾಡಲಾಗಿದೆ. ಜತೆಗೆ ಕಂಟ್ರೋಲ್ ರೂಂ, ಅಗ್ನಿ ಶಾಮಕ ದಳ, ಆಂಬ್ಯುಲೆನ್ಸ್ ವ್ಯವಸ್ಥೆ, ಹಾಸ್ಪಿಟಲ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

**ತಾಲೀಮು ಹೇಗೆ?:** ಮಾಕ್ ಡ್ರಿಲ್‌ನಲ್ಲಿ ಸಂಜೆ 4 ಕ್ಕೆ ಸೈರನ್ ಮೂಲಕ ಎಚ್ಚರಿಕೆ ನೀಡಲಾಗುತ್ತದೆ. ಬಳಿಕ ಬಾಂಬ್ ದಾಳಿ ಎದುರಾದಾಗ ಅನುಸರಿಸುವ ಕ್ರಮಗಳಾದ ಬೆಂಕಿ ನಂದಿಸುವುದು, ಗಾಯಾಳುಗಳ ರಕ್ಷಣೆ, ಅವರನ್ನು ಆಸ್ಪತ್ರೆಗೆ ರವಾನೆ ಮಾಡುವುದು, ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆ ಹೆಚ್ಚಿಸುವುದು, ದಾಳಿಗೀಡಾದ ಪ್ರದೇಶದಲ್ಲಿರುವ ಜನರನ್ನು ಸುರಕ್ಷಿತ ತಾಣಗಳಿಗೆ ಸ್ಥಳಾಂತರ, ದಾಳಿ ಸಂದರ್ಭ ರಕ್ಷಣಾ ಪಡೆ ಪ್ರತಿ ದಾಳಿ ಮಾಡುವ ಅಣಕು ಪ್ರದರ್ಶನ ಇರಲಿದೆ.

**ಅಧಿಕಾರಿಗಳ ಪಡೆ:** ತಾಲೀಮಿನಲ್ಲಿ ನಗರ ಪೊಲೀಸ್ ಆಯುಕ್ತರು, ಎಸ್ಪಿ, ಜಿಪಂ ಸಿಇಒ, ಪಾಲಿಕೆ ಆಯುಕ್ತರು, ತಹಶೀಲ್ದಾರರು, ಜಿಲ್ಲಾ ಆರೋಗ್ಯ ಕಲ್ಯಾಣಾಕಾರಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕರು, ಅಗ್ನಿ ಶಾಮಕ ಪ್ರಾದೇಶಿಕ ಅಕಾರಿ, ಏರ್‌ಪೋರ್ಟ್ ಅಕಾರಿಗಳು, ಗೃಹ ರಕ್ಷಕ ದಳ, ಎನ್‌ಸಿಸಿ, ರೈಲ್ವೆ ಇಲಾಖೆಯ ಅಧಿಕಾರಿಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಇಲಾಖೆಗಳ ಎಲ್ಲಾ ಅಧಿಕಾರಿಗಳು ಭಾಗವಹಿಸಲಿದ್ದಾರೆ.


ಉದಯವಾಹಿನಿ ಚಿತ್ರ

**ಅರಮನೆ ಆವರಣದಲ್ಲಿ ಸಿವಿಲ್ ಡಿಫೆನ್ಸ್ ಮಾಕ್ ಡ್ರಿಲ್ ನಡೆಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡ 12 ತಂಡಗಳನ್ನು ರಚನೆ ಮಾಡಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ.**


**– ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾಕಾರಿ.**

**ಮೈಸೂರಿನ ಅರಮನೆ ಆವರಣದಲ್ಲಿ ತುರ್ತು ಸಂದರ್ಭದಲ್ಲಿಹೇಗೆ ಸಾರ್ವಜನಿಕರು ವರ್ತಿಸಬೇಕು ಎಂಬುದರ ಬಗ್ಗೆ ಮಾಹಿತಿ ನೀಡಲು ಅಣಕು ಪ್ರದರ್ಶನ ನಡೆಯಲಿದೆ. ಸಾರ್ವಜನಿಕರು ಆತಂಕ ಪಡಬೇಕಿಲ್ಲ. ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಲಾಗಿದೆ.**

**–ಸೀಮಾ ಲಾಟ್ಕರ್**
**ನಗರ ಪೊಲೀಸ್ ಆಯುಕ್ತರು**

# ಭಾರತ – ಪಾಕ್ ಉದ್ವಿಗ್ನ ಪರಿಸ್ಥಿತಿ: ಹಾರಂಗಿ ಜಲಾಶಯಕ್ಕೆ ಪ್ರವಾಸಿಗರ ನಿರ್ಬಂಧ

• **ಉದಯವಾಹಿನಿ, ಮಡಿಕೇರಿ**


ಉದಯವಾಹಿನಿ ಚಿತ್ರ

ಭಾರತ – ಪಾಕಿಸ್ತಾನ ಗಡಿಯಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದೆ. ಯುದ್ಧದ ಕಾರ್ಮೋಡ ಕವಿದಿದೆ. ರಾಜ್ಯದಲ್ಲೂ ಮುನ್ನೆಚ್ಚರಿಕೆ ವಹಿಸಲಾಗಿದೆ. ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ಕೊಡಗು ಜಿಲ್ಲೆ ಕುಶಾಲನಗರ ತಾಲ್ಲೂಕಿನ ಹಾರಂಗಿ ಜಲಾಶಯದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ಹಾರಂಗಿ ಜಲಾಶಯಕ್ಕೆ ಪ್ರವಾಸಿಗರ ಪ್ರವೇಶ ನಿರ್ಬಂಧಿಸಿ ನೀರಾವರಿ ಇಲಾಖೆ ಆದೇಶ ಹೊರಡಿಸಿದೆ. ಹೆಚ್ಚಿನ ಭದ್ರತಾ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ.

ಇನ್ನೊಂದು ಕಡೆಯಲ್ಲಿ ರಾಜ್ಯದ ಅಣೆಕಟ್ಟುಗಳ ಭದ್ರತೆ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿದ್ದಾರೆ. ರಾಜ್ಯದ ಎಲ್ಲಾಅಣೆಕಟ್ಟುಗಳಿಗೆ ಭದ್ರತೆ ಒದಗಿಸುವುದು ನಮ್ಮ ಕರ್ತವ್ಯ, ಈ ಸಮಯದಲ್ಲಿ ಜಾಗೃತರಾಗಿರಬೇಕೆಂದು ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ತಾಲ್ಲೂಕಿನ ಕಣ್ಣೇಗೌಡನಹಳ್ಳಿ ಗ್ರಾಮದ ಕೆರೆಯಲ್ಲಿ 70 ಕೆರೆಗಳಿಗೆ ನೀರು ತುಂಬಿಸುವ ವೃಷಭಾವತಿ ವ್ಯಾಲಿ ಯೋಜನೆಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಕಿಡಿಗೇಡಿಗಳು ಯಾರೇ ಇರಲಿ, ಈ ಬಗ್ಗೆ ನಮ್ಮ ಸರಕಾರ ಗಮನಹರಿಸಿದೆ, ಎಂದರು.

**ಬಹಿರಂಗಪಡಿಸಲು ಸಾಧ್ಯವಿಲ್ಲ:** ರಾಜ್ಯದ ಅಣೆಕಟ್ಟುಗಳು, ಬಹುಪಾಲು ಪ್ರದೇಶದಲ್ಲಿ ಭದ್ರತೆ ಹೆಚ್ಚಿಸುವ ಕೆಲಸ ಮಾಡಲಾಗುತ್ತಿದೆ. ಪಾಕ್ ಪ್ರಜೆಗಳ ಮಾಹಿತಿಯನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ. ಅದನ್ನು ಗೃಹ ಸಚಿವರು ನೋಡಿಕೊಳ್ಳುತ್ತಾರೆ. ನಮ್ಮ ಕೆಲಸ ಎಲ್ಲಾ ಕಡೆಗಳಲ್ಲಿ ಭದ್ರತೆ ಒದಗಿಸುವುದು. ಆ ಕೆಲಸ ಮಾಡುತ್ತೇವೆ, ಎಂದರು.

**ಇಂದು ರ‍್ಯಾಲಿ:** ದೇಶದ ರಕ್ಷಣೆ, ತೊಂದರೆ ಕೊಟ್ಟವರಿಗೆ ಉತ್ತರ ನೀಡಿದ ದೇಶದ ಸೈನಿಕರಿಗೆ ಗೌರವ ಸಲ್ಲಿಸುವ ನಿಟ್ಟಿನಲ್ಲಿ ಮೇ 9 ರಂದು ಬೆಂಗಳೂರಿನ ಕೆ.ಆರ್ ಸರ್ಕಲ್‌ನಿಂದ ಬೆಳಗ್ಗೆ 9.30ಕ್ಕೆ ತ್ರಿವರ್ಣ ಧ್ವಜ ಹಿಡಿದು ರ‍್ಯಾಲಿ ಮಾಡಲಾಗುವುದು. ಪಕ್ಷಾ ತೀತವಾಗಿ ಈ ರ‍್ಯಾಲಿ ಮಾಡಲಾಗುತ್ತಿದೆ. ಈ ರ‍್ಯಾಲಿಯಲ್ಲಿ ಅಧಿಕಾರಿಗಳು, ಉದ್ಯೋಗಿಗಳು, ವಿದ್ಯಾರ್ಥಿಗಳು, ಸಿನಿಮಾದವರು, ಎಲ್ಲಾ ಪಕ್ಷದ ಮುಖಂಡರು, ಸಾರ್ವಜನಿಕರು, ದೇಶವಾಸಿಗಳು ಭಾಗವಹಿಸಬಹುದು. ಮುಖ್ಯಮಂತ್ರಿಗಳು, ಕ್ಯಾಬಿನೆಟ್ ಸಚಿವರು ಪಾಲ್ಗೊಳ್ಳಲಿದ್ದು, ವಿಧಾನಸೌಧದ ಎದುರು ದೇಶದ ಸೈನಿಕರಿಗೆ ಗೌರವ ಸಲ್ಲಿಸಲಾಗುವುದು. ಸರಕಾರದ ಪರವಾಗಿ ಬೆಂಗಳೂರು ಜಿಲ್ಲಾಉಸ್ತುವಾರಿ ಸಚಿವನಾಗಿ ಆಹ್ವಾನ ನೀಡುತ್ತಿದ್ದೇನೆ, ಎಂದರು.

**ಭೂಮಿ ಪೂಜೆ:** ವೃಷಭಾವತಿ ವ್ಯಾಲಿ ಯೋಜನೆಯಡಿ ಮೊದಲ ಹಂತದ 70 ಕೆರೆಗಳನ್ನು ತುಂಬಿಸಲು ನೆಲಮಂಗಲ ತಾಲ್ಲೂಕಿನ ಕಣ್ಣೇಗೌಡನಹಳ್ಳಿ ಕೆರೆಯಲ್ಲಿ ಸಿದ್ದಲಿಂಗ ಸ್ವಾಮೀಜಿ, ಡಿಸಿಎಂ ಡಿ.ಕೆ.ಶಿವ ಕುಮಾರ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ, ಶಾಸಕ ಎನ್.ಶ್ರೀನಿವಾಸ್ ಅವರು ಗಂಗೆ ಪೂಜೆ, ಭೂಮಿಪೂಜೆ ಮಾಡಿ ಚಾಲನೆ ನೀಡಿದರು.

**75 ಕೆರೆಗಳಿಗೆ ನೀರು:** ಮೊದಲ ಹಂತದಲ್ಲಿ ನೆಲಮಂಗಲ ತಾಲ್ಲೂಕಿನ 50, ಯಶವಂತಪುರ 5, ಯಲಹಂಕ 7, ದೊಡ್ಡಬಳ್ಳಾಪುರ 1, ತುಮಕೂರು ಗ್ರಾಮಾಂತರದ 7 ಕೆರೆಗಳಿಗೆ ನೀರು ತುಂಬಿಸಲಾಗುತ್ತದೆ.

# ಯುದ್ಧದ ಕಾರ್ಮೋಡ ; ಕೆ.ಎನ್ ರಾಜಣ್ಣ ಅಮೃತ ಮಹೋತ್ಸವ ಮುಂದೂಡಿಕೆ

• **ಉದಯವಾಹಿನಿ, ತುಮಕೂರು**

ಯುದ್ಧದ ಕಾರ್ಮೋಡ ಕವಿದಿರುವ ಹಿನ್ನೆಲೆಯಲ್ಲಿ ನಾವೆಲ್ಲಾ ಸೈನಿಕರ ಜತೆ ನಿಲ್ಲಬೇಕಿದೆ. ಹೀಗಾಗಿ ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರ ಅಮೃತ ಮಹೋತ್ಸವ ಕಾರ್ಯಕ್ರಮವನ್ನು ಮುಂದೂಡಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ತಿಳಿಸಿದರು. ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆ.ಎನ್. ರಾಜಣ್ಣ ಅವರಿಗೆ 75 ವರ್ಷ ತುಂಬಿದ ಹಿನ್ನೆಲೆಯಲ್ಲಿ ಮೇ 13 ರಂದು ಅಮೃತ ಮಹೋತ್ಸವ, ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭಕ್ಕೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿತ್ತು.



ದೇಶದಲ್ಲೀಗ ಯುದ್ಧ ಕಾರ್ಮೋಡ ಕವಿದಿದ್ದು, ಈ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಮುಂದೂಡಲಾಗಿದೆ. ವಾತಾವರಣ ತಿಳಿಗೊಂಡ ಬಳಿಕ ಮುಂದಿನ ದಿನಾಂಕ ನಿಗದಿಯಾದ ಬಳಿಕ ತಿಳಿಸಲಾಗುವುದು ಎಂದರು.

**ಭಯೋತ್ಪಾದಕರಿಗೆ ಜಾತಿ, ಧರ್ಮವಿಲ್ಲ:** ಭಯೋತ್ಪಾದಕರಿಗೆ ಧರ್ಮ, ಜಾತಿ ಎಂಬುದಿಲ್ಲ. ಹೀಗಾಗಿ ಒಂದು ಸಮುದಾಯವನ್ನು ಗುರಿಯಾಗಿಸಿಕೊಂಡು ಹೀಯಾಳಿಸುವುದು ತರವಲ್ಲ. ರಾಷ್ಟ್ರಪಿತ ಮಹಾತ್ಮಾ ಗಾಂಧಿಯನ್ನು ಕೊಂದ ವ್ಯಕ್ತಿಯನ್ನು ಅಪರಾಧಿ ಎಂದು ತೀರ್ಮಾನಿಸಲಾಯಿತೇ ಹೊರತು ಆತನ ಧರ್ಮ, ಸಮುದಾಯವನ್ನಲ್ಲ. ಇಂದಿರಾಗಾಂಧಿ ಅವರಿಗೆ ಅವರ ಅಂಗರಕ್ಷಕರೇ ಗುಂಡಿಟ್ಟುಕೊಂದಾಗ ಗುಂಡಿಟ್ಟವರ ಸಮುದಾಯವನ್ನು ಅಪರಾಧಿಗಳೆಂಬಂತೆ ಜನತೆ ನಡೆದುಕೊಂಡಿಲ್ಲ. ಹಾಗೆಯೇ ಕಾಶ್ಮೀರ ಘಟನೆಯಲ್ಲೂಒಂದು ಸಮುದಾಯವನ್ನು ಗುರಿಯಾಗಿಸುವುದು ಭಾರತ ದಂತಹ ಬಹುಸಂಸ್ಕೃತಿ ನಾಡಿಗೆ ತರವಲ್ಲವೆಂದರು.

ಅಭಿನಂದನಾ ಸಮಿತಿ ಅಧ್ಯಕ್ಷ, ಪತ್ರಕರ್ತ ಎಸ್. ನಾಗಣ್ಣ, ಸಮಿತಿಯ ಮುರುಳಿ ಕೃಷ್ಣಪ್ಪ, ಎನ್. ಗೋವಿಂದರಾಜು, ಗಂಗಣ್ಣ, ಕೆ.ಎ.ದೇವರಾಜು, ಧನಿಯಕುಮಾರ್, ಲಕ್ಷ್ಮಿನಾರಾಯಣ್, ಕೊಟ್ಟಶಂಕರ್, ಪಿ.ಮೂರ್ತಿ, ಡ್ಯಾಗೇರಹಳ್ಳಿ ವಿರೂಪಾಕ್ಷ, ನಾರಾಯಣ ಗೌಡ, ಟಿ.ಪಿ.ಮಂಜುನಾಥ್ ಮತ್ತಿತರರಿದ್ದರು.

**ಮೇ 13 ರಂದು ಆಯೋಜಿಸಲಾಗುತ್ತಿದ್ದ ಕೆ.ಎನ್. ರಾಜಣ್ಣ ಅವರ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ 1.50 ಲಕ್ಷ ಜನ ಪಾಲ್ಗೊಳ್ಳುವ ನಿರೀಕ್ಷೆಯಿತ್ತು. ಅದಕ್ಕಾಗಿ ಎಲ್ಲಾ ಸಿದ್ಧತೆಗಳನ್ನು ಅಭಿನಂದನಾ ಸಮಿತಿ ಮತ್ತು ಕೆ.ಎನ್.ಆರ್. ಅಭಿಮಾನಿಗಳು, ಹಿತೈಷಿಗಳು ಮಾಡಿಕೊಂಡಿದ್ದರು. ಆದರೆ ದೇಶದಲ್ಲಿಉದ್ವಿಗ್ನ ಪರಿಸ್ಥಿತಿ ಇದ್ದಾಗ, ಇಂತಹ ಅದ್ದೂರಿ ಕಾರ್ಯಕ್ರಮ ಮಾಡಿದರೆ ಬೇರೆಯದೇ ಸಂದೇಶ ನೀಡಿದಂತಾಗುತ್ತದೆ. ಹಾಗಾಗಿ ಪರಿಸ್ಥಿತಿ ತಿಳಿಯಾಗುವವರೆಗೂ ಕಾಯ್ದು, ತದನಂತರ ಕಾರ್ಯಕ್ರಮ ಮಾಡುವುದಾಗಿ ಮುಖ್ಯಮಂತ್ರಿಗಳಿಗೆ, ಉಪಮುಖ್ಯಮಂತ್ರಿಗಳಿಗೆ, ಕರ್ನಾಟಕ ಸರಕಾರದ ಸಚಿವ ಸಂಪುಟದ ಸಹೋದ್ಯಗಿಗಳಿಗೆ ಮನವರಿಕೆ ಮಾಡಿಕೊಡಲಾಗಿದೆ. ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರು ಒಪ್ಪಿಗೆ ನೀಡಿದ್ದಾರೆ**

**– ಆರ್.ರಾಜೇಂದ್ರ, ವಿಪ ಸದಸ್ಯ**

# ಗ್ರಾಮೀಣ ರಸ್ತೆ ಅಭಿವೃದ್ಧಿ ರೈತರಿಗೆ ಅಗತ್ಯ : ಶಾಸಕ

• **ಉದಯವಾಹಿನಿ, ಹುಣಸೂರು**


ಉದಯವಾಹಿನಿ ಚಿತ್ರ

ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಅಭಿವೃದ್ಧಿಪಡಿಸುವುದರಿಂದ ರೈತರು ಉತ್ಪನ್ನಗಳನ್ನು ನಗರ ಪ್ರದೇಶಕ್ಕೆ ಸಾಗಣೆಗೆ ಅನುಕೂಲವಾಗಲಿದೆ ಎಂದು ಶಾಸಕ ಜಿ.ಡಿ.ಹರೀಶ್ ಗೌಡ ಹೇಳಿದರು. ತಾಲ್ಲೂಕಿನ ಹಿಂಡಗೂಡ್ಲು ಗ್ರಾಮದಲ್ಲಿ ಶುಕ್ರವಾರ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಕ್ಷೇತ್ರದಲ್ಲಿ ಬಹುತೇಕ ಗ್ರಾಮೀಣ ಭಾಗದ ರಸ್ತೆ ಹದಗೆಟ್ಟಿದ್ದು, ಸರ್ಕಾರದ ಅನುದಾನ ಲಭ್ಯತೆ ಆಧರಿಸಿ ಕಾಮಗಾರಿಗೆ ಚಾಲನೆ ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶದ ಸಾರಿಗೆ ವ್ಯವಸ್ಥೆ ಅಭಿವೃದ್ಧಿಪಡಿಸಲು ರಸ್ತೆ ನವೀಕರಣ ಅತ್ಯಗತ್ಯವಾಗಿದೆ ಎಂದರು.

ಹಿಂಡಗೂಡ್ಲು ಗ್ರಾಮದ ರಸ್ತೆ ಕಾಮಗಾರಿ 1.50 ಕೋಟಿ ಅನುದಾನದಲ್ಲಿ ಅಭಿವೃದ್ಧಿ ಮಾಡಲಾಗುತ್ತಿದ್ದು, ಇದೇ ರೀತಿ ಹನಗೋಡು ಹೋಬಳಿ ಭಾಗದಲ್ಲಿ ಹಲವು ರಸ್ತೆಗಳು ಅಭಿವೃದ್ಧಿಪಡಿಸಬೇಕಾಗಿದೆ. ಸರ್ಕಾರದಲ್ಲಿ ಒತ್ತಡ ಹಾಕಿ ಅನುದಾನಕ್ಕೆ ಪ್ರಯತ್ನಿಸುತ್ತಿರುವೆ ಎಂದರು.

ಕಾವೇರಿ ನೀರಾವರಿ ನಿಗಮದ ಎಇಇ ಮೋಹನ್ ಕುಮಾರ್, ಪಂಚಾಯಿತಿ ಅಧ್ಯಕ್ಷ ಹರೀಶ್, ಎಪಿಎಂಸಿ ಅಧ್ಯಕ್ಷ ಶುಭಾಷ್, ಕಿರಂಗೂರು ಬಸವರಾಜ್, ದಾ.ರಾ. ಮಹೇಶ್, ಶಿವಕುಮಾರ್, ಜೆಡಿಎಸ್ ಮುಖಂಡ ಸತೀಶ್ ವಿ. ಪಾಪಣ್ಣ. ಗೋವಿಂದೇಗೌಡ ಮಭಾಗವಹಿಸಿದ್ದರು.

**ನೀರಿನ ಬವಣೆ**

**ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ನೀರಿನ ಬರ ಎದುರಾಗದಂತೆ ಎಚ್ಚರಿಕೆ ವಹಿಸಬೇಕು. ಕೆಲವು ಕೊಳವೆ ಬಾವಿಗಳಲ್ಲಿ ಫ್ಲೋರೈಡ್ ಅಂಶ ಹೆಚ್ಚಿದ್ದು, ಈ ನೀರನ್ನು ವೈಜ್ಞಾನಿಕವಾಗಿ ಶುದ್ಧಿಕರಿಸಿ ಬಳಸಲು ಅಂಥ ಗ್ರಾಮಗಳಲ್ಲಿ ಶುದ್ಧಿಕರಣ ಘಟಕ ಸ್ಥಾಪಿಸಲು ಕ್ರಮವಹಿಸಲಾಗಿದೆ. ನೀರಿನ ಕೊರತೆ ಆದರೆ, ಪಿಡಿಒ ಹೊಲ, ತೋಟಗಳ ಕೊಳವೆ ಬಾವಿ ನೀರು ಬಾಡಿಗೆ ಪಡೆದು ಜನರಿಗೆ ಸರಬರಾಜು ಮಾಡುವ ವ್ಯವಸ್ಥೆಗೆ ಕ್ರಮವಹಿಸಬೇಕುಎಂದರು.**

# ಮಿನಿ ನ್ಯೂಸ್

## ಟೋಲ್‌ನಲ್ಲಿ ಸ್ಥಳೀಯರಿಂದ ಶುಲ್ಕ ವಸೂಲಿ: ಪ್ರತಿಭಟನೆ

• **ಉದಯವಾಹಿನಿ, ಚಾಮರಾಜನಗರ**

ತಾಲ್ಲೂಕಿನ ಅಟ್ಟುಗೂಳಿಪುರ ಟೋಲ್‌ನಲ್ಲಿ ಸ್ಥಳೀಯರಿಂದ ಶುಲ್ಕ ವಸೂಲಿ ಮಾಡುತ್ತಿರುವ ಕ್ರಮ ಖಂಡಿಸಿ ಗೂಡ್ಸ್ ಆಟೊ ಮಾಲೀಕರು, ಚಾಲಕರ ಸಂಘದ ಪದಾಧಿಕಾರಿಗಳು ಜಿಲ್ಲಾಡಳಿತ ಭವನದ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಬಸವನಪುರ ರಾಜಶೇಖರ ಮಾತನಾಡಿ, ಅಟ್ಟುಗೂಳಿಪುರ ಟೋಲ್ ಮಾರ್ಗವಾಗಿ ಸ್ಥಳೀಯ ರೈತರು, ಕಾರ್ಮಿಕರು, ಗೂಡ್ಸ್ ಆಟೊ ಚಾಲಕರು ಹೆಚ್ಚಿನ ಸಂಖ್ಯೆಯಲ್ಲಿ ತೆರಳುತ್ತಾರೆ. ಸ್ಥಳೀಯರಿಂದ ಟೋಲ್ ಪಡೆಯುವುದು ಸರಿಯಲ್ಲ ಎಂದರು.

ಜಿಲ್ಲಾಡಳಿತ ಕೂಡಲೇ ಮಧ್ಯೆ ಪ್ರವೇಶಿಸಿ ಸ್ಥಳೀಯರಿಂದ ಟೋಲ್ ವಸೂಲಿಗೆ ಬ್ರೇಕ್ ಹಾಕಬೇಕು. ಇಲ್ಲದಿದ್ದರೆ ರೈತ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು, ದಲಿತ, ಪ್ರಗತಿಪರ ಸಂಘಟನೆಗಳು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

## ತಹಶೀಲ್ದಾರ್ ಮೂಲಕ ರೈತರ ಸಮಸ್ಯೆ ಬಗೆಹರಿಸುವ ಕೆಲಸ: ಮಾಜಿ ಶಾಸಕ

• **ಉದಯವಾಹಿನಿ, ಮಾಗಡಿ**

ಕಳೆದ ವಾರದಿಂದ ಪ್ರತಿ ಶುಕ್ರವಾರ ತಾಲ್ಲೂಕು ಕಚೇರಿಗೆ ಭೇಟಿ ರೈತರ ಸಮಸ್ಯೆಗಳ ಅರ್ಜಿ ಸ್ವೀಕರಿಸಿ ತಹಶೀಲ್ದಾರ್ ಮೂಲಕ ಸಮಸ್ಯೆಗಳನ್ನು ಬಗೆಹರಿಸುವ ಕೆಲಸ ಮಾಡುತ್ತಿದ್ದೇನೆ ಎಂದು ಮಾಜಿ ಶಾಸಕ ಎ.ಮಂಜುನಾಥ್ ಹೇಳಿದರು. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರಿಗೆ ಸಾಕಷ್ಟು ಸಮಸ್ಯೆಗಳಿದ್ದು, ಅವುಗಳನ್ನು ಆಡಳಿತ ಪಕ್ಷದವರು ಬಗೆಹರಿಸದ ಕಾರಣ ನಾನೇ ರೈತರಿಂದ ಅರ್ಜಿ ಸ್ವೀಕರಿಸಿ ಹಲವು ವರ್ಷಗಳ ಸಮಸ್ಯೆಯನ್ನು ಬಗೆಹರಿಸುವ ಕೆಲಸ ಮಾಡಲಾಗುತ್ತಿದೆ ಎಂದರು. ತಾಲ್ಲೂಕು ಕಚೇರಿಯಲ್ಲಿ ಕೆಲಸ ವಿಳಂಬವಾಗುತ್ತಿದೆ ಎಂಬ ದೂರಿನ ಹಿನ್ನೆಲೆ ನಾನೇ ಖುದ್ದಾಗಿ ಭೇಟಿ ನೀಡಿ ರೈತರಿಂದ ಅರ್ಜಿ ಸ್ವೀಕರಿಸಿ ಸಮಸ್ಯೆ ಬಗೆಹರಿಸಲಾಗುತ್ತಿದೆ ಎಂದರು.

ಮಾಜಿ ಶಾಸಕ ಎ.ಮಂಜುನಾಥ್ ಅವರು ತಾಲ್ಲೂಕು ಕಚೇರಿಗೆ ಭೇಟಿ ನೀಡಿದ ಸಮಯದಲ್ಲಿ 16ಕ್ಕೂ ಹೆಚ್ಚು ಅರ್ಜಿಗಳನ್ನು ರೈತರು ನೀಡಿದ್ದು ಇದರಲ್ಲಿ ಪ್ರಮುಖವಾಗಿ ನಕಾಶೆ ರಸ್ತೆ ಸಮಸ್ಯೆ, ಉಳುಮೆ ಚೀಟಿ, ಪೂರ್ವ ದಾಖಲಾತಿ, ರೆಕಾರ್ಡ್ ರೂಂನಲ್ಲಿ ದಾಖಲಾತಿಗಳು ಕಾಣೆಯಾಗಿವೆ ಎಂಬ ದೂರುಗಳು ಹೆಚ್ಚಾಗಿ ಕೇಳಿ ಬರುತ್ತಿದ್ದವು.

ಈ ಬಗ್ಗೆ ಜಿಲ್ಲಾಧಿಕಾರಿಗಳನ್ನು ಕರೆಸಿ ರೈತರಿಗೆ ಸೂಕ್ತ ಪರಿಹಾರ ಸಿಗುವ ಕೆಲಸ ಆಗಬೇಕಿದೆ. ಇನ್ನೂ ಹಲವು ಸಮಸ್ಯೆಗಳ ಬಗ್ಗೆ ರೈತರು ಅರ್ಜಿ ಸಲ್ಲಿಸಿದ್ದಾರೆ ಮುಂದೆ ತಾಲ್ಲೂಕು ಪಂಚಾಯಿತಿ ಹಾಗೂ ಪುರಸಭೆಗೂ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳ ಬಗ್ಗೆ ಅಧಿಕಾರಿಗಳ ಜೊತೆ ಚರ್ಚಿಸುತ್ತೇನೆ ಎಂದು ತಿಳಿಸಿದರು.

## ಕೆರೆ ಜಾಗ ಮಾರಾಟಕ್ಕೆ ಯತ್ನ ಗ್ರಾಮಸ್ಥರ ವಿರೋಧ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗೌರಿಬಿದನೂರು**

ತಾಲ್ಲೂಕಿನ ಹೊಸೂರು ಹೋಬಳಿಯ ಬಳಗೆರೆ ಗ್ರಾಮದ ಕೆರೆಯ ಜಾಗವನ್ನು ಮಾರಾಟಕ್ಕೆ ಯತ್ನಿಸಿದ ಕೆಲವು ಖಾಸಗಿ ವ್ಯಕ್ತಿಗಳ ವಿರುದ್ಧ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಬಳಗೆರೆ ಗ್ರಾಮದಲ್ಲಿ ಸುಮಾರು 80 ವರ್ಷಗಳಿಗೂ ಹೆಚ್ಚು ವರ್ಷಗಳಿಂದ 60 ರಿಂದ 70 ಎಕರೆ ಜಾಗದಲ್ಲಿ ಕೆರೆ ಇದೆ. ಗ್ರಾಮದ ಜನರಿಗೆ ಕುಡಿಯುವ ನೀರಿಗಾಗಿ ಸರ್ಕಾರದಿಂದ ಎಂಟು ಕೊಳವೆ ಬಾವಿ ಕೊರೆಸಲಾಗಿದೆ. ಕೆರೆಯ ಕೋಡಿಯನ್ನು ಸಹ ಸರ್ಕಾರದಿಂದಲೇ ನಿರ್ಮಾಣ ಮಾಡಲಾಗಿದೆ. 20 ಲಕ್ಷ ನರೇಗಾ ಕಾಮಗಾರಿಯು ನಡೆದಿದೆ. ಇತ್ತೀಚೆಗೆ ಜಲ ಜೀವನ್ ಯೋಜನೆ ಅಡಿಯಲ್ಲಿ ಕೊಳವೆ ಬಾವಿಯನ್ನು ಕೊರೆಸಲಾಗಿದೆ. ಇಷ್ಟ ಸರ್ಕಾರ ಕಾಮಗಾರಿ ನಡೆದಿರುವ ಜಾಗವನ್ನು ಕೆಲವರು ತಮ್ಮದೆಂದು ಮಾರಾಟಕ್ಕೆ ಯತ್ನಿಸಿರುವುದು ಅಪರಾಧ ಎಂದು ಗ್ರಾಮ ಪಂಚಾಯಿತಿ ಸದಸ್ಯ ಶಾಂತರಾಜು ದೂರಿದರು. ಕೆರೆಯಲ್ಲಿ ಸರ್ವೆ ನಂಬರ್ 22, 23,24,25 ಖಾಸಗಿ ಖಾತೆದಾರರ ಹೆಸರಿನಲ್ಲಿ ಬರುತ್ತಿರುತ್ತವೆ. ಕೆಲವು ಖಾಸಗಿ ವ್ಯಕ್ತಿಗಳು ಮಾರಾಟ ಮಾಡಲು ಮುಂದಾಗಿದ್ದಾರೆ. ಈ ಸಮಸ್ಯೆಯನ್ನು ಸರ್ಕಾರ ಬಗೆಹರಿಸಿ ಕೊಡಬೇಕು ಎಂದು ಒತ್ತಾಯಿಸಿದರು.

# ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ

## ಕೃಷಿ ಚಟುವಟಿಕೆಗಳ ವೆಚ್ಚಕ್ಕೆ ಬ್ಯಾಂಕ್‌ಗಳಲ್ಲಿ ಚಿನ್ನ ಅಡವಿಟ್ಟು ಸಾಲ ಪಡೆದು ಬೇಸಾಯ

• **ಉದಯವಾಹಿನಿ, ತಿ.ನರಸೀಪುರ**



ಉದಯವಾಹಿನಿ ಚಿತ್ರ

ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಕಂಡುಕೊಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ರೈತರು ತಾಲ್ಲೂಕು ಅಧಿಕಾರಿಗಳನ್ನು ಒತ್ತಾಯಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಹಶೀಲ್ದಾರ್ ಸುರೇಶ್‌ಚಾರ್ ಅಧ್ಯಕ್ಷತೆಯಲ್ಲಿ ನಡೆದ ರೈತರ ಕುಂದುಕೊರತೆ ಸಭೆಯಲ್ಲಿ ರೈತರು ಅನೇಕ ದೂರುಗಳ ಪ್ರಸ್ತಾಪಿಸಿ ಈ ಒತ್ತಾಯ ಮಾಡಿದರು.

ಕೃಷಿ ಚಟುವಟಿಕೆಗಳ ವೆಚ್ಚಕ್ಕೆ ಬ್ಯಾಂಕ್‌ಗಳಲ್ಲಿ ಚಿನ್ನ ಅಡವಿಟ್ಟು ಸಾಲ ಪಡೆದು ಬೇಸಾಯ ಮಾಡುತ್ತಾರೆ. ಆದರೆ ಈಗ ಬಡ್ಡಿ ಪಾವತಿಸಿಕೊಂಡು ಮರುಸಾಲ ನೀಡಲು ಬ್ಯಾಂಕ್ ಅಧಿಕಾರಿಗಳು ಸಹಕರಿಸುತ್ತಿಲ್ಲ ಹಾಗೂ ಪೂರ್ಣ ಅಸಲು ಹಾಗೂ ಬಡ್ಡಿ ಕಟ್ಟುವಂತೆ ಒತ್ತಾಯಿಸುತ್ತಾರೆ ಇದರಿಂದ ರೈತರಿಗೆ ಒಂದೇ ಕಂತಿನಲ್ಲಿ ಕಟ್ಟುವುದು ಕಷ್ಟವಾಗಿದೆ ಎಂದು ಸಭೆಯಲ್ಲಿ ಮುಖಂಡ ಕಿರಗಸೂರು ಶಂಕರ್ ಹೇಳಿದರು. ಜೂನ್, ಜುಲೈ ತಿಂಗಳಲ್ಲಿ ನಾಲೆಗಳಿಗೆ ನೀರು ಹರಿಸಿದರೆ ರೈತರಿಗೆ ಅನುಕೂಲವಾಗುತ್ತದೆ. ಆಗಸ್ಟ್ ಕೊನೆ ವಾರಗಳಲ್ಲಿ ನೀರು ಬಿಡುವುದರಿಂದ ಭತ್ತದ ನಾಟಿ ಮಾಡಲು ವಿಳಂಬದ ಜೊತೆಗೆ ಫಸಲು ಇಳುವರಿಗೂ ತೊಂದರೆಯಾಗುತ್ತದೆ ಎಂದು ಅವರು ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ತಹಸೀಲ್ದಾರ್ ಸುರೇಶ್‌ಚಾರ್, ದೂರವಾಣಿಯ ಮೂಲಕ ಬ್ಯಾಂಕ್ ಅಧಿಕಾರಿಗಳ ಜತೆ ಚರ್ಚಿಸಿ ನಂತರ ಮೇ.15 ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯುವ ಸಭೆಯಲ್ಲಿ ಈ ವಿಷಯವನ್ನು ಪ್ರಸಾಪಿಸುವುದಾಗಿ ತಿಳಿಸಿದರು.

ಕೆ.ಆರ್.ಎಸ್ ಉಪ ವಿಭಾಗದ ಮಾದೇಗೌಡನಹುಂಡಿ ಶಾಖೆ ಎಇಇ ಲೋಕನಾಥ್ ಮಾತನಾಡಿ, ಉತ್ತಮ ಮಳೆಯಾಗಿ ಅಣೆಕಟ್ಟೆಗಳು ಭರ್ತಿಯಾದ ನಂತರ ಮೇಲ್ಮಟ್ಟದ ಅಧಿಕಾರಿಗಳು ಸಭೆ ನಡೆಸಿ ನಾಲೆಗಳಿಗೆ ನೀರು ಹರಿಸಲಾಗುವುದು ಎಂದರು.

ತಾಲ್ಲೂಕು ರೈತ ಸಂಘದ ಅಧ್ಯಕ್ಷ ಕರೋಹಟ್ಟಿ ಕುಮಾರ ಸ್ವಾಮಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಪೆಟ್ಟಿಗೆ ಅಂಗಡಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದ್ದು, ಚಿಕ್ಕ ಮಕ್ಕಳು ಮದ್ಯ ವ್ಯಸನಿಗಳಾಗುವ ಪರಿಸ್ಥಿತಿ ಬಂದಿದೆ. ನಾಲೆ ಬದಿಗಳಲ್ಲಿ ಮದ್ಯದ ಬಾಟಲುಗಳನ್ನು ಬಿಸಾಡುತ್ತಿರುವುದು ಇದರ ನಿಯಂತ್ರಣಕ್ಕೆ ಅಬಕಾರಿ, ಪೊಲೀಸ್ ಅಧಿಕಾರಿಗಳು ನಿಯಂತ್ರಿಸಬೇಕಿದೆ ಎಂದರು.

**ಇದಕ್ಕೆ ಉತ್ತರಿಸಿದ ತೋಟಗಾರಿಕೆ ಸಹಾಯಕ ನಿರ್ದೇಶಕಿ ಶಾಂತ ಮಾತನಾಡಿ, ರೈತರು ತರಕಾರಿ ಹಣ್ಣು ಮಾರಾಟ ಮಾಡಲು ಜಿಲ್ಲಾ ಹಾಪ್ಸ್‌ನಲ್ಲಿ ಆರ್‌ಟಿಸಿಯನ್ನು ನೋಂದಾಯಿಸಿ ನಂತರ ಖರೀದಿಸಲಾಗುತ್ತದೆ ಎಂದರು.**

## ತಂಗುದಾಣ ಇಲ್ಲದೆ ಪ್ರಯಾಣಿಕರ ಪರದಾಟ | ಮೂಲ ಸೌಕರ್ಯ ಕೊರತೆ

# ರಸ್ತೆಯ ಪಕ್ಕದಲ್ಲೇ ನಿಂತು ಬಸ್‌ಗಾಗಿ ಕಾಯುವ ಪರಿಸ್ಥಿತಿ

• **ಉದಯವಾಹಿನಿ, ಶಿಡ್ಲಘಟ್ಟ**

ತಾಲ್ಲೂಕಿನ ಜಂಗಮಕೋಟೆ ಕ್ರಾಸ್‌ನಲ್ಲಿ ಜನರಿಗೆ ಅಗತ್ಯ ಮೂಲ ಸೌಕರ್ಯ ಇಲ್ಲದೆ ಜನ ಪರದಾಡುವಂತಾಗಿದೆ. ಕೋಲಾರ, ವಿಜಯಪುರ, ಶಿಡ್ಲಘಟ್ಟ, ಹೊಸಕೋಟೆ ಮುಂತಾದ ಕಡೆಗಳಿಗೆ ಸಂಪರ್ಕ ಕಲ್ಪಿಸುವಂತಹ ಮುಖ್ಯ ವೃತ್ತವಾಗಿರುವ ಜಂಗಮಕೋಟೆ ಕ್ರಾಸ್‌ಗೆ ಈ ನಾಲ್ಕು ಕಡೆಗಳಿಂದ ಬರುವ ಬಸ್‌ಗಳಲ್ಲಿ ಬಂದಿಳಿಯುವ ಪ್ರಯಾಣಿಕರಿಗೆ ತಂಗುದಾಣ ಇಲ್ಲ. ಕುಡಿಯುವ ನೀರಿನ ವ್ಯವಸ್ಥೆಯಿಲ್ಲ. ಸುಡುವ ಬಿಸಿಲು, ಮಳೆಯ ನಡುವೆ ರಸ್ತೆಯ ಪಕ್ಕದಲ್ಲೆ ನಿಂತು ಬಸ್‌ಗಾಗಿ ಕಾಯಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಹಿಳೆಯರು, ಮಕ್ಕಳು, ವೃದ್ಧರು, ಶಾಲಾ ಕಾಲೇಜುಗಳಿಗೆ ಹೋಗುವಂತಹ ವಿದ್ಯಾರ್ಥಿಗಳೆಲ್ಲರೂ ಬಸ್‌ಗಾಗಿ ಕಾಯಲು ರಸ್ತೆಯ ಬದಿಯಲ್ಲೇ ನಿಲ್ಲಬೇಕು. ಸುಡುವ ಬಿಸಿಲಿನಲ್ಲಿ ಮಕ್ಕಳನ್ನು ಎತ್ತಿಕೊಂಡು ಹೈರಾಣಾಗುತ್ತಿದ್ದಾರೆ. ಬಸ್‌ಗಳು ಬಂದರೂ ರಸ್ತೆಯಲ್ಲೆ ನಿಲ್ಲುತ್ತವೆ. ಇದರಿಂದ ರಸ್ತೆಯಲ್ಲಿ ಸಾಗುವಂತಹ ಇತರೆ ವಾಹನಗಳಿಗೂ ತೊಂದರೆಯಾಗುತ್ತಿದೆ.


ಉದಯವಾಹಿನಿ ಚಿತ್ರ

ಪ್ರಯಾಣಿಕರಿಗೆ ಅಪಘಾತ ಭೀತಿ ಕಾಡುತ್ತಿದೆ. ಇದು ಪ್ರಮುಖ ವೃತ್ತವಾಗಿದ್ದರೂ ಇಲ್ಲಿ ಪೊಲೀಸರನ್ನು ನಿಯೋಜಿಸಿಲ್ಲ. ಇದರಿಂದ ಮಹಿಳೆ, ಮಕ್ಕಳ ಸುರಕ್ಷಿತೆ ಇಲ್ಲದಂತಾಗಿದೆ. ಸಂಚಾರ ಪೊಲೀಸರು ಇಲ್ಲದೆ ಸಂಚಾರ ವ್ಯವಸ್ಥೆ ಹದಗೆಟ್ಟಿದೆ. ವೃತ್ತದಲ್ಲಿ ಅಳವಡಿಸಿರುವ ಹೈಮಾಸ್ಟ್ ವಿದ್ಯುತ್ ದೀಪದ ಸುತ್ತಲೂ ಕಟ್ಟಿರುವ ತಡೆಗೋಡೆಯ ಕಲ್ಲುಗಳು ಕಿತ್ತುಹೋಗಿದ್ದು, ತಾತ್ಕಾಲಿಕವಾಗಿ ತಡೆ ಗೋಡೆಗೆ ಜೋಡಿಸಲಾಗಿದೆ. ಜೋರಾಗಿ ಗಾಳಿ ಬಂದರೆ ತಡೆಗೋಡೆಯ ಸಮೇತ ಹೈಮಾಸ್ಟ್ ದೀಪ ಅಲುಗಾಡುತ್ತದೆ. ವೃತ್ತದಲ್ಲಿ ಹೈಮಾಸ್ಟ್ ದೀಪದಲ್ಲಿ ಸಿಸಿಟಿವಿ ಕ್ಯಾಮಾರಾ ಅಳವಡಿಸಿದ್ದರೂ, ಅವು ಕೆಟ್ಟು ಹೋಗಿವೆ. ಇದರಿಂದ ಈ ವೃತ್ತದ ಮೂಲಕ ಹಾದುಹೋಗುವಂತಹ ಅಪರಿಚಿತರನ್ನು ಗುರುತಿಸುವುದು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸ್ಥಳೀಯ ನಿವಾಸಿ ಮುನಿರಾಜು ಹೇಳಿದರು. ಜಂಗಮಕೋಟೆ ಕ್ರಾಸ್ ಒಂದು ಪ್ರಮುಖ ವಾಣಿಜ್ಯ ಕೇಂದ್ರ. ರಸ್ತೆಯುದ್ದಕ್ಕೂ ಹೆಚ್ಚು ಬೆಳಕು ಹೊರಸೂಸುವ ಬೀದಿದೀಪಗಳನ್ನು ಅಳವಡಿಸಬೇಕಿದೆ. ರಾತ್ರಿಯ ವೇಳೆ ಕಡಿಮೆ ಬೆಳಕಿರುವ ಕಾರಣ, ಕಳ್ಳತನ ಆಗುವ ಸಾಧ್ಯತೆಗಳು ಹೆಚ್ಚೆ. ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಿದೆ. ಕೆಲವು ಕಂಬಗಳಲ್ಲಿ ಅಳವಡಿಸಿರುವ ಬೀದಿದೀಪಗಳು ಉರಿಯುತ್ತಿಲ್ಲ. ಅವುಗಳನ್ನು ರಿಪೇರಿ ಮಾಡಿಸುವ ಮೂಲಕ ಅನುಕೂಲ ಮಾಡಬೇಕಿದೆ ಎಂದು ಸ್ಥಳೀಯರು ಮನವಿ ಮಾಡಿದ್ದಾರೆ.

**ಸೌಕರ್ಯ ಏನು ಬೇಕು?**

**ಶಿಡ್ಲಘಟ್ಟ ವಿಜಯಪುರ ಕೋಲಾರ ಹೊಸಕೋಟೆ ಕಡೆಗಳಿಗೆ ಹೋಗುವ ಪ್ರಯಾಣಿಕರು ನಿಲ್ಲಲು ನಾಲ್ಕೂ ಕಡೆಗಳಲ್ಲಿ ತಂಗುದಾಣಗಳ ನಿರ್ಮಾಣ ತಂಗುದಾಣಗಳ ಸಮೀಪದಲ್ಲಿ ಶೌಚಾಲಯಗಳು ಮಹಿಳೆಯರಿಗಾಗಿ ವಿಶ್ರಾಂತಿ ಗೃಹಗಳು ಕುಡಿಯುವ ನೀರಿನ ವ್ಯವಸ್ಥೆ. ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ತಡೆಗಟ್ಟಲು ಸಿಸಿಟಿವಿ ಕ್ಯಾಮೆರಾ ಅಳವಡಿಕೆ ಮಾಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.**

ಅಂತರಾಳದಿಂದ... EDITORIAL

# ಬಿಪಿಎಸ್‌ಎಲ್ ಪ್ರಕರಣದ ತೀರ್ಪು?

## ಐಬಿಸಿ ಪುನರವಲೋಕನ ಅಗತ್ಯ



ಭೂಷಣ್ ಪವರ್ ಆ್ಯಂಡ್ ಸ್ಟೀಲ್ ಲಿಮಿಟೆಡ್ (ಬಿಪಿಎಸ್‌ಎಲ್) ಕಂಪನಿಯನ್ನು ಜೆಎಸ್‌ಡಬ್ಲ್ಯು ಸ್ಟೀಲ್ ಕಂಪನಿಯು ಸ್ವಾಧೀನಕ್ಕೆ ತೆಗೆದುಕೊಂಡಿದ್ದನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದೆಕೋರ್ಟ್‌ನ ತೀರ್ಮಾನವು ಎರಡು ಕಂಪನಿಗಳು ದಿವಾಳಿ ಸಂಹಿತೆಯ (ಐಬಿಸಿ) ಅಡಿಯಲ್ಲಿ ತೆಗೆದುಕೊಂಡ ನಿರ್ಧಾರದ ಸರಿ–ತಪ್ಪುಗಳು, ಆ ನಿರ್ಧಾರದ ಕಾನೂನುಬದ್ಧತೆಯ ಆಚೆಗೂ ಚಾಚಿಕೊಂಡಿದೆ. ಐಬಿಸಿ ಅನುಷ್ಠಾನಕ್ಕೆ ಸಂಬಂಧಿಸಿದ ಹಾಗೂ ಆ ಕಾನೂನಿನ ಅಡಿಯಲ್ಲಿನ ಪ್ರಕ್ರಿಯೆಗಳ ಬಗ್ಗೆ ಇದು ಪ್ರಶ್ನೆಗಳನ್ನು ಎತ್ತಿದೆ. ಕೇಂದ್ರ ಸರ್ಕಾರವು 2016ರಲ್ಲಿ ಜಾರಿಗೆ ತಂದ ಈ ಕಾನೂನು, ಕಂಪನಿಗಳು ದಿವಾಳಿಯೆದ್ದಾಗ ಸೃಷ್ಟಿಯಾಗುವ ಸಮಸ್ಯೆಗಳನ್ನು ನಿಭಾಯಿಸಲು ಒಂದು ದಾರಿದೀಪ ಎಂದು ಭಾವಿಸಲಾಗಿದೆ. ಅಂತಹ ಪರಿಸ್ಥಿತಿಗಳನ್ನು ನಿರ್ವಹಿಸುವಲ್ಲಿ ಇದೊಂದು ಪ್ರಮುಖ ಪರಿಕರವಾಗಿ ಒದಗಿಬಂದಿದೆ ಕೂಡ. ಕಂಪನಿಗಳು ದಿವಾಳಿಯಾದ ಸಂದರ್ಭದಲ್ಲಿ ಕಾನೂನಿಗೆ ಅನುಗುಣವಾಗಿ, ನಿರೀಕ್ಷಿತವಾದ ಬಗೆಯಲ್ಲಿ, ವ್ಯವಸ್ಥಿತವಾಗಿ ಸಮಸ್ಯೆಯನ್ನು ಪರಿಹರಿಸಲಾಗುತ್ತದೆ ಎಂಬ ಭರವಸೆಯನ್ನು ಉದ್ದಿಮೆಗಳಿಗೆ, ಹೂಡಿಕೆದಾರರಿಗೆ, ಸಾಲದಾತರಿಗೆ ಮತ್ತು ಇತರ ಭಾಗೀದಾರರಿಗೆ ನೀಡುವ ಉದ್ದೇಶವು ಈ ಕಾನೂನಿಗೆ ಇದೆ.

ಬಿಪಿಎಸ್‌ಎಲ್ ಕಂಪನಿಯನ್ನು ಮತ್ತೆ ಮೇಲಕ್ಕೆತ್ತಲು ಜೆಎಸ್‌ಡಬ್ಲ್ಯು ಸ್ಟೀಲ್ ಕಂಪನಿಯು ಸಲ್ಲಿಸಿದ್ದ ಯೋಜನೆಯು ಕಾನೂನುಬಾಹಿರ ಎಂದು ಹೇಳಿರುವ ಸುಪ್ರೀಂ ಕೋರ್ಟ್ ತೀರ್ಪು, ಐಬಿಸಿ ಕಾನೂನಿನ ಅಡಿಯಲ್ಲಿ ವಿವರಿಸಲಾಗಿರುವ ಪ್ರಕ್ರಿಯೆಗಳಿಗೆ ಎದುರಾದ ದೊಡ್ಡ ಹಿನ್ನಡೆ. ಪ್ರಕ್ರಿಯೆಯ ಎಲ್ಲಾ ಭಾಗೀದಾರರ ನಡೆಯನ್ನು ಪ್ರಶ್ನಿಸಿರುವ ನ್ಯಾಯಾಲಯವು ಪ್ರಕ್ರಿಯೆಯನ್ನು ಕೂಡ ಪ್ರಶ್ನಿಸಿದೆ. ಜೆಎಸ್‌ಡಬ್ಲ್ಯು ಸ್ಟೀಲ್ ಕಂಪನಿಯು ತಪ್ಪು ಮಾಹಿತಿ ಒದಗಿಸಿದೆ, ಬಿಪಿಎಸ್‌ಎಲ್ ಪುನರುಜ್ಜೀವನಕ್ಕೆ ಒಪ್ಪಿಗೆ ಪಡೆದುಕೊಂಡ ಯೋಜನೆಗೆ ಅನುಗುಣವಾಗಿ ಸರಿಸುಮಾರು ಎರಡು ವರ್ಷಗಳ ಕಾಲ ನಡೆದುಕೊಂಡಿಲ್ಲ ಎಂದು ಹೇಳಿದೆ.

**ಜೆಎಸ್‌ಡಬ್ಲ್ಯು, ಸ್ಟೀಲ್ ಕಂಪನಿಯು ಬಿಪಿಎಸ್‌ಎಲ್ ಕಂಪನಿಯ ಪುನರುಜ್ಜೀವನಕ್ಕೆ ಸಲ್ಲಿಸಿದ್ದ ಯೋಜನೆಗೆ ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿಯು (ಎನ್‌ಸಿಎಲ್‌ಟಿ) 2019ರಲ್ಲಿ ಒಪ್ಪಿಗೆ ನೀಡಿತ್ತು. ಆದರೆ ಬಿಪಿಎಸ್‌ಎಲ್ ಕಂಪನಿಯ ಪುನರುಜ್ಜೀವನ ಪ್ರಕ್ರಿಯೆಯು ಎರಡು ವರ್ಷಗಳಿಗೂ ಹೆಚ್ಚಿನ ಅವಧಿಯನ್ನು ತೆಗೆದುಕೊಂಡಿತ್ತು, ಇದು ಐಬಿಸಿ ಕಾನೂನಿನಲ್ಲಿ ಹೇಳಿರುವ ಅವಧಿಗಿಂತ ಹೆಚ್ಚು. ಎರಡು ವರ್ಷಗಳ ನಂತರದಲ್ಲಿ ಜೆಎಸ್‌ಡಬ್ಲ್ಯು ಸ್ಟೀಲ್ ಕಂಪನಿಯು ಬಿಪಿಎಸ್‌ಎಲ್ ಕಂಪನಿಯನ್ನು ಸ್ವಾಧೀನಕ್ಕೆ ತೆಗೆದುಕೊಂಡಿತು. ಜೆಎಸ್‌ಡಬ್ಲ್ಯು, ಸ್ಟೀಲ್ ಕಂಪನಿಯ ಕ್ರಮವನ್ನು ಒಪ್ಪದ ನ್ಯಾಯಾಲಯವು ಬಿಪಿಎಸ್‌ಎಲ್ ಕಂಪನಿಯ ಪರಿಸಮಾಪ್ತಿಗೆ ಆದೇಶಿಸಿದೆ.**

ಪುನರುಜ್ಜೀವನ ಯೋಜನೆಯು ಐಬಿಸಿ ಹೇಳಿರುವ ರೀತಿಯಲ್ಲಿ ಇರಲಿಲ್ಲ, ಹಣಕಾಸಿನ ಸಂಕಷ್ಟಕ್ಕೆ ಸಿಲುಕಿದ ಕಂಪನಿಯ ಪುನರುಜ್ಜೀವನದ ಹೊಣೆ ಹೊತ್ತವರು ಶಾಸನಬದ್ಧವಾಗಿ ಕರ್ತವ್ಯ ನಿರ್ವಹಿಸಲು ವಿಫಲರಾದರು ಎಂದು ಕೂಡ ಸುಪ್ರೀಂ ಕೋರ್ಟ್ ಹೇಳಿದೆ.

ಕಂಪನಿಯ ಪುನರುಜ್ಜೀವನದ ಯೋಜನೆಯನ್ನು ಒಪ್ಪಿಕೊಳ್ಳುವ ಸಂದರ್ಭದಲ್ಲಿ ಸಾಲದಾತರ ಸಮಿತಿಯು ತನ್ನ ವಿವೇಕವನ್ನು ಬಳಸಿಕೊಳ್ಳುವಲ್ಲಿ ವಿಫಲವಾಗಿದೆ. ಪರಸ್ಪರ ವಿರುದ್ಧವಾದ ನಿಲುವುಗಳನ್ನು ತಳೆಯುವ ಮೂಲಕ ಅದು ಸಾಲದಾತರ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ಕೂಡ ಕೋರ್ಟ್ ಹೇಳಿದೆ. ಅಲ್ಲದೆ, ನಿಗದಿತವಾದ ಪ್ರಕ್ರಿಯೆಗಳನ್ನು ಎಲ್ಲಾ ಹಂತಗಳಲ್ಲಿಯೂ ಉಲ್ಲಂಘಿಸಲಾಯಿತು ಎಂದು ಹೇಳಿದೆ. ಸುಪ್ರೀಂ ಕೋರ್ಟ್ ನಿರ್ಣಯವು ಐಬಿಸಿ ಅಡಿಯಲ್ಲಿ ರೂಪಿತವಾದ ವ್ಯವಸ್ಥೆಯನ್ನು ಪರಿಶೀಲನೆಗೆ ಒಳಪಡಿಸಿದೆ. ಇದು ಹಲವು ಪರಿಣಾಮಗಳನ್ನು ಉಂಟುಮಾಡಲಿದೆ. ಬಿಪಿಎಸ್‌ಎಲ್ ಕಂಪನಿಯು ದಿವಾಳಿ ಭೀತಿಯಲ್ಲಿದ್ದು, ಅದರ ಮೌಲ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಕಂಪನಿಗೆ ಸಾಲ ನೀಡಿದವರು ಕೂಡ ದುಷ್ಪರಿಣಾಮ ಅನುಭವಿಸಬೇಕಾಗುತ್ತದೆ. ಸಾಲ ಪಡೆದ ಕಾರ್ಪೊರೇಟ್ ಕಂಪನಿಗಳನ್ನು ಉಳಿಸುವ, ಬೇರೆ ಬೇರೆ ಪಾಲುದಾರರಿಗೆ ಆಗುವ ನಷ್ಟವನ್ನು ಕಡಿಮೆ ಮಾಡುವ, ಅರ್ಥವ್ಯವಸ್ಥೆಗೆ ಅನಪೇಕ್ಷಿತ ಹಾನಿ ಆಗದಂತೆ ನೋಡಿಕೊಳ್ಳುವ ಉದ್ದೇಶವು ಐಬಿಸಿ ಕಾನೂನಿಗೆ ಇದೆ. ಆದರೆ ಐಬಿಸಿ ರೂಪಿಸುವ ಮೊದಲು ಹಲವು ಕಂಪನಿಗಳು ನಡೆಸುತ್ತಿದ್ದ ಅಕ್ರಮಗಳು ಐಬಿಸಿ ಜಾರಿಗೆ ಬಂದ ನಂತರದಲ್ಲಿ ಇತರ ರೂಪಗಳಲ್ಲಿಯೂ ನಡೆಯಬಹುದು ಎಂಬುದನ್ನು ಕೋರ್ಟ್‌ನ ತೀರ್ಪು ಹೇಳಿದಂತಿದೆ. ಈ ಪ್ರಕರಣದಲ್ಲಿ ಐಬಿಸಿಯ ಆಶಯವನ್ನು ಉಲ್ಲಂಘಿಸಲಾಗಿದೆ. ಸುಪ್ರೀಂ ಕೋರ್ಟ್ ತೀರ್ಮಾನಕ್ಕೆ ಮೇಲ್ಮನವಿ ಸಲ್ಲಿಸುವ ಸಾಧ್ಯತೆ ಹೆಚ್ಚಿದೆ. ಆದರೆ ಈ ತೀರ್ಪು ಐಬಿಸಿ ಕಾನೂನಿನ ಅನುಷ್ಠಾನದ ಬಗ್ಗೆ ಪುನರವಲೋಕನ ಆಗಬೇಕು ಎಂಬುದನ್ನು ಹೇಳುತ್ತಿದೆ.

# ರಾಮಾಯಣ



ಶ್ರೀ ರಾಮನ ವನವಾಸ ಪ್ರಾರಂಭ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಕೈಕೇಯಾದೇವಿಯು ದಶರಥರಾಯನ ನಾಶ, ನನಗೆ ವನವಾಸ, ಭರತನಿಗೆ ರಾಜ್ಯಾಧಿವ ಎಂಬ ಈ ಮೂರು ಕಾರ್ಯಕ್ಕೋಸ್ಕರವೇ ಹುಟ್ಟಿದಳು. ಇಷ್ಟು ಮಾತ್ರವೇ ಅಲ್ಲ, ರಾಜ್ಯಾಧಿಪತ್ಯ ದಿಂದ ಕೌಸಲ್ಯಾದೇವಿಯನ್ನೂ ಸುಮಿತ್ರಾದೇವಿಯನ್ನೂ ನಮ್ಮ ಮೇಲಣ ಮತ್ಸರದಿಂದ ಬಾಧಿಸುವಳು. ಸುಮಿತ್ರಾದೇವಿಯು ನನ್ನ ನಿಮಿತ್ತವಾಗಿ ಕೈಕೇಯಾದೇವಿಯ ಪೀಡೆಗೆ ಏಕೆ ಒಳಗಾಗಬೇಕು ನೀನು ಇಲ್ಲಿಂದ ತಿರುಗಿ ಅಯೋಧ್ಯಾಪಟ್ಟಣಕ್ಕೆ ಹೋಗು. ಇಲ್ಲದಿದ್ದರೆ ಸುಮಿತ್ರಾದೇವಿ ಕೌಸಲ್ಯಾದೇವಿಯರಿಬ್ಬರೂ ಅನಾಥೆಯರಾಗುವರು. ನಾನು ಸೀತಾಸಮೇತನಾಗಿ ದಂಡಕಾರಣ್ಯಕ್ಕೆ ಹೋಗುತ್ತೇನೆ. ಕೈಕೇಯಾದೇವಿಯು ನಮ್ಮ ಮೇಲಣ ದ್ವೇಷದಿಂದ ಸುಮಿತ್ರಾ ದೇವಿ ಕೌಸಲ್ಯಾದೇವಿಯರಿಗೆ ಕೆಡುಕನ್ನೆಣಿಸುವಳು. ನನ್ನ ತಾಯಿಯು ಹಿಂದಿನ ಜನ್ಮದಲ್ಲಿ ಯಾವಳೋ ತಾಯಿಯನ್ನು ಮಕ್ಕಳಿಂದ ಅಗಲಿಸಿರಬೇಕು. ನನ್ನನ್ನು ಕೌಸಲ್ಯಾದೇವಿಯು ಬಹುಕಾಲ ರಕ್ಷಿಸಿ ನಾನು ಪ್ರಬುದ್ಧನಾದರೆ ತಾನು ಸುಖದಲ್ಲಿರಬಹುದೆಂದು ಮನಸ್ಸಿನಲ್ಲಿ ಯೋಚಿಸಿಕೊಂಡಿದ್ದಳು.

ಸಂತೋಷಪಡುತ್ತ ಗಂಗಾಯಮುನಾಸಂಗಮದ ಸಮೀಪಕ್ಕೆ ಹೋದನು. ಅಲ್ಲಿ ಲಕ್ಷ್ಮಣನನ್ನು ನೋಡಿ ಲಕ್ಷ್ಮಣ, ಪ್ರಯಾಗದ ಸುತ್ತಲೂ ಯಜ್ಞಪುರುಷನ ಧ್ವಜವಾದ ಹೋಮಧೂಮವು ದೊಡ್ಡದಾಗಿ ಏಳುತ್ತಿದೆ, ನೋಡು. ಇದೇ ಭರದ್ವಾಜಮುನೀಶ್ವರನ ಆಶ್ರಮವಾಗಿರಬೇಕು. ಇದು ಗಂಗಾಯಮುನಾಸಂಗಮಸ್ಥಳ. ಇಲ್ಲಿ ಆ ನದಿಗಳ ತೆರೆಗಳ ಹೊಯ್ದುಗಳ ಧ್ವನಿಯು ಕೇಳಿಸುತ್ತಿದೆ. ಈ ವನದಲ್ಲಿ ಸಂಚರಿಸಿಕೊಂಡಿರುವ ಮನುಷ್ಯರು ಮರಗಳನ್ನು ಕಡಿದು ಬಯಲುಮಾಡಿ

ಕೊಂಡಿದ್ದಾರೆ. ಆ ಬಯಲ ಮಧ್ಯದಲ್ಲಿ ಭರದ್ವಾಜಮುನೀಶ್ವರನ ಆಶ್ರಮದಲ್ಲಿರುವ ನಾನಾಪ್ರಕಾರವಾದ ವೃಕ್ಷಗಳು ಕಾಣಿಸುತ್ತಿವೆ ಎಂದು ನುಡಿದನು. ಆ ಬಳಿಕ ಸೂರ್ಯನು ಅಸ್ತಂಗತನಾಗಲು ಶ್ರೀರಾಮನು ಗಂಗಾಯಮುನಾಸಂಗಮದಲ್ಲಿದ್ದ ಭರದ್ವಾಜಾಶ್ರಮವನ್ನು ಪ್ರವೇಶಿಸಿದನು. ಸ್ವಲ್ಪದೂರ ನಡೆದು ಭರದ್ವಾಜಮುನೀಶ್ವರನ ದರ್ಶನ ವನ್ನು ಮಾಡಿದನು; ಸೀತಾಲಕ್ಷ್ಮಣಸಮೇತನಾಗಿ ಆ ಮುನೀಶ್ವರನಿಗೆ ಅಭಿನಂದಿಸಿ ಆತನನ್ನು ಕುರಿತು ಮುನೀಶ್ವರರೆ, ನಾನು ದಶರಥರಾಯನ ಕುಮಾರನಾದ ರಾಮ. ಈತನು ನನ್ನ ತಮ್ಮನಾದ ಲಕ್ಷ್ಮಣ, ಈಕೆಯು ಜನಕರಾಯನ ಮಗಳಾದ ನನ್ನ ಪತ್ನಿ ಸೀತಾದೇವಿ. ಇವರು ದಶರಥರಾಯನ ಅಪ್ಪಣೆಯಿಂದ ಕಾಡಿಗೆ ಬಂದ ನನ್ನ ಮೇಲಣ ವಿಶ್ವಾಸದಿಂದ ನನ್ನ ಸಂಗಡ ಬಂದರು. ನಾನು ದಶರಥರಾಯನ ಆಜ್ಞೆಯಿಂದ ಸೀತಾಲಕ್ಷ್ಮಣರ ಸಮೇತನಾಗಿ ವನಕ್ಕೆ ಬಂದು ಕಂದ ಮೂಲ ಫಲಾಹಾರಗಳನ್ನು ಮಾಡಿಕೊಂಡು ಸಂಚರಿಸುತ್ತಿದ್ದೇನೆ ಎಂದು ನುಡಿದನು. ಭರದ್ವಾಜಮುನಿಯು ಶ್ರೀರಾಮನಿಗೆ ನಾನಾವಿಧವಾದ ಕಂದ ಮೂಲ ಫಲಗಳನ್ನು ತಂದು ಕೊಟ್ಟು ಆತನು ವಾಸಮಾಡಿಕೊಂಡಿರುವುದಕ್ಕೆ ಒಂದು ಪರ್ಣಶಾಲೆಯನ್ನು ತೋರಿಸಿ ಸತ್ಕಾರಗಳನ್ನು ಮಾಡಿದನು. ಅದರಿಂದ ಸಂತುಷ್ಟಚಿತ್ರನಾಗಿ ಕುಳಿತಿದ್ದ ಶ್ರೀರಾಮನನ್ನು ಕುರಿತು ಎಲೈ ಶ್ರೀರಾಮನೆ, ನೀನು ಅಪೂರ್ವವಾಗಿ ಈ ಸ್ಥಳಕ್ಕೆ ಬಂದೆ. ದಶರಥರಾಯನು ನಿನ್ನನ್ನು ನಿಷ್ಕಾರಣವಾಗಿ ವನಕ್ಕೆ ಕಳುಹಿಸಿದ ವೃತ್ತಾಂತವನ್ನು ಕೇಳಿದೆನು.

**ಮುಂದುವರಿಯುವುದು...**

# ಗರ್ವ



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಕೆಲವರು ತಾವು ಮಾಡಿದ ಸಮಾಜಮುಖಿ ಕಾರ್ಯಗಳಲ್ಲಿ ಯಶಸ್ಸು ಕಂಡಾಗ ಸಂತಸ ಪಡುತ್ತಾರೆ,ಹಾಗಿರುವುದು ತಪ್ಪಲ್ಲ, ಆದರೆ ಬೀಗುವುದು ತಪ್ಪಿನಿಸುತ್ತದೆ. ಆ ಮೂಲಕ ಕೆಲವರು ಸಲ್ಲದ ವರ್ತನೆಗೆ ಮುಂದಾಗುತ್ತಾರೆ. ಅವರ ಕಾರ್ಯದ ಪ್ರಯೋಜನ ಪಡೆದವರಲ್ಲಿ ಕೆಲವರು ಅವರನ್ನು ಮುಖಸ್ತುತಿ ಮಾಡುತ್ತಿರುವವರೂ ಇರುತ್ತಾರೆ. ಅದರಿಂದಾಗಿ ಕೆಲವರು ಅಹಂಕಾರಿಗಳಾಗುತ್ತಾರೆ. ಇನ್ನು ಕೆಲವರು ತಮ್ಮನ್ನು ಪ್ರಶಂಸೆ ಮಾಡುವು ದನ್ನು ತಿಳಿದು ನವಚೈತನ್ಯ ಹೊಂದುತ್ತಾರೆ.

ಅಹಂಕಾರಿಗಳ ವ್ಯಕ್ತಿತ್ವ ಮಸುಕಾಗುತ್ತದೆ. ಅಗೌರವಕ್ಕೂ ಕಾರಣವಾಗುವ ಸಾಧ್ಯತೆ ಉಂಟಾಗುತ್ತದೆ. ತನ್ನ ಸಾಧನೆ ಮೂಲಕ ಸಾರ್ವಜನಿಕ ಕ್ಷೇತ್ರದಲ್ಲಿ ಗೌರವಾದರಗಳಿಗೆ ಕಾರಣರಾಗಬೇಕು. ಸ್ವಂತಿಕೆಗಾಗಿ ಹಾಗೂ ಸಮುದಾಯದ ಜನರ ಅಗತ್ಯ, ಕೊರತೆ ನಿವಾರಿಸುವುದಕ್ಕಾಗಿ ಪ್ರಯತ್ನಿಸುವುದು ಪ್ರಜ್ಞಾವಂತಿಕೆಯ ಲಕ್ಷಣವೆನಿಸುತ್ತದೆ, ವ್ಯಕ್ತಿಯ ಕಾರ್ಯ ಹಾಗೂ ಅಭಿವ್ಯಕ್ತಿ ಜನರು ಅವರ ಹತ್ತಿರ ಹೋಗುವಂತೆ ಮಾಡುತ್ತಿರ ಬೇಕು, ಇಲ್ಲದೆ ಹೋದರೆ ಸಿಡಿದು ಹೋಗುತ್ತಾರೆ. ಅದರಿಂದ ಮನಸ್ಸಿಗೆ ಬಿಸಿ ತಾಗುತ್ತದೆ.

**ಜನರಿಗೆ ಉಪಯುಕ್ತ ಕಾರ್ಯ ಮಾಡದಿದ್ದರೆ ಅಪಾಯವಿಲ್ಲ:** ಮಾಡುವದರಲ್ಲಿ ಸಭ್ಯತೆಯ ಉಪಾಯ



**ದನ ,ಭೂ ಒಡೆತನ ಹಾಗೂ ಅಧಿಕಾರ ಇದ್ದವರು ಸಜ್ಜೆಯ ತೆನೆಯಂತಾಗ ಬಾರದು. ಮನುಷ್ಯ ಹೃದಯದ ರೆಕ್ಕೆ ಯೋಪಾದಿ ಇರುವ ನಡತೆ, ಹಾಗೂ ಜ್ಞಾನದಿಂದ ಉತ್ತಮನಾಗಬೇಕು, ಜ್ಞಾನ ವೆನ್ನುವುದು ಅಮೃತಕ್ಕೆ ಸಮಾನವಾದುದು. ಅದಕ್ಕೆ ಸಮನಾದ ಸಾಧನೆ ಮತ್ತೊಂದಿಲ್ಲ ಎಂದು ಶೃತಿ ತಿಳಿಸುತ್ತದೆ.**

ವಿದೆ ಬೇಕು. ನಾನು, ನನ್ನಿಂದ ಎಂಬ ಅಹಂಕಾರ ದಿಂದ ಕುಟುಂಬದ ಸದಸ್ಯರೇ ಸಿಡಿದೇಳುತ್ತಾರೆ, ಅಂದಮೇಲೆ ಸ್ನೇಹಿತರು ಶರ್ತುಗಳಾಗದಿರಬಹುದೇ? ಈ ಸತ್ಯವನ್ನು ತಿಳಿದ ಮೇಲೆ ವ್ಯಕ್ತಿ ನಾನು ಎಂಬ ದುರಭಿಮಾನ ತೊರೆಯಬೇಕು, ಅಂತಹ ಗುಣ, ಸ್ವಭಾವದಿಂದ ಶತ್ರುಗಳೂ ಮಿತ್ರರಾಗುತ್ತಾರೆ.ನಾವು ಬದುಕಿದರೂ, ವಿಧಿಯಾಟದಿಂದ ಸದುಸ್ಯೆಗಳು ಉಂಟಾಗುವ ಸಾಧ್ಯತೆಯೂ ಇರುತ್ತದೆ. ಇವುಗಳಿಂದ ಹೊರ ಬರಲು ದೊಂದಿಗೆ ಬೆರೆಯುವದು, ಸರಳ ಹಾಗೂ ಸಮಾನ ಮನಸ್ಕರೊಂದಿಗೆ ನಿಕಟ ಸ್ನೇಹ ತುಂಬ ಅಗತ್ಯ. ಕೊಟ್ಟದ್ದು ತನಗೆ ಬಚ್ಚಿಟ್ಟದ್ದು ಪರರಿಗೆ ಕೊಟ್ಟದ್ದು ಕೆಟ್ಟತೆನಬೇಡ, ಅದು ಮುಂದೆ ಕಟ್ಟಿಹುದು ಬುತ್ತಿ ಸರ್ವಜ್ಞ. ಎಂದು ಕವಿಮಾತು ಹೇಳಿದ್ದಾರೆ. ಇಂತಹ ವಿಚಾರಗಳನ್ನು ಮಂಥನ ಮಾಡಿಕೊಂಡು ಮಾಡಿದ ಸತ್ಕಾರ್ಯ ಹಾಗೂ ಸೇವೆಯಿಂದ ಸಂತುಷ್ಟನಾಗಬೇಕು.

ಆ ಮೂಲಕ ಮನಸ್ಸು ಶಾಂತವಾಗಿರ ಬಲ್ಲದು, ಅಧಿಕಾರ ಲಾಲಸೆಯಿಂದ ಸಲ್ಲದ ಹವ್ಯಾಸಗಳ ನ್ಯಾಯ-ನೀತಿಯನ್ನು ಪಾಲಿಸುತ್ತಿರುವವರು ಬಾಳಿನ ಪವಿತ್ರಿಯ ಪಾವಿತ್ರ್ಯವನ್ನೂ ಧಾರ್ಮಿಕತೆಯನ್ನೂ ರಕ್ಷಿಸಿಕೊಳ್ಳುವರು, ಕುಟುಂಬ ದೊಂದಿಗೆ ಸಮಾಜಕ್ಕೂ ಸಂಪತ್ತಾಗಬಲ್ಲರು. ಎಷ್ಟೇ ಐಶ್ವರ್ಯವಂತನಾದರೂ ಅಹಂಕಾರಿಯಾದರೆ, ಮಾನ್ಯತೆ ದೊರೆಯದು.

ದೇಶದ ಸುವ್ಯವಸ್ಥೆಯೂ ಸಹ ಪ್ರಕೃತಿ ವಿಕೋಪದಿಂದ ಪ್ರಜ್ಞಾವಂತರು ಎಂದೂ ಕೈಕಟ್ಟಿಕೊಂಡು ಕೂರಬಾರದು. ಇಂತಹ ವ್ಯವಸ್ಥೆಯಲ್ಲಿ ಸಾಮಾನ್ಯರಿಗೆ ಸಮರ್ಥರ ನೆರವು ಮಾರ್ಗದರ್ಶನ ಆಗತ್ಯವಿರುತ್ತದೆ, ಆ ಸಂದರ್ಭದಲ್ಲಿ ಅತೃಪ್ತರಿಂದ ಸಂಕಷ್ಟಗಳನ್ನು ಅನುಭವಿಸ ಬೇಕಾಗುತ್ತದೆ. ಅಹಂಕಾರ ತೊರೆದು, ಅಡ್ಡಗಾಲು ಹಾಕುವವರ ಬಗೆಗೂ ಸಹಿಸಿ ಕೊಳ್ಳಬೇಕಾಗುತ್ತದೆ, ಆ ಮೂಲಕ ನಮ್ಮ ಮನಸ್ಸು ನೆಮ್ಮದಿ ಕಾಣುತ್ತದೆ.

ಸತ್ಕಾರ್ಯ ಮಾಡುವವನನ್ನು ಮೋಹ ಹಾಗೂ ಭ್ರಾಂತಿ ಪರಿಣಾಮ ಮಾಡಲಾರವು ಈ ಕಾರ್ಯದ ಮೂಲಕ ಅಹಂಕಾರ ಕುಗ್ಗುವುದು. ಬದುಕು ಕಹಿಯಾಗುವುದಕ್ಕೂ ಇಲ್ಲವೆ ಸಿಹಿಯಾಗುವುದಕ್ಕೂ ಆಯಾ ವ್ಯಕ್ತಿಯೇ ಕಾರಣ.

ದೇವರನ್ನು ಶಪಿಸುವುದು ವಿನಾಕಾರಣ,ದಿನವೂ ಕೆಲವು ಸಮಯವಾದರೂ ಅಂದಂದಿನ ಕೆಲಸಗಳ ಸಿಂಹಾವಲೋಕನ ಮಾಡುವುದರ ಮೂಲಕ ಮನಸೋಸಿಕೊಳ್ಳಬೇಕು. ಜೊತೆಗೆ ದೇವರ ಸ್ಮರಣೆಗೆ ಗಮನಕೊಡಬೇಕು, ಅದರಿಂದ ಅಹಂಕಾರ ವಿಮುಕ್ತಗೊಳ್ಳುವುದು.

# ಆರ್‌ವಿ ವಿಶ್ವವಿದ್ಯಾಲಯದ

## ಸ್ಕೂಲ್ ಆಫ್ ಡಿಸೈನ್ ಆಂಡ್ ಇನ್ನೋವೇಶನ್

• ಉದಯವಾಹಿನಿ,ಬೆಂಗಳೂರು

ಬೆಂಗಳೂರಿನ ಏಕೈಕ ಡಿಸೈನ್ ಸ್ಕೂಲ್ ಆಗಿರುವ ಮತ್ತು ಭಾರತದ ಕೆಲವೇ ಡಿಸೈನ್ ಸ್ಕೂಲ್‌ಗಳಲ್ಲಿ ಒಂದಾಗಿರುವ ಆರ್‌ವಿ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಡಿಸೈನ್ ಆಂಡ್ ಇನ್ನೋವೇಶನ್ (ಎಸ್‌ಡಿಐ) ಸಂಸ್ಥೆಯು ಡಿಸೈನ್, ಯಾಂತ್ರಿಕ ಬುದ್ಧಿಮತ್ತೆ ಸಂಬಂಧಿತ ವಿಶೇಷ ಕಾರ್ಯಕ್ರಮ ಎಲಿಪ್ಸಿಸ್ ಅನ್ನು ಯಶಸ್ವಿಯಾಗಿ ಆಯೋಜಿಸಿತ್ತು. ಮೂರು ದಿನಗಳ ಕಾಲ ನಡೆದ ಈ



ಕಾರ್ಯಕ್ರಮದಲ್ಲಿ ಎಐ ಮತ್ತು ಡಿಸೈನ್ ಕುರಿತಾಗಿ ಜ್ಞಾನಪೂರ್ಣ ಸಂವಾದ ನಡೆಯಿತು. ಯಾಂತ್ರಿಕ ಬುದ್ಧಿಮತ್ತೆ ಹೆಚ್ಚು ಹೆಚ್ಚು ಬಳಕೆಯಾಗುತ್ತಿರುವ ಈ ಜಗತ್ತಿನಲ್ಲಿ ಡಿಸೈನ್‌ನಲ್ಲಿ ತೊಡಗಿಕೊಂಡಿರುವ ವಿದ್ಯಾರ್ಥಿಗಳ ಕಲಿಕೆ ಮತ್ತು ತೊಡಗಿಕೊಳ್ಳುವಿಕೆಯ ಕುರಿತು ಚರ್ಚೆ ನಡೆಯಿತು. ಎಐ: ವಿತ್, ಫಾರ್, ಆಂಡ್ ಅಗೇನ್ಸ್ಟ್ ಎಂಬ ಥೀಮ್ ಅಡಿಯಲ್ಲಿ ಬೆಂಗಳೂರಿನ ಪ್ರತಿಷ್ಠಿತ ಇಂಟರ್‌ನ್ಯಾಷನಲ್ ಸೆಂಟರ್‌ನಲ್ಲಿ ಈ ಕಾರ್ಯಕ್ರಮ ನಡೆದಿದ್ದು, ಎಸ್‌ಡಿಐನ ಎಲ್ಲಾ ಬ್ಯಾಚ್‌ಗಳು ಮತ್ತು ವಿಭಾಗಗಳ ವಿದ್ಯಾರ್ಥಿಗಳ ಕೆಲಸವನ್ನು ಪ್ರದರ್ಶಿಸಲಾಯಿತು. ಈ ಕಾರ್ಯ ಕ್ರಮವನ್ನು ಶಿಕ್ಷಕರ ಮಾರ್ಗದರ್ಶನದಲ್ಲಿ ಸಂಪೂರ್ಣವಾಗಿ ವಿದ್ಯಾರ್ಥಿಗಳೇ ಆಯೋಜಿಸಿದ್ದರು.



ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಫ್ಲೈಫಿಶ್.ಎಐ ಸಂಸ್ಥೆಯ ಸಂಸ್ಥಾಪಕ ಮತ್ತು ಸಿಇಒ ಡಾ. ಶಿರ್ಧರ್ ಮಾರಿ ಅವರು, ಯಾಂತ್ರಿಕ ಬುದ್ಧಿಮತ್ತೆಯು ಎಲ್ಲವನ್ನೂ ಬದಲಿಸುತ್ತಿರುವ ಈ ವೇಳೆಯಲ್ಲಿ ಡಿಸೈನರ್‌ನ ಪಾತ್ರವೂ ಬದಲಾಗುತ್ತಿದೆ. ಈಗ ನಾವು ಏನು ಮಾಡುತ್ತೇವೆ ಎಂಬುದು ಮುಖ್ಯವಾಗುತ್ತಿಲ್ಲ, ಯಾಕೆ ಮಾಡುತ್ತೇವೆ ಎಂಬುದು ಮುಖ್ಯವಾಗುತ್ತದೆ ಎಂದರು.

ಗೋಷ್ಠಿಯಲ್ಲಿ ಮಾತನಾಡಿದ ಎಸ್‌ಡಿಐನ ಪ್ರೊ ವಿಸಿ ಮತ್ತು ಡೀನ್ ಆಗಿರುವ ಡಾ. ಅನುರಾಧಾ ಚಟರ್ಜಿ ಅವರು, ಈ ಕಾರ್ಯಕ್ರಮವು ಡಿಸೈನ್‌ನಲ್ಲಿ ಎಐ ಅನ್ನು ಹೇಗೆ ಬಳಸುವುದು ಎಂಬ ವಿಚಾರಕ್ಕೆ ಮಾತ್ರ ಸೀಮಿತವಾಗಿರದೆ ಡಿಸೈನ್‌ನ ಅಸ್ತಿತ್ವದ ಸವಾಲನ್ನು ಮತ್ತು ಪ್ರತಿಕ್ರಿಯಿಸದೆಯೇ ಅದಕ್ಕೆ ಸ್ಪಂದಿಸುವ ಮಾರ್ಗಗಳನ್ನು ಕಂಡುಕೊಳ್ಳಲು ಸಹಾಯವಾಗಲಿದೆ ಎಂದು ನಾವು ಭಾವಿಸಿದ್ದೇವೆ ಎಂದರು. ವಿಶ್ವ ಡಿಸೈನ್ ಸಂಸ್ಥೆಯ ಚುನಾಯಿತ ಅಧ್ಯಕ್ಷ ಪ್ರೊ. ಪ್ರದ್ಯುಮ್ನ ವ್ಯಾಸ್ ಅವರು ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ವಿದ್ಯಾರ್ಥಿಗಳು ಆಶಾವಾದ, ಪ್ರಾಮಾಣಿಕತೆ ಮತ್ತು ಸಮಗ್ರತೆ ಈ ಮೂರು ವಿಚಾರಗಳಲ್ಲಿ ಯಾವತ್ತೂ ರಾಜಿಯಾಗಬಾರದು. ನೀವು ತಲೆಯನ್ನು ಭುಜದ ಮೇಲೆಯೇ ಇರುವಂತೆ ನೋಡಿಕೊಂಡು ವಿನಮ್ರರಾಗಿರಬೇಕು ಎಂದರು.

# ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ ಹೈಅಲರ್ಟ್

• ಉದಯವಾಹಿನಿ,ಬೆಂಗಳೂರು

ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭದ್ರತಾ ಪಡೆ ಸಿಐಎಸ್‌ಎಫ್ ಸಿಬ್ಬಂದಿಯಿಂದ ಹೆಚ್ಚಿನ ಭದ್ರತೆ ಒದಗಿಸಲಾಗಿದೆ. ಪಾಕ್ ಗಡಿ ಭಾಗದ ಏರ್‌ಪೋರ್ಟ್‌ಗೆ ತೆರಳುವ ವಿಮಾನಗಳನ್ನು ರದ್ದು ಮಾಡಲಾಗಿದೆ. ಈ ಮಧ್ಯೆ ಪ್ರಯಾಣಿಕರು ತಮ್ಮ ವಿಮಾನ ನಿರ್ಗಮನದ ಕನಿಷ್ಠ ಮೂರು ಗಂಟೆಗಳ ಮುನ್ನ ವಿಮಾನ ನಿಲ್ದಾಣಕ್ಕೆ ಆಗಮಿಸುವಂತೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಡಳಿತ ಮಂಡಳಿ ಪ್ರಯಾಣಿಕರಿಗೆ ಸೂಚನೆ ನೀಡಿದೆ. ಈ ಬಗ್ಗೆ ಟ್ವೀಟ್ ಮಾಡಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಡಳಿತ ಮಂಡಳಿ, ದೇಶಾದ್ಯಂತ ಘೋಷಿಸಲಾಗಿರುವ ಭದ್ರತಾ ಎಚ್ಚರಿಕೆಯ ಹಿನ್ನಲೆಯಲ್ಲಿ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ಭದ್ರತಾ ತಪಾಣೆಯನ್ನು ಹೆಚ್ಚಿಸಲಾಗಿದೆ ಎಂದು ತಿಳಿಸಿದೆ.




**ಕೆಂಪೇಗೌಡ ಅಂತಾರಾಷ್ಟ್ರೀಯ ಏರ್‌ಪೋರ್ಟ್ ಟ್ವೀಟ್:** ಪ್ರಯಾಣಿಕರು ತಮ್ಮ ವಿಮಾನ ನಿರ್ಗಮನದ ಕನಿಷ್ಠ ಮೂರು ಗಂಟೆಗಳ ಮುನ್ನ ವಿಮಾನ ನಿಲ್ದಾಣಕ್ಕೆ ಆಗಮಿಸುವ ಮೂಲಕ, ಚೆಕ್–ಇನ್, ಭದ್ರತಾ ತಪಾಸಣೆ ಮತ್ತು ಬೋರ್ಡಿಂಗ್ ಪ್ರಕ್ರಿಯೆಯನ್ನು ಸುಗಮವಾಗಿ ಕೈಗೊಳ್ಳಬಹುದು ಎಂದು ಹೇಳಿದೆ.ಮುಂದುವರೆದು, ಪ್ರಯಾಣಿಕರು ತಾವು ಪ್ರಯಾಣ ಮಾಡಲಿರುವ ವಿಮಾನಗಳ ವೇಳಾಪಟ್ಟಿಗಳ ಕುರಿತು ಆಯಾ ವಿಮಾನಯಾನ ಸಂಸ್ಥೆಗಳ ಜೊತೆಗೆ ಸಂಪರ್ಕಿಸಬೇಕೆಂದು ವಿನಂತಿಸಲಾಗಿದ್ದು, ಸಹಕರಿಸುವಂತೆ ಮನವಿ ಮಾಡಿದೆ.

**ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಹೈಅಲರ್ಟ್:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿಯ ಏರ್‌ಪೋರ್ಟ್ ಭದ್ರತಾ ಪಡೆ, ಸಿಐಎಸ್‌ಎಫ್ ಸಿಬ್ಬಂದಿಯಿಂದ ಭದ್ರತೆ ಒದಗಿಸಲಾಗಿದೆ. ವಿಮಾನ ನಿಲ್ದಾಣದಲ್ಲಿ ಶಸ್ತ್ರಸಜ್ಜಿತವಾಗಿ ಭದ್ರತಾ ಪಡೆಗಳಿಂದ ರೌಂಡ್ಸ್ ಹಾಕಲಾಗಿದೆ. ಏರ್‌ಪೋರ್ಟ್‌ನಲ್ಲಿ ಹೆಚ್ಚುವರಿ ಸಿಬ್ಬಂದಿ ನಿಯೋಜನೆ ಮಾಡುವ ಮೂಲಕ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಏರ್‌ಪೋರ್ಟ್‌ಗೆ ಬರುವ ವಾಹನಗಳು, ಪ್ರಯಾಣಿಕರ ಮೇಲೆ ಹದ್ದಿನಕಣ್ಣಿಡಲಾಗಿದೆ.

# ಮಕ್ಕಳ ವೈವಾಹಿಕ ಜೀವನದಲ್ಲಿ ಹೆತ್ತವರು ಮೂಗು ತೂರಿಸಬಾರದು ಯಾಕೆ ಗೊತ್ತಾ?

ನಮ್ಮ ದೇಶದಲ್ಲಿ ವಿವಾಹ ಬಂಧಕ್ಕೆ ಹೆಚ್ಚಿನ ಮಹತ್ವವಿದೆ. ಇದರಲ್ಲಿ ಕೇವಲ ಗಂಡು ಹೆಣ್ಣು ಒಂದು ಸಂಬಂಧದಲ್ಲಿ ಬಂಧಿಯಾಗುವುದಲ್ಲ,ಬದಲಾಗಿ ಇಬ್ಬರ ಕುಟುಂಬ ಕೂಡಾ ಜೊತೆಯಾಗುತ್ತದೆ. ಸಂಬಂಧಗಳು ಒಳ್ಳೆಯದೇ, ಆದರೆ ಕೆಲವೊಮ್ಮೆ ವೈವಾಹಿಕ ಜೀವನದಲ್ಲಿ ಸಂಬಂಧಿಕರು ಹಸ್ತಕ್ಷೇಪ ಮಾಡಲಾರಂಭಿಸುತ್ತಾರೆ. ಅಂತಹ ಸಂದರ್ಭದಲ್ಲಿ ಅವರಿಂದ ನಿಮಗೆ ಅನುಕೂಲ ಆಗುವುದಕ್ಕಿಂತ ಅನಾನುಕೂಲವಾಗುವುದೇ ಹೆಚ್ಚು.

**ಹೆತ್ತವರ ಕೆಲವು ಬಿಟ್ಟಿ ಸಲಹೆಗಳು:** ಹಲವು ಬಾರಿ ನವವಿವಾಹಿತ ದಂಪತಿಗಳಿಗೆ ನೀಡಲಾಗುವ ಸಲಹೆಗಳು ಅವರಿಗೆ ಒಳ್ಳೆಯದನ್ನು ಮಾಡುವ ಬದಲು ಹಾನಿಯನ್ನುಂಟುಮಾಡುತ್ತವೆ. ಅಂತಹ ಸಲಹೆಗಳು ಹೆಚ್ಚಾಗಿ ಅವರ ಸ್ವಂತ ಪೋಷಕರಿಂದ ಬರುತ್ತವೆ, ಇದು ವಿವಾಹಿತ ದಂಪತಿಗಳ ಜೀವನದಲ್ಲಿ ಬಿರುಗಾಳಿಯನ್ನು ಉಂಟುಮಾಡುತ್ತದೆ. ಪೋಷಕರ ತಮ್ಮ ಮಕ್ಕಳ ವೈವಾಹಿಕ ಜೀವನದಲ್ಲಿ ಮೂಗು ತೂರಿಸಬೇಕೆ? ಅವರಿಗೆ ಅನಾವಶ್ಯಕ ಸಲಹೆಯನ್ನು ನೀಡಬೇಕೆ? ಇದು ಅವರ ವೈವಾಹಿಕ ಜೀವನದ ಮೇಲೆ ಯಾವ ರೀತಿ ಪರಿಣಾಮ ಬೀರಬಲ್ಲದು ಎನ್ನವುದನ್ನು ತಿಳಿಯೋಣ.

**ನಿಮ್ಮ ಜೀವನ ಸಂಗಾತಿ ಅವರ ಆಯ್ಕೆಯಲ್ಲದಿದ್ದರೆ:** ಪೋಷಕರು ತಮ್ಮ ಮಗಳು ಅಥವಾ ಮಗನ ಆಯ್ಕೆ ಇಷ್ಟಪಡದಿದ್ದರೆ, ಅವರು ಯಾವುದೋ ನೆಪವನ್ನು ನೀಡಿ ತಮ್ಮ ಸಂಗಾತಿಯ ನ್ಯೂನತೆಗಳನ್ನು ಎತ್ತಿ ತೋರಿಸುತ್ತಾರೆ. ಹೀಗೆ ಮಾಡುವುದರಿಂದ, ನಿಮ್ಮ ಮಕ್ಕಳು ಯಾವ ಕಡೆ ಹೋಗಬೇಕೆಂಬ ಸಂದಿಗ್ಧತೆಯಲ್ಲಿ ಸಿಲುಕಿಕೊಳ್ಳಬಹುದು. ಹೆತ್ತವರು ನಿಮ್ಮ ಸಂಗಾತಿಯ ಬಗ್ಗೆ ನಿಮ್ಮ ಕಿವಿ ಚುಚ್ಚಲು ಶುರು ಮಾಡಬಲ್ಲರು.

**ವೈವಾಹಿಕ ಜೀವನದಲ್ಲಿ ಅತೃಪ್ತರಾಗಿರುವ ಪೋಷಕರು:** ತಮ್ಮ ವೈವಾಹಿಕ ಜೀವನದಲ್ಲಿ ಸಮಸ್ಯೆಗಳನ್ನು ಎದುರಿಸಿದ ಪೋಷಕರಿಗೆ ಮದುವೆಯ ಬಗ್ಗೆ ಒಳ್ಳೆಯ ಅಭಿಪ್ರಾಯವಿರುವುದಿಲ್ಲ. ಅತೃಪ್ತ ವೈವಾಹಿಕ ಜೀವನವನ್ನು ನಡೆಸಿದ ಮಹಿಳೆಯರು ತಮ್ಮ ಮಕ್ಕಳಿಗೆ ಸಕಾರಾತ್ಮಕ ಸಲಹೆಯನ್ನು ನೀಡಲು ಸಾಧ್ಯವಾಗುವುದಿಲ್ಲ. ಅವರು ತನ್ನ ಅನುಭವಗಳನ್ನು ಮಕ್ಕಳ ಮೇಲೆ ಹೇರಲು ಪ್ರಯತ್ನಿಸುತ್ತಾರೆ. ಅಂತಹ ಪರಿಸ್ಥಿತಿಯಲ್ಲಿ, ಅವರ ಮಕ್ಕಳ ವೈವಾಹಿಕ ಜೀವನದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಮತ್ತು ಕೆಲವೊಮ್ಮೆ ಅದು ವಿಚ್ಛೇದನಕ್ಕೂ ಕಾರಣವಾಗುತ್ತದೆ.

### ಮಕ್ಕಳು ಏನು ಮಾಡಬೇಕು?

**ಜೀವನಕ್ಕೆ ಸಂಬಂಧಿಸಿದ ಪ್ರಮುಖ ನಿರ್ಧಾರಗಳಲ್ಲಿ ಮಕ್ಕಳು ತಮ್ಮ ಹಿರಿಯರಿಂದ ಸಲಹೆ ಪಡೆಯುವುದು ಬಹಳ ಸಹಜ. ಆದರೆ ಮಕ್ಕಳು ಯಾವ ವಿಷಯಗಳ ಬಗ್ಗೆ ಅವರ ಸಲಹೆ ತೆಗೆದುಕೊಳ್ಳಬೇಕು ಮತ್ತು ಯಾವುದನ್ನು ತೆಗೆದುಕೊಳ್ಳಬಾರದು ಎಂಬುದನ್ನು ತಿಳಿದುಕೊಳ್ಳಬೇಕು. ಮದುವೆಯ ನಂತರ ಪ್ರತಿಯೊಂದು ಸಣ್ಣ ಪುಟ್ಟ ವಿಷಯವನ್ನು ಪೋಷಕರೊಂದಿಗೆ ಹಂಚಿಕೊಳ್ಳುವುದರಲ್ಲಿ ಸಮಸ್ಯೆಗಳು ಉಂಟಾಗಬಹುದು. ಆದ್ದರಿಂದ, ಎಲ್ಲವನ್ನೂ ಹಂಚಿಕೊಳ್ಳುವುದನ್ನು ತಪ್ಪಿಸಿ.**



**ಮಕ್ಕಳು ಎಷ್ಟೇ ದೊಡ್ಡವರಾದ್ರೂ ಹೆತ್ತವರಿಗೆ ಮಕ್ಕಳೇ:** ಮಕ್ಕಳು ಬೆಳೆದು ದೊಡ್ಡವರಾಗಿ ಮದುವೆಯಾಗುತ್ತಾರೆ, ಆದರೆ ಪೋಷಕರು ತಮ್ಮ ಮಕ್ಕಳು ಈಗ ದೊಡ್ಡವರಾಗಿದ್ದಾರೆ ಎಂಬುದನ್ನು ಒಪ್ಪಿಕೊಳ್ಳಲು ಸಿದ್ಧರಿರೋದಿಲ್ಲ. ತಮ್ಮ ಮಕ್ಕಳಿಗೆ ಪ್ರತಿ ಹಂತದಲ್ಲೂ ತಮ್ಮ ಬೆಂಬಲ ಅಥವಾ ಸಲಹೆಯ ಅಗತ್ಯವಿದೆ ಎಂದು ಅವರು ಭಾವಿಸುತ್ತಾರೆ. ಈ ಪರಿಸ್ಥಿತಿಯಲ್ಲಿ, ಅವರ ಮಕ್ಕಳು ತಮ್ಮ ಜವಾಬ್ದಾರಿಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಗುವುದಿಲ್ಲ ಮತ್ತು ಅವರ ವೈವಾಹಿಕ ಜೀವನದಲ್ಲಿ ಸಮಸ್ಯೆಗಳು ಶುರುವಾಗಲು ಪ್ರಾರಂಭಿಸುತ್ತವೆ.

**ಪೋಷಕರು ತಿಳಿದುಕೊಳ್ಳಲೇಬೇಕಾದದ್ದು:** ಅನೇಕ ಬಾರಿ ಪೋಷಕರು ತಮ್ಮ ಮಕ್ಕಳನ್ನು ಬೆಳೆಸಿದ್ದರಿಂದ, ತಮ್ಮ ಜೀವನದ ಪ್ರತಿಯೊಂದು ನಿರ್ಧಾರವನ್ನು ತೆಗೆದುಕೊಳ್ಳುವ ಹಕ್ಕು ತಮಗೆ ಇದೆ ಎಂದು ಭಾವಿಸುತ್ತಾರೆ. ಅದು ಮದುವೆ ಅದರ ನಂತರದ ಜೀವನವನ್ನು ಸಹ ಒಳಗೊಂಡಿದೆ. ಹೊಸ ಮದುವೆಯಲ್ಲಿ ಪೋಷಕರ ಹಸ್ತಕ್ಷೇಪ ಹೆಚ್ಚಾದರೆ, ದಂಪತಿಗಳು ಪರಸ್ಪರ ಒಂದೇ ಮಾನದಂಡಗಳ ಮೇಲೆ ನಿರ್ಣಯಿಸಲು ಪ್ರಾರಂಭಿಸುತ್ತಾರೆ. ಅವರಿಗೆ ಬಾಂಧವ್ಯ ಬೆಳೆಸಿಕೊಳ್ಳಲು ಅವಕಾಶ ಸಿಗುವುದಿಲ್ಲ. ಪೋಷಕರು ತಮ್ಮ ವಿವಾಹಿತ ಮಕ್ಕಳಿಗೆ ಸಲಹೆ ನೀಡಬೇಕಾದರೆ, ಯಾವಾಗ ಮಾತನಾಡಬೇಕು, ಯಾವಾಗ ನಿಲ್ಲಿಸಬೇಕು ಎಂಬುದನ್ನು ಅವರು ತಿಳಿದಿರಬೇಕು.



# ಮೋಡಿ ಮಧುಮೇಹ ಸಂಶೋಧನೆಯಲ್ಲಿ ದೊಡ್ಡ ಯಶಸ್ಸುಗಳಿಸಿದ ಸಂಸ್ಥೆ

• ಉದಯವಾಹಿನಿ,ಬೆಂಗಳೂರು

ಭಾರತದ ಚೆನ್ನೈನಲ್ಲಿರುವ ಮದ್ರಾಸ್ ಡಯಾಬಿಟಿಸ್ ರಿಸರ್ಚ್ ಫೌಂಡೇಶನ್ (ಎಂಡಿಆರ್‌ಎಫ್) ಅಮೆರಿಕದ ಮಿಸ್ಸೌರಿಯ ಸೇಂಟ್ ಲೂಯಿಸ್‌ನ ವಾಷಿಂಗ್ಟನ್ ಯೂನಿವರ್ಸಿಟಿ ಸ್ಕೂಲ್ ಆಫ್ ಮೆಡಿಸಿನ್ ನ ಸಂಶೋಧಕರು ಜಂಟಿಯಾಗಿ ನಡೆಸಿದ ಸಂಶೋಧನೆಯಲ್ಲಿ ಮಧುಮೇಹ ಒಂದು ಅಪರೂಪಕದ, ಆನುವಂಶಿಕ ಪ್ರಕಾರವಾದ ಮೋಡಿ ಮಧುಮೇಹದ ಹೊಸ ಉಪ ಪ್ರಕಾರವನ್ನು ಕಂಡುಹಿಡಿದಿದ್ದಾರೆ. ಈ ಹೊಸ ಆವಿಷ್ಕಾರವು ಈ ರೀತಿಯ ಮಧುಮೇಹ ರೋಗದ ರೋಗಪತ್ತೆ ಮತ್ತು ಚಿಕಿತ್ಸಾ ವಿಧಾನವನ್ನು ದೊಡ್ಡ ಮಟ್ಟದಲ್ಲಿ ಬದಲಾಯಿಸಲಿದೆ ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.

ಸಾಮಾನ್ಯವಾಗಿ ಬಾಲ್ಯ ಅಥವಾ ಯೌವನದಲ್ಲಿ ಕಂಡುಬರುವ ಮೆಚ್ಯುರಿಟಿ– ಆನ್‌ಸೆಟ್ ಡಯಾಬಿಟಿಸ್ ಆಫ್ ದಿ ಯಂಗ್




(ಮೋಡಿ) ಎಂಬ ಒಂದು ಅಪರೂಪದ, ಆನುವಂಶಿಕ ಮಧುಮೇಹಕ್ಕೆ ಸಂಬಂಧಿಸಿದ ಈ ಸಂಶೋಧನೆ ಕುರಿತ ವರದಿಯು ಇದೀಗ ಅಮೆರಿಕನ್ ಡಯಾಬಿಟಿಸ್ ಅಸೋಸಿಯೇಶನ್ ಪ್ರಕಟಿಸುವ ಪ್ರತಿಷ್ಠಿತ ಡಯಾಬಿಟಿಸ್ ಜರ್ನಲ್‌ನಲ್ಲಿ ಆನ್‌ಲೈನ್ ಆವೃತ್ತಿಯಲ್ಲಿ ಪ್ರಕಟಗೊಂಡಿದೆ. ಭಾರತದಲ್ಲಿ ಮೋಡಿ ಮಧುಮೇಹ ಹೊಂದಿರುವ ರೋಗಿಗಳ ಆನುವಂಶಿಕ ಮತ್ತು ಕಾರ್ಯನಿರ್ವಹಣಾ ವಿಶ್ಲೇಷಣೆಯನ್ನು ಆಧರಿಸಿ ಈ ಸಂಶೋಧನೆ ನಡೆಸಲಾಗಿದೆ. ಈ ಸಂಶೋಧನೆಯು ಮೇದೋಜ್ಜೀರಕ ಗ್ರಂಥಿಯ ಬೀಟಾ ಕೋಶಗಳ ಕಾರ್ಯನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುವ ಎಬಿಸಿಸಿ8 ಜೀನ್ ಮೇಲೆ ಪರಿಣಾಮ ಉಂಟು ಮಾಡುವ ಮೋಡಿಯ ಉಪಪ್ರಕಾರದ ಕಾರ್ಯ ವಿಧಾನವನ್ನು ಬಹಿರಂಗಪಡಿಸಿದೆ.

**ಮೋಡಿ ಮಧುಮೇಹದ ಉಪಪ್ರಕಾರದ ಸಂಶೋಧನೆ**

ಈ ಕುರಿತು ಅಮೆರಿಕದ ಮಿಸ್ಸೌರಿಯ ಸೇಂಟ್ ಲೂಯಿಸ್‌ನ ವಾಷಿಂಗ್ಟನ್ ಯೂನಿ ವರ್ಸಿಟಿ ಸ್ಕೂಲ್ ಆಫ್ ಮೆಡಿಸಿನ್‌ನ ಪ್ರಧಾನ ಸಂಶೋಧಕ ಪ್ರೊ. ಕಾಲಿನ್ ಜಿ. ನಿಕೋಲ್ಸ್ ಅವರು, ಸಾಮಾನ್ಯವಾಗಿ ಎಬಿಸಿಸಿ8 ಜೀನ್‌ನ ರೂಪಾಂತರಗಳು ಗೇನ್ ಆಫ್ ಫಂಕ್ಷನ್ (ಜಿಓಎಫ್) ರೂಪಾಂತರಗಳ ಮೂಲಕ ಕಾರ್ಯ ನಿರ್ವಹಿಸುತ್ತಿದ್ದು, ಅದರಿಂದ ಎಬಿಸಿಸಿ 8ನ ಪ್ರೊಟೀನ್‌ನ ಕೆಲಸ ಹೆಚ್ಚಾಗುತ್ತದೆ. ಈ ಸಮಸ್ಯೆಯು ಸಾಮಾನ್ಯವಾಗಿ ನವಜಾತ ಶಿಶುಗಳಲ್ಲಿ ನಿಯೋನೇಟಲ್ ಡಯಾಬಿಟಿಸ್ ಆಗಿ ಕಂಡುಬರುತ್ತದೆ ಮತ್ತು ವಯಸ್ಕರಲ್ಲಿ

**ಎಂಡಿಆರ್‌ಎಫ್‌ನ ಚೇರ್ ಮನ್ ಡಾ. ವಿ. ಮೋಹನ್ ಅವರು ಮಾತನಾಡಿ, ಮೋಡಿ ಮಧುಮೇಹದ ಹೊಸ ಉಪಪ್ರಕಾರವನ್ನು ಕಂಡುಹಿಡಿದಿರುವುದು ನಮ್ಮ ಉತ್ಸುಕತೆಯನ್ನು ಹೆಚ್ಚಿಸಿದೆ. ಮೋಡಿ ಮಧುಮೇಹದ ಉಪಪ್ರಕಾರದ ಸಂಶೋಧನೆಯು ಈ ರೋಗದ ಪತ್ತೆ ಕಾರ್ಯ ಮತ್ತು ಚಿಕಿತ್ಸಾ ವಿಧಾನದಲ್ಲಿ ಮಹತ್ತರ ಬದಲಾವಣೆ ತರಲಿದೆ. ಹೀಗಾಗಿ ಈ ಉಪಪ್ರಕಾರದಿಂದ ಬಳಲುತ್ತಿರುವ ವ್ಯಕ್ತಿಗಳಿಗೆ ಉತ್ತಮ ಚಿಕಿತ್ಸೆ ಮತ್ತು ಉತ್ತಮ ಆರೈಕೆ ಒದಗಿಸಲು ಸಾಧ್ಯವಾಗಲಿದೆ. ಈ ಹೊಸ (ಲಾಸ್ ಆಫ್ ಫಂಕ್ಷನ್) ಮೋಡಿ ಉಪಪ್ರಕಾರದ ರೋಗಿಗಳು ಮೋಡಿ 3, ಮೋಡಿ 1 ಮತ್ತು ಮೋಡಿ 12 ರಂತಹ ಇತರ ಮೋಡಿ ರೂಪಗಳಿಗೆ ವಿರುದ್ಧವಾಗಿ ಸಲ್ಫೋನಿಲುರಿಯಾಗಳಿಗೆ ಪ್ರತಿಕ್ರಿಯಿಸುವುದಿಲ್ಲ ಎಂದು ಹೇಳಿದರು.**

ಇದನ್ನು ಎಬಿಸಿಸಿ8 ಮೋಡಿ ಅಥವಾ ಮೋಡಿ 12 ಎಂದು ಕರೆಯಲಾಗುತ್ತದೆ. ಎಂದು ಹೇಳಿದರು. ಎಂಡಿಆರ್‌ಎಫ್‌ನ ಕಾರ್ಯನಿರ್ವಾಹಕ ವೈಜ್ಞಾನಿಕ ಅಧಿಕಾರಿ ಮತ್ತು ಮಾಲಿಕ್ಯುಲರ್ ಜೆನೆಟಿಕ್ಸ್ ವಿಭಾಗದ ಮುಖ್ಯಸ್ಥೆ ಹಾಗೂ ಎಂಡಿಆರ್‌ಎಫ್‌ನ ಪ್ರಧಾನ ಸಂಶೋಧಕಿ ಡಾ. ರಾಧಾ ವೆಂಕಟೇಸನ್ ಅವರು ಮಾತನಾಡಿ, ಮೋಡಿಯ ಹೊಸ ಆನುವಂಶಿಕ ಉಪಪ್ರಕಾರ ಪತ್ತೆಯಾಗಿರುವುದು ಮೋಡಿ ಮಧುಮೇಹದ ಕುರಿತ ನಮ್ಮ ಸಂಶೋಧನೆಯಲ್ಲಿನ ಮಹತ್ತರ ಅಭಿವೃದ್ಧಿಯನ್ನು ತೋರಿಸುತ್ತದೆ ಎಂದು ಹೇಳಿದರು.

● ಮೇ 26ರಿಂದ ಜೂನ್ 2ರ ವರೆಗೆ ನಡೆಯಲಿರುವ ಪರೀಕ್ಷೆ-2ಗೆ 5 ಸಾವಿರಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿಂದ ನೋಂದಣಿ

# ಅನುತ್ತೀರ್ಣ ವಿದ್ಯಾರ್ಥಿಗಳಿಗಾಗಿ 'ಪರಿಹಾರ ಬೋಧನೆ'

• **ಉದಯವಾಹಿನಿ ದಾವಣಗೆರೆ**

2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ -1ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗಾಗಿ ಜಿಲ್ಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯು 'ಪರಿಹಾರ ಬೋಧನೆ' ಹೆಸರಿನಡಿ ವಿಶೇಷ ತರಗತಿಗಳನ್ನು ಆರಂಭಿಸಿದೆ. ಆ ಮೂಲಕ ಎಸ್‌ಎಸ್‌ಎಲ್‌ಸಿ ಪರೀಕ್ಷೆ -2 ಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುತ್ತಿದೆ.

**ವಿಶೇಷ ತರಗತಿ ಆರಂಭ**

ಎಸ್‌ಎಸ್‌ಎಲ್‌ಸಿ ಪರೀಕ್ಷೆ -1ರಲ್ಲಿ ಜಿಲ್ಲೆಯಲ್ಲಿ 19,970 ವಿದ್ಯಾರ್ಥಿಗಳು ಹಾಜರಾಗಿದ್ದರು. ಈ ಪೈಕಿ 13,196 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದರೆ, 6,774 ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದರು. ಫೇಲ್ ಆದ ವಿದ್ಯಾರ್ಥಿಗಳಿಗೆ ಮಾನಸಿಕವಾಗಿ ಸ್ಥೈರ್ಯ ತುಂಬಿ ಪರೀಕ್ಷೆ-2ರಲ್ಲಿ ಉತ್ತೀರ್ಣರಾಗಲು ಪೂರಕವಾದ ವಾತಾವರಣ ಸೃಷ್ಟಿಸಲಾಗುತ್ತಿದೆ.

ಮೇ 26ರಿಂದ ಜೂನ್ 2ರ ವರೆಗೆ ನಡೆಯಲಿರುವ ಪರೀಕ್ಷೆ-2ಗೆ ಈಗಾಗಲೇ 5 ಸಾವಿರಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ನೋಂದಣಿಗೆ ಮೇ 10 ಕೊನೆಯ ದಿನವಾಗಿದ್ದು, ಅನುತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ತಿಳಿಸಿದೆ.

ಪರೀಕ್ಷೆ-2ಗೆ ನೋಂದಾಯಿಸಿಕೊಳ್ಳಲು ಶುಲ್ಕ ಪಾವತಿಯಿಂದ ವಿನಾಯಿತಿಯನ್ನೂ ನೀಡಿದೆ. ಶಾಲೆಯ ಮುಖ್ಯ ಶಿಕ್ಷಕರನ್ನು ಸಂಪರ್ಕಿಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ಫಲಿತಾಂಶ ಪ್ರಕಟಗೊಂಡ ಬಳಿಕ ಕ್ಷೇತ್ರ ಶಿಕ್ಷಣಾಧಿಕಾರಿಗಳು (ಬಿಇಒ), ನೋಡಲ್ ಅಧಿಕಾರಿಗಳು ಹಾಗೂ ಮುಖ್ಯ ಶಿಕ್ಷಕರೊಂದಿಗೆ ಸಭೆ ನಡೆಸಿದ್ದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪರೀಕ್ಷೆ-2ಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಿ, ಫಲಿತಾಂಶ ಸುಧಾರಣೆಗೆ ಕ್ರಮ ವಹಿಸುವಂತೆ ಸೂಚಿಸಿದ್ದರು. ವಿಷಯವಾರು ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು


☛ ಉದಯವಾಹಿನಿ ಚಿತ್ರ

ವಿಂಗಡಿಸಿ ಆಯಾ ಶಾಲೆಗಳಲ್ಲಿ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ. ಇದಕ್ಕಾಗಿ ಬೇರೆ ಬೇರೆ ಶಾಲೆಗಳ ವಿಷಯವಾರು ಪರಿಣತ ಶಿಕ್ಷಕರನ್ನೂ ಬಳಸಿಕೊಳ್ಳಲಾಗುತ್ತಿದೆ.

ಶೂನ್ಯ ಫಲಿತಾಂಶ, ನೋಟಿಸ್ ಜಾರಿ: ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೂನ್ಯ ಫಲಿತಾಂಶ ಪಡೆದ ಜಿಲ್ಲೆಯ 3 ಶಾಲೆಗಳಿಗೆ ನೋಟಿಸ್ ನೀಡಲಾಗಿದೆ. ಡಿಡಿಪಿಐ ಸೂಚನೆಯಂತೆ ಇಲ್ಲಿನ ಭರತ್ ಕಾಲೊನಿಯ ನೇತಾಜಿ ಸುಭಾಷ್‌ಚಂದ್ರ ಬೋಸ್ ಹೈಸ್ಕೂಲ್, ಸರ್ವಮಂಗಳಮ್ಮ ಮಾಗನೂರು ಬಸಪ್ಪ ಇಂಗ್ಲಿಷ್ ಮೀಡಿಯಂ ಸ್ಕೂಲ್ ಹಾಗೂ ಹೊಸ ಬೆಳವನೂರಿನ ಹೊಯ್ಸಳ ರೆಷಿಡೆನ್ಸಿಯಲ್ ಹೈಸ್ಕೂಲ್‌ನ ಮುಖ್ಯ ಶಿಕ್ಷಕರಿಗೆ ಕಾರಣ ಕೇಳಿ ಆಯಾ ಬಿಇಒಗಳು ನೋಟಿಸ್ ಜಾರಿಗೊಳಿಸಿದ್ದಾರೆ.

ಪರೀಕ್ಷೆ-1ರಲ್ಲಿ ಜಿಲ್ಲೆಯು ಶೇ 66.08 ಫಲಿತಾಂಶ ಪಡೆಯುವ ಮೂಲಕ ರಾಜ್ಯದಲ್ಲಿ 21ನೇ ಸ್ಥಾನ ಪಡೆದಿತ್ತು. 2023-24ನೇ ಶೈಕ್ಷಣಿಕ ವರ್ಷದಲ್ಲಿ ಜಿಲ್ಲೆಯು ಶೇ 74.28 ಫಲಿತಾಂಶ ಪಡೆಯುವ ಮೂಲಕ 23ನೇ ಸ್ಥಾನ ಪಡೆದಿತ್ತು. ಈ ಬಾರಿ 2 ಸ್ಥಾನ ಮೇಲಕ್ಕೆ ಜಿಗಿದು 21ನೇ ಸ್ಥಾನ ಪಡೆದಿದ್ದರೂ, ಶೇಕಡವಾರು ಫಲಿತಾಂಶದಲ್ಲಿ ಶೇ 8.2ರಷ್ಟು ಕುಸಿತ ಕಂಡಿತ್ತು.

**21 ಕೇಂದ್ರಗಳಲ್ಲಿ ಪರೀಕ್ಷೆ**

**ಎಸ್‌ಎಸ್‌ಎಲ್‌ಸಿ ಪರೀಕ್ಷೆ -2ಗೆ ಭೌಗೋಳಿಕ ವ್ಯಾಪ್ತಿ ಹಾಗೂ ವಿದ್ಯಾರ್ಥಿಗಳ ಸಂಖ್ಯೆ ಆಧರಿಸಿ ಜಿಲ್ಲೆಯಲ್ಲಿ 21 ಕೇಂದ್ರಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಈ ಹಿಂದೆ 81 ಕೇಂದ್ರಗಳಲ್ಲಿ ವಾರ್ಷಿಕ ಪರೀಕ್ಷೆಯನ್ನು ನಡೆಸಲಾಗಿತ್ತು. ಪರೀಕ್ಷೆ-1ರಂತೆ ಈ ಬಾರಿಯೂ ಸಿ.ಸಿ. ಟಿ.ವಿ ಕ್ಯಾಮೆರಾ ವೆಬ್ ಕಾಸ್ಟಿಂಗ್ ಇರಲಿದೆ. ಪರೀಕ್ಷೆ-2ರ ಫಲಿತಾಂಶ ಪ್ರಕಟವಾದ ಬಳಿಕ ಪರೀಕ್ಷೆ-3ಗೆ ಸಿದ್ಧತೆ ನಡೆಯಲಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ತಿಳಿಸಿದರು.**

**ಶೇ 80ರಷ್ಟು ಶಾಲೆಗಳಲ್ಲಿ 'ಪರಿಹಾರ ಬೋಧನೆ' ವಿಶೇಷ ತರಗತಿ ನಡೆಸಲಾಗುತ್ತಿದೆ. ಇನ್ನುಳಿದ ಶಾಲೆಗಳಲ್ಲೂ ಆರಂಭಿಸಲು ಸೂಚಿಸಲಾಗಿದೆ. ಸುಲಭವಾಗಿ ಅಂಕ ಪಡೆಯುವ ವಿಧಾನಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಲಾಗುತ್ತಿದೆ.**
**-ಜಿ.ಎಸ್.ರಾಜಶೇಖರಪ್ಪ, ಪ್ರಭಾರ ಡಿಡಿಪಿಐ**

---

# ಕೆಟ್ಟು ನಿಂತ ಬೋರ್‌ವೆಲ್‌ಗಳು, ದುರಸ್ತಿ ಕಾಣದ ಪೈಪ್‌ಲೈನ್‌ಗಳು

● ಸಮಸ್ಯೆ ಹೊತ್ತು ನಿಂತ ಶುದ್ಧ ಕುಡಿಯುವ ನೀರಿನ ಘಟಕಗಳು

• **ಉದಯವಾಹಿನಿ ಶಹಾಬಾದ್**

ಕೆಟ್ಟು ನಿಂತ ಬೋರ್‌ವೆಲ್‌ಗಳು, ದುರಸ್ತಿ ಕಾಣದ ಪೈಪ್‌ಲೈನ್‌ಗಳು, ಸಮಸ್ಯೆ ಹೊತ್ತು ನಿಂತ ಶುದ್ಧ ಕುಡಿಯುವ ನೀರಿನ ಘಟಕಗಳು, ಕಾಮಗಾರಿ ಮಾಡಿದರೂ ಮನೆಗೆ ಬಾರದ ನೀರು.

ಶಹಾಬಾದ್ ತಾಲ್ಲೂಕು ವ್ಯಾಪ್ತಿಯ ಹಳ್ಳಿಗಳಲ್ಲಿ ದಿನ ನಿತ್ಯ ಕೇಳಿಬರುವ ಮಾತುಗಳು ಇವು.

ತಾಲ್ಲೂಕು ವ್ಯಾಪ್ತಿಗಳಲ್ಲಿ ಸುಮಾರು 17 ಹಳ್ಳಿಗಳು ಬರುತ್ತವೆ. ಆದರೆ ತೊನಸನಹಳ್ಳಿ, ತರನಳ್ಳಿ, ಹೊನಗುಂಟ, ಕಡಿಹಳ್ಳಿಯಲ್ಲಿ ನಿತ್ಯ ನೀರಿನ ಸಮಸ್ಯೆ ಇದ್ದು, ಜನ ಪರದಾಡುತ್ತಿದ್ದಾರೆ. ಬೇಸಿಗೆಯಿಂದ ನೀರಿನ ಸಮಸ್ಯೆ ಇನ್ನಷ್ಟು ಉಲ್ಬಣವಾಗಿದ್ದು, ತರನಳ್ಳಿ ಗ್ರಾಮದಲ್ಲಿ ನೀರಿನ ಸಮಸ್ಯೆ ಹೆಚ್ಚಿದೆ.

ಗ್ರಾಮದಲ್ಲಿ ಸರಿಯಾದ ನೀರಿನ ಮೂಲ ಇಲ್ಲದ ಕಾರಣ ದೇವನತೆಗನೂರು ಗ್ರಾಮದಿಂದ ಪೈಪ್‌ಲೈನ್ ಮೂಲಕ ತರನಳ್ಳಿಗೆ ನೀರು ತರಲಾಗಿದೆ. ಅಲ್ಲಿ ಬಂದ ನೀರನ್ನು ಗ್ರಾಮದ ಬಾವಿಯೊಂದರಲ್ಲಿ ಶೇಖರಿಸಿ ಅಲ್ಲಿಂದ ಎತ್ತರವಾಗಿ ನಿರ್ಮಿಸಿದ ಎರಡು


☛ ಉದಯವಾಹಿನಿ ಚಿತ್ರ

ಟ್ಯಾಂಕರ್‌ಗೆ ನೀರು ತುಂಬಲಾಗುತ್ತದೆ. ಅಲ್ಲಿಂದ ಗ್ರಾಮಕ್ಕೆ ನೀರು ಸರಬರಾಜು ಮಾಡಲಾಗುತ್ತದೆ.

ಆದರೆ ಕೆಲ ಜನ ಮಧ್ಯದಲ್ಲಿಯೇ ಪೈಪ್ ಲೈನ್‌ನಿಂದ ನೇರವಾಗಿ ಮನೆಗಳಿಗೆ ಮತ್ತು ಕಲ್ಲಿನ ಪಾಲಿಶ್ ಮಷಿನ್ ಇಂಡಸ್ಟ್ರಿಯಲ್ ಉದ್ದೇಶಕ್ಕಾಗಿ ಸಂಪರ್ಕ ಪಡೆದಿರುವುದರಿಂದ ಬರುವ ಅಲ್ಪಸ್ವಲ್ಪ ನೀರೂ ಬರುತ್ತಿಲ್ಲ. ಗ್ರಾಮಕ್ಕೆ 24/7 ನೀರು ಒದಗಿಸುವ ಉದ್ದೇಶದಿಂದ ಜೆಜೆಎಂ ಕಾಮಗಾರಿ ಆರಂಭಿಸಿ ಕಾಮಗಾರಿ ಪೂರ್ಣಗೊಳಿಸಿ ಮೀಟರ್ ಅಳವಡಿಸಲಾಗಿದೆ. ಆದರೆ ನಲ್ಲಿಗಳಲ್ಲಿ ಒಂದು ಹನಿ ನೀರು ಕೂಡ ಬರುತ್ತಿಲ್ಲ. ಗ್ರಾಮದಲ್ಲಿ ನಲ್ಲಿಗಳು ಅಳವಡಿಸಿದ್ದು, ಅವುಗಳು ತುಕ್ಕು ಹಿಡಿದಿವೆ. ಮನೆಗಳ ಮುಂದೆ ನಲ್ಲಿಗಳ ಮೇಲೆ ಕಲ್ಲು ಬಂಡೆಗಳನ್ನು ಮುಚ್ಚಿರುವ ದೃಶ್ಯಗಳು ಸಾಮಾನ್ಯವಾಗಿವೆ. ಈ ವಿಷಯ ಗೊತ್ತಿದ್ದರೂ ಅಧಿಕಾರಿಗಳು ಮಾತ್ರ ಕಣ್ಣುಮುಚ್ಚಿ ಕುಳಿತಿದ್ದಾರೆ. ಹೂಳು ತುಂಬಿದ ಬಾವಿಯಲ್ಲಿ ನಿತ್ಯ ನೀರು ಸಂಗ್ರಹಿಸುತ್ತಿದ್ದಾರೆ. ಇಲ್ಲಿನ ನೀರು ಕುಡಿಯುವುದು ಹಾಗೂ ಸ್ನಾನಕ್ಕೂ ಯೋಗ್ಯವಿಲ್ಲದೇ ಗಬ್ಬು ವಾಸನೆ ಬರುತ್ತಿದೆ. ಹಲವು ಬಾರಿ ಪಂಚಾಯಿತಿ ಪಿಡಿಒ ಹಾಗೂ ತಾಲ್ಲೂಕು ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎನ್ನುತ್ತಾರೆ ಗ್ರಾಮಸ್ಥರು.

**ತಾಲ್ಲೂಕು ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇರುವುದು ಗಮನಕ್ಕೆ ಬಂದಿದೆ. ತಕ್ಷಣವೇ ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಲಾಗುವುದು.**
**-ಮಲ್ಲಿನಾಥ ರಾವೂರ, ತಾಲ್ಲೂಕು ಪಂಚಾಯಿತಿ ಇಒ**

---

# ಸರ್ಕಾರದಿಂದ ಅನುಮೋದನೆಗೊಂಡ ಯೋಜನೆಗಳ ವಿವರ ಪಟ್ಟಿ ಸಿದ್ಧಪಡಿಸಿ: ಸಚಿವ ಎಂ.ಬಿ. ಪಾಟೀಲ

• **ಉದಯವಾಹಿನಿ ವಿಜಯಪುರ**

ವಿಜಯಪುರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯ ಪೂರ್ವಸಿದ್ಧತೆಗಳ ಕುರಿತು ಕೈಗಾರಿಕೆ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಜಿಲ್ಲೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ವಿಜಯಪುರ ಭಾಗದ ಅತೀ ಅವಶ್ಯಕ ಯೋಜನೆಗಳ ಜೊತೆಗೆ ಸ್ಥಳೀಯ ಜನಪ್ರತಿನಿಧಿಗಳಿಂದ ಅವರವರ ಕ್ಷೇತ್ರಕ್ಕೆ ಅಗತ್ಯವಿರುವ ಯೋಜನೆಗಳ ಮಾಹಿತಿಯನ್ನು ಕೂಡಲೇ ಪಡೆದುಕೊಂಡು ಆಯಾ ಇಲಾಖೆಯ ಅನುಮೋದನೆಯನ್ನು ಪಡೆದುಕೊಳ್ಳುವುದು ತಕ್ಷಣದ ಆದ್ಯತೆಯಾಗಿದೆ. ಇದರಿಂದ ನಗರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಜಿಲ್ಲೆಗೆ ಅಗತ್ಯವಿರುವ ಯೋಜನೆಗಳನ್ನು ಅನುಮೋದಿಸಲು ಅನುಕೂಲವಾಗುತ್ತದೆ ಎಂದು ಸಚಿವರು ಸೂಚಿಸಿದ್ದಾರೆ. ಜಿಲ್ಲೆಯ ಪ್ರಮುಖ ಬೇಡಿಕೆಗಳ ಕುರಿತು ಜಿಲ್ಲೆಯ ಜನಪ್ರತಿನಿಧಿಗಳ, ಇಲಾಖಾವಾರು ಮತ್ತು ಸರ್ಕಾರದಿಂದ ಅನುಮೋದನೆಗೊಂಡ ಯೋಜನೆಗಳ ವಿವರವಾದ ಪಟ್ಟಿಯನ್ನು ಸಿದ್ಧಪಡಿಸಿ, ಸರ್ಕಾರದ


☛ ಉದಯವಾಹಿನಿ ಚಿತ್ರ

ಮುಖ್ಯಕಾರ್ಯದರ್ಶಿಗಳನ್ನು ಭೇಟಿ ಮಾಡಿ, ಚರ್ಚಿಸಿ ಎಂದು ಜಿಲ್ಲಾಧಿಕಾರಿಗಳಿಗೆ ಸಚಿವ ಎಂ.ಬಿ.ಪಾಟೀಲ ಹೇಳಿದರು. ಉತ್ತರ ಕರ್ನಾಟಕದ ಬೆಳಗಾವಿಯ ಸುವರ್ಣಸೌಧದಲ್ಲಿ ಸಂಪುಟಸಭೆಗಳು ನಡೆಯುತ್ತವೆ. ಅಲ್ಲದೇ, ಕಲಬುರಗಿಯಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಸಿ, ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿಗಾಗಿ ಹಲವಾರು ಕ್ರಮಗಳನ್ನು ಜರುಗಿಸಲಾಗಿದೆ. ಈ ಹಿಂದೆ ಮಲೆಮಹಾದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆದಿದ್ದು, ಅದೇ ರೀತಿ ವಿಜಯಪುರದಲ್ಲಿ ಸಚಿವ ಸಂಪುಟ ನಡೆಸಿದರೆ, ಇಡೀ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ಬೆಳಕು ಚೆಲ್ಲಲು ಮತ್ತು ಇಲ್ಲಿನ ಯೋಜನೆಗಳಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲು ಅನುಕೂಲವಾಗಲಿದೆ ಎಂದು ತಿಳಿಸಿದರು.

---

# ಹಳ್ಳಿಗಳಲ್ಲಿ ಸರ್ವರ್ ಸಮಸ್ಯೆ ಜಾತಿಗಣತಿ ವಿಳಂಬ

• **ಉದಯವಾಹಿನಿ ಸೇಡಂ**

ಗೌರವನಿತ್ವ ನ್ಯಾಯಮೂರ್ತಿ ಡಾ. ಎಚ್.ಎನ್ ನಾಗಮೋಹನ ದಾಸ್ ಏಕ ಸದಸ್ಯ ವಿಚಾರಣಾ ಆಯೋಗದಿಂದ ಸಮಾಜ ಕಲ್ಯಾಣ ಇಲಾಖೆ ಮೂಲಕ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ 2025ರ ಇದೇ ತಿಂಗಳ ಐದನೇ ತಾರೀಖಿನಿಂದ ಆರಂಭಗೊಂಡಿದ್ದು ಜಾತಿಗಳ ಸಮೀಕ್ಷೆಗಾಗಿ ಮನೆಮನೆಗೆ ಭೇಟಿ ನೀಡುತ್ತಿರುವ ಅಧಿಕಾರಿಗಳು ಎರಡು ದಿನಗಳಿಂದ ಸಮಸ್ಯೆ ಮತ್ತೆ

ಜಾತಿಗಣತಿ ಮಾಡುತ್ತಿದ್ದರು, ಇಂದು ಹಳ್ಳಿಗಳಲ್ಲಿ ಸಂಪೂರ್ಣ ಸರ್ವರ್ ಸಮಸ್ಯೆಗಳಿಂದ ಜಾತಿಗಣತಿಗೆ ಬ್ರೇಕ್ ಬಿದ್ದಂತಾಗಿದೆ, ಜಾತಿಗಣತಿಗೆ ಆಗಮಿಸಿದ ಅಧಿಕಾರಿಗಳಿಗೆ ದಾಖಲಾತಿ ನೀಡಿದರೂ ಸರ್ವರ್ ಸಮಸ್ಯೆಯಿಂದ ಕುಟುಂಬದ ಮುಖ್ಯಸ್ಥರು ಕೆಲಸಕ್ಕೆ ಹೋಗದೆ ಸಮಯ ವಿಳಂಬವಾಗುತ್ತಿದೆ ಎಂದು ದೂರಿದ್ದಾರೆ. ತಾಲ್ಲೂಕು ಮಟ್ಟದ ಅಧಿಕಾರಿಗಳು ಇದರ ಬಗ್ಗೆ ಪರಿಶೀಲಿಸಿ ಸರ್ವ ಸಮಸ್ಯೆಗೆ ಮುಕ್ತಿ ನೀಡಬೇಕೆಂದು ಸಾರ್ವಜನಿಕರು ಹಾಗೂ ಜಾತಿಗಣತಿ ಅಧಿಕಾರಿಗಳು ಪತ್ರಿಕೆ ಮೂಲಕ ಮನವಿ ಮಾಡಿಕೊಂಡಿದ್ದಾರೆ.


☛ ಉದಯವಾಹಿನಿ ಚಿತ್ರ

**ಜಾತಿಗಣತಿಗೆ ಮನೆಗೆ ಆಗಮಿಸಿದ ಅಧಿಕಾರಿಗಳು ಸರ್ವರ ಸಮಸ್ಯೆಯಿಂದ ಹೆಚ್ಚು ಹೊತ್ತು ಮನೆಯಲ್ಲಿ ಕುಳಿತುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದ್ದು, ವೈಯಕ್ತಿಕ ಕೆಲಸಗಳಿಗೂ ನಮಗೆ ಹಿನ್ನಡೆಯಾಗುತ್ತಿದೆ, ತಾಲ್ಲೂಕು ಮಟ್ಟದ ಅಧಿಕಾರಿಗಳು ತಕ್ಷಣ ಗಮನಹರಿಸಿ ಸರ್ವರ್ ಸಮಸ್ಯೆಗೆ ಪರಿಹಾರ ಒದಗಿಸಬೇಕಿದೆ -ಗೋಪಾಲ್ ರಾಥೋಡ್**

---

• **ಉದಯವಾಹಿನಿ ಮುಂಡರಗಿ**

# ನನಸಾಗುತ್ತಿದೆ ಕಸಾಪ ಭವನದ ಕನಸು

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕವು ಜಿಲ್ಲೆಯ ಸಕ್ರಿಯ ಘಟಕವಾಗಿ ಬೆಳೆದಿದ್ದು, ವರ್ಷಪೂರ್ತಿ ವೈವಿಧ್ಯಮಯ ಸಭೆ, ಸಮಾರಂಭ, ಕಾರ್ಯಕ್ರಮ, ಕಾರ್ಯಾಗಾರಗಳನ್ನು ಆಯೋಜಿಸುವ ಮೂಲಕ ಜಿಲ್ಲೆಯ ಸಾಹಿತ್ಯಾಸಕ್ತರ ಪ್ರೀತಿಗೆ ಪಾತ್ರವಾಗಿದೆ.

ಪಟ್ಟಣದಲ್ಲಿ ಒಂದು ಸುಂದರ ಹಾಗೂ ಸುಸಜ್ಜಿತ ಕನ್ನಡ ಸಾಹಿತ್ಯ ಭವನ ನಿರ್ಮಿಸಬೇಕು ಎನ್ನುವುದು ಇಲ್ಲಿಯ ಸಾಹಿತ್ಯಾಸಕ್ತರ ದಶಕಗಳ ಬೇಡಿಕೆಯಾಗಿತ್ತು. ಅದನ್ನು ಈಡೇರಿಸುವ ನಿಟ್ಟಿನಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಯಶಸ್ವಿಯಾಗುವ ಹಂತದಲ್ಲಿದೆ. ಇದೇ ಜೂನ್ ಅಥವಾ ಜುಲೈ ತಿಂಗಳಲ್ಲಿ ನೂತನ ಕನ್ನಡ ಸಾಹಿತ್ಯ ಪರಿಷತ್ ಭವನ ಲೋಕಾರ್ಪಣೆಗೊಳ್ಳುವ ಸಾಧ್ಯತೆ ಇದೆ.

ಪಟ್ಟಣದಲ್ಲಿ ಸಾಹಿತ್ಯ ಭವನ ನಿರ್ಮಾಣಕ್ಕೆ ಇಲ್ಲಿಯ ಅನ್ನದಾನೀಶ್ವರ ಸ್ವಾಮೀಜಿ 8.5 ಗುಂಟೆ ನಿವೇಶನವನ್ನು ಉಚಿತವಾಗಿ ನೀಡಿ ಭವನ ನಿರ್ಮಾಣಕ್ಕೆ ನಾಂದಿ ಹಾಡಿದರು. ಜೊತೆಗೆ 1.40 ಲಕ್ಷ ದೇಣಿಗೆ ನೀಡಿ ಪದಾಧಿಕಾರಿಗಳನ್ನು ಹುರಿದುಂಬಿಸಿದರು.

2019ರಲ್ಲಿ ಅಧ್ಯಕ್ಷರಾಗಿದ್ದ ದಿ. ಕೆ.ಎ. ಹಿರೇಮಠ ಅವರ ಅವಧಿಯಲ್ಲಿ ಸಾಹಿತ್ಯ ಭವನ ನಿರ್ಮಾಣಕ್ಕೆ ಭೂಮಿ


☛ ಉದಯವಾಹಿನಿ ಚಿತ್ರ

ಪೂಜೆ ನೆರವೇರಿಸಲಾಯಿತು. ಭವನ ನಿರ್ಮಾಣಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಅಂದು 15 ಲಕ್ಷ ಅನುದಾನ ನೀಡಿದೆ ಎಂದು ಹೇಳಲಾಗುತ್ತಿದೆ. ನಂತರ ನಿಕಟಪೂರ್ವ ಅಧ್ಯಕ್ಷ ಎಸ್.ಬಿ. ಹಿರೇಮಠ ಅವರ ಅವಧಿಯಲ್ಲಿ ಕಾರಣಾಂತರಗಳಿಂದ ಭವನ ನಿರ್ಮಾಣ ಚುರುಕುಗೊಳ್ಳಲಿಲ್ಲ.

ಪ್ರಸ್ತುತ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿರುವ ಎಂ.ಜಿ. ಗಚ್ಚಣ್ಣವರ, ಸರ್ವ ಪದಾಧಿಕಾರಿಗಳು ಹಾಗೂ ಸಾಹಿತ್ಯಾಸಕ್ತರು ಸೇರಿ ಭವನವನ್ನು ನಿರ್ಮಿಸಬೇಕು ಎಂದು ಪಣತೊಟ್ಟರು. ಸಮಾನ ಮನಸ್ಕರೆಲ್ಲ ಸೇರಿ ತಾಲ್ಲೂಕಿನ ಕನ್ನಡಾಭಿಮಾನಿಗಳು, ಸಾಹಿತ್ಯಾಸಕ್ತರ ಮನೆಗಳಿಗೆ ಅಲೆದು ಸುಮಾರು 35 ಲಕ್ಷ ದೇಣಿಗೆ ಸಂಗ್ರಹಿಸಿದರು. ಮಾಜಿ ಸಚಿವ ಎಸ್.ಎಸ್. ಪಾಟೀಲ ಅವರು ಭವನ ನಿರ್ಮಾಣಕ್ಕೆ 1 ಲಕ್ಷ ದೇಣಿಗೆ ನೀಡಿ ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳನ್ನು ಹುರಿದುಂಬಿಸಿದರು. ಸಾಹಿತ್ಯಾಭಿಮಾನಿಗಳು ಹಣ ಹಾಗೂ ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಸಾಮಗ್ರಿಗಳನ್ನು ದೇಣಿಗೆ ನೀಡಿದ್ದಾರೆ. 25 ಸಾವಿರಕ್ಕಿಂತ ಹೆಚ್ಚು ಹಣ ನೀಡುವವರ ಚಿತ್ರವನ್ನು ಭವನದಲ್ಲಿ ಹಾಕಲಾಗುವುದು ಎಂದು ಪದಾಧಿಕಾರಿಗಳು ತಿಳಿಸಿದ್ದಾರೆ.

ಸಾಹಿತ್ಯಾಭಿಮಾನಿಗಳ ಶ್ರಮದ ಫಲವಾಗಿ ಭವನ ಪೂರ್ಣಗೊಳ್ಳುವ ಹಂತ ತಲುಪಿದೆ. ಪದಾಧಿಕಾರಿಗಳ ಕಾರ್ಯವನ್ನು ಎಲ್ಲರೂ ಮೆಚ್ಚಿ ಪ್ರೋತ್ಸಾಹಿಸುತ್ತಿದ್ದಾರೆ.

**ಅನ್ನದಾನೀಶ್ವರ ಸ್ವಾಮೀಜಿ ಅವರ ದೇಣಿಗೆಯ ನೆರವಿನಿಂದ ಕನ್ನಡ ಸಾಹಿತ್ಯ ಪರಿಷತ್ ಭವನ ಪೂರ್ಣಗೊಳ್ಳುವ ಹಂತ ತಲುಪಿದ್ದು ಭವನ ನಿರ್ಮಾಣಕ್ಕೆ ಸಹಕರಿಸುವವರೆಲ್ಲರಿಗೂ ಅಭಿನಂದನೆಗಳು.**
**-ಎಂ.ಜಿ.ಗಚ್ಚಣ್ಣವರ, ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ**

---

• **ಉದಯವಾಹಿನಿ ಬೆಳಗಾವಿ**

# ಜಲಾಶಯಗಳಿಗೆ ಸಾರ್ವಜನಿಕರಿಗೆ ಪ್ರವೇಶ ನಿಷೇಧ

ಕಾಶ್ಮೀರದಲ್ಲಿ ಭಯೋತ್ಪಾದಕರು ಪ್ರವಾಸಿಗರನ್ನು ಕೊಂದಿದ್ದಕ್ಕೆ ಪ್ರತೀಕಾರವಾಗಿ ಭಾರತವು ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದ ಮೇಲೆ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ನಡೆಸುತ್ತಿರುವ ಹಿನ್ನೆಲೆಯಲ್ಲಿ, ಮುನ್ನೆಚ್ಚರಿಕೆ ಕ್ರಮವಾಗಿ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಮತ್ತು ಸವದತ್ತಿ ತಾಲ್ಲೂಕಿನ ನವಿಲುತೀರ್ಥ ಜಲಾಶಯಗಳಲ್ಲಿ ಸಾರ್ವಜನಿಕರಿಗೆ ಪ್ರವೇಶ ನಿಷೇಧಿಸಲಾಗಿದೆ. ಭದ್ರತೆಯನ್ನೂ ಹೆಚ್ಚಿಸಲಾಗಿದೆ.

ಕಳೆದ ವರ್ಷ ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿದೆ. ಹಾಗಾಗಿ ಬೇಸಿಗೆ ಮುಗಿಯುತ್ತ ಬಂದರೂ, 51 ಟಿಎಂಸಿ ಅಡಿ ನೀರು ಸಂಗ್ರಹ ಸಾಮರ್ಥ್ಯದ ಹಿಡಕಲ್ ಡ್ಯಾಂನಲ್ಲಿ ಈಗ 16.87 ಟಿಎಂಸಿ ನೀರು ಸಂಗ್ರಹವಿದೆ. 37.73 ಟಿಎಂಸಿ ಅಡಿ ನೀರು ಸಂಗ್ರಹ ಸಾಮರ್ಥ್ಯದ ನವಿಲುತೀರ್ಥ ಅಣೆಕಟ್ಟೆಯಲ್ಲಿ 12.26 ಟಿಎಂಸಿ ಅಡಿ ನೀರು



☛ ಉದಯವಾಹಿನಿ ಚಿತ್ರ

ಸಂಗ್ರಹವಿದೆ. ಈಗ ಶಾಲೆ-ಕಾಲೇಜುಗಳಿಗೆ ರಜೆ ಇರುವುದರಿಂದ ಮಕ್ಕಳು, ಅವರ ಪಾಲಕರು ಜಲಾಶಯಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದಾರೆ. ಯಲ್ಲಮ್ಮನಗುಡ್ಡಕ್ಕೆ ಭೇಟಿ ನೀಡಿದ ಭಕ್ತರೂ ನವಿಲುತೀರ್ಥ ಜಲಾಶಯಕ್ಕೆ ತೆರಳುತ್ತಿದ್ದಾರೆ. ಆದರೆ, ಆಪರೇಷನ್ ಸಿಂಧೂರ' ಕಾರ್ಯಾಚರಣೆ ಹಿನ್ನೆಲೆಯಲ್ಲಿ ಎರಡೂ ಕಡೆ ಸಾರ್ವಜನಿಕರಿಗೆ ಪ್ರವೇಶ ನಿಷೇಧಿಸಲಾಗಿದೆ.

**ಭದ್ರತೆ ಹೆಚ್ಚಿಸಿದ್ದೇವೆ**

**'ನಮ್ಮ ಅಣೆಕಟ್ಟೆಗೆ ಯಾವ ಅಪಾಯವೂ ಇಲ್ಲ. ಆದರೆ, ಮುಂಜಾಗ್ರತೆ ಕ್ರಮವಾಗಿ ಸಾರ್ವಜನಿಕರಿಗೆ ಜಲಾಶಯದ ಬಳಿ ಮತ್ತು ಉದ್ಯಾನಕ್ಕೆ ಭೇಟಿ ನೀಡುವುದಕ್ಕೆ ನಿಷೇಧ ಹೇರಿದ್ದೇವೆ. ಪೊಲೀಸರು ಮತ್ತು ನಮ್ಮ ಇಲಾಖೆ ಸಿಬ್ಬಂದಿ ಭದ್ರತೆಗೆ ನಿಯೋಜಿಸಿದ್ದೇವೆ. ಹೆಚ್ಚುವರಿ ಪೊಲೀಸರನ್ನು ಒದಗಿಸುವಂತೆಯೂ ಕೋರಿದ್ದೇವೆ' ಎಂದು ನವಿಲುತೀರ್ಥ ಜಲಾಶಯದ ಕಾರ್ಯನಿರ್ವಾಹಕ ಎಂಜಿನಿಯರ್ ವಿವೇಕ ಮುದಿಗೌಡರ ತಿಳಿಸಿದರು.**

---

# ಒಳಮೀಸಲಾತಿ ಸಮೀಕ್ಷೆ, ಯಶಸ್ಸಿಗೆ ಕೈಜೋಡಿಸಿ: ಡಿಸಿ

• **ಉದಯವಾಹಿನಿ ಶಿವಮೊಗ್ಗ**

ಪರಿಶಿಷ್ಟ ಜಾತಿ ಒಳಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಅವರ ಏಕಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ (ಶೈಕ್ಷಣಿಕ, ಆರ್ಥಿಕ) ಬಗ್ಗೆ, ದತ್ತಾಂಶಗಳನ್ನು ಶೇಖರಿಸಲು ಮೇ 5ರಿಂದ ಆರಂಭವಾಗಿರುವ ಸಮೀಕ್ಷೆಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಜಿಲ್ಲೆಯ ಜನರಿಗೆ ಮನವಿ ಮಾಡಿದ್ದಾರೆ.



ಗಣತಿದಾರರು ಮೇ 17 ರವರೆಗೆ ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಮೊಬೈಲ್ ಫೋನ್ ಆಪ್ ಮೂಲಕ ದಾಖಲಿಸಿಕೊಳ್ಳಲ್ಲಿದ್ದಾರೆ. ನಂತರ ಮೇ.19 ರಿಂದ 21 ರವರೆಗೆ ಮತಗಟ್ಟೆಗಳಲ್ಲಿ ವಿಶೇಷ ಶಿಬಿರಗಳನ್ನು ಆಯೋಜನೆ ಮಾಡಲಾಗಿದೆ. ಮೇ.19 ರಿಂದ 23 ರವರೆಗೆ ಪರಿಶಿಷ್ಟ ಜಾತಿಯ ಕುಟುಂಬಗಳು ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳುವ ಅವಕಾಶ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಈ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿ ಅಧ್ಯಕ್ಷತೆಯಲ್ಲಿ ಸಮನ್ವಯ ಸಮಿತಿ ರಚಿಸಲಾಗಿದೆ.

ಸಮೀಕ್ಷಾ ಕಾರ್ಯದಲ್ಲಿ ಎದುರಾಗುವ ಸಮಸ್ಯೆಗಳನ್ನು ಪರಿಹರಿಸಲು ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಕಚೇರಿಗಳಲ್ಲಿ ಸಹಾಯವಾಣಿ ಕೇಂದ್ರ ತೆರೆಯಲಾಗಿದೆ. ಮತಗಟ್ಟೆಯಲ್ಲಿ 200 ಕ್ಕಿಂತ ಹೆಚ್ಚಿನ ಕುಟುಂಬಗಳು ಇದ್ದಲ್ಲಿ ಹೆಚ್ಚುವರಿ ಗಣತಿದಾರರನ್ನು ನಿಯೋಜನೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---


ಪಟ್ಟಣ ಪಂಚಾಯಿತಿ ನಾಲ್ಕನೇ ವಾರ್ಡ್‌ನಲ್ಲಿ ಉಳಿದಿರುವ ಏಕೈಕ ಕೆರೆಗೆ ವಾರಸುದಾರರು ಇಲ್ಲವೇ ಎಂಬ ಪ್ರಶ್ನೆ

# ಹೂಳೆತ್ತದೇ ಅನಾಥವಾಗಿ ನಿಂತಿರುವ ಕೆರೆ: ಪ್ರಾಣ ಹಾನಿಯಾಗುವ ಸಂಭವ

• **ಉದಯವಾಹಿನಿ ಆಲೂರು**

ಪಟ್ಟಣ ಪಂಚಾಯಿತಿ 4ನೇ ವಾರ್ಡ್‌ನಲ್ಲಿ ಉಳಿದಿರುವ ಏಕೈಕ ಕೆರೆಗೆ ವಾರಸುದಾರರು ಇಲ್ಲವೇ ಎಂಬ ಪ್ರಶ್ನೆ ಉದ್ಭವವಾಗಿದೆ. ಇತಿಹಾಸದಲ್ಲಿಯೇ ಈ ಕೆರೆಯ ಹೂಳು ಎತ್ತದಿರುವುದರಿಂದ ಜನ, ಜಾನುವಾರುಗಳ ಬಲಿಗಾಗಿ ಬಾಯಿ ತೆರೆದು ನಿಂತಿದೆ ಎಂದು ಜನರು ದೂರುತ್ತಿದ್ದಾರೆ. ಈ ಜಾಗ ಪಟ್ಟಣ ಪಂಚಾಯಿತಿಗೆ ಜಾಗ ಸೇರಿದ್ದರೂ, ಕೆರೆ ಅಭಿವೃದ್ಧಿ ಬಗ್ಗೆ ನಮಗೆ ಬರುವುದಿಲ್ಲ ಎಂದು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹೇಳುತ್ತಿದ್ದಾರೆ.

**ಭಾರಿ ಮಳೆಯಾದರೆ ಕೆರೆ ನೀರು ತುಂಬಿ ಏರಿ ಮೇಲೆ ಹರಿಯುವ ಸಾಧ್ಯತೆ ಇದೆ. ಏರಿ ಮೇಲೆ ಜನ ಜಾನುವಾರು ವಾಹನಗಳು ಓಡಾಡುತ್ತವೆ. ಅವಗಢ ಸಂಭವಿಸಿದರೆ ನಷ್ಟ ತುಂಬಿಕೊಡುವವರು ಯಾರು? ಕೂಡಲೇ ಹೂಳೆತ್ತಬೇಕು -ಗೀತಾ, ಆಲೂರು ನಿವಾಸಿ**


☛ ಉದಯವಾಹಿನಿ ಚಿತ್ರ

**ಇಲಾಖೆ ಕಣ್ಮುಚ್ಚಿ ಕುಳಿತಿದೆ**

ಇನ್ನೊಂದೆಡೆ ನಮ್ಮ ವ್ಯಾಪ್ತಿಗೆ ಸೇರಿಲ್ಲ ಎನ್ನುತ್ತಿದ್ದಾರೆ.

ಜಿಲ್ಲಾ ಪಂಚಾಯಿತಿಯಿಂದ ಅನುದಾನ ಕೊಟ್ಟರೆ, ನಾವು ಅಭಿವೃದ್ಧಿ ಪಡಿಸುತ್ತೇವೆ ಎನ್ನುತ್ತಾರೆ ಸಣ್ಣ ನೀರಾವರಿ ಇಲಾಖೆಯವರು. ಹಾಗಾದರೆ ಅನುದಾನ ಬಿಡುಗಡೆ ಮಾಡುವುದು ಯಾರು ಎಂಬ ಪ್ರಶ್ನೆ ಉದ್ಭವವಾಗಿದೆ. ಪಟ್ಟಣ ವ್ಯಾಪ್ತಿಗೆ ಒಳಪಡುವ ಶೇ 50 ರಷ್ಟು ಭಾಗದ ತ್ಯಾಜ್ಯ ನೀರು ಹರಿದು ಬಂದು ಈ ಕೆರೆಗೆ ಸೇರುತ್ತದೆ. ಈವರೆಗೂ ಹೂಳನ್ನು ಹೊರ ತೆಗೆಯದಿರುವುದರಿಂದ ಏರಿ ತುದಿವರೆಗೂ ಗಿಡ ಗಂಟೆಗಳು ಬೆಳೆದು ನಿಂತಿವೆ. ಭಾರಿ ಮಳೆಯಾದರೆ ನೀರು ತುಂಬಿ ಏರಿ ಒಡೆಯುವ ಸಾಧ್ಯತೆ ಇದೆ. ಜಾನುವಾರುಗಳು ಆಹಾರಕ್ಕಾಗಿ ಕೆರೆಗೆ ಇಳಿದರೆ ಮೇಲೆದ್ದು ಬರಲು ಸಾಧ್ಯವಾಗದೇ ಪ್ರಾಣ ಹಾನಿಯಾಗುವ ಸಂಭವವಿದೆ ಎಂದು ಸ್ಥಳೀಯರು ಹೇಳುತ್ತಾರೆ. ಕೆರೆ ಏರಿ ಸಂಪರ್ಕ ರಸ್ತೆ ಆಗಿರುವುದರಿಂದ ನಿತ್ಯ ನೂರಾರು ವಾಹನಗಳು, ಜನಸಾಮಾನ್ಯರು ತಿರುಗಾಡುತ್ತಾರೆ. ಕೆರೆ ಅಕ್ಕಪಕ್ಕದಲ್ಲಿ ನಿವೇಶನಗಳಿವೆ. ಮಳೆಯಾದರೆ ಕೋಡಿಯೂ ಇಲ್ಲದ ಈ ಕೆರೆಗಳಲ್ಲಿ ಏರಿ ಮೇಲೆ ನೀರು ಹರಿದು ಸಮಸ್ಯೆ ಎದುರಾಗಲಿದೆ. ಕೆರೆಗಳ ಹೂಳು ತೆಗೆದು ನೀರು ಸಂಗ್ರಹವಾಗಲು ಅವಕಾಶ ಕಲ್ಪಿಸಬೇಕೆಂದು ಹೈಕೋರ್ಟ್ ಆದೇಶವಿದ್ದರೂ ಸಂಬಂಧಿಸಿದ ಇಲಾಖೆ ಕಣ್ಮುಚ್ಚಿ ಕುಳಿತಿದೆ ಎನ್ನುವುದು ದೂರು ಸುತ್ತಲಿನ ನಿವಾಸಿಗಳದ್ದು. ಕೆರೆಗೆ ನೀರು ಹರಿಯುವ ಕಾಲುವೆಯನ್ನು ಶುಚಿಗೊಳಿಸಿ, ಚರಂಡಿಗಳಲ್ಲಿ ಸಂಗ್ರಹವಾಗುತ್ತಿರುವ ಕೊಳಚೆ ನೀರು ಸರಾಗವಾಗಿ ಕೆರೆಗೆ ಹರಿಯುವಂತೆ ಕ್ರಮ ಕೈಗೊಳ್ಳಬೇಕು. ಕೆರೆ ಸುತ್ತ ವಾಸದ ಮನೆಗಳು ನಿರ್ಮಾಣ ಆಗುತ್ತಿರುವುದರಿಂದ, ಮುಂದಿನ ದಿನಗಳಲ್ಲಿ ಭಾರಿ ಮಳೆಯಾದ ಸಂದರ್ಭದಲ್ಲಿ ಅನೇಕ ಅವಘಡಗಳನ್ನು ಎದುರಿಸಬೇಕಾಗುತ್ತದೆ ಎನ್ನುವ ಆತಂಕ ಜನರದ್ದಾಗಿದೆ.

**ಶೀಘ್ರದಲ್ಲಿ ಸ್ಥಳ ಪರಿಶೀಲನೆ ಮಾಡಿ ಹೂಳೆತ್ತುವ ಕಾಮಗಾರಿಗೆ ಕ್ರಮ ಕೈಗೊಳ್ಳುತ್ತೇನೆ. ಏರಿ ಸಂಪರ್ಕ ರಸ್ತೆಯಾಗಿದ್ದು ಹೂಳೆತ್ತುವ ಕಾರ್ಯ ಕೂಡಲೇ ಆಗಬೇಕು. ಕೆರೆ ಮುಚ್ಚುವುದು ತರವಲ್ಲ. ಅನುದಾನ ಕ್ರೋಡೀಕರಣಕ್ಕೆ ಕ್ರಮ ಕೈಗೊಳ್ಳುತ್ತೇನೆ.**
**-ಸಿಮೆಂಟ್ ಮಂಜು, ಶಾಸಕ**

**ಕೆರೆಗಳನ್ನು ಅಭಿವೃದ್ಧಿ ಪಡಿಸುವುದು ಏಕೈಕ ಗುರಿ. ಕೆರೆ ಹೂಳೆತ್ತಿ ಅಭಿವೃದ್ಧಿ ಮಾಡಲು ಅನುದಾನ ಕ್ರೋಡೀಕರಿಸಿ ಸಂಬಂಧಿಸಿದ ಇಲಾಖೆಯೊಡನೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು.**
**-ಮಂಜುನಾಥ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ**

---

## ಮಿನಿ ನ್ಯೂಸ್

### ಲೋಕಾಯುಕ್ತ ಪೊಲೀಸರಿಂದ ದೂರು ಸ್ವೀಕಾರ

• **ಉದಯವಾಹಿನಿ ಹಾವೇರಿ**

ಇಲ್ಲಿಯ ತಹಶೀಲ್ದಾರ್ ಕಚೇರಿ ಸಭಾಭವನದಲ್ಲಿ ಮೇ 14ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಲೋಕಾಯುಕ್ತ ಪೊಲೀಸರು ಸಾರ್ವಜನಿಕರ ಅಹವಾಲು ಸ್ವೀಕರಿಸಲು ಸಭೆ ನಡೆಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ದುರಾಡಳಿತ, ಸಾರ್ವಜನಿಕ ಕೆಲಸ ಕಾರ್ಯಗಳ ವಿಳಂಬ, ಕಳಪೆ ಕಾಮಗಾರಿ, ಸರ್ಕಾರಿ ನೌಕರರ ಅಕ್ರಮ ಆಸ್ತಿ ಗಳಿಕೆ, ಸರ್ಕಾರಿ ಹಣ ದುರುಪಯೋಗ, ಸಾರ್ವಜನಿಕ ಕೆಲಸಗಳಿಗೆ ಅಧಿಕಾರಿ-ನೌಕರರಿಂದ ಲಂಚ ಕೇಳುವ ದೂರುಗಳಿದ್ದರೆ ಲೋಕಾಯುಕ್ತ ಪೊಲೀಸರಿಗೆ ಸಲ್ಲಿಸಬಹುದಾಗಿದೆ. ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ದೂರುಗಳನ್ನು ಸ್ವೀಕರಿಸುವುದಿಲ್ಲವೆಂದು ಪೊಲೀಸರು ತಿಳಿಸಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಮಧುಸೂದನ್, ಪೊಲೀಸ್ ನಿರೀಕ್ಷಕರಾದ ದಾದಾವಲಿ ಕೆ.ಎಚ್., ಮಂಜುನಾಥ್ ಪಂಡಿತ ಹಾಗೂ ಬಸವರಾಜ ಹಳಬಣ್ಣನವರ ಸಭೆಯಲ್ಲಿ ಹಾಜರಿರಲಿದ್ದಾರೆ ಎಂದು ಹೇಳಿದ್ದಾರೆ.

### ಕಾಮಗಾರಿಗೆ ಶಂಕುಸ್ಥಾಪನೆ

• **ಉದಯವಾಹಿನಿ ಉಪ್ಪಿನಂಗಡಿ**

ಕೊಯಿಲ ಗ್ರಾಮದ ಗಂಡಿಬಾಗಿಲಿನಿಂದ ಸನ್ಯಾಸಿಮೂಲೆ ಸಂಪರ್ಕ ರಸ್ತೆಗೆ ಕಾಂಕ್ರಿಟೀಕರಣ ಮತ್ತು ಕಾಂಕ್ರೀಟ್ ಚರಂಡಿ ಕಾಮಗಾರಿಗೆ ಶಂಕುಸ್ಥಾಪನೆ ನಡೆಯಿತು. ಕಾಮಗಾರಿಗೆ ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ 5 ಲಕ್ಷ ಮತ್ತು ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಅವರು 2 ಲಕ್ಷ ಅನುದಾನ ನೀಡಿದ್ದಾರೆ. ಚರಂಡಿ ಕಾಮಗಾರಿಗೆ 15ನೇ ಹಣಕಾಸು ಯೋಜನೆಯಲ್ಲಿ 1.90 ಲಕ್ಷ ಮಂಜೂರು ಆಗಿದೆ.

ಕೊಯಿಲ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪುಷ್ಪಾ ಸುಭಾಸ್ ಶಿಲಾನ್ಯಾಸ ನೆರವೇರಿಸಿದರು. ಕಾಂಗ್ರೆಸ್ ಮುಖಂಡ ಜಿ.ಕೃಷ್ಣಪ್ಪ ರಾಮಕುಂಜ, ಮುಖಂಡ ಸರ್ವೋತ್ತಮ ಗೌಡ, ಅಕ್ರಮ ಸಕ್ರಮ ಸಮಿತಿ ಸದಸ್ಯ ಎಚ್.ಆದಂ, ಕೊಯಿಲ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಯತೀಶ್, ಸದಸ್ಯರಾದ ನಝೀರ್ ಪೂರಿಂಗ, ಚಿದಾನಂದ, ಜೊಹರಾ ಇಕ್ಬಾಲ್, ಭಾಗವಹಿಸಿದ್ದರು.

### ಸಾಲ ವಸೂಲಾತಿಯಲ್ಲಿ ಭೀಮನ ಕೋಣೆ ಬ್ಯಾಂಕ್‌ಗೆ ಪ್ರಥಮ ಸ್ಥಾನ

• **ಉದಯವಾಹಿನಿ ಸಾಗರ**

ತಾಲ್ಲೂಕಿನ ಭೀಮನಕೋಣೆ ಗ್ರಾಮದ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ 2024-25ನೇ ಸಾಲಿನಲ್ಲಿ ಸಾಲ ವಸೂಲಾತಿಯಲ್ಲಿ ಪ್ರಥಮ ಸ್ಥಾನ ಗಳಿಸಿದೆ. 1930ರಲ್ಲಿ ಆರಂಭಗೊಂಡಿರುವ ಬ್ಯಾಂಕ್ 4,850 ಷೇರುದಾರ ಸದಸ್ಯರನ್ನು ಹೊಂದಿದ್ದು, 172.77 ಲಕ್ಷ ಷೇರು ಬಂಡವಾಳ ಹೊಂದಿದೆ. ಈ ವರ್ಷದ ಆರ್ಥಿಕ ವರ್ಷಾಂತ್ಯಕ್ಕೆ 20.57 ಲಕ್ಷ ಲಾಭ ಗಳಿಸಿದೆ. ಕಳೆದ 95 ವರ್ಷಗಳಲ್ಲಿ ಬ್ಯಾಂಕ್ ಸಾಲ ವಸೂಲಾತಿಯಲ್ಲಿ ಶೇ 93.48ರಷ್ಟು ವಸೂಲಾತಿ ದಾಖಲೆ ಹೊಂದಿದೆ ಎಂದು ಬ್ಯಾಂಕ್‌ನ ಅಧ್ಯಕ್ಷ ಗುರುಪಾದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪರೇಷನ್ ಸಿಂಧೂರ ಯಶಸ್ಸಿಗೆ ಪೂಜೆ

• **ಉದಯವಾಹಿನಿ ಹಿರಿಯೂರು**

ಆಪರೇಷನ್ ಸಿಂಧೂರದ ಹಿನ್ನೆಲೆಯಲ್ಲಿ ಭಾರತೀಯ ಸೈನಿಕರ ಒಳಿತಿಗೆ ಪ್ರಾರ್ಥಿಸಿ ನಗರದ ತೇರುಮಲ್ಲೇಶ್ವರ ದೇವಾಲಯದಲ್ಲಿ ಬಿಜೆಪಿ ಮುಖಂಡರು ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಭಾರತದಿಂದ ಪಾಕಿಸ್ತಾನ ವಿಭಜನೆಗೊಂಡಾಗಿನಿಂದಲೂ ಒಂದಲ್ಲ ಒಂದು ರೀತಿಯಲ್ಲಿ ಉಪಟಳ ನೀಡುತ್ತಿರುವ ಪಾಕಿಸ್ತಾನ, ಉಗ್ರರ ತರಬೇತಿ ಕೇಂದ್ರಗಳಿಗೆ ಪ್ರೋತ್ಸಾಹ ನೀಡುತ್ತಿದೆ. ಪಾಕಿಸ್ತಾನ ಜಾಗತಿಕ ಮಟ್ಟದಲ್ಲಿ ಉಗ್ರರ ಉತ್ಪಾದನಾ ತಾಣವಾಗಿದೆ.

ಅಂತಹ ಪಾಕಿಸ್ತಾನಕ್ಕೆ ಪಾಠ ಕಲಿಸಲು ಪ್ರಧಾನಿ ಹಾಗೂ ಸೈನಿಕರು ಮುಂದಾಗಿದ್ದಾರೆ. ಅವರ ಒಳಿತಿಗಾಗಿ ಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಮುಖಂಡರು ತಿಳಿಸಿದರು. ನಂತರ ಮೆರವಣಿಗೆ ನಡೆಸಿದ ಮುಖಂಡರು, ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

### ಜಾತಿಗಣತಿ ಕ್ರಮಬದ್ಧವಾಗಿರಲಿ

• **ಉದಯವಾಹಿನಿ ಹೊಸದುರ್ಗ**

ಒಳಮೀಸಲಾತಿ ಸಂಬಂಧ ನಡೆಯುತ್ತಿರುವ ದತ್ತಾಂಶ ಸಂಗ್ರಹದ ವೇಳೆ ಸಮೀಕ್ಷಾದಾರರು ಕ್ರಮಬದ್ಧವಾಗಿ ಸಮೀಕ್ಷೆ ಮಾಡಬೇಕು ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಸಲಹೆ ನೀಡಿದರು. ಸಮೀಕ್ಷೆ ನಡೆಯುತ್ತಿದ್ದ ಸಂಬಂಧ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, 'ತಾಲ್ಲೂಕಿನಾದ್ಯಂತ ಪ್ರತಿ ಮನೆಮನೆಗೂ ಭೇಟಿ ನೀಡಿ ಎಲ್ಲಾ ಮಾಹಿತಿ ಸಂಗ್ರಹಿಸಬೇಕು. ಪ್ರಾಮಾಣಿಕವಾಗಿ ಸಮೀಕ್ಷೆ ನಡೆಸಿ, ಅರ್ಹರಿಗೆ ಸೌಲಭ್ಯ ಸಿಗುವಂತಾಗಲಿ' ಎಂದು ಸಮೀಕ್ಷಾದಾರರಿಗೆ ಸೂಚಿಸಿದರು. ಶಿಕ್ಷಕರು ತಮಗೆ ವಹಿಸುವ ಕಾರ್ಯನಿರ್ವಹಿಸುತ್ತಿದ್ದಾರೆ. ಆದರೆ ನೆಟ್‌ವರ್ಕ್ ಸಮಸ್ಯೆಯಿಂದ ಪ್ರಗತಿಯಾಗಿಲ್ಲ. ಬೆರಳೆಣಿಕೆಯನ್ನು ಜನರ ಮಾಹಿತಿಯನ್ನು ಮಾತ್ರ ನಮೂದಿಸಿದ್ದೇವೆ' ಎಂದು ಸಮೀಕ್ಷಾದಾರರೊಬ್ಬರು ಮಾಹಿತಿ ನೀಡಿದರು.

### ಮಾನ್ವಿ: 12ರಂದು ದ್ವಾದಶ ಜ್ಯೋತಿರ್ಲಿಂಗಗಳ ಮೆರವಣಿಗೆ

• **ಉದಯವಾಹಿನಿ ಮಾನ್ವಿ**

ಮೇ 12ರಂದು ಮಧ್ಯಾಹ್ನ 3ಗಂಟೆಗೆ ಪಟ್ಟಣದಲ್ಲಿ ಪ್ರಮುಖ ಬೀದಿಗಳಲ್ಲಿ ದ್ವಾದಶ ಜ್ಯೋತಿರ್ಲಿಂಗಗಳ ಮೆರವಣಿಗೆ ಹಾಗೂ ವಂದೇ ಮಾತರಂ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ' ಎಂದು ಮಂಡಳಿ ಶಿವಶಕ್ತಿ ಆವತಾರ ಸೇವಾ ಸಂಸ್ಥಾನದ ಸ್ಥಳೀಯ ಶಾಖೆಯ ಸಂಚಾಲಕಿ ಬಿ.ಕೆ.ಅಕ್ಕಮ್ಮ ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಮೇ 12ರಂದು ಸಂಜೆ 7.30ಕ್ಕೆ ತಾಲ್ಲೂಕು ಕ್ರೀಡಾಂಗಣದಲ್ಲಿ ವಿಶೇಷ ಕಾರ್ಯಕ್ರಮ ನಡೆಯಲ್ಲಿದೆ. 13 ರಂದು ಸಂಜೆ 4ಗಂಟೆಗೆ ಪಟ್ಟಣದ ನಿಲಕಂಠೇಶ್ವರ ದೇವಸ್ಥಾನದ ಆವರಣದಲ್ಲಿ ಭೋಲೇನಾಥ ಸತ್ಸಂಗ, ಶಿವ ಯೋಗ ಮಿಲನ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸಾಮೂಹಿಕ ಓಂಕಾರ ಉಚ್ಚಾರಣೆ, ವಂದೇ ಮಾತರಂ ಗೀತೆ ಗಾಯನ ಮತ್ತು ಓಂ ಮಂಡಳಿ ಶಿವಶಕ್ತಿ ಆವತಾರ ಸೇವಾ ಸಂಸ್ಥಾನ ರಾಯಪುರ್ ಛತ್ತಿಸಗಡದ ಮುಖ್ಯಸ್ಥೆ ದೇವಕಿ ಅಮ್ಮನವರು ಹಾಗೂ ವಿವಿಧ ಪೂಜ್ಯರ ನೇತೃತ್ವದಲ್ಲಿ ಶಿವಧ್ಯಾನ ಹಾಗೂ ಶಿವಮಿಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು' ಎಂದು ಕೋರಿದರು. ಶಿಕಾರಿಪುರ ಶಾಖೆಯ ಸಂಚಾಲಕ ಮಂಜುನಾಥ, ರುದ್ರಪ್ಪ ನಾಯಕ, ಕುಬೇರಪ್ಪ ಮತ್ತಿತರರು ಉಪಸ್ಥಿತರಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದುಕೊಳ್ಳುತ್ತೀರಿ. ನೀವು ಇಂದು ಪ್ರೀತಿಯ ಸಮೃದ್ಧ ಚಾಕೊಲೇಟ್‌ನ ರುಚಿ ಸವಿಯುತ್ತೀರಿ.

**ವೃಷಭ** ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ಮಿಥುನ** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ಕರ್ಕಾಟಕ** ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

**ಸಿಂಹ** ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟರಿ ಮತ್ತು ಅತಿಯಾಗಿ ತಿನ್ನ ಬೇಡಿ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ಕನ್ಯಾ** ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡ ಬೇಡಿ. ನೀವು ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ.

**ತುಲಾ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಹಿಂದೆ ತಮ್ಮ ಹಣವನ್ನು ಹೂಡಿಕೆ ಮಾಡಿದ ಜನರು ಇಂದು ಆ ಹಣದಿಂದ ಲಾಭ ಪಡೆಯುವ ಸಾಧ್ಯತೆಯಿದೆ.

**ವೃಶ್ಚಿಕ** ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

**ಧನಸ್ಸು** ನಿಮ್ಮನ್ನು ತನ್ನ ಜೀವಕ್ಕಿಂತಲೂ ಹೆಚ್ಚು ಪ್ರೀತಿಸುವ ವ್ಯಕ್ತಿಯನ್ನು ಸಂಧಿಸುತ್ತೀರಿ. ನೀವು ಯಾವುದೇ ಹೊಸ ಯೋಜನೆಯನ್ನು ತೆಗೆದುಕೊಳ್ಳುವ ಮೊದಲು ಎರಡು ಬಾರಿ ಆಲೋಚಿಸಿ.

**ಮಕರ** ನಿಮ್ಮ ಪ್ರೇಮಿ ಅಥವಾ ಪ್ರೇಮಿಕ ಇಂದು ತುಂಬಾ ಕೋಪದಲ್ಲಿ ಕಾಣಬಹುದು, ಇದರಿಂದಾಗಿಅವರ ಮನೆಯ ಪರಿಸ್ಥಿತಿ ಇರುತ್ತದೆ. ಅವರು ಕೋಪದಲ್ಲಿದ್ದರೆ , ಅವರನ್ನು ಸಮಾಧಾನಗೊಳಿಸಲು ಪ್ರಯತ್ನಿಸಿ.

**ಕುಂಭ** ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

**ಮೀನ** ಕಠಿಣ ಕೆಲಸವನ್ನು ಪೂರ್ಣಗೊಳಿಸಲು ಸಾಧ್ಯವಾಗುವುದರಿಂದ ಸ್ನೇಹಿತರು ನಿಮ್ಮನ್ನು ಶ್ಲಾಘಿಸುತ್ತಾರೆ. ಹೆಚ್ಚಿನ ವಿಷಯಗಳು ನೀವು ಬಯಸಿದಂತೆ ಅಗುವ ಒಂದು ಉಜ್ವಲವಾದ ಹಾಸ್ಯದಿಂದ ತುಂಬಿದ ದಿನ.

### ನಿಯಮಗಳನ್ನು ಬದಿಗೊತ್ತಿ ಕ್ರಿಯಾಯೋಜನೆ ಇಲ್ಲದೆಯೇ ಸರ್ಕಾರದ ಏಜೆನ್ಸಿ ರಸ್ತೆ, ಚರಂಡಿ ನಿರ್ಮಿಸುತ್ತಿರುವ ಆರೋಪ

# ರಾಜಕೀಯ ವ್ಯಕ್ತಿಗಳ ಅನುಕೂಲಕ್ಕೆ ಸರ್ಕಾರಿ ಹಣ, ಯಂತ್ರದ ದುರ್ಬಳಕೆ

• ಉದಯವಾಹಿನಿ ಕುಷ್ಟಗಿ

ನಿಯಮಗಳ ಪ್ರಕಾರ ಖಾಸಗಿ ಬಡಾವಣೆಯ ಮೂಲ ಸೌಲಭ್ಯಗಳನ್ನು ಕಲ್ಪಿಸುವುದು ಸಂಬಂಧಿಸಿದ ಮಾಲೀಕರ ಜವಾಬ್ದಾರಿ. ಆದರೆ ಅಭಿವೃದ್ಧಿಗೊಳ್ಳದೆ ಗೊಂಡಾರಣ್ಯದಂತಿರುವ ಸ್ವಾಮಿ ವಿವೇಕಾನಂದ ಹೆಸರಿನ ಬಡಾವಣೆಯಲ್ಲಿ ನಿಯಮಗಳನ್ನು ಬದಿಗೊತ್ತಿ ಕ್ರಿಯಾಯೋಜನೆ ಇಲ್ಲದೆಯೇ ಸರ್ಕಾರದ ಏಜೆನ್ಸಿ ರಸ್ತೆ, ಚರಂಡಿ ನಿರ್ಮಿಸುತ್ತಿರುವ ಆರೋಪ ಕೇಳಿಬಂದಿದೆ.


'ಕೊಪ್ಪಳ ರಸ್ತೆಯ ವಾರ್ಡ್ ಸಂಖ್ಯೆ 3ರಲ್ಲಿನ ಸರ್ವೆ ಸಂಖ್ಯೆ 105ರಲ್ಲಿ ಗಂಗಾಧರಸ್ವಾಮಿ ಹಿರೇಮಠ ಎಂಬುವವರಿಗೆ ಸೇರಿದ ಬಡಾವಣೆಯಲ್ಲಿ ಈ ಕೆಲಸ ನಡೆಸಿರುವುದು ಕಂಡುಬಂದಿದೆ. ಗ್ರಾಮೀಣ ಮೂಲಸೌಲಭ್ಯ ಅಭಿವೃದ್ಧಿ ನಿಗಮ ಬೇನಾಮಿ ಗುತ್ತಿಗೆದಾರರ ಮೂಲಕ ಕೆಲಸ ಕೈಗೆತ್ತಿಕೊಂಡಿದೆ. ಅಚ್ಚರಿಯಂದರೆ ಪುರಸಭೆ ವ್ಯಾಪ್ತಿಯಲ್ಲಿ ಕೆಲಸ ನಡೆಯುತ್ತಿದ್ದರೂ ಅದರ ಗಮನಕ್ಕಿಲ್ಲ.

ಯಾವುದೇ ಕ್ರಿಯಾಯೋಜನೆ ಇಲ್ಲದಿದ್ದರೂ ಕೆಕೆಆರ್‌ಡಿಬಿ ಅನುದಾನವನ್ನು ಬಳಕೆ ಮಾಡಿಕೊಳ್ಳುವ ಹುನ್ನಾರ ನಡೆಯುತ್ತಿದ್ದು ಅದಕ್ಕೆ ಅಧಿಕಾರಸ್ಥ ರಾಜಕಾರಣಿಗಳೇ ಮುತುವರ್ಜಿವಹಿಸಿದ್ದಾರೆ' ಎಂದು ಸಾರ್ವಜನಿಕರು ದೂರುತ್ತಿದ್ದಾರೆ.

'ಸದರಿ ಬಡಾವಣೆಯಲ್ಲಿ ಅಲ್ಲಲ್ಲಿ ಮನೆಗಳು ನಿರ್ಮಾಣಗೊಂಡಿವೆ, ಆದರೆ ಒಂದು ಕಡೆಯೂ ರಸ್ತೆ, ಚರಂಡಿ, ಬೀದಿದೀಪ ಈ ಯಾವ ಸೌಲಭ್ಯಗಳನ್ನೂ ಮಾಲೀಕರು ಕಲ್ಪಿಸಿಲ್ಲ. ಮುಳ್ಳುಕಂಟಿಗಳು ಬೆಳೆದು ನಿಂತಿವೆ. ಆದರೆ ಅಲ್ಲಿ ರಾಜಕೀಯ ಪ್ರಮುಖರ ಮನೆಗಳ ಗೃಹಪ್ರವೇಶ ಇದೆ ಎಂಬ ಕಾರಣಕ್ಕೆ ತರಾತುರಿಯಲ್ಲಿ ಅನಧಿಕೃತವಾಗಿ ಅಭಿವೃದ್ಧಿ ಕೆಲಸ ನಡೆಸಲಾಗುತ್ತಿದೆ. ಸರ್ಕಾರದ ಆಡಳಿತ ಯಂತ್ರವನ್ನು ತಮ್ಮ ಮನಕ್ಕೆ ತೋಚಿದಂತೆ ಹೇಗೆ ದುರ್ಬಳಕೆ ಮಾಡಿಕೊಳ್ಳಬಹುದು ಎಂಬುದಕ್ಕೆ ಇಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಯೇ ಸ್ಪಷ್ಟ ಉದಾಹರಣೆ' ಎಂಬ ಆರೋಪ ಕೇಳಿಬಂದಿದೆ.

**ಎಇಇ ಹೇಳಿದ್ದು:** ಈ ಕುರಿತು ಪ್ರತಿಕ್ರಿಯಿಸಿದ ಕೆಆರ್‌ಡಿಎಲ್ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಇರ್ಫಾನ್ ಪಠಾಣ್, 'ಕ್ರಿಯಾ ಯೋಜನೆ ಇಲ್ಲದಿದ್ದರೂ ಮುಂದೆ ಈ ಕೆಲಸವನ್ನು ನಮ್ಮ ಏಜೆನ್ಸಿಗೆ ವಹಿಸಿ ಕೆಕೆಆರ್‌ಡಿಬಿ ಅನುದಾನ ಬಿಡುಗಡೆ ಮಾಡಿಸುತ್ತೇವೆ. ತುರ್ತಾಗಿ ಕೆಲಸ ಆರಂಭಿಸುವಂತೆ ಶಾಸಕ ದೊಡ್ಡನಗೌಡ ಪಾಟೀಲ ಹೇಳಿದ್ದಾರೆ. 2025–26ನೇ ಹಣಕಾಸು ವರ್ಷದಲ್ಲಿ ಕೆಕೆಆರ್‌ಡಿಬಿಯಲ್ಲಿ ಈ ಕೆಲಸ ಸೇರಿಸುತ್ತೇವೆ. ಬೇರೆ ಗುತ್ತಿಗೆದಾರರ ಮೂಲಕ ಕೆಲಸ ಮಾಡಿಸುತ್ತಿದ್ದು ನಂತರ ಗುತ್ತಿಗೆದಾರರಿಗೆ ಹಣ ಪಾವತಿಸುತ್ತೇವೆ' ಎಂದರು. ಈ ಸ್ಥಳದಲ್ಲಿ ಅಗತ್ಯವಿದೆ ರಸ್ತೆ ನಿರ್ಮಿಸಿ ಎಂದು ಪುರಸಭೆ ಹೇಳಿಲ್ಲ, ಜಾಗ ತೋರಿಸಿಲ್ಲ. ಆದರೂ ಕೆಲಸ ನಡೆಸಲಾಗುತ್ತಿದೆ ಇದು ಹೇಗೆ ಸಾಧ್ಯ. ಹೀಗೂ ಉಂಟೆ ಎಂದು ಪ್ರಶ್ನಿಸಿದರೆ ಇಲ್ಲ' ಎಂದು ಸ್ಪಷ್ಟಪಡಿಸಿದರು.

ಅಲ್ಲದೆ ಗುಣಮಟ್ಟದ ವಿಷಯದಲ್ಲಿ ಜವಾಬ್ದಾರಿ ಯಾರು ಎಂದು ಕೇಳಿದರೆ ಅದಕ್ಕೆ 'ನಾವೇ' ಎಂದರು. ಗುತ್ತಿಗೆದಾರರಿಂದ ಮಾಡಿಸಿ ನಂತರ ಕೆಆರ್‌ಡಿಎಲ್ ಮೂಲಕ ಗುತ್ತಿಗೆದಾರರಿಗೆ ಹಣ ಪಾವತಿ ಮಾಡುವುದಾದರೆ ಏಜೆನ್ಸಿ ಇರುವುದಾರೂ ಏತಕ್ಕೆ ಎಂದಾಗ ಸ್ಪಷ್ಟ ಉತ್ತರ ನೀಡಲಿಲ್ಲ.


ಉದಯವಾಹಿನಿ ಚಿತ್ರ

**ಶಾಸಕರಿಗೆ ಅಷ್ಟೇಕೆ ಪ್ರೀತಿ?**

'ಪಟ್ಟಣದಲ್ಲಿ ರಸ್ತೆ ಚರಂಡಿ ಮೂಲಸೌಲಭ್ಯಗಳೇ ಇಲ್ಲದ ಬಡಾವಣೆಗಳು ಬೇಕಾದಷ್ಟಿವೆ. ಅಂಥ ಸ್ಥಳಗಳ ಬಗ್ಗೆ ಶಾಸಕ ದೊಡ್ಡನಗೌಡ ಪಾಟೀಲರಿಗೆ ದೂರದೃಷ್ಟಿ ಇಲ್ಲ. ತಾಲ್ಲೂಕು ಕೇಂದ್ರದಲ್ಲಿ ಎಲ್ಲೆಲ್ಲಿ ಯಾವ ಕೆಲಸಗಳ ಅಗತ್ಯವಿದೆ ಎಂಬುದನ್ನು ಗಮನಿಸುತ್ತಿಲ್ಲ. ಆದರೆ ಅಕ್ರಮಗಳ ತವರಾಗಿರುವ ವಿವೇಕಾನಂದ ಬಡಾವಣೆಯಲ್ಲಿ ಅವಸರದಲ್ಲಿ ರಸ್ತೆ ಚರಂಡಿ ನಿರ್ಮಿಸುವಂತೆ ಅಧಿಕಾರಿಗಳಿಗೆ ಸೂಚಿಸಿರುವ ಶಾಸಕರಿಗೆ ಆ ಬಡಾವಣೆಯ ಬಗ್ಗೆ ಅಷ್ಟೊಂದು ಪ್ರೀತಿ ಏಕೆ ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ಸಾರ್ವಜನಿಕರು ಅಸಮಾಧಾನ ಹೊರಹಾಕಿದರು.

> ಹೆಸರಿಗೆ ಮಾತ್ರ ಇದು ಬಡಾವಣೆ ಒಂದು ಬುಟ್ಟಿ ಕಲ್ಲು ಸಹ ಹಾಕಿಲ್ಲ. ಆದರೆ ಸರ್ಕಾರದ ಖರ್ಚಿನಲ್ಲಿ ರಾಜಕೀಯ ವ್ಯಕ್ತಿಗಳ ಮನೆವರೆಗೆ ರಸ್ತೆ ನಿರ್ಮಿಸಲು ಅನುದಾನ ಬಿಡುಗಡೆಗೆ ಮುಂದಾಗಿರುವುದು ಸರಿಯಲ್ಲ.
> –ಹನುಮಗೌಡ ಪಾಟೀಲ, ನಿವಾಸಿ

> ಮಾಲೀಕರು ಲೇಔಟ್ ಅಭಿವೃದ್ಧಿಪಡಿಸಹುದಾಗಿತ್ತು. ಆದರೆ ಈಗ ಅಲ್ಲೆಲ್ಲ ಮನೆಗಳಾಗಿವೆ. ಹಾಗಾಗಿ ರಸ್ತೆ ಚರಂಡಿ ನಿರ್ಮಿಸಲು ಸೂಚಿಸಲಾಗಿದೆ. ಮುಂದೆ ಕೆಕೆಆರ್‌ಡಿಬಿಯಲ್ಲಿ ಈ ಕೆಲಸ ಸೇರಿಸಲಾಗುತ್ತದೆ.
> –ದೊಡ್ಡನಗೌಡ ಪಾಟೀಲ, ಶಾಸಕ

**ಕ್ರಿಯಾಯೋಜನೆ ಇಲ್ಲದೆ ಕಾಮಗಾರಿ?**

## ಸಂಚಾರಿ ಆರೋಗ್ಯ ಘಟಕ ವಾಹನಗಳಿಗೆ ಚಾಲನೆ

• ಉದಯವಾಹಿನಿ ಚಿತ್ರದುರ್ಗ

ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಒದಗಿಸುವ ಸಂಚಾರಿ ಆರೋಗ್ಯ ಘಟಕದ ಎರಡು ವಾಹನಗಳಿಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕಾರ್ಮಿಕ ಇಲಾಖೆ ಹಾಗೂ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಸಂಚಾರಿ ಆರೋಗ್ಯ ಕ್ಲಿನಿಕ್‌ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಕಾರ್ಮಿಕ ಅಧಿಕಾರಿ ಅನಿಲ ಬಾಲಚಂದ್ರ ಬಗಟಿ ಮಾತನಾಡಿ, ಎರಡು ತಾಲ್ಲೂಕುಗಳಿಗೆ ಒಂದರಂತೆ ಜಿಲ್ಲೆಗೆ 3 ಸಂಚಾರಿ ಆರೋಗ್ಯ ಘಟಕ ವಾಹನಗಳು ಮಂಜೂರಾಗಿದ್ದು, ಸದ್ಯದ ಮಟ್ಟಿಗೆ ಎರಡು ವಾಹನಗಳು ಕಾರ್ಯ ನಿರ್ವಹಿಸಲಿವೆ ಎಂದು ಹೇಳಿದರು.

ಸಂಚಾರಿ ಆರೋಗ್ಯ ಘಟಕವು ರೂಟ್ ಮ್ಯಾಪ್‌ನಂತೆ ನಿಗಧಿತ ಸ್ಥಳಗಳಲ್ಲಿ ಕನಿಷ್ಟ 4 ಗಂಟೆ ಕಾರ್ಯನಿರ್ವಹಿಸಲಿದೆ. ಸಂಚಾರಿ ಆರೋಗ್ಯ ಘಟಕದಲ್ಲಿ ವೈದ್ಯರು ಒಳಗೊಂಡಂತೆ, ಒಟ್ಟು ಆರು ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ. ಈ ಘಟಕದಲ್ಲಿ ವೈದ್ಯಕೀಯ ಉಪಕರಣಗಳು, ಪ್ರಯೋಗಾಲಯಗಳು ಹಾಗೂ ವೈದ್ಯಕೀಯ ಬಳಕೆಯ ವಸ್ತುಗಳು ಲಭ್ಯವಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕಾರ್ಮಿಕ ನಿರೀಕ್ಷಕರಾದ ರಾಜಣ್ಣ, ಕುಸುಮ, ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ಕಾರ್ಮಿಕ ಸಂಘಟನೆಗಳ ಮುಖಂಡರು ಇದ್ದರು.



ಉದಯವಾಹಿನಿ ಚಿತ್ರ

> ಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮವಹಿಸಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ಅವರಿರುವ ಸ್ಥಳಕ್ಕೆ ತೆರಳಿ ಉಚಿತವಾಗಿ ಆರೋಗ್ಯ ತಪಾಸಣೆಗೆ ಒಳಪಡಿಸುವುದು, ಚಿಕಿತ್ಸೆ ಹಾಗೂ ಸಲಹೆ ಸೇರಿದಂತೆ ಮೊದಲಾದ ಸೇವೆ ಒದಗಿಸಲು ಸಂಚಾರಿ ಆರೋಗ್ಯ ಕ್ಲಿನಿಕ್‌ಗಳು ಕಾರ್ಯಾರಂಭಗೊಂಡಿದ್ದು, ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಅವರ ಅವಲಂಬಿತರು ಈ ಯೋಜನೆಯ ಸದುಪಯೋಗ ಪಡೆದು ಕೊಳ್ಳಬೇಕು
> –ಡಿ.ಸುಧಾಕರ್, ಜಿಲ್ಲಾ ಉಸ್ತುವಾರಿ ಸಚಿವ

## ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಕ್ರಮಕ್ಕೆ ಆಗ್ರಹ

• ಉದಯವಾಹಿನಿ ಬೀದರ್

ನಗರದಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಕೋಚಿಂಗ್ ಸೆಂಟರ್‌ಗಳು ಹಾಗೂ ಅಧಿಕ ಶುಲ್ಕ ಪಡೆಯುತ್ತಿರುವ ಖಾಸಗಿ ಕಾಲೇಜುಗಳ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿದರು.

ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಸೊಮನಾಥ ಮುಧೋಳ ನೇತೃತ್ವದಲ್ಲಿ ಧರಣಿ ನಡೆಸಿ, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರಿಗೆ ಬರೆದ ಮನವಿ ಪತ್ರವನ್ನು ಸ್ಥಳಕ್ಕೆ ಬಂದ ಇಲಾಖೆಯ ಉಪ ನಿರ್ದೇಶಕ ಚಂದ್ರಕಾಂತ ಶಹಾಬಾದಕರ್ ಅವರಿಗೆ ಸಲ್ಲಿಸಿದರು.

ನಗರದ ಚಿದ್ರಿ ರಸ್ತೆಯಲ್ಲಿ ಇರುವ ಹನುಮಾನ ನಗರದಲ್ಲಿ ಫಿಜಿಕ್ಸ್ ವಾಲಾ ವಿದ್ಯಾಪೀಠ ಪಾಠಶಾಲಾ ಕೋಚಿಂಗ್ ಸೆಂಟರ್ ಅನಧಿಕೃತವಾಗಿ ನಡೆಸಲಾಗುತ್ತಿದೆ. ಬೇರೆ ಬೇರೆ ಕಾಲೇಜುಗಳ ಹೆಸರಲ್ಲಿ ದಾಖಲಾತಿ ಮಾಡಿಸಿಕೊಂಡು, ವಿದ್ಯಾರ್ಥಿಗಳಿಂದ ಲಕ್ಷಾಂತರ ರೂಪಾಯಿ ಪಡೆದು, ಆನ್‌ಲೈನ್, ಆನ್‌ಲೈನ್ ಕೋಚಿಂಗ್ ಕೊಡಲಾಗುತ್ತಿದೆ ಎಂದು ಆರೋಪಿಸಿದರು.

ಬನ್ಸಾಲ್ ಹಾಗೂ ಆಕಾಶ್ ಕೋಚಿಂಗ್ ಸೆಂಟರ್ ಹೆಸರಲ್ಲಿಯೂ ದಾಖಲಾತಿ ಮಾಡಿಸಿಕೊಂಡು ನೂರಾರು ವಿದ್ಯಾರ್ಥಿಗಳನ್ನು ವಂಚಿಸಲಾಗುತ್ತಿದೆ ಎಂದು ಆಪಾದಿಸಿದರು. ಅಧಿಕೃತ ಕಾಲೇಜುಗಳು ಸಹ ನೀಟ್, ಕೆಸಿಇಟಿ, ಜೆಇಇ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ವರ್ಷಕ್ಕೆ ರೂ. 1.50 ಲಕ್ಷದಿಂದ ರೂ. 2 ಲಕ್ಷದವರೆಗೆ ಶುಲ್ಕ ವಸೂಲಿ ಮಾಡುತ್ತಿವೆ ಎಂದು ದೂರಿದರು.

ಶಿಕ್ಷಣ ಸಂಸ್ಥೆಗಳು ಹೆಚ್ಚಿನ ಶುಲ್ಕ ಪಡೆಯುತ್ತಿರುವುದರಿಂದ ಮಕ್ಕಳ ಶಿಕ್ಷಣ ಪಾಲಕರಿಗೆ ಹೊರೆಯಾಗಿದೆ. ಶುಲ್ಕ ಕಟ್ಟಲು ವಿಳಂಬ ಮಾಡಿದ ವಿದ್ಯಾರ್ಥಿಗಳಿಗೆ ಕಿರುಕುಳ ನೀಡುತ್ತಿರುವ ಘಟನೆಗಳೂ ನಡೆಯುತ್ತಿವೆ ಎಂದು ದೂರಿದರು. ಅಧಿಕಾರಿಗಳು ಕೂಡ ಕೋಚಿಂಗ್ ಸೆಂಟರ್ ಮಾಫಿಯಾ ಜತೆ ಕೈಜೋಡಿಸಿದ್ದಾರೆ ಎಂದು ಆರೋಪಿಸಿದರು.

ಹೆಚ್ಚು ಶುಲ್ಕ ಪಡೆಯುತ್ತಿರುವ ಕಾಲೇಜುಗಳು ಹಾಗೂ ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಕ್ರಮ ಜರುಗಿಸಬೇಕು. ಇಲ್ಲವಾದಲ್ಲಿ ಶಾಲಾ, ಕಾಲೇಜುಗಳ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

## ದೇಶಪಾಂಡೆಗೆ ಸಾಹಿತ್ಯ ಸೇವಾ ರತ್ನ ಪ್ರಶಸ್ತಿ ಪ್ರದಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಸುರೇಶ ದೇಶಪಾಂಡೆ ಅವರಿಗೆ ರೇಣುಕಾಂಬ ಕಲಾಸಂಘದವರಿಂದ ಬೆಂಗಳೂರಿನ ಕನ್ನಡ ಭವನದ ನಯನ ಸಭಾಂಗಣದಲ್ಲಿ ರಾಜ್ಯ ಮಟ್ಟದ ಸಾಹಿತ್ಯ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ನಾಟಕ ಅಕಾಡೆಮಿ ಅಧ್ಯಕ್ಷ ನಾಗೇಶಮೂರ್ತಿ,ನವಭಾರತ ಉದಯ ಪ್ರತಿಷ್ಠಾನ ನಾಟಕ ನಿರ್ದೇಶಕ ತುಕ್ಕಪ್ಪ,ಹಾಗೂ ಪ್ರಶಸ್ತಿ ಪುರಸ್ಕೃತರಾದ ಅಂಬುಜಾ ಎಂ.ಡಿ ಮತ್ತು ಜ್ಯೋತಿ ಲಿಂಗಂಪಲ್ಲಿ ಸೇರಿದಂತೆ ಅನೇಕರಿದ್ದರು.

## ನೀರು, ಮೇವಿನ ಸಮಸ್ಯೆ ಕುರಿತು ಸಭೆ

• ಉದಯವಾಹಿನಿ, ಕಮಲಾಪುರ

ನೈಸರ್ಗಿಕ ವಿಕೋಪ ಕುರಿತು ಕಮಲಾಪುರ ತಾಲೂಕ ನೋಡಲ್ ಅಧಿಕಾರಿ ಅರುಣಕುಮಾರ ಕುಲಕರ್ಣಿ ಅವರ ಅಧ್ಯಕ್ಷತೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ, ಜಾನುವಾರುಗಳ ಮೇವಿನ ಸಮಸ್ಯೆಯ ಬಗ್ಗೆ, ಬಿಸಿಲಿನ ತಾಪದಿಂದ, ಗುಡುಗು ಸಿಡಿಲಿನಿಂದ ರಕ್ಷಣೆಯ ಬಗ್ಗೆ ಕಮಲಾಪುರ ತಹಶೀಲ ಕಛೇರಿಯಲ್ಲಿ ಸಭೆ ಜರುಗಿತು.

ಗ್ರಾಮಗಳಲ್ಲಿ ನೀರಿನ ಅಭಾವ ಕಂಡುಬಂದಲ್ಲಿ ರೈತರಿಂದ ಖಾಸಗಿಯಾಗಿ ಕೊಳವೆ ಬಾವಿ ಪಡೆದು ನೀರು ಒದಗಿಸುವಂತೆ, ನೀರು ಪೋಲಾಗದಂತೆ ಕ್ರಮವಹಿಸುವುದು, ಜಾನುವಾರುಗಳಿಗೆ ಮೇವಿನ ಅಭಾವವಾಗದಂತೆ ಕ್ರಮವಹಿಸುವಂತೆ ಬಿಸಿಲಿನ ತಾಪ, ಗುಡುಗು ಸಿಡಿಲಿನಿಂದ ರಕ್ಷಣೆಯ ಬಗ್ಗೆ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ತಿಳಿ ಹೇಳುವಂತೆ ಸೂಚಿಸಲಾಯಿತು ಈ ವೇಳೆ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಪಶು ವೈದ್ಯಕೀಯ ಅಧಿಕಾರಿಗಳು, ಮತ್ತು ತಾಲ್ಲೂಕಿನ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

## ದೇಗುಲದಲ್ಲಿ ವಿಶೇಷ ಪೂಜೆ

• ಉದಯವಾಹಿನಿ, ಬಳ್ಳಾರಿ

ಭಾರತೀಯ ಸೇನೆಯು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಆಪರೇಷನ್ ಸಿಂಧೂರ ಯಶಸ್ವಿಯಾಗಿ ನಡೆಸಿದೆ. ಬಳ್ಳಾರಿ ಬಿಜೆಪಿ ಘಟಕದ ವತಿಯಿಂದ ಕನಕ ದುರ್ಗಮ್ಮ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ ನೂರಾಒಂದು ತೆಂಗಿನಕಾಯಿ ಒಡೆದು ಪ್ರಾರ್ಥನೆ ಮಾಡಲಾಯಿತು. ಭಾರತೀಯ ಯೋಧರಿಗೆ ಒಳ್ಳೆಯದಾಗಲಿ ಎಂದು ಹಾರೈಸಿ ಮುಂಜಾನೆ ಸೈನಿಕರಿಗಾಗಿ ದೇವಿಗೆ ಪೂಜೆ ಸಲ್ಲಿಕೆ ಮಾಡಲಾಗಿದೆ.

ದೇಶಕಾಯುವ ಯೋಧರಿಗೆ ಯಾವುದೇ ತೊಂದರೆ ಆಗದಂತೆ ಕಾಪಾಡುವಂತೆ ಪ್ರಾರ್ಥಿಸಿ ಸಂಕಲ್ಪ ಮಾಡಿದ್ದಾರೆ. ಈ ಸಂದರ್ಭದಲ್ಲಿವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ಬಿಜೆಪಿ ಮುಖಂಡ ದಿವಾಕರ್, ಪಾಲಿಕೆ ಸದಸ್ಯ ಗೋವಿಂದರಾಜುಲು, ಗುಡಿ ಘಂಟಿ ಹನುಮಂತಪ್ಪ, ಉಪಸ್ಥಿತರಿದ್ದರು.

## ಒಳಿತು ಮಾಡುವವರಿಗೆ ಸದಾ ಜನ ಬೆಂಬಲ

• ಉದಯವಾಹಿನಿ ಭಟ್ಕಳ

ಭಟ್ಕಳದಲ್ಲಿ ಅಭಯಮುದ್ರಾ ಹನುಮಂತನ ಮೂರ್ತಿ ಪ್ರತಿಷ್ಠಾಪನೆ ಆಗಿದ್ದು, ಅಭಯ ಮುದ್ರಾ ಎಂದರೆ ನಾನಿದ್ದೇನೆ ಭಯ ಪಡುವುದು ಬೇಡಾ ಎಂದರ್ಥ. ಯುದ್ಧದ ಸನ್ನಿವೇಶದಲ್ಲಿ ಹನುಮಂತ ಪೀಠ ಏರಿ ಇಡೀ ಪ್ರಪಂಚಕ್ಕೆ ಅಭಯ ನೀಡಿದ್ದಾನೆ' ಎಂದು ಹೊಸನಗರ ರಾಮಚಂದ್ರಾಪುರ ಮಹಾಸಂಸ್ಥಾನದ ಮಠಾಧೀಶ ರಾಘವೇಶ್ವರ ಭಾರತೀ ಸ್ವಾಮೀಜಿ ಹೇಳಿದರು.

ಮಣ್ಣುಳಿ ಹನುಮಂತ ಹಾಗೂ ಲಕ್ಷ್ಮೀ ನಾರಾಯಣ ದೇವಸ್ಥಾನದ ಪುನರ್ ಪ್ರತಿಷ್ಠಾ ಮಹೋತ್ಸವ ಕಾರ್ಯಕ್ರಮದಲ್ಲಿ ಹೆದ್ದಾರಿ ಅಂಚಿನಲ್ಲಿ ನಿರ್ಮಿಸಿದ 41 ಅಡಿ ಎತ್ತರದ ಹನುಮಂತನ ಮೂರ್ತಿಯನ್ನು ಲೋಕಾರ್ಪಣೆಗೊಳಿಸಿ ಆಶೀರ್ವಚನ ನೀಡಿದರು. ಸಮಾಜದಲ್ಲಿ ಒಳ್ಳೆ ಕೆಲಸ ಮಾಡುವವರಿಗೆ ಸದಾ ಜನರ ಬೆಂಬಲವಿರುತ್ತದೆ. ದೇವರು ಕೂಡ ಒಳ್ಳೆ ಕೆಲಸ ಮಾಡುವವರರ ಬೆನ್ನಿಗೆ ನಿಂತು ಆಶೀರ್ವದಿಸುತ್ತಾನೆ' ಎಂದರು. ದೇವಸ್ಥಾನದ ಜೀರ್ಣೋದ್ದಾರ ಸಮಿತಿ ಅಧ್ಯಕ್ಷ ಸುಭಾಷ ಶೆಟ್ಟಿ ಮಾತನಾಡಿದರು. ಸಭಾ ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಶ್ರೀಗಳಿಗೆ ಪೂರ್ಣಕುಂಭ ಸ್ವಾಗತ ನೀಡಿ ಪಾದಪೂಜೆ ನೆರವೇರಿಸಲಾಯಿತು. ಗಾಣಿಗ ಸಮಾಜದ ಪ್ರಮುಖರಾದ ಆನಂದ ಶೆಟ್ಟಿ, ರಾಮದಾಸ ಶೆಟ್ಟಿ, ಶಿವರಾಮ ಶೆಟ್ಟಿ, ನಾರಾಯಣ ಶೆಟ್ಟಿ, ಮಹೇಶ ಶೆಟ್ಟಿ, ಸುಬ್ರಮಣ್ಣ ಶೆಟ್ಟಿ, ಇತರರು ಇದ್ದರು.


ಉದಯವಾಹಿನಿ ಚಿತ್ರ

## ಕಂದಾಯ ಗ್ರಾಮ: 2,342 ಹಕ್ಕುಪತ್ರ ವಿತರಣೆಗೆ ಸಿದ್ಧತೆ

• ಉದಯವಾಹಿನಿ ಚಿಕ್ಕಮಗಳೂರು

ಹೆಸರೇ ಇಲ್ಲದ ಜನವಸತಿಗಳನ್ನು ಕಂದಾಯ ಗ್ರಾಮವನ್ನಾಗಿಸುವ ಪ್ರಕ್ರಿಯೆ ಜಿಲ್ಲೆಯಲ್ಲಿ ಚುರುಕುಗೊಂಡಿದ್ದು, 2300ಕ್ಕೂ ಹೆಚ್ಚು ಹಕ್ಕು ಪತ್ರಗಳನ್ನು ನೀಡಲು ಜಿಲ್ಲಾಡಳಿತ ಸಜ್ಜಾಗಿದೆ.

ಸರ್ಕಾರಿ ಜಾಗ ಮತ್ತು ಖಾಸಗಿ ಜಾಗಗಳಲ್ಲಿ ಜನವಸತಿಗಳು ಹಲವು ವರ್ಷಗಳಿಂದ ತಲೆ ಎತ್ತಿವೆ. ಈ ಜನ ವಸತಿಗಳ ನಿವಾಸಿಗಳು ಹಕ್ಕು ಪತ್ರಕ್ಕಾಗಿ ಹಲವು ವರ್ಷಗಳಿಂದ ಕಾದಿದ್ದಾರೆ. ಈ ಜನವಸತಿಗಳನ್ನು ಅಧಿಕೃತವಾಗಿ ಗ್ರಾಮಗಳನ್ನಾಗಿಸುವ ಪ್ರಕ್ರಿಯೆಯನ್ನು ಕಂದಾಯ ಇಲಾಖೆ ತೀವ್ರಗೊಳಿಸಿದೆ.

ಕಡೂರು, ತರೀಕೆರೆ, ಅಜ್ಜಂಪುರ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಒಟ್ಟು 117 ಜನವಸತಿಗಳನ್ನು ಕಂದಾಯ ಗ್ರಾಮವನ್ನಾಗಿ ಘೋಷಿಸಬೇಕಿದೆ. ಈ ಪೈಕಿ ಕಡೂರು ತಾಲ್ಲೂಕಿನಲ್ಲೇ ಅತೀ ಹೆಚ್ಚು 69 ಜನವಸತಿಗಳಿವೆ.

ನಾಲ್ಕು ತಾಲ್ಲೂಕುಗಳ ವ್ಯಾಪ್ತಿಯ 100 ಗ್ರಾಮಗಳಿಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದರೆ, 69 ಗ್ರಾಮಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಅಂತಿಮ ಅಧಿಸೂಚನೆಗೆ ಕಳುಹಿಸಿರುವ 26 ಗ್ರಾಮಗಳ ಕಡತ ಸರ್ಕಾರದ ಮುಂದೆ ಅಂತಿಮ ಅಧಿಸೂಚನೆಗೆ ಬಾಕಿ ಇವೆ.

ಜಿಲ್ಲೆಯಲ್ಲಿ ಒಟ್ಟು 5 ಸಾವಿರಕ್ಕೂ ಹೆಚ್ಚು ವಸತಿಗಳಿಗೆ ಹಕ್ಕುಪತ್ರ ನೀಡುವ ಅಗತ್ಯವಿದ್ದು, ಈಗಾಗಲೇ ಅಂತಿಮ ಅಧಿಸೂಚನೆ ಹೊರಡಿಸಿರುವ 69 ಗ್ರಾಮಗಳ 2,342 ವಸತಿಗಳಿಗೆ ಹಕ್ಕುಪತ್ರ ನೀಡಲು ಸಿದ್ಧತೆ ನಡೆದಿದೆ. ಹಲವು ಹಂತದ ಪ್ರಕ್ರಿಯೆಗಳು ನಡೆಯುತ್ತಿವೆ.

**ಗ್ರಾಮಗಳಿಗೆ ಅಂತಿಮ ಅಧಿಸೂಚನೆ**

956 ಹಕ್ಕುಪತ್ರಗಳನ್ನು ಫಲಾನುಭವಿಗಳ ಹೆಸರಿಗೆ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿ ಮಾಡಿ ಸಲಾಗಿದ್ದು, 892 ಫಲಾನುಭವಿಗಳ ಹೆಸರಿಗೆ ಇ–ಸ್ವತ್ತು ಕೂಡ ಆಗಿದೆ. ಹಂತ–ಹಂತವಾಗಿ ಈ ಪ್ರಕ್ರಿಯೆ ನಡೆಯುತ್ತಿದ್ದು, ಶೀಘ್ರವೇ 2,342 ಜನರ ಮನೆಗಳನ್ನೂ ಇ–ಸ್ವತ್ತು ಮಾಡಿಸಿ ಹಕ್ಕುಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸಲಾಗುವುದು ಎಂದು ಕಂದಾಯ ಇಲಾಖೆ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

## ವಿದೇಶಿ ಪ್ರವಾಸಿಗರನ್ನು ಕರೆತಂದ ಐಷಾರಾಮಿ ಹಡಗು

• ಉದಯವಾಹಿನಿ ಮಂಗಳೂರು

ಈ ಋತುವಿನ 7ನೇ ಹಾಗೂ ಕೊನೆಯ ಹಡಗು 'ಎಂಎಸ್ ಸೆವೆನ್ ಸೀಸ್ ವಾಯೇಜರ್' ಅನ್ನು ನವಮಂಗಳೂರು ಬಂದರು ಪ್ರಾಧಿಕಾರದ ನಾಲ್ಕನೇ ಬರ್ತ್‌ನಲ್ಲಿ ಸ್ವಾಗತಿಸಲಾಯಿತು.

ಕೊಲಂಬೊದಿಂದ ಹೊರಟ ಹಡಗು ಕೊಚ್ಚಿ, ಮಂಗಳೂರು, ಮೊರ್ಮುಗೋವಾ, ಮುಂಬೈ ಮಾರ್ಗವಾಗಿ ದುಬೈ ತಲುಪಲಿದೆ. ಹಡಗಿನಲ್ಲಿ 583 ವಿದೇಶಿ ಪ್ರಯಾಣಿಕರು, 458 ಸಿಬ್ಬಂದಿ ಇದ್ದಾರೆ. ಹಡಗಿನಲ್ಲಿ ಬಂದವರನ್ನು ಚೆಂಡೆ ವಾದನ, ಯಕ್ಷಗಾನ ಪ್ರದರ್ಶನದೊಂದಿಗೆ ಸ್ವಾಗತಿಸಲಾಯಿತು. ಭರತನಾಟ್ಯ, ಸ್ಥಳೀಯ ಕಲಾ ಪ್ರಕಾರಗಳನ್ನು ವೀಕ್ಷಿಸಿದರು.

ಕಾರ್ಕಳ, ಮೂಡುಬಿದಿರೆಯ ಸಾವಿರ ಕಂಬಗಳ ಬಸದಿ, ಕುದ್ರೋಳಿ ಗೋಕರ್ಣನಾಥ ದೇವಾಲಯ, ಸೋಸ್ ಫಾರ್ಮ್, ಪಿಲಿಕುಳ ಮತ್ತಿತರ ಕಡೆಗಳಿಗೆ ಪ್ರಯಾಣಿಕರು ಭೇಟಿ ನೀಡಿದರು. ಸಂಜೆ ಪ್ರಯಾಣಿಕರನ್ನು ಹೊತ್ತ ಹಡಗು ಗೋವಾ ಕಡೆಗೆ ಸಾಗಿತು.


ಉದಯವಾಹಿನಿ ಚಿತ್ರ

## ವಿದ್ಯಾರ್ಥಿಗಳಿಗೆ ಸಾಧಿಸುವ ಗುರಿ ಅಗತ್ಯ: ವಂದನಾ

• ಉದಯವಾಹಿನಿ ನ್ಯಾಮತಿ

ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡುವ ಗುರಿ ಹೊಂದಿರಬೇಕು ಎಂದು ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ವಂದನಾ ಹೇಳಿದರು.

ಪಟ್ಟಣದ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು, ಸಂಸ್ಕಾರವಂತರಾಗಿ, ಗುರು–ಹಿರಿಯರು ಹಾಗೂ ಪೋಷಕರನ್ನು ಗೌರವಿಸುವ ಮನೋಭಾವ ಬೆಳಸಿಕೊಳ್ಳಬೇಕು. ಸಮಾಜಮುಖಿ ಜೀವನ ನಡೆಸಬೇಕು ಎಂದು ಹಾರೈಸಿದರು.


ಉದಯವಾಹಿನಿ ಚಿತ್ರ

### • 2025–26ನೇ ಸಾಲಿನ ತಂಬಾಕು ನಿಯಂತ್ರಣ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

# ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಸೂಚನೆ

• ಉದಯವಾಹಿನಿ, ವಿಜಯಪುರ

ಜಿಲ್ಲೆಯಾದ್ಯಂತ ಇರುವ ಶಾಲಾ–ಕಾಲೇಜ್ ಆವರಣದ 100 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳ ಮಾರಾಟವಾಗದಂತೆ ನಿಗಾವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 2025–26ನೇ ಸಾಲಿನ ತಂಬಾಕು ನಿಯಂತ್ರಣ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಶಾಲಾ–ಕಾಲೇಜ್‌ನಲ್ಲಿ ತಂಬಾಕು ನಿಯಂತ್ರಣ ಸಮಿತಿ ರಚಿಸಿ ನಿಯಮಗಳನ್ವಯ ಕಟ್ಟುನಿಟ್ಟಿನ ಕ್ರಮ ವಹಿಸಬೇಕು.

ತಂಬಾಕು ಉತ್ಪನ್ನಗಳ ಉಪಯೋಗದಿಂದ ದುಷ್ಪರಿಣಾಮ ಹಾಗೂ ಕಾಯ್ದೆಯ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ತಂಬಾಕು ಉತ್ಪನ್ನಗಳ ನಿಯಂತ್ರಣಕ್ಕೆ ತನಿಖಾ ದಳಗಳನ್ನು ರಚಿಸಿಕೊಂಡು ಕ್ರಿಯಾಶೀಲತೆಯಿಂದ ಕಾಲ ಕಾಲಕ್ಕೆ ದಾಳಿ ನಡೆಸಬೇಕು.

ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸೂಕ್ತ ತಿಳಿವಳಿಕೆ, ಅರಿವು ಮೂಡಿಸುವಂತೆ ತಿಳಿಸಿದ ಅವರು, ಶಾಲಾ ಶಿಕ್ಷಣ ಸಂಸ್ಥೆಗಳು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಯ ಮಾರ್ಗಸೂಚಿಗಳನ್ನು ದಾಖಲಿಸಬೇಕು.

ಟೂ ಫಿಯಟ್ ತಂತ್ರಾಂಶದಲ್ಲಿ 3325ರ ಶಿಕ್ಷಣ ಸಂಸ್ಥೆಗಳ ಪೈಕಿ 1353 ದಾಖಲಾಗಿದ್ದು, ಬಾಕಿ ಇರುವ 1972 ಸಂಸ್ಥೆಗಳ ಹಾಗೂ 253 ಪದವಿಪೂರ್ವ ಶಿಕ್ಷಣ ಇಲಾಖೆ ಸಂಸ್ಥೆಗಳ ಬಾಕಿ ಇರುವ 50 ಸಂಸ್ಥೆಗಳ ದಾಖಲೀಕರಣಕ್ಕೆ ಅವರು ಸೂಚನೆ ನೀಡಿದರು.

ಗ್ರಾಮ ಮಟ್ಟದಲ್ಲಿ ಪಂಚಾಯತಿ ಅಧ್ಯಕ್ಷರ ನೇತೃತ್ವದಲ್ಲಿ ಗ್ರಾಮ ಪಂಚಾಯತ್ ಸದಸ್ಯರು, ಶಾಲಾ ಶಿಕ್ಷಕರು, ಪಂಚಾಯತ್ ಅಭಿವೃದ್ದಿ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಸಮುದಾಯ ಆರೋಗ್ಯ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘ, ಯುವಕ ಸಂಘದ ಅಧ್ಯಕ್ಷರು, ಪ್ರತಿನಿಧಿಗಳು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳನ್ನೊಳಗೊಂಡ ಗ್ರಾಮ ಮಟ್ಟದಲ್ಲಿ ಸಮನ್ವಯ ಸಮಿತಿ ರಚಿಸಿಕೊಂಡು ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಹಾಗೂ ಲಭ್ಯವಿರುವ ಆರೋಗ್ಯ ಮಾಹಿತಿ ಒದಗಿಸುವುದು, ಗ್ರಾಮ ಸಭೆಗಳನ್ನು ಆಯೋಜಿಸಿ ಜಾಗೃತಿ ಮೂಡಿಸುವುದು, ಕೊಟ್ಪಾ–2003ರ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಅವರು ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

**ಕಟ್ಟುನಿಟ್ಟಿನ ಕ್ರಮ**

### ತಂಬಾಕು ತ್ಯಜಿಸಲು ಪ್ರೇರೆಪಿಸಬೇಕು

ಮಾರ್ಗಸೂಚಿಯನ್ವಯ ಗ್ರಾಮೀಣ ಪ್ರದೇಶಗಳಲ್ಲಿ ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಕೋಟ್ಪಾ–2003ರ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ತಂಬಾಕು ಸೇವನೆ ತ್ಯಜಿಸಲು ಅಗತ್ಯ ಆರೋಗ್ಯ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆ (ಕೌನ್ಸೆಲಿಂಗ್) ನಡೆಸಿ, ತಂಬಾಕು ತ್ಯಜಿಸಲು ಪ್ರೇರೆಪಿಸಬೇಕು, ಯುವ ಸಮುದಾಯದಲ್ಲಿ ಅರಿವು ಮೂಡಿಸಬೇಕು. ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಅಧಿಸೂಚನೆಯ ಮಾರ್ಗಸೂಚಿಯಂತೆ ಪ್ರತಿ ಗ್ರಾಮಗಳಲ್ಲಿ ಹಮ್ಮಿಕೊಳ್ಳುವಂತೆ ತಿಳಿಸಿದ ಅವರು, ಗ್ರಾಮ ಮಟ್ಟದಲ್ಲಿ ಸಮನ್ವಯ ಸಮಿತಿಯನ್ನು ರಚಿಸಿಕೊಳ್ಳಲು ಪತ್ರ ಬರೆಯುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಅವರು ಸೂಚನೆ ನೀಡಿದರು.


> ತಾಲ್ಲೂಕುಗಳಲ್ಲಿ ಪ್ರತಿ ತಿಂಗಳು ಕಡ್ಡಾಯವಾಗಿ ಆಹಾರ ಸುರಕ್ಷತೆ ಗುಣಮಟ್ಟ ಪ್ರಾಧಿಕಾರ ದಾಳಿ ಕೈಗೊಳ್ಳಬೇಕು. ತಾಲೂಕಾ ತನಿಖಾ ತಂಡ ನಿಯಮಿತವಾಗಿ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆ ನಡೆಸಬೇಕು. ಅಬಕಾರಿ ಇಲಾಖೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶಕ್ಕೆ ಅಗತ್ಯ ಸಹಕಾರ ಒದಗಿಸಬೇಕು. ಮೇ.31ರ ವಿಶ್ವ ತಂಬಾಕು ರಹಿತ ದಿನ ಆಚರಣೆ ಅಂಗವಾಗಿ ಎಲ್ಲಾ ತಾಲ್ಲೂಕಾ ಕೇಂದ್ರ, ಪ್ರಾಥಮಿಕ–ಸಮುದಾಯ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಅರಿವು–ಜಾಗೃತಿ ಮೂಡಿಸುವುದರೊಂದಿಗೆ ಕಾಯ್ದೆ ಉಲ್ಲಂಘಿಸಿದ ಪ್ರಕರಣಗಳನ್ನು ಪತ್ತೆ ಹಚ್ಚುವಂತೆ ಅವರು ಸೂಚನೆ –ಜಿಲ್ಲಾಧಿಕಾರಿ

## ನರೇಂದ್ರ ಮೋದಿ ಹೆಸರು ಹೇಳುವ ತಾಕತ್ತಿಲ್ಲದ ಶೆಹಬಾಜ್ ಷರೀಫ್ ಓರ್ವ ಹೇಡಿ; ಪಾಕಿಸ್ತಾನ ಸಂಸದ ಗುಟುರು!

# ಪಾಕಿಸ್ತಾನದಲ್ಲಿ ಶೆಹಬಾಜ್ ಷರೀಫ್ ವಿರುದ್ಧ ಭುಗಿಲೆದ್ದ ಆಕ್ರೋಶ

**ಮೋದಿ ಹೆಸರನ್ನು ಹೇಳಲೂ ಸಾಧ್ಯವಿಲ್ಲ**

**ಇಸ್ಲಾಮಾಬಾದ್:** ಭಾರತದ ವಿರುದ್ಧ ಪಾಕಿಸ್ತಾನದ ನಡವಳಿಕೆಗಳ ಬಗ್ಗೆ ಅಲ್ಲಿನ ಜನರೇ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಭಯೋತ್ಪಾದನೆಗೆ ಪಾಕಿಸ್ತಾನ ಬೆಂಬಲ ನೀಡುತ್ತಿರುವ ಬಗ್ಗೆ, ಜಗತ್ತಿನಾದ್ಯಂತ ಟೀಕೆಗಳು ಕೇಳಿಬರುತ್ತಿವೆ. ಈ ಹಿನ್ನೆಲೆಯಲ್ಲಿ ಪಾಕಿಸ್ತಾನದ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ಅವರು ತೀವ್ರ ಮುಜುಗರ ಅನುಭವಿಸುವಂತಾಗಿದೆ. ಇದಕ್ಕೆ ಪುಷ್ಠಿ ಎಂಬಂತೆ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಮುಂದೆ ಷರೀಫ್ ಹೇಡಿಯಂತೆ ವರ್ತಿಸುತ್ತಿದ್ದಾರೆ ಎಂದು ಪಾಕಿಸ್ತಾನ ತೆಹರಿಕ್-ಎ-ಇನ್ಸಾಫ್(ಪಿಟಿಐ) ಸಂಸದ ಶಾಹಿದ್ ಅಹ್ಮದ್ ಖಟ್ಟಕ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.ಪಾಕಿಸ್ತಾನದ ಮೇಲೆ ಭಾರತದ ದಾಳಿ ಬಳಿಕ ಕೈಗೊಂಡ ಕ್ರಮಗಳ ಕುರಿತು ಶೆಹ ಬಾಜ್ ಷರೀಫ್ ಸರ್ಕಾರವನ್ನು ಪ್ರಶ್ನೆ ಮಾಡಿದ ಶಾಹಿದ್ ಅಹ್ಮದ್ ಖಟ್ಟಕ್, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಓರ್ವ ಹೇಡಿ. ಅವರಿಗೆ ನರೇಂದ್ರ ಮೋದಿ ಅವರ ಹೆಸರನ್ನು ಹೇಳಲೂ ಸಾಧ್ಯವಿಲ್ಲ ಎಂದು ತೀವ್ರವಾಗಿ ತರಾಟೆಗೆ ತೆಗೆದು ಕೊಂಡರು. ಭಾರತದ ಮೇಲೆ ದಾಳಿಗೆ ಆದೇಶ ನೀಡಿದ ಶೆಹಬಾಜ್ ಷರೀಫ್, ಈ ದಾಳಿಗಳು ವಿಫಲಗೊಂಡ ನಂತರ ಹೇಡಿಯಂತೆ ವರ್ತಿಸುತ್ತಿದ್ದಾರೆ. ಅವರಿಗೆ ಭಾರತದ ಪ್ರಧಾನಿ ಮೋದಿ ಅವರ ಹೆಸರು ಹೇಳಲೂ ಆಗುತ್ತಿಲ್ಲ. ಇಂತಹ ದುರ್ಬಲ ವ್ಯಕ್ತಿ ನಮ್ಮ ಪ್ರಧಾನಿಯಾಗಿರು ವುದು ನಿಜಕ್ಕೂ ಪಾಕಿಸ್ತಾನಿಯರ ದುರಂತ ಎಂದು ಪಿಟಿಐ ಸಂಸದ ಕಿಡಿಕಾರಿದ್ದಾರೆ. ಶೆಹಬಾಜ್ ಷರೀಫ್ ಅವರ ವಿರುದ್ಧ ಪಾಕಿಸ್ತಾನದಲ್ಲಿ ಆಕ್ರೋಶ ಭುಗಿಲೆದ್ದಿರುವುದು ಸ್ಪಷ್ಟವಾಗುತ್ತಿದೆ. ಪಾಕಿಸ್ತಾನಿಯರು ತಮ್ಮ ಪ್ರಧಾನಿಯ ನಡುವಳಿಕೆಯನ್ನು ಟೀಕಿಸುತ್ತಿದ್ದು, ಭಾರತದ ವಿರುದ್ಧ ಅನವಶ್ಯಕ ಸಂಘರ್ಷಕ್ಕೆ ಅವರೇ ಕಾರಣ ಎಂಬ ಆರೋಪ ಮಾಡುತ್ತಿದ್ದಾರೆ.



ಈ ಹಿಂದೆಯೂ ಅನೇಕ ಬಾರಿ ಶೆಹ ಬಾಜ್ ಷರೀಫ್ ಅವರು ಸಾರ್ವಜನಿಕರಿಂದ ಟೀಕೆಗಳನ್ನು ಎದುರಿಸಿದ್ದಾರೆ. ಭಾರತವು ಪಾಕಿಸ್ತಾನದೊಳಗೆ ನುಗ್ಗಿ ದಾಳಿ ಮಾಡಿದ ನಂತರ ಪತ್ರಿಕಾಗೋಷ್ಠಿ ನಡೆಸಿದ್ದ ಶೆಹಬಾಜ್ ಷರೀಫ್, ಈ ವೇಳೆ ದುರ್ಬಲರಾಗಿ ಕಂಡು ಬಂದಿದ್ದರು. ಅವರ ಆತಂಕದ ನೋಟವನ್ನು ಕಂಡು ನೆಟ್ಟಿಗರು ಭಾರೀ ಟ್ರೋಲ್ ಮಾಡಿದ್ದರು. ಪ್ರಧಾನಿ ಶೆಹ ಬಾಜ್ ಷರೀಫ್ ಅವರಲ್ಲಿ ಆತ್ಮವಿಶ್ವಾಸದ ಕೊರತೆ ಇದೆ, ಇದು ಒಳ್ಳೆಯದಲ್ಲ ಎಂದು ಪಾಕಿಸ್ತಾನದ ಎಕ್ಸ್ ಬಳಕೆದಾರರೊಬ್ಬರು ಪೋಸ್ಟ್ ಮಾಡಿದ್ದರು. ಒಟ್ಟಾರೆಯಾಗಿ, ಪಾಕಿಸ್ತಾನದ ಆಡಳಿತವು ತನ್ನದೇ ಜನರ ವಿಶ್ವಾಸವನ್ನು ಕಳೆದುಕೊಳ್ಳುತ್ತಿದೆ. ಭಯೋತ್ಪಾದನೆಗೆ ಬೆಂಬಲ ನೀಡುವ ನೀತಿಯನ್ನು ಅನುಸರಿಸುತ್ತಿರುವ ಕಾರಣ, ಜಾಗತಿಕವಾಗಿ ಮುಖಭಂಗ ಅನುಭವಿಸುವಂತಾಗಿದೆ. ಭಾರತದ ಮುಂದೆ ಮಂಡಿಯೂರಿರುವ ಪಾಕಿಸ್ತಾನದ ನಾಯಕತ್ವದ ಬಗ್ಗೆ ಸ್ವದೇಶದಲ್ಲೇ ಟೀಕೆಗಳು ವ್ಯಕ್ತವಾಗುತ್ತಿರುವುದು ಗಮನಾರ್ಹ.

### ದೇಶವನ್ನು ರಕ್ಷಿಸುವುದು ಅನುಮಾನ

**ಭಾರತದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ, ಪಾಕಿಸ್ತಾನದಲ್ಲಿ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ವಿರುದ್ಧ ಜನಾಕ್ರೋಶ ಭುಗಿಲೆದ್ದಿದೆ. ಷರೀಫ್ ದೇಶವನ್ನು ರಕ್ಷಿಸುವುದು ಅನುಮಾನ ಎಂಬ ಮಾತುಗಳು ಎಲ್ಲೆಡೆ ಕೇಳಿಬರುತ್ತಿದ್ದು, ಇದಕ್ಕೆ ಪುಷ್ಠಿ ಎಂಬಂತೆ, ಪಾಕಿಸ್ತಾನದ ಓರ್ವ ಸಂಸದ ಶೆಹಬಾಜ್ ಷರೀಫ್ ಅವರನ್ನು ಹೇಡಿ ಎಂದು ಕರೆದಿದ್ದಾರೆ. ಪಾಕಿಸ್ತಾನದ ಸಂಸತ್ತಿನಲ್ಲೇ ಸಂಸದ ಶಾಹೀದ್ ಖಟ್ಟಕ್ ಅವರು ಶೆಹಬಾಜ್ ಷರೀಫ್ ಅವರನ್ನು ಓರ್ವ ಸಂಸದ ಹೇಡಿ ಎಂದು ಕರೆದಿರುವುದು ಇದೀಗ ಭಾರೀ ವೈರಲ್ ಆಗಿದೆ.**

### ಭಾರೀ ಚರ್ಚೆಗೆ ಗ್ರಾಸ

**ಇತ್ತೀಚೆಗೆ, ಭಾರತದೊಂದಿಗಿನ ಹೆಚ್ಚುತ್ತಿರುವ ವೈಷಮ್ಯದ ನಡುವೆ ಪಾಕಿಸ್ತಾನದ ಸಂಸದರೊಬ್ಬರು ಅಲ್ಲಾಹುವನ್ನು ಪ್ರಾರ್ಥಿಸಿ ತಮ್ಮ ಪ್ರಾಣ ಉಳಿಸುವಂತೆ ಕೇಳಿಕೊಂಡಿದ್ದರು. ತಹೀರ್ ಇಕ್ಬಾಲ್ ಎಂಬ ಪಾಕಿಸ್ತಾನದ ಸಂಸದರು ಭಾರತದ ದಾಳಿಯ ಬಗ್ಗೆ ಮಾತನಾಡುವಾಗ ಕಣ್ಣೀರಿಟ್ಟಿದ್ದರು. ಇದೀಗ ಪಿಟಿಐ ಸಂಸದ ಶಾಹೀದ್ ಅಹ್ಮದ್ ಖಟ್ಟಕ್ ಅವರು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನು ಹೇಡಿ ಎಂದು ಕರೆದಿದ್ದು, ಸ್ವದೇಶದಲ್ಲೇ ಪಾಕ್ ಪ್ರಧಾನಿ ಈ ಪರಿ ಟ್ರೋಲ್ ಆಗುತ್ತಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ.**

## ಮಿನಿ ನ್ಯೂಸ್

### ಭಾರತದ ಡ್ರೋನ್ ದಾಳಿಯಲ್ಲಿ 4 ಪಾಕ್ ಸೈನಿಕರಿಗೆ ಗಾಯ

**ಲಾಹೋರ್:** ಭಾರತ, ಪಾಕಿಸ್ತಾನ ನಡುವೆ ಯುದ್ಧದ ಪರಿಸ್ಥಿತಿ ಉಲ್ಬಣಗೊಂಡಿರುವಂತೆಯೇ ಭಾರತದ ಡ್ರೋನ್ ದಾಳಿಯಲ್ಲಿ ತನ್ನ ನಾಲ್ವರು ಸೈನಿಕರು ಗಾಯಗೊಂಡಿರುವುದಾಗಿ ಪಾಕಿಸ್ತಾನ ಸೇನೆ ಹೇಳಿದೆ. 25 ಭಾರತೀಯ ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ ಎಂದು ಪಾಕ್ ಸೇನೆ ಹೇಳಿಕೆಯಲ್ಲಿ ತಿಳಿಸಿದೆ.ಕಳೆದ ರಾತ್ರಿ ಉತ್ತರ, ಪಶ್ಚಿಮ ಭಾರತದಲ್ಲಿ ಹಲವು ಕಡೆ ದಾಳಿ ನಡೆಸುವ ಪಾಕ್ ಸೇನೆಯ ಪ್ರಯತ್ನಗಳನ್ನು ಭಾರತೀಯ ಶಸ್ತ್ರಾಸ್ತ್ರ ಪಡೆಗಳು ವಿಫಲಗೊಳಿಸಿದ್ದು, ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯನ್ನು ನಾಶಪಡಿಸಲಾಗಿದೆ ಎಂದು ನವದೆಹಲಿಯಲ್ಲಿ ಭಾರತೀಯ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ. ಅತ್ತ ಇಸ್ಲಾಮಾಬಾದ್‌ನಲ್ಲಿ ಮಾತನಾಡಿದ ಪಾಕಿಸ್ತಾನ ಸೇನೆಯ ವಕ್ತಾರ ಲೆಫ್ಟಿನೆಂಟ್ ಜನರಲ್ ಅಹದ್ ಷರೀಫ್ ಚೌಧರಿ, ಲಾಹೋರ್ ಬಳಿ ಒಂದು ಡ್ರೋನ್ ಪತನಗೊಂಡಿದ್ದು, ದಾಳಿಯ ಪರಿಣಾಮವಾಗಿ ನಾಲ್ವರು ಸೈನಿಕರು ಗಾಯಗೊಂಡಿದ್ದಾರೆ.

ಲಾಹೋರ್, ಗುಜ್ರನ್ವಾಲಾ, ಚಕ್ವಾಲ್, ಬಹವಾಲ್ಪುರ್, ಮಿಯಾನೋ, ಕರಾಚಿ, ರಾವಲ್ಪಿಂಡಿ, ಚೋರ್, ಅತ್ತಾಲಾಕ್‌ನಲ್ಲಿ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ಹೇಳಿದ್ದಾರೆ. ಇಲ್ಲಿಯವರೆಗೆ 25 ಇಸ್ರೇಲಿ ನಿರ್ಮಿತ ಹೀರೋಪ್ ಡ್ರೋನ್‌ಗಳನ್ನು ಪಾಕಿಸ್ತಾನಿ ಸೇನೆಯ ಸ್ಟ್ ಕಿಲ್, ಹಾರ್ಡ್ ಕಿಲ್ ಆಯುಧಗಳಿಂದ ಹೊಡೆದುರುಳಿಸಲಾಗಿದೆ ಎಂದು ಪಾಕಿಸ್ತಾನ ಸೇನೆ ಹೇಳಿಕೆಯಲ್ಲಿ ತಿಳಿಸಿದೆ.ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಭಾರತ, ಪಾಕಿಸ್ತಾನದ ನಡುವೆ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

### ಭಾರತ ಭಯೋತ್ಪಾದಕರೊಂದಿಗೆ ಯುದ್ಧ ಮಾಡುತ್ತಿದೆ; ವಿನಯ್ ಕ್ವಾತ್ರಾ

**ವಾಷಿಂಗ್ಟನ್:** ಕಾಶ್ಮೀರದಲ್ಲಿ ಪಾಕಿಸ್ತಾನದ ಭಯೋತ್ಪಾದನೆಯ ಬಗ್ಗೆ ಮಾತನಾಡಿದ ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್ ಕ್ವಾತ್ರಾ ಅವರು, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಉಭಯ ದೇಶಗಳ ನಡುವೆ ಉದ್ವಿಗ್ನತೆ ಹೆಚ್ಚಾದ ಕಾರಣ ಭಾರತವು ಭಯೋತ್ಪಾದಕರೊಂದಿಗೆ ಯುದ್ಧದಲ್ಲಿದೆ ಎಂದು ಮಾಹಿತಿ ನೀಡಿದ್ದಾರೆ. ಜಮ್ಮು, ಕಾಶ್ಮೀರ, ಪಂಜಾಬ್, ರಾಜಸ್ಥಾನ ಸೇರಿದಂತೆ ಗಡಿ ರಾಜ್ಯಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ಡ್ರೋನ್‌ಗಳು, ಕ್ಷಿಪಣಿಗಳನ್ನು ಹಾರಿಸಿದ್ದರಿಂದ ಉಭಯ ದೇಶಗಳು ದಾಳಿ, ಪ್ರತಿದಾಳಿಗೆ ಸಾಕ್ಷಿಯಾಗಿವೆ. ಭಾರತವು ತನ್ನ ಮುಗ್ಧ ನಾಗರಿಕರನ್ನು ಉಳಿಸಲು, ತನ್ನ ಮೂರು ಜೆಟ್‌ಗಳೊಂದಿಗೆ ಪಾಕಿಸ್ತಾನದ ಎಲ್ಲಾ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹೊಡೆದುರುಳಿಸಿತು. ಉಗ್ರರು ಹೆಂಡತಿ ಮತ್ತು ಮಕ್ಕಳ ಮುಂದೆ ಜನರನ್ನು ಕೊಂದರು, ಅವರು ಧರ್ಮದ ಆಧಾರದ ಮೇಲೆ ಹಾಗೆ ಮಾಡಿದರು.


ನಾವು ಮಾಡಿದ್ದು ಭಯೋತ್ಪಾದನೆಗೆ ನಮ್ಮ ಪ್ರತಿಕ್ರಿಯೆ ಎಂದು ಅವರು ಹೇಳಿದರು. ಒಂಬತ್ತು ಸ್ಥಳಗಳಲ್ಲಿ ಭಯೋತ್ಪಾದಕ ಕಾರ್ಖಾನೆಗಳನ್ನು ಹೊರತೆಗೆಯುವಾಗ ಭಾರತದ ಪ್ರತಿಕ್ರಿಯೆಯನ್ನು ಅಳೆಯಲಾಯಿತು, ಮಾಪನಾಂಕ ಮಾಡಲಾಯಿತು. ಈ ಭೀಕರ ಹತ್ಯೆಗಳನ್ನು ನಡೆಸಿದ ಜನರು, ಅವರ ಬೆಂಬಲಿಗರನ್ನು ಮಾತ್ರ ಗುರಿಯಾಗಿಸುವಲ್ಲಿ ನಾವು ಬಹಳ ಜಾಗರೂಕರಾಗಿದ್ದೇವೆ ಎಂದು ಅವರು ಹೇಳಿದರು.

## ಪಾಕಿಸ್ತಾನದಿಂದ ದೇವಾಲಯ, ಶಾಲೆಗಳನ್ನು ಟಾರ್ಗೆಟ್ ಮಾಡಿ ಕೀಳುಮಟ್ಟದ ದಾಳಿ

**ಹೊಸದಿಲ್ಲಿ:** ಪಾಕಿಸ್ತಾನವು ದೇವಾಲಯಗಳು, ಗುರುದ್ವಾರಗಳು, ಕಾನ್ವೆಂಟ್‌ಗಳನ್ನು ಗುರಿಯಾಗಿಸಿಕೊಳ್ಳುವುದು ಹೊಸ ಕೆಳಮಟ್ಟದ ದಾಳಿಯನ್ನು ಮಾಡುತ್ತಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಕಿಡಿಕಾರಿದ್ದಾರೆ. ದೆಹಲಿಯಲ್ಲಿ ನಡೆದ ಭಾರತೀಯ ಸೇನೆಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಾಕಿಸ್ತಾನ ಭಾರತದ ಹಲವು ಕಡೆಗಳಲ್ಲಿ ದಾಳಿ ಮಾಡಿದೆ. ಮುಖ್ಯವಾಗಿ ಧಾರ್ಮಿಕ ಕೇಂದ್ರಗಳನ್ನು ಗುರಿಯಾಗಿಸಿದೆ. ಜಮ್ಮು, ಸುತ್ತಮುತ್ತಲಿನ ನಗರಗಳ ದೇವಸ್ಥಾನ, ಗುರುದ್ವಾರ, ಕಾನ್ವೆಂಟ್ ದಾಳಿ ಮಾಡಿದೆ ಎಂದು ಹೇಳಿದರು.

**ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಪಾಕಿಸ್ತಾನವು ದೇವಾಲಯಗಳು, ಗುರುದ್ವಾರಗಳು, ಕಾನ್ವೆಂಟ್‌ಗಳನ್ನು ಗುರಿಯಾಗಿಸಿಕೊಂಡು ಹೊಸ ಕೆಳಮಟ್ಟದ ದಾಳಿಯನ್ನು ನಡೆಸುತ್ತಿದೆ ಎಂದು ಟೀಕಿಸಿದ್ದಾರೆ.**

**ಪಾಕಿಸ್ತಾನ ದಾಳಿಯಿಂದ ಇಬ್ಬರು ಮಕ್ಕಳು ಸಾವು:** ಪೂಂಚ್‌ನಲ್ಲಿರುವ ಗುರುದ್ವಾರದ ಮೇಲಿನ ದಾಳಿಯನ್ನು ಉಲ್ಲೇಖಿಸಿ, ಧಾರ್ಮಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡಿಲ್ಲ ಎಂಬ ಪಾಕಿಸ್ತಾನದ ಹೇಳಿಕೆ ಸುಳ್ಳು. ಮೇ 7 ರಂದು ಎಲ್‌ಒಸಿ ಉದ್ದಕ್ಕೂ ಭಾರೀ ಶೆಲ್ ದಾಳಿಯ ಸಮಯದಲ್ಲಿ ಪಾಕಿಸ್ತಾನದಿಂದ ಹಾರಿಸಲಾದ ಶೆಲ್ ಪೂಂಚ್‌ನಲ್ಲಿರುವ ಕ್ರೈಸ್ಟ್ ಶಾಲೆಯ ಹಿಂದೆ ಬಿದ್ದಿತು. ಶಾಲೆಯ ಇಬ್ಬರು ವಿದ್ಯಾರ್ಥಿಗಳ ಮನೆಯ ಮೇಲೆ ಶೆಲ್ ದಾಳಿ ಮಾಡಿದ್ದು, ಇಬ್ಬರೂ ಮಕ್ಕಳು ಸಾವನ್ನಪ್ಪಿದರು. ಜತೆಗೆ ಅವರ ಪೋಷಕರು ಗಂಭೀರವಾಗಿ ಗಾಯಗೊಂಡದ್ದಾರೆ ಎಂದು ಮಿಸ್ರಿ ಹೇಳಿದರು. ಸಿಂಧೂ ಜಲ ಒಪ್ಪಂದವು ಪ್ರಸ್ತುತ ಸ್ಥಗಿತಗೊಂಡಿದೆ. ಮುಂದಿನ ದಿನಗಳಲ್ಲಿ ಸಂಪುಟದ ನಿರ್ಧಾರ ಕೈಗೊಳಲಿದೆ. ಅದನ್ನು ಮೀರಿ ಅವರು ಯಾವುದೇ ಪ್ರತಿಕ್ರಿಯೆಗಳನ್ನು ನೀಡಿಲ್ಲ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ಪಾಕಿಸ್ತಾನದ ಪಂಜಾಬ್‌ನಲ್ಲಿರುವ ನಂಕಾನಾ ಸಾಹಿಬ್ ಗುರುದ್ವಾರವನ್ನು ಭಾರತ ಗುರಿಯಾಗಿಸಿಕೊಂಡಿಲ್ಲ. ಪಾಕಿಸ್ತಾನವು ಅಂತರರಾಷ್ಟ್ರೀಯ ಸಮುದಾಯವನ್ನು ದಾರಿ ತಪ್ಪಿಸಲು ಭಾರತ ಧಾರ್ಮಿಕ ಸಂಸ್ಥೆಗಳ ಮೇಲೆ ದಾಳಿ ಮಾಡುತ್ತಿದೆ ಎಂದು ಆರೋಪ ಮಾಡುತ್ತಿದೆ. ಇದೆಲ್ಲಾ ಸುಳ್ಳು. ಉಗ್ರರ ತಾಣಗಳ ನಾಶ, ಪಾಕಿಸ್ತಾನ ದಾಳಿ ತಡೆಗೆ ಮಾತ್ರ ಭಾರತ ಮುಂದಾಗಿದೆ ಎಂದರು. ಪ್ರಸ್ತುತ ಭದ್ರತಾ ಪರಿಸ್ಥಿತಿಯಿಂದಾಗಿ, ಕರ್ತಾರ್‌ಪುರ ಕಾರಿಡಾರ್‌ನ ಸೇವೆ ಗಳನ್ನು ಸ್ಥಗಿತಗೊಳಿಸಲಾಗಿದೆ.



# ವಿಫಲ ರಾಷ್ಟ್ರವನ್ನು ರುಬ್ಬಿದ ಮೈಕೆಲ್ ರೂಬಿನ್

## ಭೂಪಟದಲ್ಲಿ ಪಾಕಿಸ್ತಾನ ಕಾಣದಿದ್ದರೆ ಜಗತ್ತಿಗೆ ಯಾವ ನಷ್ಟವೂ ಇಲ್ಲ

**ವಾಷಿಂಗ್ಟನ್:** ಪಹಲ್ಗಾಮ್ ಭಯೋತ್ಪಾದಕ ದಾಳಿ ಬಳಿಕ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು ಅಮೆರಿಕದ ಮಾಜಿ ರಕ್ಷಣಾ ಅಧಿಕಾರಿ ಮೈಕೆಲ್ ರೂಬಿನ್ ಸಮರ್ಥಿಸಿಕೊಂಡಿದ್ದಾರೆ. ಅಮೆರಿಕವು ಭಾರತದ ಪರವಾಗಿ ಗಟ್ಟಿಯಾಗಿ ನಿಲ್ಲಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಪಾಕಿಸ್ತಾನ ಭಯೋತ್ಪಾದನೆಯನ್ನು ಪ್ರಾಯೋಜಿಸುವ ರಾಷ್ಟ್ರ ಎಂಬುದರ ಬಗ್ಗೆ ಯಾರಿಗೂ ಅನುಮಾನ ಉಳಿದಿಲ್ಲ.

- **ಭಾರತದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯನ್ನು ಬೆಂಬಲಿಸಿದ ಮೈಕೆಲ್ ರೂಬಿನ್**
- **ಪಾಕಿಸ್ತಾನದ ಬೆನ್ನುಮೂಳೆ ಮುರಿಯುವಂತೆ ಭಾರತಕ್ಕೆ ಸಲಹೆ ನೀಡಿದ ಅಮೆರಿಕದ ಮಾಜಿ ರಕ್ಷಣಾ ಅಧಿಕಾರಿ**
- **ಪಾಕಿಸ್ತಾನದ ವಿರುದ್ಧ ಭಾರತದೊಂದಿಗೆ ಗಟ್ಟಿಯಾಗಿ ನಿಲ್ಲುವಂತೆ ಅಮೆರಿಕವನ್ನು ಒತ್ತಾಯಿಸಿದ ಮೈಕೆಲ್ ರೂಬಿನ್**


ಹೀಗಾಗಿ ಅಮೆರಿಕವು ಪಾಕಿಸ್ತಾನ ದೊಂದಿಗಿನ ಸಂಬಂಧವನ್ನು ಕಡಿದು ಕೊಂಡು ಭಾರ ತದ ಪರವಾಗಿ ಧ್ವನಿ ಎತ್ತಬೇಕು ಎಂದು ಮೈಕೆಲ್ ರೂಬಿನ್ ಆಗ್ರಹಿಸಿದ್ದಾರೆ. ಪ್ರಜಾಪ್ರಭುತ್ವದ ನಾಯಕರ ಕರ್ತವ್ಯ ತಮ್ಮ ನಾಗರಿಕರನ್ನು ರಕ್ಷಿಸುವುದು. ಅದರಂತೆ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಇತರ ಭಾರತೀಯ ರಾಜಕೀಯ ನಾಯಕರು ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ.

ಅಮೆರಿಕ ಈ ಒಗ್ಗಟ್ಟನ್ನು ಗೌರವಿಸಿ, ಭಾರತಕ್ಕೆ ತನ್ನ ಬೆಂಬಲವನ್ನು ಮತ್ತಷ್ಟು ಗಟ್ಟಿಗೊಳಿಸಬೇಕು. ಪಾಕಿಸ್ತಾನದ ವಿರುದ್ಧ ಭಾರತ ಕೈಗೊಳ್ಳುತ್ತಿರುವ ಮಿಲಿಟರಿ ಕಾರ್ಯಾಚರಣೆಗೆ ಬೆಂಬಲ ಘೋಷಿಸಬೇಕು ಎಂದು ಮೈಕೆಲ್ ರೂಬಿನ್ ಅಭಿಪ್ರಾಯಪಟ್ಟಿದ್ದಾರೆ.

**ಪಾಕಿಸ್ತಾನದ ವಿರುದ್ಧ ಗುಡುಗು:** ಇನ್ನು ಪಾಕಿಸ್ತಾನದ ವಿರುದ್ಧದ ತಮ್ಮ ವಾಗ್ದಾಳಿಯನ್ನು ಮುಂದುವರೆಸಿರುವ ಅಮೆರಿಕದ ಮಾಜಿ ರಕ್ಷಣಾ ಕಾರ್ಯದರ್ಶಿ, ಪಾಕಿಸ್ತಾನವನ್ನು ಒಂದು ವಿಫಲ ರಾಷ್ಟ್ರ ಎಂದು ಕರೆದಿದ್ದಾರೆ. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ, ಪಾಕಿಸ್ತಾನವು ತನ್ನ ಬಂದೂಕುಗಳನ್ನು ಅಲ್ಪಸಂಖ್ಯಾತರತ್ತ ತಿರುಗಿಸಿದೆ. ಆ ರಾಷ್ಟ್ರ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಅಲ್ಪಸಂಖ್ಯಾತರನ್ನು ಗುರಿಯಾಗಿಸುವುದು ಇದು ಮೊದಲೇನಲ್ಲ ಎಂದು ಮೈಕೆಲ್ ರೂಬಿನ್ ಗಂಭೀರ ಆರೋಪ ಮಾಡಿದ್ದಾರೆ.

**ಭಾರತದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯನ್ನು ಸಮರ್ಥಿಸಿಕೊಂಡಿರುವ ಅಮೆರಿಕದ ಮಾಜಿ ರಕ್ಷಣಾ ಅಧಿಕಾರಿ ಮೈಕೆಲ್ ರೂಬಿನ್, ಈ ಬಾರಿ ಪಾಕಿಸ್ತಾನದ ಬೆನ್ನುಮೂಳೆಯನ್ನೇ ಮುರಿಯುವಂಯೆ ಭಾರತಕ್ಕೆ ಸಲಹೆ ನೀಡಿದ್ದಾರೆ. ಅಲ್ಲದೇ ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಗಟ್ಟಿಯಾಗಿ ನಿಲ್ಲುವಂತೆ ಮೈಕೆಲ್ ರೂಬಿನ್ ಅಮೆರಿಕವನ್ನು ಒತ್ತಾಯಿಸಿದ್ದಾರೆ. ಪಾಕಿಸ್ತಾನವನ್ನು ವಿಫಲ ರಾಷ್ಟ್ರ ಎಂದು ಕರೆದಿರುವ ಅವರು, ಪಾಕಿಸ್ತಾನ ಇರದಿದ್ದರೆ ಜಗತ್ತಿಗೆ ಯಾವ ನಷ್ಟವೂ ಇಲ್ಲ ಎಂದು ಮಾರ್ಮಿಕವಾಗಿ ಹೇಳಿದ್ದಾರೆ.**

ಪಾಕಿಸ್ತಾನಕ್ಕೆ ಹೋಲಿಸಿದರೆ ಭಾರತ ವಿಭಿನ್ನ ತಂತ್ರವನ್ನು ಅನುಸರಿಸುತ್ತದೆ. ಅಲ್ಲಿ ಎಲ್ಲಾ ಭಾರತೀಯರು ಒಟ್ಟಾಗಿ ಅಭಿವೃದ್ಧಿ ಹೊಂದುತ್ತಾರೆ ಮತ್ತು ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಚರ್ಚಿಸುತ್ತಾರೆ. ಆದರೆ ಪಾಕಿಸ್ತಾನ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ತನ್ನ ಅಲ್ಪಸಂಖ್ಯಾತರನ್ನು ಗುರಿಯಾಗಿಸುತ್ತದೆ. ಇದೇ ಭಾರತ ಮತ್ತು ಪಾಕಿಸ್ತಾನ ನಡುವಿನ ವ್ಯತ್ಯಾಸ ಎಂದು ಮೈಕೆಲ್ ರೂಬಿನ್ ಹೇಳಿದ್ದಾರೆ.



### ರೂಬಿನ್ ಗಂಭೀರ ಆರೋಪ

**ಭಾರತದ ಮಿಲಿಟರಿ ಕ್ರಮಗಳನ್ನು ಸಮರ್ಥಿಸಿಕೊಂಡಿರುವ ಮೈಕೆಲ್ ರೂಬಿನ್, ಈ ಬಾರಿ ಪಾಕಿಸ್ತಾನದ ಬೆನ್ನುಮೂಳೆಯನ್ನೇ ಮುರಿಯುವಂತೆ ಭಾರತಕ್ಕೆ ಸಲಹೆ ನೀಡಿದ್ದಾರೆ. ಅಮೆರಿಕದ ಮಾಜಿ ರಕ್ಷಣಾ ಅಧಿಕಾರಿ ಮೈಕೆಲ್ ರೂಬಿನ್ ಇತ್ತೀಚೆಗಷ್ಟೇ ಪಾಕಿಸ್ತಾನದ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ವಿರುದ್ಧ ಗುಡುಗಿದ್ದರು. ಅಲ್ಲದೇ ಜನರಲ್ ಮುನೀರ್ ಅವರ ಹಿಂದೂ-ಮುಸ್ಲಿಂ ಪ್ರತ್ಯೇಕತಾವಾದ ಸಿದ್ಧಾಂತ ಕುರಿತ ಹೇಳಿಕೆಯೇ, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರೇರಣೆ ಎಂದು ಮೈಕೆಲ್ ರೂಬಿನ್ ಗಂಭೀರ ಆರೋಪ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.**

ಪಾಕಿಸ್ತಾನ ಎಂಬ ವಿಫಲ ರಾಷ್ಟ್ರ ಜಾಗತಿಕ ಭೂಪಟದಲ್ಲಿ ಕಾಣದಿದ್ದರೆ ವಿಶ್ವಕ್ಕೆ ಯಾವುದೇ ನಷ್ಟವಿಲ್ಲ ಎಂಬ ಮೈಕೆಲ್ ರೂಬಿನ್ ಹೇಳಿಕೆ ಇದೀಗ ಗಮನ ಸೆಳೆದಿದೆ.

ಪಾಕಿಸ್ತಾನ ಲಷ್ಕರ್-ಎ-ತೊಯ್ಬಾದಂತಹ ಅನೇಕ ಭಯೋತ್ಪಾದಕ ಗುಂಪುಗಳಿಗೆ ನೆಲೆಯಾಗಿದೆ ಎಂದು ಆರೋಪಿಸಿರುವ ಮೈಕೆಲ್ ರೂಬಿನ್, ಪಾಕಿಸ್ತಾನದ ರಾಜತಾಂತ್ರಿಕರು ಪಶ್ಚಿಮ ರಾಷ್ಟ್ರಗಳನ್ನು ಮೂರ್ಖರನ್ನಾಗಿಸುತ್ತಿದ್ದಾರೆ. ಇದರಿಂದಾಗಿ ಭಯೋತ್ಪಾದನೆಯ ಸಮಸ್ಯೆ ಪಾಕಿಸ್ತಾನದಲ್ಲಿ ಮಾತ್ರವಲ್ಲದೆ ಬಾಂಗ್ಲಾದೇಶದಲ್ಲೂ ಹೆಚ್ಚುತ್ತಿದೆ. ಭಾರತವು ಪಾಕಿಸ್ತಾನದ ಬೆನ್ನು ಮೂಳೆಯನ್ನು ಮುರಿಯಬೇಕು.

ಇದರಲ್ಲಿ ಯಾವುದೇ ಅನುಮಾನ ಬೇಡ ಎಂದು ಗುಡುಗಿದ್ದಾರೆ. ಮೈಕೆಲ್ ರೂಬಿನ್ ಅವರ ಹೇಳಿಕೆಗಳು ಭಾರತ, ಪಾಕಿ ಸ್ತಾನದ ನಡುವಿನ ಸಂಬಂಧದ ಬಗ್ಗೆ ಬೆಳಕು ಚೆಲ್ಲುತ್ತವೆ. ಭಯೋತ್ಪಾದನೆಯನ್ನು ಬೆಂಬಲಿಸುವ ಪಾಕಿಸ್ತಾನದ ನೀತಿಯನ್ನು ಅವರು ತೀವ್ರವಾಗಿ ಟೀಕಿಸಿದ್ದಾರೆ.

## ಭಾರತ-ಪಾಕ್ ಸಂಘರ್ಷ ನಮಗೆ ಸಂಬಂಧಿಸಿದ್ದಲ್ಲ

**ವಾಷಿಂಗ್ಟನ್:** ಪಹಲ್ಗಾಮ್ ಉಗ್ರ ದಾಳಿ ಬಳಿಕ ಉಲ್ಬಣವಾಗಿರುವ ಭಾರತ, ಪಾಕಿಸ್ತಾನ ನಡುವಿನ ಉದ್ವಿಗ್ನತೆ ವಿಚಾರವಾಗಿ ಕಡ್ಡಿಮುರಿದಂತೆ ಉತ್ತರ ನೀಡಿರುವ ಅಮೆರಿಕ ಇದಕ್ಕೂ ನಮಗೂ ಸಂಬಂಧವಿಲ್ಲ ಎಂದು ಹೇಳಿದೆ. ಈ ಬಗ್ಗೆ ಮಾತನಾಡಿರುವ ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್, ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷ ನಮಗೆ ಸಂಬಂಧವಿಲ್ಲ. ಆದರೂ ನಾನು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎರಡೂ ದೇಶಗಳು ಉದ್ವಿಗ್ನತೆಯನ್ನು ಕಡಿಮೆ ಮಾಡಲು ಪ್ರೋತ್ಸಾಹಿಸುತ್ತಿದ್ದೇವೆ ಎಂದು ಹೇಳಿದರು. ಸ್ವಲ್ಪ ಮಟ್ಟಿಗೆ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಪ್ರೋತ್ಸಾಹಿಸುವುದನ್ನು ನಾವು ಮಾಡಬಹುದಾಗಿದೆ. ಆದರೆ ನಾವು ಯುದ್ಧದ ಮಧ್ಯದಲ್ಲಿ ಭಾಗಿಯಾಗುವುದಿಲ್ಲ, ಅದು ಮೂಲಭೂತವಾಗಿ ನಮ್ಮ ವಿಷಯವಲ್ಲ. ನಮಗೆ ಸಂಬಂಧಿಸಿದ್ದಲ್ಲ ಮತ್ತು ಅಮೆರಿಕದ ನಿಯಂತ್ರಣ ಸಾಮರ್ಥ್ಯದೊಂದಿಗೆ ಯಾವುದೇ ಸಂಬಂಧವಿಲ್ಲ ಎಂದು ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ.

ಇದೇ ವೇಳೆ ಅಮೆರಿಕವು ಭಾರತೀಯರಿಗೆ ಶಸ್ತ್ರಾಸ್ತ್ರಗಳನ್ನು ತ್ಯಜಿಸಲು ಹೇಳಲು ಸಾಧ್ಯವಿಲ್ಲ. ಪಾಕಿಸ್ತಾನಿಗಳಿಗೆ ಶಸ್ತ್ರಾಸ್ತ್ರಗಳನ್ನು ತ್ಯಜಿಸಲು ನಾವು ಹೇಳಲು ಸಾಧ್ಯವಿಲ್ಲ. ಆದ್ದರಿಂದ, ನಾವು ರಾಜತಾಂತ್ರಿಕ ಮಾರ್ಗಗಳ ಮೂಲಕ ಮಾತ್ರ ಈ ವಿಷಯವನ್ನು ಮುಂದುವರಿಸುತ್ತೇವೆ ಎಂದು ವ್ಯಾಕ್ಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದರು.



**ಅಂತೆಯೇ ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ವಿಶಾಲವಾದ ಪ್ರಾದೇಶಿಕ ಯುದ್ಧ ಎಂದು ಹೇಳಿದ ಇದು ಪರಮಾಣು ಸಂಘರ್ಷವಾಗಿ ಬದಲಾಗಬಾರದು ಎಂಬುದು ನಮ ಆಶಯ ಮತ್ತು ನಿರೀಕ್ಷೆಯಾಗಿದೆ ಎಂದು ಹೇಳಿದ್ದಾರೆ. ಅಲ್ಲದೆ ಸದ್ಯಕ್ಕೆ, ಅದು ಸಂಭವಿಸುತ್ತದೆ ಎಂದು ನಾವು ಭಾವಿಸುವುದಿಲ್ಲ ಎಂದು ಹೇಳಿದ್ದಾರೆ.**

**ಯುದ್ಧ ನಿಲ್ಲಿಸಲು ಸಿದ್ಧ ಎಂದಿದ್ದ ಟ್ರಂಪ್:** ಈ ಮೊದಲು ಉಗ್ರರ ವಿರುದ್ಧದ ಭಾರತದ ಕಾರ್ಯಾಚರಣೆಯನ್ನು ಮುಯ್ಯಿಗೆ ಮುಯ್ಯಿ ಎಂದು ಬಣ್ಣಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನ ಸ್ಥಿತಿಯನ್ನು ನಿಲ್ಲಿಸಲು ಸಹಾಯ ಮಾಡಲು ಸಿದ್ಧನಿದ್ದೇನೆ ಎಂದು ಹೇಳಿದ್ದರು. ಪ್ರತೀಕಾರದ ದಾಳಿಗಳನ್ನು ನಿಲ್ಲಿಸಿ. ನಿಮಗೇನಾದರೂ ಸಹಾಯ ಬೇಕಿದ್ದರೆ ನಾನಿದ್ದೇನೆ. ಭಾರತ ಮತ್ತು ಪಾಕಿಸ್ಥಾನ ಜತೆ ಉತ್ತಮ ಸಂಬಂಧವಿದೆ. ಅವರೆಡೂ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ನಿಲ್ಲುವುದನ್ನು ನಾನು ನೋಡಲು ಬಯಸುತ್ತೇನೆ. ಇದಕ್ಕಾಗಿ ನಾನು ಸಹಾಯ ಮಾಡಲು ಸಾಧ್ಯವಾದರೆ, ಅದಕ್ಕೆ ನಾನು ಸಿದ್ಧನಿದ್ದೇನೆ ಎಂದು ಭಾರತ ಮತ್ತು ಪಾಕಿಸ್ಥಾನ ನಡುವಿನ ಯುದ್ಧದ ಕುರಿತ ಪ್ರಶ್ನೆಗೆ ಟ್ರಂಪ್ ಉತ್ತರಿಸಿದ್ದಾರೆ.

# ಆರ್ಥಿಕವಾಗಿ ದಿವಾಳಿಯತ್ತ ಸಾಗಿದ ಪಾಕ್

**ಇಸ್ಲಾಮಾಬಾದ್:** ಜಮ್ಮು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ನರಬೇಧಕ್ಕೆ ಪ್ರತಿಯಾಗಿ ಭಾರತದ ದಾಳಿಗೆ ಕಂಗಲಾಗಿರುವ ಪಾಕಿಸ್ತಾನ ಇದೀಗ ಆರ್ಥಿಕತೆಯಲ್ಲೂ ಪಾತಾಳಕ್ಕೆ ಕುಸಿಯುತ್ತಿದೆ. ಮೊದಲೇ ಆರ್ಥಿಕವಾಗಿ ಬಸವಳಿದಿದ್ದ ಪಾಕ್ ಭಾರತದ ದಾಳಿಯಿಂದ ಭಾರೀ ಹೊಡೆತಕ್ಕೆ ಸಿಲು ಕಿದ್ದು, ಇದೀಗ ಸಾರ್ವಜನಿಕ ವೇದಿಕೆಯಲ್ಲೇ ಹಣ ನೀಡುವಂತೆ ಗೋಗರೆದಿದೆ. ಪಾಕಿಸ್ತಾನದ ಅಧಿಕೃತ ಖಾತೆಯಲ್ಲಿ ಇಂತಹುದೊಂದು ಟ್ವಿಟ್ ಅನ್ನು ಪಾಕಿಸ್ತಾನ ಸರ್ಕಾರ ಪೋಸ್ಟ್ ಮಾಡಿದೆ.

### ಹಲವು ರಾಷ್ಟ್ರಗಳ ಬಳಿ ಭಿಕ್ಷಾಟನೆ

ಎಂಬ ಪಾಕಿಸ್ತಾನ ಸರ್ಕಾರದ ಅಧಿಕೃತ ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿ, ಕುಸಿಯುತ್ತಿರುವ ನಮ್ಮ ಆರ್ಥಿಕತೆಗೆ ನಮ್ಮ ಅಂತಾರಾಷ್ಟ್ರೀಯ ಪಾಲುದಾರರು ಹಣಕಾಸಿನ ನೆರವು ನೀಡುವಂತೆ ಗೋಗರೆದಿದೆ.

ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗದ ಅಧಿಕೃತ ಖಾತೆಯ ತನ್ನ ಟ್ವಿಟ್‌ನಲ್ಲಿ, ನಮ್ಮ ಶತ್ರುಗಳಿಂದ ಉಂಟಾದ ಭಾರೀ ನಷ್ಟದ ನಂತರ ಹೆಚ್ಚಿನ ಸಾಲಕ್ಕಾಗಿ ಪಾಕಿಸ್ತಾನ ಸರ್ಕಾರವು ಅಂತರರಾಷ್ಟ್ರೀಯ ಪಾಲುದಾರರಿಗೆ ಮನವಿ ಮಾಡುತ್ತಿದೆ. ಯುದ್ಧದ ಉದ್ವೇಗ ಮತ್ತು ಷೇರುಪೇಟೆಯ ಕುಸಿತದ ನಡುವೆ, ನಾವು ಅಂತರರಾಷ್ಟ್ರೀಯ ಪಾಲುದಾರರು ಯುದ್ಧದ ಉದ್ವೇಗವನ್ನು ಕಡಿಮೆ ಮಾಡುವಲ್ಲಿ ಸಹಾಯ ಮಾಡಲು ವಿನಂತಿಸುತ್ತೇವೆ. ಜನತೆಗೆ ಧೈರ್ಯದಿಂದ ಸ್ಥಿರವಾಗಿರಲು ಕರೆ ನೀಡಲಾಗಿದೆ ಎಂದು ಬರೆಯಲಾಗಿದೆ. ಜೊತೆಗೆ ಈ ಟ್ವಿಟ್ ಅನ್ನು ವಿಶ್ವ ಬ್ಯಾಂಕ್‌ಗೆ ಟ್ಯಾಗ್ ಮಾಡಲಾಗಿದೆ. ಪಹಲ್ಯಾಮ್ ಉಗ್ರ ದಾಳಿ, ಇದಕ್ಕೆ ಉತ್ತರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ್ ಏರ್ ಸ್ಟ್ರೈಕ್ ಬಳಿಕ ಭಾರತ, ಪಾಕಿಸ್ತಾನ ನಡುವೆ ಉದ್ವಿಗ್ನತೆ ಭುಗಿಲೆದ್ದಿದ್ದು, ಯುದ್ಧದ ರೀತಿಯ ವಾತಾವರಣ ರೂಪುಗೊಂಡಿದೆ. ಬುಧವಾರ ರಾತ್ರಿಯಿಂದ ಆರಂಭವಾದ ಭಾರತ ಮತ್ತು ಪಾಕಿಸ್ತಾನ ಸೇನಾ ಸಂಘರ್ಷ ಮುಂದುವರೆದಿರುವಂತೆಯೇ ಇತ್ತ ಪಾಕಿಸ್ತಾನದ ಬೊಕ್ಕಸ ಕೇವಲ ಯುದ್ಧ ಆರಂಭವಾದ 48 ಗಂಟೆಗಳಲ್ಲಿ ಖಾಲಿಯಾಗಿದ್ದು, ಪಾಕಿಸ್ತಾನ ಆರ್ಥಿಕ ನೆರವಿಗಾಗಿ ಮತ್ತೆ ಜಾಗತಿಕ ಸಮುದಾಯದ ಮುಂದೆ ಕೈಚಾಚಿದೆ. ಈ ಬಗ್ಗೆ ಸ್ವತಃ ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಮನವಿ ಮಾಡಿದ್ದು, ಟ್ವಿಟ್ ಮೂಲಕ ಆರ್ಥಿಕ ನೆರವು ನೀಡುವಂತೆ ತನ್ನ ಮಿತ್ರ ರಾಷ್ಟ್ರಗಳಿಗೆ ಕೇಳಿಕೊಂಡಿದೆ. ಷೇರುಗಳು ಕುಸಿಯುತ್ತಿರುವುದರಿಂದ ಆರ್ಥಿಕ ಉಲ್ಬಣವನ್ನು ಕಡಿಮೆ ಮಾಡಲು ಸಹಾಯ ಮಾಡುವಂತೆ ಅಂತರರಾಷ್ಟ್ರೀಯ ಪಾಲುದಾರರಿಗೆ ಅದು ಮನವಿ ಮಾಡಿದೆ.ಭಾರತದ ಸೇನಾ ದಾಳಿಯಿಂದ ಪಾಕಿಸ್ತಾನಕ್ಕೆ ತೀವ್ರ ನಷ್ಟವಾಗಿದೆ. ಪಾಕಿಸ್ತಾನವು ಅಂತಾರಾಷ್ಟ್ರೀಯ ಪಾಲುದಾರರಿಗೆ ಹೆಚ್ಚಿನ ಸಾಲಕ್ಕಾಗಿ ಮನವಿ ಮಾಡಿದೆ.






ಹೆಚ್ಚುತ್ತಿರುವ ಯುದ್ಧ, ಷೇರು ಮಾರುಕಟ್ಟೆ ಕುಸಿತದ ಮಧ್ಯೆ, ಸೇನಾ ಉಲ್ಬಣವನ್ನು ಕಡಿಮೆ ಮಾಡಲು ಸಹಾಯ ಮಾಡುವಂತೆ ನಾವು ಅಂತರರಾಷ್ಟ್ರೀಯ ಪಾಲುದಾರರನ್ನು ಒತ್ತಾಯಿಸುತ್ತೇವೆ. ರಾಷ್ಟ್ರವು ದೃಢವಾಗಿರಲು ನೆರವು ನೀಡುವಂತೆ ಒತ್ತಾಯಿಸುತ್ತೇವೆ ಎಂದು ಟ್ವಿಟ್ ಮಾಡಿದೆ.

**ವಿತ್ ಡ್ರಾಗೆ ಮಿತಿ:** ಇನ್ನು ಅತ್ತ ಸೇನಾ ಸಂಘರ್ಷ ಮುಂದುವರೆದಿರುವಂತೆಯೇ ಇತ್ತ ಪಾಕಿಸ್ತಾನ ಆರ್ಥಿಕ ವ್ಯವಹಾರಗಳ ಸಚಿವಾಲಯ ತನ್ನದೇ ಪ್ರಜೆಗಳಿಗೆ ಶಾಕ್ ನೀಡಿದ್ದು, ಆರ್ಥಿಕ ಸಂಕಷ್ಟ ನಿರ್ವಹಣೆಗಾಗಿ ಪಾಕ್ ಪ್ರಜೆಗಳ ಬ್ಯಾಂಕ್ ಎಟಿಎಂ ವಿತ್ ಡ್ರಾಗೆ ಮಿತಿ ಹೇರಿದೆ. ದಿನವೊಂದಕ್ಕೆ ಕೇವಲ 3 ಸಾವಿರ ರೂ ಮಾತ್ರ ವಿತ್ ಡ್ರಾ ಮಾಡಲು ಪಾಕ್ ಪ್ರಜೆಗಳಿಗೆ ಮಿತಿ ಹೇರಿದೆ. ಅಲ್ಲದೆ ಪಾಕಿಸ್ತಾನದಲ್ಲಿ ಪರಿಸ್ಥಿತಿ ಸುಧಾರಿಸುವ ವರೆಗೂ ಬ್ಯಾಂಕ್‌ಗಳಿಂದ ಹಣ ವಿತ್ ಡ್ರಾ ಮಾಡದಂತೆ ಮನವಿ ಮಾಡುತ್ತಿದೆ. ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗದ ಅಧಿಕೃತ ಖಾತೆಯಲ್ಲಿ ಈ ರೀತಿ ಟ್ವಿಟ್ ಮಾಡಿದ ಬಳಿಕ ಜನರು ಪಾಕಿಸ್ತಾನವನ್ನು ಹಿಗ್ಗಾಮುಗ್ಗ ಟ್ರೋಲ್ ಮಾಡುತ್ತಿದ್ದಾರೆ.

ನಿಮಗೆ ತಿನ್ನೋಕ ಅನ್ನವಿಲ್ಲ, ಭಾರತದ ವಿರುದ್ಧ ಯುದ್ಧಕ್ಕೆ ಹೋಗುತ್ತಿದ್ದೀರಿ. ನಿಮಗೆ ನಾಚಿಕೆ ಆಗಲ್ವೇ ಎಂದೆಲ್ಲ ಜನರು ಕಾಮೆಂಟ್ ಮಾಡುತ್ತಿದ್ದಾರೆ. ಮತ್ತೆ ಕೆಲವರು ಇದು ಪಾಕಿಸ್ತಾನದ ಅಧಿಕೃತ ಖಾತೆಯೇ? ಯಾಕೆಂದರೆ ದೇಶವೊಂದು ಸಾರ್ವಜನಿಕವಾಗಿ ಹೀಗೆ ಭಿಕ್ಷೆ ಕೇಳಲು ಸಾಧ್ಯವೇ ಎಂದು ಮಾತನಾಡಿಕೊಳ್ಳುತ್ತಿದ್ದಾರೆ.

## ದೇಶದ ವಿಮಾನ ನಿಲ್ದಾಣಗಳಲ್ಲಿ ಹೈ ಅಲರ್ಟ್, ಭದ್ರತಾ ಕ್ರಮಗಳು ಜಾರಿ

**ನವದೆಹಲಿ:** ದೇಶದ ವಿಮಾನ ನಿಲ್ದಾಣಗಳಲ್ಲಿ ಜಾಗೃತ ಭದ್ರತಾ ಕ್ರಮಗಳನ್ನು ಜಾರಿಗೆ ತರಲಾಗಿದ್ದು, ವಾಯುಪ್ರದೇಶದ ನಿರ್ಬಂಧಗಳಿಂದಾಗಿ ಕೆಲವು ವಿಮಾನಗಳ ಮೇಲೆ ಪರಿಣಾಮ ಬೀರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಾರತ, ಪಾಕಿಸ್ತಾನ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ ಎಲ್ಲಾ ವಿಮಾನಗಳ ತಪಾಸಣೆಯನ್ನು ಕಡ್ಡಾಯಗೊಳಿಸಿದೆ, ವಿಮಾನ ನಿಲ್ದಾಣಗಳ ಟರ್ಮಿನಲ್ ಕಟ್ಟಡಗಳಲ್ಲಿ ಸಂದರ್ಶಕರನ್ನು ನಿಷೇಧಿಸಿದೆ ಮತ್ತು ಒಟ್ಟಾರೆ ಭದ್ರತೆಯನ್ನು ಹೆಚ್ಚಿಸಿದೆ. ದೆಹಲಿ ವಿಮಾನ ನಿಲ್ದಾಣದ ವಿಮಾನ ಸೇವೆ ಕಾರ್ಯಾಚರಣೆಗಳು ಸಾಮಾನ್ಯವಾಗಿವೆ. ಆದಾಗ್ಯೂ, ವಿಕಸನಗೊಳ್ಳುತ್ತಿರುವ ವಾಯುಪ್ರದೇಶದ ಪರಿಸ್ಥಿತಿಗಳು ಮತ್ತು ಹೆಚ್ಚಿದ ಭದ್ರತಾ ಕ್ರಮಗಳಿಂದಾಗಿ ಕೆಲವು ವಿಮಾನ ವೇಳಾಪಟ್ಟಿಗಳ ಮೇಲೆ ಪರಿಣಾಮ ಬೀರಬಹುದು ಎಂದು ಡಿಐಎಎಲ್ ತಿಳಿಸಿದೆ. ದೆಹಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ದೇಶದ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣವಾದ ರಾಷ್ಟ್ರ ರಾಜಧಾನಿಯ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ವಹಿಸುತ್ತದೆ. ಈ ನಡುವೆ ವಿಮಾನ ಕಾರ್ಯಾಚರಣೆಗಳು ಸಾಮಾನ್ಯವಾಗಿದೆ ಎಂದು ವಿಮಾನಯಾನ ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಮತ್ತು ಇತರ ಭದ್ರತಾ ಕ್ರಮಗಳನ್ನು ಹೆಚ್ಚಿಸಿದ ನಂತರ ದೇಶೀಯ ವಿಮಾನಗಳು ಹೊರಡುವ ಮೂರು ಗಂಟೆಗಳ ಮೊದಲು ವಿಮಾನ ನಿಲ್ದಾಣವನ್ನು ತಲುಪಲು ವಿಮಾನಯಾನ ಸಂಸ್ಥೆಗಳು ಪ್ರಯಾಣಿಕರನ್ನು ಕೇಳಿಕೊಂಡಿವೆ. ಪ್ರಸ್ತುತ ದೇಶದ ವಿವಿಧ ಭಾಗಗಳಲ್ಲಿ ಸುಮಾರು 27 ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ. ದೆಹಲಿ ವಿಮಾನ ನಿಲ್ದಾಣಕ್ಕೆ ಮತ್ತು ಅಲ್ಲಿಂದ ಕನಿಷ್ಠ 90 ವಿಮಾನಗಳನ್ನು ರದ್ದುಗೊಳಿಸಲಾಗಿದೆ.

## ಭಾರತದ ನಗರಗಳ ಮೇಲೆ ಪಾಕಿಸ್ತಾನದ 400 ಡ್ರೋನ್‌ಗಳಿಂದ ದಾಳಿ: ಕರ್ನಲ್ ಸೋಫಿಯಾ ಖುರೇಷಿ; ಉದ್ದೇಶ ಏನು?

# ಬಠಿಂಡಾ ಸೇನಾ ನೆಲೆಯ ಮೇಲೆ ನಡೆಸಲು ಉದ್ದೇಶಿಸಿದ್ದ ಡ್ರೋನ್ ದಾಳಿ ವಿಫಲ

**ಹೊಸದಿಲ್ಲಿ:** ಶುಕ್ರವಾರ ಸಂಜೆ 5.30ಕ್ಕೆ ವಿದೇಶಾಂಗ ಇಲಾಖೆ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕರ್ನಲ್ ಸೋಫಿಯಾ ಖುರೇಷಿ ಪಾಕಿಸ್ತಾನ ಭಾರತದ ನಗರಗಳನ್ನು ಗುರಿಯಾಗಿಸಿ 400ಕ್ಕೂ ಹೆಚ್ಚು ಡ್ರೋನ್‌ಗಳನ್ನು ಹಾರಿಬಿಟ್ಟಿದೆ ಎಂದು ಹೇಳಿದ್ದಾರೆ. ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ನಗರಗಳನ್ನು ಗುರಿಯಾಗಿಸಿದ ಪಾಕಿಸ್ತಾನ ಸುಮಾರು 300 ರಿಂದ 400 ಡ್ರೋನ್‌ಗಳನ್ನು ನಿಯೋಜಿಸಿದೆ. ಇವು ಟರ್ಕಿ ಮೂಲದ ಡ್ರೋನ್‌ಗಳಾಗಿವೆ ಎಂದು ಅವರು ವಿವರ ನೀಡಿದ್ದಾರೆ. ಬಠಿಂಡಾ ಸೇನಾ ನೆಲೆಯ ಮೇಲೆ ಡ್ರೋನ್ ದಾಳಿ ಮಾಡಲು ಪಾಕಿಸ್ತಾನ ಪ್ರಯತ್ನಿಸಿತ್ತು. ಆದರೆ ಇದನ್ನು ಹಿಮ್ಮೆಟ್ಟಿಸಲಾಗಿದೆ. ತಂಗ್ಧರ್, ಉರಿ, ಪೂಂಚ್, ಮೆಂಧರ್, ರಾಜೌರಿ ಸೇರಿದಂತೆ ಹಲವು ಪ್ರದೇಶಗಳಲ್ಲಿ ಪಾಕಿಸ್ತಾನ ದಾಳಿ ನಡೆಸಿದ್ದು, ಭಾರೀ ಕ್ಯಾಲಿಬರ್ ಆರ್ಟಿಲರಿ ಬಂದೂಕುಗಳು ಮತ್ತು ಡ್ರೋನ್‌ಗಳನ್ನು ಬಳಸಿ ದಾಳಿ ನಡೆಸಿದೆ. ಈ ದಾಳಿಗಳಲ್ಲಿ ಹಲವಾರು ಭಾರತೀಯ ಸೇನಾ ಯೋಧರು ಗಾಯಗೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಪಾಕಿಸ್ತಾನವು ಟರ್ಕಿ ನಿರ್ಮಿತ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್‌ಗಳ ಬಳಕೆ ಮಾಡಿರುವುದನ್ನು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಕೂಡ ದೃಢಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದ ಅವರು ಪಾಕಿಸ್ತಾನ ದಾಳಿಯ ಮತ್ತಷ್ಟು ವಿವರಗಳನ್ನು ನೀಡಿದ್ದಾರೆ. ಮೇ 8 ರಿಂದ 9 ರ ರಾತ್ರಿ, ಪಾಕಿಸ್ತಾನಿ ಸೇನೆಯು ಪಶ್ಚಿಮ ಗಡಿಯಲ್ಲಿ ಹಲವಾರು ಬಾರಿ ಭಾರತೀಯ ವಾಯುಪ್ರದೇಶವನ್ನು ಉಲ್ಲಂಘಿಸಿ, ಮಿಲಿಟರಿ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದೆ. ಪಾಕಿಸ್ತಾನವು ಟರ್ಕಿ ನಿರ್ಮಿತ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್‌ಗಳ ಬಳಕೆ ಮಾಡುತ್ತಿದ್ದು, ಪಾಕಿಸ್ತಾನ ಸೇನೆಯು ಗಡಿ ನಿಯಂತ್ರಣ ರೇಖೆಯ (ಎಲ್‌ಒಸಿ) ಉದ್ದಕ್ಕೂ ಭಾರೀ ಕ್ಯಾಲಿಬರ್ ಆರ್ಟಿಲರಿ ಗನ್‌ಗಳ ಮೂಲಕ ಗುಂಡಿನ ದಾಳಿಯಲ್ಲಿ ತೊಡಗಿದೆ ಎಂದು ವಿವರಿಸಿದ್ದಾರೆ.



ಪಾಕಿಸ್ತಾನವು ನಾಗರಿಕ ವಿಮಾನಗಳನ್ನು ಗುರಾಣಿಯಾಗಿ ಬಳಸುತ್ತಿದೆ ಎಂದು ಸಿಂಗ್ ಹೇಳಿದ್ದು, ಈ ದೊಡ್ಡ ಪ್ರಮಾಣದ ವೈಮಾನಿಕ ದಾಳಿಯ ಸಂಭಾವ್ಯ ಉದ್ದೇಶಗಳು ಭಾರತದ ವಾಯು ರಕ್ಷಣಾ (ಎಡಿ) ವ್ಯವಸ್ಥೆಗಳನ್ನು ಪರೀಕ್ಷಿಸುವುದು, ಗುಪ್ತಚರ ಮಾಹಿತಿಯನ್ನು ಸಂಗ್ರಹಿಸುವುದಾಗಿದೆ ಎಂದು ತಿಳಿಸಿದ್ದಾರೆ. ನಾಗರಿಕ ವಿಮಾನಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಭಾರತೀಯ ವಾಯುಪಡೆ (ಐಎಎಫ್) ಸಂಯಮವನ್ನು ವಹಿಸಿದೆ ಅಷ್ಟೇ ಎಂದು ಅವರು ಒತ್ತಿ ಹೇಳಿದ್ದಾರೆ. ಅಲ್ಲದೆ ಭಾರತೀಯ ಪಡೆಗಳ ಪ್ರತೀಕಾರದ ಗುಂಡಿನ ದಾಳಿಯಲ್ಲಿ ಪಾಕಿಸ್ತಾನಿ ಸೇನೆಯು ಗಮನಾರ್ಹ ನಷ್ಟವನ್ನು ಅನುಭವಿಸಿದೆ ಎಂದು ಅವರು ದೃಢಪಡಿಸಿದ್ದಾರೆ.


ಕರಾಚಿ, ಲಾಹೋರ್ ನಡುವೆ ನಾಗರಿಕ ವಾಯು ಸಂಚಾರ ಮುಂದುವರೆದಿದೆ ಎಂದು ಅವರು ಹೇಳಿದ್ದು, ಫ್ಲೈನಾಸ್ ಏವಿಯೇಷನ್ ನಿರ್ವಹಿಸುವ ಏರ್‌ಬಸ್ ಎ320 ವಿಮಾನವು ದಮನ್‌ನಿಂದ ಹೊರಟು ನಂತರ ಲಾಹೋರ್‌ನಲ್ಲಿ ಬಂದಿಳಿದಿದೆ. ಪಾಕಿಸ್ತಾನದ ಪ್ರಚೋದನೆಯ ಹೊರತಾಗಿಯೂ, ಅಂತಾರಾಷ್ಟ್ರೀಯ ನಾಗರಿಕ ವಿಮಾನಗಳನ್ನು ರಕ್ಷಿಸುವ ದೃಷ್ಟಿಯಿಂದ ಐಎಎಫ್ ಸಂಯಮವನ್ನು ಕಾಯ್ದುಕೊಂಡಿತು ಎಂದು ವಿವರ ನೀಡಿದ್ದಾರೆ. ಪಾಕಿಸ್ತಾನವು ಅಂತಾರಾಷ್ಟ್ರೀಯ ಸಮುದಾಯವನ್ನು ದಾರಿ ತಪ್ಪಿಸಲು ಮತ್ತು ಪರಿಸ್ಥಿತಿಗೆ ಕೋಮು ಬಣ್ಣ ಬಳಿಯಲು ಪ್ರಯತ್ನಿಸುತ್ತಿದೆ ಎಂದು ಅವರು ದೂರಿದ್ದಾರೆ. ಅಲ್ಲದೆ, ಪಾಕಿಸ್ತಾನದ ಪಂಜಾಬ್‌ನಲ್ಲಿರುವ ನಂಕಾನಾ ಸಾಹಿಬ್ ಗುರುದ್ವಾರವನ್ನು ಭಾರತ ಗುರಿಯಾಗಿಸಿಕೊಂಡಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

**ಗುರುದ್ವಾರದ ಮೇಲೆ ಪಾಕಿಸ್ತಾನದ ದಾಳಿ ಭಾರತ ತನ್ನದೇ ನಗರಗಳ ಮೇಲೆ ದಾಳಿ ಮಾಡುತ್ತಿದೆ ಎಂಬ ಪಾಕಿಸ್ತಾನದ ವಿಚಿತ್ರ ಕಲ್ಪನೆಯನ್ನು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ತಳ್ಳಿ ಹಾಕಿದ್ದು, ಖಂಡಿಸಿದ್ದಾರೆ. ಅಲ್ಲದೆ ಪಾಕಿಸ್ತಾನ ಧಾರ್ಮಿಕ ಸ್ಥಳಗಳನ್ನೂ ಗುರಿಯಾಗಿಸಿ ದಾಳಿ ನಡೆಸಿದೆ ಎಂದು ಅವರು ಹೇಳಿದ್ದು, ಪೂಂಚ್‌ನ ಗುರುದ್ವಾರದ ಮೇಲೆ ದಾಳಿ ನಡೆಸಿದೆ, ಈ ಮೂಲಕ ಧಾರ್ಮಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡಿಲ್ಲ ಎಂಬ ಪಾಕಿಸ್ತಾನದ ಹೇಳಿಕೆ ಸುಳ್ಳು**

**- ಕರ್ನಲ್ ಸೋಫಿಯಾ ಖುರೇಷಿ**

### ಗುರಾಣಿಯಾಗಿ ಬಳಸುತ್ತಿದೆ

**ಪಾಕಿಸ್ತಾನವು ಭಾರತದ ನಗರಗಳ ಮೇಲೆ 400ಕ್ಕೂ ಹೆಚ್ಚು ಡ್ರೋನ್‌ಗಳನ್ನು ಹಾರಿಬಿಟ್ಟಿದೆ. ಇವುಗಳು ಟರ್ಕಿ ನಿರ್ಮಿತ ಡ್ರೋನ್‌ಗಳಾಗಿವೆ ಎಂದು ಕರ್ನಲ್ ಸೋಫಿಯಾ ಖುರೇಷಿ ಹೇಳಿದ್ದಾರೆ. ಬಠಿಂಡಾ ಸೇನಾ ನೆಲೆಯ ಮೇಲೆ ಡ್ರೋನ್ ದಾಳಿ ವಿಫಲವಾಗಿದ್ದು, ತಂಗ್ಧರ್, ಉರಿ, ಪೂಂಚ್ ಸೇರಿದಂತೆ ಹಲವೆಡೆ ಆರ್ಟಿಲರಿ ಗನ್, ಡ್ರೋನ್‌ಗಳಿಂದ ದಾಳಿ ನಡೆಸಿದೆ. ಪಾಕಿಸ್ತಾನ ನಾಗರಿಕ ವಿಮಾನಗಳನ್ನು ಗುರಾಣಿಯಾಗಿ ಬಳಸುತ್ತಿದೆ ಎಂದು ವಾಯುಪಡೆ ದೂರಿದೆ.**




# ಮಾದಕ ಲುಕ್‌ನಲ್ಲಿ ಮಿಂಚಿದ ವೈಷ್ಣವಿ



ಸೋಷಿಯಲ್ ಮೀಡಿಯಾದಲ್ಲೀಗ ಮಾಡೆಲ್‌ಗಳು, ನಟಿಯರು ಬಿಕಿನಿ, ಹಾಟ್ ಉಡುಗೆಗಳನ್ನ ತೊಟ್ಟು ಫೋಟೋ ಶೂಟ್ ಮಾಡಿಸುವುದು ಟ್ರೆಂಡ್ ಆಗಿಬಿಟ್ಟಿದೆ. ಅದರಂತೆ ಸದಾ ಹಾಟ್ ಬೆಡಗಿ ಅಂತಲೇ ಗುರುತಿಸಿಕೊಂಡಿರುವ ಮಾಡೆಲ್, ನಟಿ ಕಂ ಕಂಟೆಂಟ್ ಕ್ರಿಯೇಟರ್ ವೈಷ್ಣವಿ ಅಂಥಲೆ ತಮ್ಮ ಗ್ಲಾಮರ್ ಮೂಲಕ ಪಡ್ಡೆ ಹೈಕಳ ಹೃದಯಕ್ಕೆ ಕೊಳ್ಳಿ ಇಟ್ಟಿದ್ದಾರೆ. ಅದಕ್ಕೆ ಲೇಟೆಸ್ಟ್ ಉದಾಹರಣೆ ಈ ಹೊಸ ಫೋಟೋ ಶೂಟ್ ಎನ್ನಬಹುದು. ರೆಸ್ಟೋರೆಂಟ್‌ವೊಂದರಲ್ಲಿ ಬಿಸಿ ಬಿಸಿ ಬಾರ್ಬಿಕ್ಯೂ ಜೊತೆಗೆ ಹಾಟ್ ಪೋಸ್ ನೀಡಿರುವ ವೈಷ್ಣವಿ ಪಡ್ಡೆ ಹೈಕಳ ಎದೆಬಡಿತ ಹೆಚ್ಚಿಸಿದ್ದಾರೆ. ಇದಕ್ಕೆ ನಮಗೆ ಪಿಜ್ಜಾ ಬಾರ್ಬಿಕ್ಯೂ ಇಲ್ವಾ.. ಆ ನೋಟ ನೋಡಿ, ಕೊಲ್ಲುವಂತೆ ಇದೆ.. ಈ ಫೋಟೋಗಳು ಮಾದಕವಾಗಿವೆ.. ನೀವು ತುಂಭಾ ಸುಂದರವಾಗಿ ಕಾಣ್ತಿದ್ದೀರಿ ಎಂದೆಲ್ಲ ನೆಟ್ಟಿಗರು ಕಾಮೆಂಟ್ ಮಾಡ್ತಿದ್ದಾರೆ. ವಿಭಿನ್ನ ಕಲೆಗಳನ್ನ ಕರಗತ ಮಾಡಿ ಕೊಂಡಿರೋ ವೈಷ್ಣವಿ ನರ್ತಕಿ, ಗಾಯಕಿ ಮತ್ತು ವರ್ಣಚಿತ್ರಗಾರ್ತಿ, ವಿಡಿಯೋ ಹಾಗೂ ಫೋಟೋಗ್ರಫಿ ಮಾಡೋದ್ರಲ್ಲೂ ಸೈ ಎನಿಸಿಕೊಂಡಿದ್ದಾರೆ.

ಕಂಟೆಂಟ್ ಕ್ರಿಯೇಟರ್ ಕೂಡ ಆಗಿರುವ ವೈಶು 2019 ರಲ್ಲಿ, ವೈಷ್ಣವಿ ಫೆಮಿನಾ ಮಿಸ್ ಇಂಡಿಯಾ ಮಹಾರಾಷ್ಟ್ರ ಕಿರೀಟ ಮುಡಿಗೇರಿಸಿಕೊಂಡಿದ್ದರು. ಆ ಬಳಿಕ ಇವರ ಲಕ್ಕೇ ಬದಲಾಯ್ತು. ಅದಾದ ಬಳಿಕ ಮಾಡೆಲಿಂಗ್ ಜೊತೆಗೆ ಕಂಟೆಂಟ್ ಕ್ರಿಯೇಟ್, ಸಿನಿಮಾ, ಜಾಹೀರಾತು ಹಾಗೂ ಕಿರುಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ.

ಕೊಲ್ತಾಳಲ್ಲಪ್ಪೋ ಅಂದ್ರು ನೆಟ್ಟಿಗರು



# ಭಾರತೀಯ ಸೇನೆ ಅಭಿನಂದನೆ ಸಲ್ಲಿಸಿದ ಯಶ್



ಭಾರತ ಹಾಗೂ ಪಾಕಿಸ್ತಾನದ ನಡುವೆ ಯುದ್ಧದ ಪರಿಸ್ಥಿತಿ ಇದೆ. ಭಾರತೀಯ ಸೈನಿಕರು ಪಾಕಿಸ್ತಾನದ ಸತತ ವೈಮಾನಿಕ ದಾಳಿಯನ್ನು ತಡೆಯುತ್ತಿದ್ದಾರೆ. ಇದೀಗ ನಟ ಯಶ್ ಟ್ವೀಟ್ ಮಾಡಿದ್ದು ಭಾರತೀಯ ಸೇನೆಯ ಅಚಲ ಶಕ್ತಿ ಮತ್ತು ನಿಖರತೆಗೆ ಸಲಾಂ ಎಂದಿದ್ದಾರೆ. ಇದರ ಜೊತೆಗೆ ಈ ಸಮಯದಲ್ಲಿ ನಾಗರೀಕರಾದ ನಾವು ಏನು ಮಾಡಬೇಕೆಂದು ಸಲಹೆ ನೀಡಿದ್ದಾರೆ. ಪಾಕಿಸ್ತಾನದ ಸತತ ದಾಳಿಯ ವಿರುದ್ಧ ಭಾರತ ಸೇನೆಯು ಪ್ರಬಲ ಹೋರಾಟ ಮಾಡುತ್ತಿದೆ. ಸೇನೆಯ ಮಾಹಿತಿಯಂತೆ ಪಾಕಿಸ್ತಾನದ ಸತತ ವೈಮಾನಿಕ ದಾಳಿಯನ್ನು ಭಾರತೀಯ ಸೇನೆಯು ಅತ್ಯಾಧುನಿಕ ತಂತ್ರಜ್ಞಾನದ ನೆರವಿನಿಂದ ತಡೆಯೊಡ್ಡಿದೆ. ಆಗಬಹುದಾಗಿದ್ದ ಭಾರಿ ದೊಡ್ಡ ಅನಾಹುತ, ಪ್ರಾಣಹಾನಿಯನ್ನು ಸೈನ್ಯವು ತಡೆದಿದೆ. ಅದರ ಜೊತೆಗೆ ಪಾಕಿಸ್ತಾನದ ಉಗ್ರರ ನೆಲೆಗಳು, ಸೇನಾ ನೆಲೆಗಳ ಮೇಲೆ ದಾಳಿಯನ್ನು ಮುಂದುವರೆಸಿದೆ. ಭಾರತದ ಹಲವು ಸಿನಿಮಾ ಸೆಲೆಬ್ರಿಟಿಗಳು, ಕ್ರಿಕೆಟಿಗರು ಸೈನ್ಯದ ಕಾರ್ಯವೈಖರಿಯ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.


# ಹಸೆಮಣೆ ಏರಿದ 'ಸೀತಾ ವಲ್ಲಭ' ನಟಿ ಸುಪ್ರೀತಾ



'ಸೀತಾ ವಲ್ಲಭ' ಸೀರಿಯಲ್ ನಟಿ ಸುಪ್ರೀತಾ ಸತ್ಯನಾರಾಯಣ್ ಬಹುಕಾಲದ ಗೆಳೆಯ ಚಂದನ್ ಶೆಟ್ಟಿ ಜೊತೆ ಹಸೆಮಣೆ ಏರಿದ್ದಾರೆ.

ಇಂದು ಬೆಂಗಳೂರಿನಲ್ಲಿ ಅದ್ಧೂರಿಯಾಗಿ ಚಂದನ್ ಶೆಟ್ಟಿ ಜೊತೆ ಸುಪ್ರೀತಾ ಮದುವೆ ಯಾಗಿದ್ದಾರೆ. ಕಳೆದ ನಾಲ್ಕೈದು ವರ್ಷ ಗಳಿಂದ ಚಂದನ್ ಅವರನ್ನು ನಟಿ ಪ್ರೀತಿ ಸುತ್ತಿದ್ದರು. ಗುರುಹಿರಿಯರ ಒಪ್ಪಿಗೆ ಪಡೆದು ಚಂದನ್ ಅವರೊಂದಿಗೆ ದಾಂಪತ್ಯ ಬದುಕಿಗೆ ಕಾಲಿಟ್ಟಿದ್ದಾರೆ ಸುಪ್ರೀತಾ. ಇವರ ಮದುವೆಗೆ ನೇಹಾ ಗೌಡ, ರಶ್ಮಿಕಾ ಪ್ರಭಾಕರ್, ಸುಜಾತಾ ಅಕ್ಷಯ್ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ.

ಇತ್ತೀಚೆಗಷ್ಟೇ ಚಂದನ್ ಜೊತೆ ಎಂಗೇಜ್‌ಮೆಂಟ್ ಮಾಡಿ ಕೊಳ್ಳುವ ಮೂಲಕ ಫ್ಯಾನ್ಸ್‌ಗೆ ಶುಭ ಸುದ್ದಿ ನೀಡಿದ್ದರು. ಮಾರ್ಚ್ 12ರಂದು ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಡಿಜಿಟಲ್ ಕ್ರಿಯೇಟರ್, ಸಾಫ್ಟ್‌ವೇರ್ ಉದ್ಯೋಗಿ ಚಂದನ್ ಶೆಟ್ಟಿ ಅವರನ್ನು ನಟಿ ಮದುವೆಯಾಗಿದ್ದಾರೆ. ಕೊಡಗು ಮೂಲದ ಚಂದನ್ ಈಗ ಬೆಂಗಳೂರಿನಲ್ಲಿ ನೆಲೆಸಿದ್ದಾರೆ.




# ರಿಮೇಕ್ ಆದ್ರೆ ಜಾನ್ವಿಯೇ ಬೇಕು ಎಂದ ಮೆಗಾಸ್ಟಾರ್!

ಚಿರಂಜೀವಿ ಮತ್ತು ಶ್ರೀದೇವಿ ನಟಿಸಿರುವ 'ಜಗತೇಕ ವೀರುಡು ಅತಿಲೋಕ ಸುಂದರಿ' ಚಿತ್ರ ಬಿಡುಗಡೆಯಾಗಿ 35 ವರ್ಷಗಳು ಕಳೆದಿದೆ. ಮತ್ತೆ ಈ ಚಿತ್ರ ಚಿತ್ರಮಂದಿರಗಳಲ್ಲಿ ರೀ ರಿಲೀಸ್ ಆಗಿದೆ. ಈ ಬಗ್ಗೆ ಮೆಗಾಸ್ಟಾರ್ ಚಿರಂಜೀವಿ ಸಂದರ್ಶನವೊಂದರಲ್ಲಿ ಮಾತನಾಡಿ, ಶ್ರೀದೇವಿ ಈ ಚಿತ್ರದ ಹೃದಯ. ಈ ಸಂದರ್ಭದಲ್ಲಿ ಅವರನ್ನ ತುಂಬಾ ಮಿಸ್ ಮಾಡಿಕೊಳ್ಳುತ್ತಿದ್ದೇನೆ. ಈ ಚಿತ್ರ ಮತ್ತೆ ರಿಮೇಕ್ ಆದ್ರೆ, ಅಥವಾ ಎರಡನೇ ಭಾಗ ಆದ್ರೆ, ರಾಮ್ ಚರಣ್ ಮತ್ತು ಜಾನ್ವಿ ಕಪೂರ್ ನಟಿಸಬೇಕು. ಅಶ್ವಿನಿ ದತ್ ಅವರ ಮಕ್ಕಳು ಇದನ್ನು ನಿರ್ಮಿಸಬೇಕು ಮತ್ತು ಅವರ ಅಳಿಯ ನಾಗ್ ಅಶ್ವಿನ್ ನಿರ್ದೇಶಿಸಬೇಕು. ಹಾಗೇನಾದ್ರೂ ಆದ್ರೆ ಆ ಚಿತ್ರ ಅದ್ಭುತವಾಗಿ ನಿರ್ಮಾಣ ಆಗಲಿದೆ ಎಂದಿದ್ದಾರೆ. ಜಗದೇಕ ವೀರುಡು ಅತಿಲೋಕ ಸುಂದರಿ 1990 ರಲ್ಲಿ ಬಿಡುಗಡೆಯಾದ ಒಂದು ಫ್ಯಾಂಟಸಿ ಚಿತ್ರ. ಈ ಚಿತ್ರದಲ್ಲಿ ಚಿರಂಜೀವಿ ಮತ್ತು ಶ್ರೀದೇವಿಯಲ್ಲದೆ, ಅಮರೀಶ್ ಪುರಿ, ಕನ್ನಡ ನಟ ಪ್ರಭಾಕರ್, ಅಲ್ಲು ರಾಮಲಿಂಗಯ್ಯ ಮತ್ತು ಇತರ ಪ್ರಮುಖ ನಟರು ನಟಿಸಿದ್ದಾರೆ. ಚಿರಂಜೀವಿ ಇತ್ತೀಚೆಗೆ 'ವಿಶ್ವಂಬರ' ಚಿತ್ರದಲ್ಲಿ ನಟಿಸಿದ್ದು, ಚಿತ್ರೀಕರಣ ಪೂರ್ಣಗೊಂಡಿದೆ. ಈ ಚಿತ್ರ ಶೀಘ್ರದಲ್ಲೇ ಬಿಡುಗಡೆಯಾಗಲಿದೆ

ಜಗದೇಕ ವೀರುಡು ಅತಿಲೋಕ ಸುಂದರಿ ರೀ ರಿಲೀಸ್

# ಕಾಂಪ್ರಮೈಸ್ ಆಗಬೇಕು ನೇರವಾಗಿ ಹೇಳಿದ ನಿರ್ಮಾಪಕ





ಚಂದನಾ ಅನಂತಕೃಷ್ಣ ಅವರು ಇತ್ತೀಚೆಗೆ ನೀಡಿದ ಸಂದರ್ಶನದಲ್ಲಿ ಕಾಸ್ಟಿಂಗ್ ಕೌಚ್‌ನಂತಹ ಅನುಭವಗಳ ಬಗ್ಗೆ ಮಾತನಾಡಿದ್ದಾರೆ. ಒಂದು ಏಜೆನ್ಸಿ ಅವರಿಗೆ ಕಳುಹಿಸಿದ ಪ್ರಸ್ತಾಪದಲ್ಲಿ '3 ತಿಂಗಳು ಶೂಟ್ + ಕಾಂಪ್ರಮೈಸ್' ಎಂದು ಸ್ಪಷ್ಟವಾಗಿ ಬರೆದಿತ್ತು ಎಂದು ಅವರು ಹೇಳಿದ್ದಾರೆ. ಈ ಮೂಲಕ ಜಾಗೃತಿ ಮೂಡಿಸುವ ಕೆಲಸ ಮಾಡಿದ್ದಾರೆ. ನಟಿ ಚಂದನಾ ಅನಂತಕೃಷ್ಣ ಅವರು 'ಬಿಗ್ ಬಾಸ್ ಕನ್ನಡ' ರಿಯಾಲಿಟಿ ಶೋನಲ್ಲಿ ಸ್ಪರ್ಧಿಸಿ ಗಮನ ಸೆಳೆದರು. ಅವರು ಉತ್ತಮ ಭರತನಾಟ್ಯ ಡ್ಯಾನ್ಸರ್ ಹಾಗೂ ನಟಿ. ಸದ್ಯ 'ಲಕ್ಷ್ಮೀ ನಿವಾಸ' ಧಾರಾವಾಹಿಯಲ್ಲಿ ಚಂದನಾ ಅವರು ನಟಿಸುತ್ತಿದ್ದಾರೆ. ಈಗ ಅವರು ಯೂಟ್ಯೂಬ್ ಚಾನೆಲ್ ಒಂದಕ್ಕೆ ನೀಡಿದ ಸಂದರ್ಶನದಲ್ಲಿ ತಾವು ಎದುರಿಸಿದ ಸಮಸ್ಯೆಗಳ ಬಗ್ಗೆಯೂ ಹೇಳಿಕೊಂಡಿದ್ದಾರೆ. ಅವರಿಗೂ ಕಾಸ್ಟಿಂಗ್ ಕೌಚ್ ರೀತಿಯ ಅನುಭವ ಆಗಿತ್ತು. ಈ ಬಗ್ಗೆ ಚಂದನಾ ನೇರ ಮಾತುಗಳಲ್ಲಿ ವಿವರಣೆ ನೀಡಿದ್ದಾರೆ. 'ವೈ5 ಟಿವಿ ಕನ್ನಡ' ಯೂಟ್ಯೂಬ್ ಚಾನೆಲ್‌ಗೆ ಚಂದನಾ ಸಂದರ್ಶನ ನೀಡಿದ್ದಾರೆ. ಈ ವೇಳೆ ಅವರು ತಮ್ಮ ಜೀವನದಲ್ಲಾದ ಕೆಲ ಅನುಭವಗಳನ್ನು ಹಂಚಿಕೊಂಡಿದ್ದಾರೆ. ಹಾಗಂತ ಅವರಿಗೆ ಕರೆ ಮಾಡಿದ ಯಾರೊಬ್ಬರೂ ನಿರ್ಮಾಪಕರಾಗಿರಲಿಲ್ಲ. ಆಫರ್ ಕೊಡೋ ಹೆಸರಲ್ಲಿ ಚಾನ್ಸ್ ಪಡೆದುಕೊಳ್ಳಲು ಬಯಸಿದವರಾಗಿದ್ದರು ಎಂಬುದು ಇಲ್ಲಿ ಗಮನಿಸಬೇಕಾದ ವಿಚಾರ. 'ಒಬ್ಬರು ಕರೆ ಮಾಡಿದ್ದರು. ಮಾಡರ್ನ್ ಫೋಟೋಶೂಟ್ ಬೇಕು ಎಂದರು. ನಾನು ಅಷ್ಟು ಮಾಡರ್ನ್ ಫೋಟೋಶೂಟ್ ಮಾಡಿಸಿರಲಿಲ್ಲ. ಇದ್ದಿದ್ದರಲ್ಲೇ ಮಾಡರ್ನ್ ಆಗಿರೋ ಫೋಟೋ ಕಳುಹಿಸಿದೆ. ಆ ಬಳಿಕ ಮೇಕಪ್ ಇಲ್ಲದ ಫೋಟೋ ಕಳುಹಿಸಿ ಎಂದರು.


# ಯಾವ ತಂಡದಿಂದ ಎಷ್ಟು ವಿದೇಶಿ ಆಟಗಾರರು ತಾಯ್ನಾಡಿಗೆ

ಭಾರತದ ಮೇಲೆ ಪಾಕಿಸ್ತಾನ ದಾಳಿ ನಡೆಸಿದ ಹಿನ್ನೆಲೆಯಲ್ಲಿ, ಧರ್ಮಶಾಲಾದಲ್ಲಿ ನಡೆಯುತ್ತಿದ್ದ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಪಂಜಾಬ್ ಕಿಂಗ್ಸ್ ನಡುವಿನ ಪಂದ್ಯವನ್ನು ಅರ್ಧಕ್ಕೆ ನಿಲ್ಲಿಸಲಾಯಿತು. ಏತನ್ಮಧ್ಯೆ, ಒಂದೆಡೆ ವಿದೇಶಿ ಆಟಗಾರರು ಭಾರತವನ್ನು ತೊರೆಯಲು ಬಯಸಿದರೆ, ಮತ್ತೊಂದೆಡೆ, ಬಿಸಿಸಿಐ ಅವರನ್ನು ಸುರಕ್ಷಿತವಾಗಿ ತಮ್ಮ ದೇಶಕ್ಕೆ ಕಳುಹಿಸಲು ಪ್ರಯತ್ನಿಸುತ್ತಿದೆ.

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯ ದೃಷ್ಟಿಯಿಂದ, ಸನ್‌ರೈಸರ್ಸ್ ಹೈದರಾಬಾದ್‌ನ ನಾಯಕ ಪ್ಯಾಟ್ ಕಮ್ಮಿನ್ಸ್, ಹೆನ್ರಿಕ್ ಕ್ಲಾಸೆನ್, ಟ್ರಾವಿಸ್ ಹೆಡ್, ಇಶಾನ್ ಮಾಲಿಂಗ, ಬ್ರೈಡನ್ ಕಾರ್ಸೆ ಮತ್ತು ಕಾಮಿಂದು ಮೆಂಡಿಸ್ ಸೇರಿದಂತೆ 6 ಆಟಗಾರರು ದೇಶವನ್ನು ತೊರೆಯಲಿದ್ದಾರೆ. ಅದೇ ಸಮಯದಲ್ಲಿ, ಕೋಲ್ಕತ್ತಾ ನೈಟ್ ರೈಡರ್ಸ್‌ನ 8 ಆಟಗಾರರಾದ ಕ್ವಿಂಟನ್ ಡಿ ಕಾಕ್, ರಹಮಾನಲ್ಲಾ ಗುರ್ಬಾಜ್, ಸುನಿಲ್ ನರೈನ್, ಆಂಡ್ರೆ ರಸೆಲ್, ರೋವ್‌ಮನ್ ಪೊವೆಲ್, ಮೊಯಿನ್ ಅಲಿ, ಅನ್ರಿಕ್ ನೋಕಿಯಾ ಮತ್ತು ಸ್ಪೆನ್ಸರ್ ಜಾನ್ಸನ್ ಕೂಡ ಭಾರತವನ್ನು ತೊರೆಯಲಿದ್ದಾರೆ. ಪಂಜಾಬ್ ಕಿಂಗ್ಸ್ ತಂಡದ 7 ಆಟಗಾರರಾದ, ಜೋಶ್ ಇಂಗ್ಲಿಸ್, ಮಾರ್ಕಸ್ ಸ್ಟೊಯಿನಿಸ್, ಅಜ್ಮತುಲ್ಲಾ ಉಮರ್ಜೈ, ಮಾರ್ಕೊ ಯಾನ್ಸೆನ್, ಕ್ಸೇವಿಯರ್ ಬಾರ್ಟ್ಲೆಟ್, ಆರನ್ ಹಾರ್ಡಿ ಕೂಡ ಈ ಪಟ್ಟಿಯಲ್ಲಿದ್ದಾರೆ.









ಟ್ರಿಸ್ಟಾನ್ ಸ್ಟಬ್ಸ್, ಮಿಚೆಲ್ ಸ್ಟಾರ್ಕ್, ಜೇಕ್ ಫ್ರೇಸರ್-ಮೆಕ್‌ಗುರ್ಕ್, ಫಾಫ್ ಡು ಪ್ಲೆಸಿಸ್, ದುಷ್ಮಂತ ಚಮೀರಾ, ಡೊನೊವನ್ ಫೆರೇರಾ ಮತ್ತು ಸೆಡಿಕುಲ್ಲಾ ಅಟಲ್ ಅವರು ಡೆಲ್ಲಿ ಕ್ಯಾಪಿಟಲ್ಸ್ ತಂಡದಿಂದ ಭಾರತವನ್ನು ತೊರೆಯಲಿದ್ದಾರೆ. ಇವರಲ್ಲದೆ, ಜೋಸ್ ಬಟ್ಲರ್, ರಶೀದ್ ಖಾನ್, ಜೆರಾಲ್ಡ್ ಕೋಟ್ಜೀ, ಶರ್ಫಾನ್ ರುದರ್ಫೋರ್ಡ್, ಕರೀಮ್ ಜನತ್ ಮತ್ತು ದಾಸುನ್ ಶನಕ ಗುಜರಾತ್ ಟೈಟಾನ್ಸ್ ತಂಡದಿಂದ ತಮ್ಮ ದೇಶಗಳಿಗೆ ಮರಳಲಿದ್ದಾರೆ.


ಮುಂಬೈ ಇಂಡಿಯನ್ಸ್ ವೇಗಿ ಟ್ರೆಂಟ್ ಬೌಲ್ಟ್ ಸೇರಿದಂತೆ ಒಟ್ಟು 9 ಆಟಗಾರರನ್ನು ಅವರ ಮನೆಗಳಿಗೆ ಕಳುಹಿಸಲು ಬಿಸಿಸಿಐ ವ್ಯವಸ್ಥೆ ಮಾಡಲಿದೆ. ಇವರಲ್ಲಿ ರಯಾನ್ ರಿಕಲ್ಟನ್, ವಿಲ್ ಜ್ಯಾಕ್ಸ್, ಮಿಚೆಲ್ ಸ್ಯಾಂಟ್ನರ್, ರೀಸ್ ಟೋಪ್ಲಿ, ಕಾರ್ಬಿನ್ ಬಾಷ್, ಮುಜೀಬ್ ಉರ್ ರೆಹಮಾನ್ ಮತ್ತು ಬೆವನ್ ಜೇಕಬ್ಸ್ ಅವರ ಹೆಸರುಗಳೂ ಸೇರಿವೆ. ಮತ್ತೊಂದೆಡೆ, ಚೆನ್ನೈ ಸೂಪರ್ ಕಿಂಗ್ಸ್‌ನಿಂದ ಮಥಿಷಾ ಪತಿರಾನ, ನೂರ್ ಅಹ್ಮದ್, ಡೆವೊನ್ ಕಾನ್ವೇ, ರಚಿನ್ ರವೀಂದ್ರ, ಸ್ಯಾಮ್ ಕರನ್, ನಾಥನ್ ಎಲ್ಲಿಸ್, ಜೇಮೀ ಓವರ್ಟನ್ ಮತ್ತು ಡೆವಾಲ್ಡ್ ಬ್ರೆವಿಸ್ ಅವರನ್ನು ಭಾರತದಿಂದ ಸುರಕ್ಷಿತವಾಗಿ ಕರೆದೊಯ್ಯಲಾಗುವುದು.

# 2025ರ ಐಪಿಎಲ್ ಸಂಪೂರ್ಣವಾಗಿ ರದ್ದಾಗಿಲ್ಲ..!

ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ, ಬಿಸಿಸಿಐ 2025ರ ಐಪಿಎಲ್ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಪಾಕಿಸ್ತಾನದ ಉಗ್ರ ದಾಳಿಗಳಿಗೆ ಪ್ರತ್ಯುತ್ತರವಾಗಿ ಭಾರತ ಕೈಗೊಂಡ ಕ್ರಮಗಳಿಂದ ಉಂಟಾದ ಭದ್ರತಾ ಅಪಾಯದಿಂದಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಉಳಿದ ಪಂದ್ಯಗಳನ್ನು ಮುಂದಿನ ದಿನಗಳಲ್ಲಿ ಮರುನಿಗದಿಪಡಿಸುವ ಸಾಧ್ಯತೆಯಿದೆ. ಭಾರತ ಮತ್ತು ಪಾಕಿಸ್ತಾನ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಗಮನಿಸಿದ ಬಿಸಿಸಿಐ , ಒಂದು ದೊಡ್ಡ ನಿರ್ಧಾರವನ್ನು ತೆಗೆದುಕೊಂಡಿದೆ. 2025 ರ ಐಪಿಎಲ್ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಉಗ್ರ ಪೋಷಕ ಪಾಕಿಸ್ತಾನ, ಭಾರತದ ಹಲವಾರು ನಗರಗಳ ಮೇಲೆ ಡ್ರೋನ್ ದಾಳಿ ನಡೆಸಿತು. ಆದರೆ, ಭಾರತ ಪಾಕಿಸ್ತಾನಕ್ಕೆ ಸೂಕ್ತ ಪ್ರತ್ಯುತ್ತರ ನೀಡಿ ಅದರ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹೊಡೆದುರುಳಿಸಿತು.

ಶೀಘ್ರದಲ್ಲೇ ಮರು ನಿಗದಿ



ಆದರೆ ಈ ದಾಳಿಯ ಪರಿಣಾಮದಿಂದಾಗಿ ಧರ್ಮಶಾಲಾದಲ್ಲಿ ನಡೆಯುತ್ತಿದ್ದ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಐಪಿಎಲ್ ಪಂದ್ಯವನ್ನು ಅರ್ಧಕ್ಕೆ ನಿಲ್ಲಿಸಲಾಗಿತ್ತು. ಆದರೀಗ ಇಡೀ ಆವೃತ್ತಿಯನ್ನು ತಾತ್ಕಾಲಿಕವಾಗಿ ರದ್ದುಗೊಳಿಸಲಾಗಿದ್ದು, ಉಳಿದ ಪಂದ್ಯಗಳನ್ನು ಶೀಘ್ರದಲ್ಲೇ ಮರು ನಿಗದಿಪಡಿಸಬಹುದು ಎಂದು ವರದಿಯಾಗಿದೆ.

**ತಾತ್ಕಾಲಿಕವಾಗಿ ಐಪಿಎಲ್ ರದ್ದು:** ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ಕೈಗೊಂಡಿದೆ. ಭಾರತವು ಆಪರೇಷನ್ ಸಿಂಧೂರ್ ಅಡಿಯಲ್ಲಿ ಪಾಕಿಸ್ತಾನ ಮತ್ತು ಪಿಒಕೆಯಲ್ಲಿ ಒಂಬತ್ತು ಭಯೋತ್ಪಾದಕ ನೆಲೆಗಳ ಮೇಲೆ ದಾಳಿ ಮಾಡಿತು. ಇದಾದ ನಂತರ ಪಾಕಿಸ್ತಾನ ಸಿಟ್ಟಿಗೆದ್ದಿದ್ದು, ಒಂದರ ನಂತರ ಒಂದರಂತೆ ಅನೇಕ ನೀಚ ಕೃತ್ಯಗಳನ್ನು ಎಸಗುತ್ತಿದೆ. ಪಾಕಿಸ್ತಾನದ ಎಲ್ಲಾ ಪ್ರಯತ್ನಗಳನ್ನು ಭಾರತ ವಿಫಲಗೊಳಿಸಿದೆ. ಆದಾಗ್ಯೂ ಮುನ್ನೆಚ್ಚರಿಕೆಯ ಕ್ರಮವಾಗಿ ಐಪಿಎಲ್ ಪಂದ್ಯಾವಳಿಯನ್ನು ತಾತ್ಕಾಲಿಕವಾಗಿ ರದ್ದುಗೊಳಿಸಲಾಗಿದೆ. ಕೇಂದ್ರ ಮತ್ತು ಎಲ್ಲಾ ಫ್ರಾಂಚೈಸಿಗಳು ಮತ್ತು ಪಾಲುದಾರರೊಂದಿಗೆ ಸಮಾಲೋಚಿಸಿದ ನಂತರ, ಐಪಿಎಲ್ ಪಂದ್ಯಾವಳಿನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಇದರರ್ಥ ಈ ಆವೃತ್ತಿಯಲ್ಲಿ ಉಳಿದ ಪಂದ್ಯಗಳನ್ನು ಮುಂದಿನ ದಿನಗಳಲ್ಲಿ ನಡೆಸಲಾಗುವುದು. ಆದರೆ ಉಳಿದ ಪಂದ್ಯಗಳನ್ನು ಯಾವಾಗ ಮತ್ತು ಎಲ್ಲಿ ನಡೆಸಲಾಗುವುದು ಎಂಬುದರ ಕುರಿತು ಇನ್ನೂ ನಿರ್ಧಾರ ತೆಗೆದುಕೊಳ್ಳಲಾಗಿಲ್ಲ.

# ಮಂಗಳೂರಿನ ಹೈ-ಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್‌ಗೆ 29 ಪದಕಗಳು

ಮಂಗಳೂರಿನ ಫ್ರಾನ್ಸಿಸ್ ಡೋರಿಸ್ ಸ್ಕೇಟ್ ಸಿಟಿಯಲ್ಲಿ ಇತ್ತೀಚೆಗೆ ನಡೆದ 1ನೇ ಕರ್ನಾಟಕ ರಾಜ್ಯ ರ್‍ಯಾಂಕಿಂಗ್ ಸ್ಪೀಡ್ ಸ್ಕೇಟಿಂಗ್ ಚಾಂಪಿಯನ್ ಶಿಪ್‌ನಲ್ಲಿ ಮಂಗಳೂರಿನ ಹೈಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್‌ನ ಸ್ಕೇಟರ್ಸ್ 19 ಚಿನ್ನ, 5 ಬೆಳ್ಳಿ ಮತ್ತು 5 ಕಂಚಿನ ಪದಕಗಳನ್ನು ಗೆದ್ದಿದ್ದಾರೆ. ಸ್ಕೇಟರ್‌ಗಳಾದ ಮುಹಮ್ಮದ್ ಅಯಾನ್ 3 ಚಿನ್ನ, ಹಿಮಾನಿ ಕೆ.ವಿ 3 ಚಿನ್ನ, ತನ್ಮಯ್ ಎಂ ಕೊಟ್ಟಾರಿ 3 ಚಿನ್ನ, ಡ್ಯಾಶಿಯೆಲ್ ಅಮಂಡಾ ಕಾನ್ಸೆಸ್ಸಾವೊ 3 ಚಿನ್ನ, ಶಾಲೋಮ್ ಕ್ರಿಶ್ಚಿಯನ್ 2 ಚಿನ್ನ ಮತ್ತು 1 ಬೆಳ್ಳಿ, ಪಿ.ಜೆನಿಶಾ 2 ಚಿನ್ನ ಮತ್ತು 1 ಬೆಳ್ಳಿ, ಡೇನಿಯಲ್ ಸಾಲ್ವಡಾರ್ ಕಾನ್ಸೆಸ್ಸಾವೊ 2 ಚಿನ್ನ ಮತ್ತು 1 ಬೆಳ್ಳಿ ಪದಕ ಗೆದ್ದಿದ್ದಾರೆ. ಕೇಟ್ ಅರ್ವಿ ವಾಜ್‌ಗೆ 1 ಚಿನ್ನ, ಶೀಹಾನ್.ಎ.ಆರ್ 1 ಬೆಳ್ಳಿ ಮತ್ತು 2 ಕಂಚಿನ ಪದಕ ಗೆದ್ದರು. ಡೇವಿನ್ ಮಹೇಶ್‌ಗೆ 1 ಬೆಳ್ಳಿ ಪದಕ, ಲಕ್ಷ್ ಡಿ.ಎಸ್.ಗೌಡ 3 ಕಂಚಿನ ಪದಕ ಗೆದ್ದಿದ್ದಾರೆ. ಪ್ರತಿಭಾನ್ವಿತ ಸ್ಕೇಟರ್‌ಗಳಿಗೆ ಹೈ-ಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್‌ನಲ್ಲಿ ಮೋಹನ್ ದಾಸ್ ಕೆ, ಜಯರಾಜ್, ರಮಾನಂದ ಕೆ.ವಿ ಮತ್ತು ಓಂಕಾರ್ ತರಬೇತಿ ನೀಡುತ್ತಿದ್ದಾರೆ.



# ಕಣ್ಣಿಗೆ ಕಣ್ಣೇ ಎಂದರೆ ಇಡೀ ಜಗತ್ತೇ ಕುರುಡಾಗುತ್ತದೆ

ಭಾರತ ಮತ್ತು ಪಾಕಿಸ್ತಾನದ ಗಡಿಯಲ್ಲಿ ಉದ್ವಿಗ್ನತೆ ಹೆಚ್ಚಿರುವ ಸಮಯದಲ್ಲಿ, ಮಾಜಿ ಕ್ರಿಕೆಟಿಗ ಅಂಬಟಿ ರಾಯುಡು ಅವರು 'ಕಣ್ಣಿಗೆ ಕಣ್ಣೇ ಎಂದರೆ ಇಡೀ ಜಗತ್ತೇ ಕುರುಡಾಗುತ್ತದೆ' ಎಂದು ಹೇಳಿಕೆ ನೀಡಿದ್ದು ವಿವಾದಕ್ಕೆ ಕಾರಣವಾಗಿದೆ. ಅವರ ಈ ಹೇಳಿಕೆಗೆ ನೆಟ್ಟಿಗರಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

ಭಾರತ ಮತ್ತು ಪಾಕಿಸ್ತಾನ ಗಡಿಯಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕರ ವಿರುದ್ಧ ಭಾರತೀಯ ಸೇನೆ ನಡೆಸಿದ 'ಆಪರೇಷನ್ ಸಿಂಧೂರ್' ನಂತರ ಉಭಯ ದೇಶಗಳ ನಡುವಿನ ಸಂಘರ್ಷ ಹೆಚ್ಚಾಗಿದೆ. ತನ್ನ ಚಟುವಟಿಕೆಗಳಿಂದ ಹಿಂದೆ ಸರಿಯದ ಪಾಕಿಸ್ತಾನಕ್ಕೆ ಭಾರತೀಯ ಸೇನೆ ತಕ್ಕ ಪಾಠ ಕಲಿಸುತ್ತಿದೆ. ಇಡೀ ದೇಶವೇ ಸರ್ಕಾರ ಮತ್ತು ಸೇನೆಯೊಂದಿಗೆ ನಿಂತು ಪಾಕಿಸ್ತಾನಕ್ಕೆ ಕಠಿಣ ಪಾಠ ಕಲಿಸುವ ಪ್ರಯತ್ನಗಳನ್ನು ಬೆಂಬಲಿಸುತ್ತಿರುವ ಸಮಯದಲ್ಲಿ, ಭಾರತದ ಮಾಜಿ ಕ್ರಿಕೆಟಿಗ ಅಂಬಟಿ ರಾಯುಡು ಅವರ ಪೋಸ್ಟ್ ಒಂದು ಕೋಲಾಹಲ ಸೃಷ್ಟಿಸಿದೆ.

ಮೇ 8 ರಂದು ಪಾಕಿಸ್ತಾನ, ಭಾರತದ ಮೇಲೆ ಇದ್ದಕ್ಕಿದ್ದಂತೆ ಡ್ರೋನ್ ಮತ್ತು ಕ್ಷಿಪಣಿಗಳ ಮೂಲಕ ದಾಳಿ ಮಾಡಿತು. ಜಮ್ಮು ಮತ್ತು ಕಾಶ್ಮೀರ ಮತ್ತು ರಾಜಸ್ಥಾನದ ಹಲವು ಭಾಗಗಳಲ್ಲಿ ಪಾಕಿಸ್ತಾನ ಡಜನ್‌ಗಟ್ಟಲೆ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳನ್ನು ನಡೆಸಿತು, ಈಗಾಗಲೇ ಎಚ್ಚರವಾಗಿರುವ ಭಾರತೀಯ ಪಡೆಗಳ ವಾಯು ರಕ್ಷಣಾ ವ್ಯವಸ್ಥೆಯು ಅವುಗಳನ್ನು ಯಶಸ್ವಿಯಾಗಿ ವಿಫಲಗೊಳಿಸಿತು. ಸೇನಾ ಬಲವನ್ನು ಇಡೀ ಭಾರತವೇ ಹಾಡಿಹೊಗುಳುತ್ತಿರುವ ಸಮಯದಲ್ಲಿ ಕ್ರಿಕೆಟಿಗ ಅಂಬಟಿ ರಾಯುಡು ಶಾಂತಿ ಮಂತ್ರ ಜಪಿಸಿ ಭಾರತೀಯರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಕಣ್ಣಿಗೆ ಕಣ್ಣೇ ಎಂದರೆ ಇಡೀ ಜಗತ್ತೇ ಕುರುಡಾಗುತ್ತದೆ

ಪಾಕಿಸ್ತಾನದ ದಾಳಿಯನ್ನು ಮೆಟ್ಟಿ ನಿಂತಿರುವ ಭಾರತ, ಪಾಕಿಸ್ತಾನದ ಮೇಲೂ ಸತತವಾಗಿ ದಾಳಿ ನಡೆಸುತ್ತಿದೆ. ಲಾಹೋರ್, ಸಿಯಾಲ್ಕೋಟ್, ಇಸ್ಲಾಮಾಬಾದ್ ಸೇರಿದಂತೆ ಪಾಕಿಸ್ತಾನದ ಹಲವು ನಗರಗಳ ಮೇಲೆ ಭಾರತ ದಾಳಿ ಮಾಡಿತು. ಈ ನಡುವೆ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ಅಂಬಟಿ ರಾಯುಡು ತಮ್ಮ ಎಕ್ಸ್ ಖಾತೆಯಲ್ಲಿ 'ಕಣ್ಣಿಗೆ ಕಣ್ಣೇ ಎಂದರೆ ಇಡೀ ಜಗತ್ತೇ ಕುರುಡಾಗುತ್ತದೆ' ಎಂದು ಪೋಸ್ಟ್ ಮಾಡಿದ್ದಾರೆ.

ಇಷ್ಟು ದಿನ ಆರ್‌ಸಿಬಿ ತಂಡವನ್ನು ಟೀಕಿಸಿ, ಆರ್‌ಸಿಬಿ ಅಭಿಮಾನಿಗಳ ಕೆಂಗಣ್ಣಿಗೆ ಗುರಿಯಾಗಿದ್ದ ರಾಯುಡು, ಮುಯ್ಯಿಗೆ ಮುಯ್ಯಿ ಎಂಬ ನಿರ್ಧಾರ ಸರಿ ಇಲ್ಲ. ಇದರ ಬದಲು ಮಾತುಕತೆಯ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು ಎಂಬರ್ಥದಲ್ಲಿ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಇದೀಗ ರಾಯುಡು ಅವರ ಈ ಪೋಸ್ಟ್ ನೆಟ್ಟಿಗರ ಆಕ್ರೋಶಕ್ಕೆ ಕಾರಣವಾಗಿದೆ.

ರಾಯುಡುಗೆ ಭಾರತೀಯರ ಹಿಡಿಶಾಪ

ತಮ್ಮ ಪೋಸ್ಟ್‌ಗೆ ವ್ಯತಿರಿಕ್ತವಾಗಿ ಟೀಕೆಗಳು ಬರುತ್ತಿರುವುದನ್ನು ಗಮನಿಸಿದ ರಾಯುಡು ಹೊಸ ಪೋಸ್ಟ್ ಮಾಡಿ, 'ಜಮ್ಮು ಮತ್ತು ಕಾಶ್ಮೀರ, ಪಂಜಾಬ್ ಮತ್ತು ಭಾರತದ ಗಡಿಯ ಇತರ ಭಾಗಗಳಲ್ಲಿ ಎಲ್ಲರ ಸುರಕ್ಷತೆ ಮತ್ತು ಶಾಂತಿಗಾಗಿ ಪ್ರಾರ್ಥಿಸುತ್ತಿದ್ದೇನೆ. ಇದರಿಂದ ಬಾಧಿತರಾದ ಎಲ್ಲರಿಗೂ ಸುರಕ್ಷತೆ, ಶಕ್ತಿ ಮತ್ತು ತ್ವರಿತ ಪರಿಹಾರಕ್ಕಾಗಿ ಆಶಿಸುತ್ತಿದ್ದೇನೆ. ಜೈ ಹಿಂದ್' ಎಂದು ಬರೆದುಕೊಂಡಿದ್ದಾರೆ. ಆದಾಗ್ಯೂ, ರಾಯುಡು ಅವರ ಈ ಪೋಸ್ಟ್ ಬಗ್ಗೆಯೂ ನೆಟ್ಟಿಗರಿಂದ ಸಾಕಷ್ಟು ಟೀಕೆಗಳು ಕೇಳಿಬಂದಿವೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966